ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮಾರ್ಚ್ 12 ಬುಧವಾರ 2025

ಸಂಪುಟ: 45 | ಸಂಚಿಕೆ: 322 | ಪುಟಗಳು: 12

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ನಿಧನ



ಶ್ರೀ ರಮೇಶ್ ಸಿ

ಜೆಡಿಎಸ್ ಕಾರ್ಯಕರ್ತರು

ಮಾಲೀಕರು, ಚೈತ್ರಾಂಜಲಿ ಪ್ರಾವಿಜನ್ ಸ್ಟೋರ್, ಜನತಾನಗರ

ಇವರು ದಿನಾಂಕ: 11–03–2025ರಂದು ದೈವಾಧೀನರಾಗಿದ್ದು, ಮೃತರ ಅಂತ್ಯಕ್ರಿಯೆಯನ್ನು ದಿನಾಂಕ: 12–03–2025ರಂದು ಮಧ್ಯಾಹ್ನ 1:00 ಗಂಟೆಗೆ **ಚಾಮುಂಡಿ ಬೆಟ್ಟದ ತಪ್ಪಲಿನಲ್ಲಿ** ನೆರವೇರಿಸಲಾಗುವುದು.

ಇಂತಿ ದುಃಖತಪ್ತರು:
ಶ್ರೀ ಕೆ.ಕೆಂಚಯ್ಯ ಕುಟುಂಬವರ್ಗದವರು
ಮಾಲೀಕರು, ನ್ಯೂ ಬೃಂದಾವನ ಸ್ವೀಟ್ಸ್ ಮತ್ತು
ಶ್ರೀ ವೆಂಕಟೇಶ್ವರ ಸ್ವೀಟ್ಸ್, ಕಂದೇಗಾಲ ಗ್ರಾಮಸ್ಥರು.
ಮೊ: 9448208394, 9845566143

ಉತ್ತರ ಕ್ರಿಯಾದಿ ಭೂಶಾಂತಿ ಆಹ್ವಾನ ಪತ್ರಿಕೆ



ಛೇರ್‌ಮೆನ್

ಶ್ರೀ ಸಿ.ಬಿ.ಬೆಟ್ಟೇಗೌಡರವರು

ನಿಧನ: 02-03-2025

ಇವರು ದಿ.02–03–2025 ಭಾನುವಾರ ದೈವಾಧೀನರಾದರೆಂದು ತಿಳಿಸಲು ವಿಷಾಧಿಸುತ್ತೇವೆ. ತತ್ಸಂಬಂಧ **ಉತ್ತರ ಕ್ರಿಯಾದಿ ಭೂಶಾಂತಿ ಕಾರ್ಯವನ್ನು** ದಿ: 12–03–2025 ಬುಧವಾರ ಮಧ್ಯಾಹ್ನ 11.00 ಗಂಟೆಗೆ **ಚಿಕ್ಕಅಂಕನಹಳ್ಳಿ** ಗ್ರಾಮದ ನಮ್ಮ ಸ್ವಗೃಹದಲ್ಲಿ ಇಲ್ಲಿ ಏರ್ಪಡಿಸಿರುವುದರಿಂದ ಆಹ್ವಾನ ಪತ್ರಿಕೆ ತಲುಪದವರು ಇದನ್ನೇ ಆಹ್ವಾನವೆಂದು ತಿಳಿದು ಆಗಮಿಸಿ ಮೃತರ ಆತ್ಮಕ್ಕೆ ಚಿರಶಾಂತಿಯನ್ನು ಕೋರಬೇಕಾಗಿ ವಿನಂತಿ.

ಇಂತಿ ದುಃಖತಪ್ತರು: ಶ್ರೀಮತಿ ಪುಟ್ಟತಾಯಮ್ಮ
ಗಂಡುಮಕ್ಕಳಾದ ಶ್ರೀಮತಿ ಗಾಯಿತ್ರಿ ಮತ್ತು ಶ್ರೀ ನಾಗಣ್ಣ (ನಾಗರಾಜು)
ಶ್ರೀಮತಿ ಸುಜಾತ ಮತ್ತು ಶ್ರೀ ಬಿ.ಗಿರೀಶ್, ಮಾ.ಗ್ರಾ.ಪಂ.ಅಧ್ಯಕ್ಷರು ಹಾಗೂ ಸುಜಾತ ರೈಸ್ ಮಿಲ್ ಮಾಲೀಕರು
ಶ್ರೀಮತಿ ಶ್ರೀಮತಿ ಮತ್ತು ಶ್ರೀ ಶಿವಣ್ಣ, ಶ್ರೀಮತಿ ನಿಂಗಮ್ಮ ಮತ್ತು ಶ್ರೀ ಪುಟ್ಟಸ್ವಾಮಿ (ಪುಟಾಣಿ)
ಹೆಣ್ಣುಮಕ್ಕಳಾದ: ಶ್ರೀಮತಿ ಕಮಲಮ್ಮ ಲೇಟ್ ಶಿವಲಿಂಗೇಗೌಡ
ಶ್ರೀಮತಿ ಗೌರಮ್ಮ ಮತ್ತು ಶ್ರೀ ರಮೇಶ್, ಶ್ರೀಮತಿ ಸುವರ್ಣ ಮತ್ತು ಶ್ರೀ ನಾಗರಾಜು
ಶ್ರೀಮತಿ ನಿಂಗಮ್ಮ ಮತ್ತು ಲೇಟ್ ಶ್ರೀ ಚೆಲುವೇಗೌಡರ ಕುಟುಂಬ
ಮೊಮ್ಮಕ್ಕಳು ಕುಟುಂಬವರ್ಗದವರು, ಬಂಧು–ಮಿತ್ರರು ಹಾಗೂ ಚಿಕ್ಕಅಂಕನಹಳ್ಳಿ ಗ್ರಾಮಸ್ಥರು

ಮೈಸೂರು ಶ್ರೀ ಸುತ್ತೂರು ಮಠದಲ್ಲಿ ಬೆಳದಿಂಗಳ ಸಂಗೀತ


ನಾಗರಾಜ್ ಮತ್ತು ಕಾರ್ತಿಕ್


ಅನಿರುದ್ಧ ಆತ್ರೇಂಯ


ಡೆಲ್ಲಿ ಸಾಯಿರಾಂ

ಮೈಸೂರು, ಮಾ. 11– ಮೈಸೂರಿನ ಶ್ರೀ ಸುತ್ತೂರು ಮಠದಲ್ಲಿ ಮಾ.14ರಂದು ಶುಕ್ರವಾರ ಸಂಜೆ 6 ಗಂಟೆಗೆ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ಬೆಳದಿಂಗಳ ಸಂಗೀತ–277ರ ಅಂಗವಾಗಿ ವಿದ್ವಾನ್ ಮೈಸೂರು ಎಂ.ನಾಗರಾಜ್ ಹಾಗೂ ವಿದ್ವಾನ್ ಮೈಸೂರು ಎನ್.ಕಾರ್ತಿಕ್ ಅವರಿಂದ ದ್ವಂದ್ವ ವಯೋಲಿನ್ ವಾದನ ಏರ್ಪಡಿಸಲಾಗಿದೆ.

ವಿದ್ವಾನ್ ಮೈಸೂರು ಎಂ.ನಾಗರಾಜ್ ಮೈಸೂರಿನ ಹಿರಿಯ ವಯೋಲಿನ್ ದಿಗ್ಗಜ ಆಸ್ಥಾನ ವಿದ್ವಾನ್ ಎಸ್. ಮಹದೇವಪ್ಪನವರ ಸುಪುತ್ರರು. ಇವರಿಗೆ ತಂದೆಯೇ ಗುರು. ಇವರ ವಾದನವು ಮನೋಧರ್ಮ, ತಾಂತ್ರಿಕತೆ ಮತ್ತು ಬೌದ್ಧಿಕತೆಗಳ ಸುಂದರ ಸಮನ್ವಯ. 8ನೇ ವಯಸ್ಸಿನಲ್ಲೇ ಮೊದಲನೆಯ ಕಛೇರಿ ನೀಡಿದ ಪ್ರತಿಭಾಶಾಲಿ. ಆಕಾಶವಾಣಿಯಲ್ಲಿ ಎ–ಟಾಪ್ ಶ್ರೇಣಿ ಪಡೆದ ಅತ್ಯಂತ ಕಿರಿಯ ಕಲಾವಿದರಲ್ಲಿ ಒಬ್ಬರು.

ಸಂಗೀತಕ್ಷೇತ್ರಕ್ಕೆ ಇವರು ನೀಡಿರುವ ಅನನ್ಯ ಕೊಡುಗೆಗಾಗಿ ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರಿಂದ ಸಂಗೀತ ರತ್ನ ಪ್ರಶಸ್ತಿ, ಕರ್ನಾಟಕ ಸರ್ಕಾರದ ರಾಜ್ಯೋತ್ಸವ ಪ್ರಶಸ್ತಿ, ಅವಧೂತ ದತ್ತ ಪೀಠದ ಆಸ್ಥಾನ ವಿದ್ವಾನ್, ಮದ್ರಾಸ್ ಸಂಗೀತ ಅಕಾಡೆಮಿ ಹಾಗೂ ಇಂಡಿಯನ್ ಫೈನ್ ಆರ್ಟ್ಸ್ ಸೊಸೈಟಿಯ ಅತ್ಯುತ್ತಮ ಪಿಟೀಲು ವಾದಕ ಪ್ರಶಸ್ತಿ, ಅಮೆರಿಕದ ಸೆಂಟ್ರಲ್ ಓಕ್ಲಹಾಮಾ ವಿಶ್ವವಿದ್ಯಾಲಯದ ಎಕ್ಸೆಲೆನ್ಸ್ ಅವಾರ್ಡ್, ಗಾನವಾರಿಧಿ, ಸಂಗೀತ ವಿದ್ವನ್ಮಣಿ, ಸಂಸ್ಕೃತಿ ಸಿಂಚನ ಪ್ರಶಸ್ತಿ ಹಾಗೂ ಕೇಂದ್ರ ಸಂಗೀತ ನಾಟಕ ಅಕಾಡೆಮಿ ಪ್ರಶಸ್ತಿಗಳು ಲಭಿಸಿವೆ.

ವಿದ್ವಾನ್ ಮೈಸೂರು ಎನ್. ಕಾರ್ತಿಕ್ ಉದಯೋನ್ಮುಖ ವಯೋಲಿನ್ ಕಲಾವಿದರಲ್ಲೊಬ್ಬರು. ವಿದ್ವಾನ್ ಮೈಸೂರು ಎಂ. ಮಹದೇವಪ್ಪನವರ ಮೊಮ್ಮಕ್ಕಳು; ವಿದ್ವಾನ್ ಮೈಸೂರು ಎಂ.ನಾಗರಾಜ್‌ರವರ ಸುಪುತ್ರರು. 8ನೆಯ ವಯಸ್ಸಿನಿಂದಲೇ ಪಿಟೀಲಿನತ್ತ ಸೆಳೆತ. ತಂದೆಯ ಬಳಿ ವಯೊಲಿನ್ ವಾದನ ಕಲಿತಿರುವ ಇವರದು ಸಂಪ್ರದಾಯನಿಷ್ಠೆ ಮತ್ತು ಪ್ರಯೋಗಶೀಲತೆಯ ಅದ್ಭುತ ರಸಪಾಕ. ರಸಾರ್ದ್ರತೆ ಸಂಕೀರ್ಣತೆ ಇವರ ಸಂಗೀತದ ವೈಶಿಷ್ಟ್ಯ ಸಮಚಿತ್ತತೆ, ಸುಖಾನುಭವ, ತಾದಾತ್ಮ್ಯ ಇವರ ಸಂಗೀತದಲ್ಲಿ ಕಂಡುಬರುವ ಗುಣಗಳು.

ಮೃದಂಗ ಸಹಕಾರ ನೀಡಲಿರುವ ವಿದ್ವಾನ್ ಡೆಲ್ಲಿ ಎಸ್. ಸಾಯಿರಾಂರವರು ಸಂಗೀತ ಕಲಾನಿಧಿ ಡಾ. ತಿರುವಾರೂರ್ ಭಕ್ತವತ್ಸಲಂರವರ ಶಿಷ್ಯರು. ಇಂದು ಅತ್ಯಂತ ಬೇಡಿಕೆಯಲ್ಲಿರುವ ಮೃದಂಗ ಕಲಾವಿದರಲ್ಲೊಬ್ಬರು.

ಖಂಜಿರ ಸಹಕಾರ ನೀಡಲಿರುವ ವಿದ್ವಾನ್ ವಿ. ಅನಿರುದ್ಧ ಆತ್ರೇಯರವರು ಸಂಗೀತ ಕ್ಷೇತ್ರದ ದಿಗ್ಗಜ ಪಾಪಾ ಕೆ.ಎಸ್. ವೆಂಕಟರಾಮಯ್ಯ ಮತ್ತು ಆಲತ್ತೂರು ಶ್ರೀ ಸುಬ್ಬೈಯ್ಯರ್‌ರವರ ಮರಿಮಕ್ಕಳು. ಖ್ಯಾತ ವಯೊಲಿನ್ ವಾದಕ ವಿದ್ವಾನ್ ವಿ. ತ್ಯಾಗರಾಜನ್‌ರವರ ಮೊಮ್ಮಕ್ಕಳು.

ನಲ್ಲಿ, ಒಳಚರಂಡಿ ಕೆಲಸಗಾರರಿಗೆ ಸರ್ಕಾರಿ ಸವಲತ್ತು ಅವಶ್ಯ

ವಿಶ್ವ ನಲ್ಲಿ ಕೆಲಸಗಾರರ ದಿನಾಚರಣೆಯಲ್ಲಿ ಸಾಹಿತಿ ಬನ್ನೂರು ಕೆ.ರಾಜು ಒತ್ತಾಯ

ಮೈಸೂರು, ಮಾ.11(ಜಿಎ)–ಬಸವಣ್ಣ ಅವರು ಹೇಳಿದಂತೆ ಕಾಯಕವೇ ಕೈಲಾಸವೆಂದು ನಲ್ಲಿ ಮತ್ತು ಒಳಚರಂಡಿ ಕೆಲಸಗಾರರು ತಮ್ಮ ವೃತ್ತಿಯನ್ನು ಮಾಡುತ್ತಿದ್ದು, ಸರ್ಕಾರ ಇವರಿಗೆ ಹೆಚ್ಚಿನ ಸವಲತ್ತುಗಳನ್ನು ಒದಗಿಸಬೇಕೆಂದು ಹಿರಿಯ ಸಾಹಿತಿ ಬನ್ನೂರು ಕೆ.ರಾಜು ಒತ್ತಾಯಿಸಿದರು.

ಮೈಸೂರಿನ ಬೃಂದಾವನ ಬಡಾವಣೆಯ ಗುರುದ್ವಾರ ಮತ್ತು ಆಂಜನೇಯ ಸ್ವಾಮಿ ದೇವಸ್ಥಾನದ ಹತ್ತಿರದಲ್ಲಿರುವ ಮೈಸೂರು ಮಹಾನಗರಪಾಲಿಕೆಯ ಸಮುದಾಯ ಭವನದ ಸಭಾಂಗಣದಲ್ಲಿ ಭಾರತ ರತ್ನ ಸರ್ ಎಂ.ವಿಶ್ವೇಶ್ವರಯ್ಯ ನಲ್ಲಿ ಮತ್ತು ಒಳಚರಂಡಿ ಕಾರ್ಮಿಕರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಆಯೋಜಿಸಿದ್ದ ವಿಶ್ವ ನಲ್ಲಿ ಕೆಲಸಗಾರರ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಮೇಲ್ನೋಟಕ್ಕೆ ನಲ್ಲಿ ಕೆಲಸವು ಬಹಳ ಸುಲಭ ಎನಿಸಿದರೂ ಇದು ದೈಹಿಕ ಮತ್ತು ಮಾನಸಿಕವಾಗಿ ಅತ್ಯಂತ ಕಠಿಣ ಕೆಲಸವಾಗಿದ್ದು, ಈ ಹಿನ್ನೆಲೆಯಲ್ಲಿ ನಲ್ಲಿ ಕೆಲಸಗಾರರ ಸುರಕ್ಷತೆಯ ಬಗ್ಗೆ ಜನಜಾಗೃತಿ ಮೂಡಿಸಲು ವರ್ಲ್ಡ್ ಪ್ಲಂಬಿಂಗ್ ಕೌನ್ಸಿಲ್ 2010ನೇ ಇಸವಿಯಿಂದ 'ವರ್ಲ್ಡ್ ಪ್ಲಂಬಿಂಗ್ ಡೇ', 'ವಿಶ್ವ ನಲ್ಲಿ ಕೆಲಸಗಾರರ ದಿನಾಚರಣೆ'ಯನ್ನು ಪ್ರತಿವರ್ಷ ಮಾ.11 ರಂದು ಜಾಗತಿಕವಾಗಿ ಆಚರಿಸುತ್ತಿದೆ ಎಂದರು.


ವಿಶ್ವ ನಲ್ಲಿ ಕೆಲಸಗಾರರ ದಿನಾಚರಣೆ ಕಾರ್ಯಕ್ರಮದಲ್ಲಿ ಹಿರಿಯ ನಲ್ಲಿ ಕೆಲಸಗಾರರಾದ ಮಾದಯ್ಯ, ಶಿವಣ್ಣ, ಜಯಕುಮಾರ್ ಹಾಗೂ ಜೆ.ಎನ್.ಕುಮಾರ್ ಅವರಿಗೆ ನಲ್ಲಿ ಕೆಲಸದ ನಕ್ಷತ್ರ ಎಂಬ ಪ್ರಶಸ್ತಿ ನೀಡಿ ಅಭಿನಂದಿಲಾಯಿತು.

ಎಷ್ಟೋ ಸಂದರ್ಭಗಳಲ್ಲಿ ಅರ್ಹ ಕಾರ್ಮಿಕರಿಗೇ ಅವಕಾಶ ಇಲ್ಲದಂತಾಗುತ್ತದೆ. ಹಾಗಾಗಿ ಕಾರ್ಮಿಕ ಇಲಾಖೆಯೇ ನೇರವಾಗಿ ಕಾರ್ಮಿಕರನ್ನು ಗುರುತಿಸುವಂತಾಗಬೇಕು. ಇವತ್ತಿಗೂ ನಾಡಿನಲ್ಲಿ ಭಾರತ ರತ್ನ ಸರ್ ಎಂ. ವಿಶ್ವೇಶ್ವರಯ್ಯ ಹಾಗೂ ಮಹಾರಾಜ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರಿಗೆ ಮಹತ್ತ್ವದ ಸ್ಥಾನವಿದೆ. ಕಾರಣ ಅವರ ಕಾಯಕ ಮತ್ತು ಅದರಿಂದ ಅವರು ಜೋಡೆತ್ತುಗಳಂತೆ ದುಡಿದು ಆಧುನಿಕ ಮೈಸೂರನ್ನು ಕಟ್ಟಿದ ರೀತಿ ಜಗತ್ತೇ ಅಚ್ಚರಿಪಡುವಂತಾದ್ದು. ಇವರು ಅಂದಿನ ಕಾಲದಲ್ಲಿಯೇ ಕೆರೆ–ಕಟ್ಟೆ ಅಣೆಕಟ್ಟೆಗಳು, ಓದು–ಶಿಕ್ಷಣ, ಶೈಕ್ಷಣಿಕ ಸಂಸ್ಥೆಗಳು, ಅರಮನೆ–ಗುರುಮನೆಗಳು, ಕೃಷಿ–ಪಶು ಸಂಗೋಪನೆ, ಮಹಿಳಾಭಿವೃದ್ಧಿ, ಕೈಗಾರಿಕೆಗಳು, ಆಸ್ಪತ್ರೆಗಳು ಸೇರಿದಂತೆ ಪ್ರತಿಯೊಂದನ್ನು ತಮ್ಮ ಕಾಯಕ ಪ್ರಜ್ಞೆಯಿಂದ ಪ್ರಾಮಾಣಿಕವಾಗಿ ಮಾಡಿ ಪ್ರಜೆಗಳಿಗೆ ಎಲ್ಲವನ್ನೂ ಒದಗಿಸಿಕೊಟ್ಟಿದ್ದರು. ಇಂದಿಗೂ ಇವರುಗಳು ಪ್ರತಿಯೊಬ್ಬರಿಗೂ ಆದರಲ್ಲೂ ವಿಶೇಷವಾಗಿ ಕಾರ್ಮಿಕರು ಮಾದರಿಯಾಗಿಟ್ಟುಕೊಳ್ಳಬೇಕೆಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಹಿರಿಯ ನಲ್ಲಿ ಕೆಲಸಗಾರರಾದ ಮಾದಯ್ಯ, ಶಿವಣ್ಣ, ಜಯಕುಮಾರ್ ಹಾಗೂ ಜೆ.ಎನ್. ಕುಮಾರ್ ಅವರಿಗೆ ನಲ್ಲಿ ಕೆಲಸದ ನಕ್ಷತ್ರ ಎಂಬ ಪ್ರಶಸ್ತಿ ನೀಡಿ ಅಭಿನಂದಿಸಲಾಯಿತು. ಈ ಸಂದರ್ಭದಲ್ಲಿ ನಗರಪಾಲಿಕೆ ಮಾಜಿ ಸದಸ್ಯ ಎಸ್‌ಬಿಎಂ ಮಂಜು, ಕರ್ನಾಟಕ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕ ಶಿವಕುಮಾರ್, ಕಾರ್ಮಿಕ ಇಲಾಖೆ ಅಧಿಕಾರಿಗಳಾದ ಚೇತನ್, ಜಿ.ಬಿ.ವೀಣಾ ಮತ್ತು ಜಯಣ್ಣ, ಸಂಘದ ಜಂಟಿ ಕಾರ್ಯದರ್ಶಿ ಎಸ್.ಪಳನಿ ಸ್ವಾಮಿ, ನಿರ್ದೇಶಕ ಚಂದ್ರೇಗೌಡ, ಸಂಘದ ಅಧ್ಯಕ್ಷ ಮಹೇಶ್ ಎಸ್.ಜಯನಗರ, ಕಾರ್ಯದರ್ಶಿ ಎಂ.ರವಿಕುಮಾರ್, ಖಜಾಂಚಿ ಎಂ.ಪ್ರಕಾಶ್, ಕುಮಾರ್, ಯೋಗೇಶ್ ಹೆಬ್ಬಾಳ್, ಸುರೇಶ್, ಅನಿಲ್ ಕುಮಾರ್, ಮೊಹಮದ್ ಜಾಕಿರ್ ಹುಸೇನ್, ಸಂತೋಷ್‌ಕುಮಾರ್ ಬೇಹರ, ಯೋಗೇಶ್, ರುದ್ರಸ್ವಾಮಿ, ಶಿವರಾಜು, ಕನ್ನಡ ಹೋರಾಟಗಾರ ಬಾಲಕೃಷ್ಣ ಹಾಗೂ ಏಜಾಜ್ ಪಾಷ ಮುಂತಾದವರು ಉಪಸ್ಥಿತರಿದ್ದರು.

ಮಾ.15ರಂದು ಮೈಸೂರಲ್ಲಿ ಬೃಹತ್ ಉದ್ಯೋಗ ಮೇಳ

ಮೈಸೂರು, ಮಾ.11(ಜಿಎ)–ಮೈಸೂರಿನ ಮೇಟಗಳ್ಳಿ ಸಿಗ್ನಲ್ ಬಳಿಯ ರಾಯಲ್ ಇನ್ ಹೋಟೆಲ್ ಮುಂಭಾಗದ ಪರಿವರ್ತನ ಬಿ.ಶಾಲೆಯಲ್ಲಿ ಡಾ.ಎಂ.ಪುಟ್ಟೇಗೌಡ ಮತ್ತು ಆಶಾಲತಾ ಪುಟ್ಟೇಗೌಡ ಪ್ರತಿಷ್ಠಾನದ ವತಿಯಿಂದ ಮಾ.15ರಂದು ಬೃಹತ್ ಉದ್ಯೋಗ ಮೇಳ ಆಯೋಜಿಸಲಾಗಿದೆ. ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಉದ್ಯೋಗದಾತ ಸಂಸ್ಥೆಯ ಡಿ.ಬಿ.ರುಕ್ಮಾಂಗದ ಈ ವಿಷಯ ತಿಳಿಸಿ, ಉದ್ಯೋಗ ಮೇಳದಲ್ಲಿ 30ಕ್ಕೂ ಹೆಚ್ಚು ಕಂಪನಿಗಳು ಭಾಗವಹಿಸಿ ನೇರ ಸಂದರ್ಶನದಲ್ಲಿ ಯುವಕ, ಯುವತಿಯರನ್ನು ತಮ್ಮ ಸಂಸ್ಥೆಗೆ ಆಯ್ಕೆ ಮಾಡಿಕೊಳ್ಳಲಿವೆ. ಪಿಯುಸಿ, ಡಿಪ್ಲೊಮಾ, ಯಾವುದೇ ಪದವಿ ಹಾಗೂ ಉನ್ನತ ಪದವಿ ಪಡೆದ ಅಭ್ಯರ್ಥಿಗಳು ಪಾಲ್ಗೊಳ್ಳಬಹುದಾಗಿದೆ. ಇದು ಉಚಿತ ಕಾರ್ಯಕ್ರಮವಾಗಿದ್ದು, ಯಾವುದೇ ಶುಲ್ಕ ಇರುವುದಿಲ್ಲ. ಬೆಳಗ್ಗೆ 9.30ಕ್ಕೆ ಉದ್ಯೋಗ ಮೇಳ ಆರಂಭವಾಗಲಿದೆ. ಅಗತ್ಯವಾದ ದಾಖಲೆ ಪತ್ರವನ್ನು ಅಭ್ಯರ್ಥಿಗಳು ತರಬೇಕು. ಹೆಚ್ಚಿನ ಮಾಹಿತಿಗೆ ದೂ. 80956 79666 ಅನ್ನು ಸಂಪರ್ಕಿಸಿ ಎಂದು ತಿಳಿಸಿದರು.

ಭಾರತ ತಂಡಕ್ಕೆ ಚಾಂಪಿಯನ್ಸ್ ಟ್ರೋಫಿ: ಮೈಸೂರಲ್ಲಿ ವಿಜಯೋತ್ಸವ...


ಕರ್ನಾಟಕ ಸೇನಾಪಡೆ ವತಿಯಿಂದ ಮೈಸೂರಿನ ಅಗ್ರಹಾರದ 101 ಗಣಪತಿ ದೇವಸ್ಥಾನದ ಮುಂಭಾಗ, ಭಾರತ ತಂಡ ಚಾಂಪಿಯನ್ಸ್ ಟ್ರೋಫಿ ಫೈನಲ್ ಪಂದ್ಯದಲ್ಲಿ ನ್ಯೂಜಿಲೆಂಡ್ ತಂಡವನ್ನು ಮಣಿಸಿದ ಹಿನ್ನೆಲೆಯಲ್ಲಿ ಸಿಹಿ ಹಂಚಿ ವಿಜಯೋತ್ಸವ ಆಚರಿಸಲಾಯಿತು. ಕರ್ನಾಟಕ ಸೇನಾಪಡೆ ಅಧ್ಯಕ್ಷ ತೇಜೇಶ್ ಲೋಕೇಶ್‌ಗೌಡ, ರಾಜ್ಯ ಒಕ್ಕಲಿಗರ ಸಂಘದ ಅಧ್ಯಕ್ಷ ಸಿ.ಜಿ.ಗಂಗಾಧರ್, ಸುರೇಶ್ ಗೋಲ್ಡ್, ಪ್ರಭಾಕರ್, ಕುಮಾರ್‌ಗೌಡ, ಪ್ರಭುಶಂಕರ, ಸಿದ್ದೇಗೌಡ, ಪ್ರಜೀಶ್, ಶಿವಲಿಂಗಯ್ಯ, ಕೃಷ್ಣಪ್ಪ, ಶಿವಕುಮಾರ್, ಹನುಮಂತಯ್ಯ, ನಂದಕುಮಾರ್, ಚಂದ್ರಶೇಖರ್, ರವೀಶ್, ರವಿನಾಯಕ್ ಇನ್ನಿತರರಿದ್ದರು.

ಕಪ್ಪಡಿ ರಾಚಪ್ಪಾಜಿ ಜಾತ್ರೆಯಲ್ಲಿ ಪ್ರಾಣಿ ಬಲಿ ತಡೆಯಲು ಆಗ್ರಹ



ಮೈಸೂರು,ಮಾ.11(ಜಿಎ)–ಮೈಸೂರಿನ ಕೆ.ಆರ್.ನಗರ ತಾಲೂಕಿನ ಕಪ್ಪಡಿ ರಾಚಪ್ಪಾಜಿ ಜಾತ್ರೆ ಆರಂಭಗೊಂಡಿದ್ದು, ಪ್ರಾಣಿ ಬಲಿ ಕೊಡುವುದಕ್ಕೆ ಜಿಲ್ಲಾಡಳಿತ, ಪೊಲೀಸ್ ಇಲಾಖೆ ಕಡಿವಾಣ ಹಾಕುವಂತೆ ವಿಶ್ವಪ್ರಾಣಿ ಕಲ್ಯಾಣ ಮಂಡಳಿ ಅಧ್ಯಕ್ಷ ದಯಾನಂದ ಸ್ವಾಮೀಜಿ ಮನವಿ ಮಾಡಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಪ್ಪಡಿ ರಾಚಪ್ಪಾಜಿ ಜಾತ್ರೆಯು ಯುಗಾದಿವರೆಗೆ ಇರಲಿದ್ದು, ಭಕ್ತಾದಿಗಳು ಹರಕೆಯ ರೂಪದಲ್ಲಿ ಆಡು, ಕುರಿ, ಕೋಳಿ ಮೊದಲಾದ ಪ್ರಾಣಿಗಳನ್ನು ಬಲಿಕೊಡುವುದು ನಡೆದಿದೆ. ಹೀಗಾಗಿ ಕಾಯ್ದೆ ಅಡಿಯಲ್ಲಿ ಸರ್ಕಾರ, ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆ ಇದಕ್ಕೆ ತಡೆ ಹಾಕಬೇಕೆಂದು ಆಗ್ರಹಿಸಿದರು.

ಪ್ರಾಣಿಬಲಿಯು ಅನಾಗರಿಕ, ಅಂಧ ಶ್ರದ್ಧೆ, ಪರಿಸರ ಮಾಲಿನ್ಯಕಾರಕ, ಕಾನೂನು ಮತ್ತು ಧರ್ಮ ವಿರೋಧಿ ಆಗಿದೆ. ಹೀಗಾಗಿ ಭಕ್ತಾದಿಗಳು ಪ್ರಾಣಿಬಲಿ ತ್ಯಜಿಸಿ ಅಹಿಂಸಾತ್ಮಕವಾಗಿ ಸಾತ್ವಿಕ ಪೂಜೆ ಸಲ್ಲಿಸಬೇಕೆಂದು ಪ್ರಾಣಿಬಲಿ ಶಿಕ್ಷಾರ್ಹ ಅಪರಾಧವೂ ಆಗಿದೆ. ಆದ್ದರಿಂದ ಕಾನೂನು ಮತ್ತು ಹೈಕೋರ್ಟ್ ಆದೇಶದ ಅಡಿಯಲ್ಲಿ ಕಪ್ಪಡಿಯಲ್ಲಿ ಪ್ರಾಣಿ ಬಲಿಯನ್ನು ಸಂಪೂರ್ಣವಾಗಿ ತಡೆಗಟ್ಟಬೇಕೆಂದು ಕೋರಿದರು. ಸುದ್ದಿಗೋಷ್ಠಿ ಯಲ್ಲಿ ಚಂಪಾಲಾಲ್ ಖಾದಿಯಾ, ಮಹೇಂದ್ರ ಕುಮಾರ್ ಲೋಡಾ, ಬಾದ್ಮಲ್ ಬಾಗ್ಮಾರ್, ಕೈಲಾಶ್ ಚಂದ್ ಜೈನ್ ಉಪಸ್ಥಿತರಿದ್ದರು.

ಎಂ.ಎನ್.ಭಗತ್ ಸಿಂಹ ಸ್ಮಾರಕ ಟಿ20 ಕ್ರಿಕೆಟ್ ಪಂದ್ಯಾವಳಿ

ಬೆಂಗಳೂರು ಅಕೇಷನಲ್ಸ್ ಚಾಂಪಿಯನ್



ಎಂ.ಎನ್.ಭಗತ್ ಸಿಂಹ ಸ್ಮಾರಕ ರಾಜ್ಯಮಟ್ಟದ ಟಿ20 ಕ್ರಿಕೆಟ್ ಪಂದ್ಯಾವಳಿಯಲ್ಲಿ ಬೆಂಗಳೂರು ಅಕೇಷನಲ್ಸ್ ಚಾಂಪಿಯನ್ ಆಯಿತು.

ಮೈಸೂರು,ಮಾ.11(ಎಂಕೆ)– ಮೈಸೂರು ಮಾನಸಗಂಗೋತ್ರಿಯಲ್ಲಿರುವ ಶ್ರೀಕಂಠದತ್ತ ನರಸಿಂಹರಾಜರಾಜ ಒಡೆಯರ್ ಕ್ರಿಕೆಟ್ ಸ್ಟೇಡಿಯಂನಲ್ಲಿ ನಡೆದ ಎಂ.ಎನ್. ಭಗತ್ ಸಿಂಹ ಸ್ಮಾರಕ ರಾಜ್ಯಮಟ್ಟದ ಟಿ20 ಕ್ರಿಕೆಟ್ ಪಂದ್ಯಾವಳಿಯಲ್ಲಿ ಬೆಂಗಳೂರು ಅಕೇಷನಲ್ಸ್ ಚಾಂಪಿಯನ್ ಆಯಿತು.

ಫೈನಲ್ ಪಂದ್ಯದಲ್ಲಿ ಬ್ಯಾಟಿಂಗ್ ಆಯ್ಕೆ ಮಾಡಿಕೊಂಡ ವಿಜಯ ಕ್ರಿಕೆಟ್ ಕ್ಲಬ್ ನಿಗದಿತ 20 ಓವರ್‌ಗಳಲ್ಲಿ 7 ವಿಕೆಟ್‌ಗಳನ್ನು ಕಳೆದುಕೊಂಡು 148 ರನ್‌ಗಳನ್ನು ಗಳಿಸಿತು. ಕ್ರಿಕೆಟ್ ದಂತಕಥೆ ರಾಹುಲ್ ದ್ರಾವಿಡ್ ಅವರ ಮಗ ಸಮಿತ್ ದ್ರಾವಿಡ್ 30 ಎಸೆತಗಳಲ್ಲಿ ಐದು ಬೌಂಡರಿ ಮತ್ತು ಒಂದು ಸಿಕ್ಸರ್ ಸೇರಿದಂತೆ 39 ರನ್ ಗಳಿಸಿದರೆ, ವಿಕೆಟ್ ಕೀಪರ್–ಬ್ಯಾಟ್ಸ್‌ಮನ್ ಯುವಿ ಮತ್ತು ಸಚಿನ್ ಶಿಂಥೆ ಕ್ರಮವಾಗಿ 35 ಮತ್ತು 32 ರನ್ ಗಳಿಸಿ, ಅಮೂಲ್ಯ ಕೊಡುಗೆ ನೀಡಿದರು.

149 ರನ್‌ಗಳ ಗುರಿ ಬೆನ್ನತ್ತಿದ ಬೆಂಗಳೂರು ಅಕೇಷನಲ್ಸ್ ತಂಡವು ಆರಂಭಿಕ ಬ್ಯಾಟ್ಸ್‌ಮನ್‌ಗಳಾದ ನಿರಂಜನ್ ಮತ್ತು ಎಂ.ಜಿ.ನವೀನ್ ನಿರಾಸೆ ಮೂಡಿಸಿದರೆ, ನಂತರ ಬಂದ ಭುವನ್ ರಾಜು ಮತ್ತು ವರುಣ್ 4ನೇ ವಿಕೆಟ್‌ಗೆ 77 ರನ್‌ಗಳ ಮಹತ್ವದ ಜೊತೆಯಾಟ ನೀಡುವ ಮೂಲಕ ತಂಡವನ್ನು ಸ್ಥಿರಗೊಳಿಸಿದರು.

ರಾಜು 33 ರನ್ ಗಳಿಸಿದರೆ, ವರುಣ್ ಕೇವಲ 41 ಎಸೆತಗಳಲ್ಲಿ ಏಳು ಬೌಂಡರಿ ಮತ್ತು ಮೂರು ಸಿಕ್ಸರ್‌ಗಳೊಂದಿಗೆ 67 ರನ್ ಗಳಿಸಿ ಅಜೇಯರಾಗಿ ಉಳಿದರು.

ಅಂತಿಮವಾಗಿ ಬೆಂಗಳೂರು ಅಕೇಷನಲ್ಸ್ 17.3 ಓವರ್‌ಗಳಲ್ಲಿ 149 ರನ್ ಗಳಿಸುವ ಮೂಲಕ ಜಯದ ನಗೆ ಬೀರಿತು. ಜೈಹಿಂದ್ ಸಿಸಿ ತಂಡದ ಕೃತಿಕ್ ಕೃಷ್ಣ ಅತ್ಯುತ್ತಮ ಬ್ಯಾಟ್ಸ್‌ಮನ್, ವಿಜಯ ಸಿಸಿ ತಂಡದ ಸಂತೋಕ್ ಸಿಂಗ್ ಅತ್ಯುತ್ತಮ ಬೌಲರ್‌ಗಳು, ಬೆಂಗಳೂರು ಅಕೇಷನಲ್ಸ್‌ನ ಎಂ.ಜಿ.ನವೀನ್ ಹಾಗೂ ರಾಜ್‌ವೀರ್ ವಾಡಾವ ಅತ್ಯುತ್ತಮ ಆಲ್‌ರೌಂಡರ್, ಅತ್ಯುತ್ತಮ ಫೀಲ್ಡರ್ ಪ್ರಶಸ್ತಿ ಪಡೆದರೆ, ಫೈನಲ್ ಪಂದ್ಯದ ಪಂದ್ಯಶ್ರೇಷ್ಠ ಪ್ರಶಸ್ತಿಯನ್ನು ವರುಣ್ ಪಡೆದರು. ಮಾಜಿ ಅಂತರರಾಷ್ಟ್ರೀಯ ಕ್ರಿಕೆಟ್ ಅಂಪೈರ್ ಎ.ಎಲ್. ನರಸಿಂಹನ್ ಬಹುಮಾನಗಳನ್ನು ವಿತರಿಸಿದರು. ವಿಜೇತರು 1.5 ಲಕ್ಷ ರೂ. ಮತ್ತು ರನ್ನರ್‌ಗಳು 1 ಲಕ್ಷ ರೂ.ಗಳನ್ನು ಪಡೆದರು.

ಮುಖ್ಯಮಂತ್ರಿಗಳಿಂದ ದಲಿತರಿಗೆ ಮೀಸಲಿಟ್ಟ ಅನುದಾನ ದುರ್ಬಳಕೆ

- ಹಣ ದುರ್ಬಳಕೆ ವಿರೋಧಿ ಹೋರಾಟ ಸಮಿತಿ ಆರೋಪ
- ಮನೆ ಮನೆಗೆ ತೆರಳಿ ಜಾಗೃತಿ ಮೂಡಿಸಿ ಹೋರಾಟ

ಮೈಸೂರು, ಮಾ.11(ಜಿಎ)–ಗ್ಯಾರಂಟಿ ಯೋಜನೆಗಳಿಗಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಡಿಸಿದ ಬಜೆಟ್‌ನಲ್ಲಿ ದಲಿತರಿಗೆ ಮೀಸಲಿಟ್ಟಿರುವ ಅನುದಾನವನ್ನು ಕಸಿದುಕೊಳ್ಳುತ್ತಿದ್ದಾರೆ ಎಂದು ಹಣ ದುರ್ಬಳಕೆ ವಿರೋಧಿ ಹೋರಾಟ ಸಮಿತಿ–ಕರ್ನಾಟಕದ ಸಂಚಾಲಕ ಡಾ.ವೆಂಕಟಸ್ವಾಮಿ ಆರೋಪಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2023ರಿಂದ ಈವರೆಗೆ ಮಂಡಿಸಿರುವ ಬಜೆಟ್‌ನಿಂದ ಎಸ್‌ಸಿಎಸ್‌ಪಿ, ಟಿಎಸ್‌ಪಿಯಿಂದ 38,860.72 ಕೋಟಿ ರೂ. ಹಣವನ್ನು ಗ್ಯಾರಂಟಿ ಯೋಜನೆಗಳಿಗೆ ಬಳಸಿಕೊಂಡು ದಲಿತರಿಗೆ ವಂಚನೆ ಮಾಡುತ್ತಿದ್ದಾರೆ. ಈ ಬಾರಿಯೂ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಡಿಸಿದ ನೂತನ ಸಾಲಿನ ಬಜೆಟ್‌ನಲ್ಲಿ ದಲಿತರ ಮೀಸಲು ನಿಧಿಗೆ ಕನ್ನ ಹಾಕುವ ಚಾಳಿ ಮುಂದುವರಿಸಿದ್ದಾರೆ. ಹೀಗಾಗಿ ಇದರ ವಿರುದ್ಧ ರಾಜ್ಯಾದ್ಯಂತ ಸಮುದಾಯದವರ ಮನೆ ಮನೆಗೆ ಭೇಟಿ ನೀಡಿ ಜಾಗೃತಿ ಮೂಡಿಸಿ, ಅನ್ಯಾಯದ ವಿರುದ್ಧ ಎಚ್ಚರಿಸುವ ಹೋರಾಟ ನಡೆಸಲಾಗುವುದು ಎಂದರು.

ಸಿದ್ದರಾಮಯ್ಯ ಅವರು ಸತತ ಮೂರನೇ ವರ್ಷ ದಲಿತರ ಮೀಸಲು ನಿಧಿಯ ಹಣವನ್ನು ದುರ್ಬಳಕೆ ಮಾಡಿಕೊಂಡಿದ್ದಾರೆ. ಈ ಹಿಂದೆ ಬಿಜೆಪಿ, ಜೆಡಿಎಸ್ ಸರ್ಕಾರದ ವೇಳೆಯೂ ಇದು ಆಗಿದ್ದರೂ ಅದನ್ನು ವಿರೋಧಿಸಿ ಅಧಿಕಾರಕ್ಕೆ ಬಂದ ಸಿದ್ದರಾಮಯ್ಯ ಅವರು ಅದೇ ಹಾದಿಯಲ್ಲಿ ಸಾಗಿರುವುದು ಖಂಡನಾರ್ಹ. ಎಸ್‌ಸಿ, ಎಸ್‌ಟಿ ಬಿಟ್ಟು ಉಳಿದೆಲ್ಲ ಸಮುದಾಯಗಳಿಗೆ ಗ್ಯಾರಂಟಿ ಯೋಜನೆ ಅನುಷ್ಠಾನಗೊಳಿಸಲು ಸಿದ್ದರಾಮಯ್ಯನವರು 51,034 ಕೋಟಿ ರೂ., ಖಜಾನೆಯಿಂದ ನೀಡಿದ್ದಾರೆ. ಆದರೆ ಪರಿಶಿಷ್ಟ ಜಾತಿ, ಪಂಗಡಗಳವರ ಗ್ಯಾರಂಟಿಗಳಿಗೆ ಪ್ರತ್ಯೇಕ ಅನುದಾನ ನೀಡಿಲ್ಲ. ಕಳೆದ ಮೂರು ವರ್ಷಗಳಿಂದ ಈ ಅನ್ಯಾಯ ಸರ್ಕಾರ ಮಾಡುತ್ತಲೇ ಇದೆ. ಇದರ ಪರಿಣಾಮವಾಗಿ ಎಸಿ, ಎಸ್‌ಟಿ ನಿಗಮಗಳು ಸಂಪೂರ್ಣವಾಗಿ ಸೊರಗಿವೆ. ಅಲ್ಲದೆ, ಮುಸ್ಲಿಂ ಸಮುದಾಯಗಳವರಿಗೆ ಹಲವು ರೀತಿಯ ವಿಶೇಷ ಅನುದಾನ ಸಿದ್ದರಾಮಯ್ಯ ನೀಡಿ, ಎಸ್‌ಸಿ, ಎಸ್‌ಟಿ ಸಮುದಾಯಗಳನ್ನು ನಿರ್ಲಕ್ಷಿಸಿರುವುದು ಸ್ಪಷ್ಟವಾಗಿದೆ. ಹೀಗಾಗಿ ಇದರ ವಿರುದ್ಧ ಸಮಿತಿ ಹೋರಾಟ ನಡೆಸಲಿದೆ ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಶಿವಮಲ್ಲು, ದಿನೇಶ್, ಡಾ.ನವೀನ್ ಮತ್ತಿತರರು ಉಪಸ್ಥಿತರಿದ್ದರು.

ಕೆ.ಬಿ.ಲಿಂಗರಾಜುಗೆ ಅಭಿನಂದನೆ...




ಮೈಸೂರಿನ ಶ್ರೀ ರಾಘವೇಂದ್ರ ಪ್ರತಿಷ್ಠಾನದ ವತಿಯಿಂದ ಮೈಸೂರು ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಗಳ ಅಧ್ಯಕ್ಷ ಕೆ.ಬಿ.ಲಿಂಗರಾಜು ಅವರನ್ನು ಅವರ ಕಚೇರಿಯಲ್ಲಿ ಅಭಿನಂದಿಸಲಾಯಿತು. ಚಿತ್ರದಲ್ಲಿ ಪ್ರತಿಷ್ಠಾನದ ಅಧ್ಯಕ್ಷ ಎಸ್.ನಾಗರಾಜ, ಮೈಸೂರು ವಾಣಿಜ್ಯ–ಕೈಗಾರಿಕಾ ಸಂಸ್ಥೆಗಳ ಕಾರ್ಯದರ್ಶಿ ಶಿವಾಜಿರಾವ್ ಅವರನ್ನು ಕಾಣಬಹುದು.

ಥಾಮಸ್ ನಿಧನ



ಮೈಸೂರು, ಮಾ.11– ಮೈಸೂರು ವಿವೇಕಾನಂದ ನಗರದ ಸೆಂಟ್ ಮೇರಿಸ್ ಎಜುಕೇಷನಲ್ ಅಸೋಸಿಯೇಷನ್ ಕಾರ್ಯದರ್ಶಿಗಳಾದ ಜಿ. ಥಾಮಸ್ (85) ಅವರು ಇಂದು ನಿಧನರಾದರು. ಇವರು ಸಹೋದರ, ಇಬ್ಬರು ಸಹೋದರಿಯರು ಹಾಗೂ ಅಪಾರ ಬಂಧುವರ್ಗವನ್ನು ಅಗಲಿದ್ದಾರೆ. ಮೃತರು ಮೈಸೂರಿನ ಶ್ರೀರಾಂಪುರದ ಲೇಡಿ ಆಫ್ ಪರ್ಪೆಚ್ಯುವಲ್ ಚರ್ಚ್‌ಗೆ ಭೂಮಿ ದಾನ ಮಾಡಿದ್ದರು. ಇವರ ಅಂತಿಮ ವಿಧಿವಿಧಾನಗಳು ನಾಳೆ (ಮಾ.12) ಸಂಜೆ 4 ಗಂಟೆಗೆ ಸೆಂಟ್ ಥೆರೆಸಾ ಚರ್ಚ್‌ನಲ್ಲಿ ಪ್ರಾರ್ಥನೆ ನಂತರ ಮೈಸೂರಿನ ಸ್ಟರ್ಲಿಂಗ್ ಥಿಯೇಟರ್ ಬಳಿ ಇರುವ ಕ್ಯಾಥೋಲಿಕ್ ಸೆಮೆಟ್ರಿಯಲ್ಲಿ ನೆರವೇರಲಿದೆ ಎಂದು ಮೂಲಗಳು ತಿಳಿಸಿವೆ.

ಮಹದೇವಪ್ಪ




ಮೈಸೂರು, ಮಾ.11– ಮೈಸೂರಿನ ರಾಮಾನುಜ ರಸ್ತೆ ನಿವಾಸಿ ಮಹದೇವಪ್ಪ(60) ಮಂಗಳವಾರ ನಿಧನರಾದರು. ಮೃತರು ಪತ್ನಿ, ಓರ್ವ ಪುತ್ರ, ಪುತ್ರಿ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ವಿದ್ಯಾರಣ್ಯಪುರಂನ ವೀರಶೈವ ರುದ್ರಭೂಮಿಯಲ್ಲಿ ಬುಧವಾರ ಮಧ್ಯಾಹ್ನ 3 ಗಂಟೆಗೆ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಜನತಾನಗರದ ಸಿ.ರಮೇಶ್



ಮೈಸೂರು,ಮಾ.11– ಜನತಾನಗರ ನಿವಾಸಿ ಮತ್ತು ಇಲ್ಲಿನ ಚೈತ್ರಾಂಜಲಿ ಪ್ರಾವಿಜನ್ ಸ್ಟೋರ್ ಮಾಲೀಕರು ಹಾಗೂ ಜೆಡಿಎಸ್ ಕಾರ್ಯಕರ್ತ ಸಿ.ರಮೇಶ್ (55) ಮಂಗಳವಾರ ನಿಧನರಾದರು. ಮೃತರು ಪತ್ನಿ ಕೋಮಲಾ, ಪುತ್ರಿಯರಾದ ಚೈತ್ರಾ, ಅಂಜಲಿ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಚಾಮುಂಡಿ ಬೆಟ್ಟದ ತಪ್ಪಲಿನ ಸ್ಮಶಾನದಲ್ಲಿ ಮೃತರ ಅಂತ್ಯಕ್ರಿಯೆ ಮಾ.12ರಂದು ಮಧ್ಯಾಹ್ನ 1ಕ್ಕೆ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

12.03.2025 ಬುಧವಾರ, ಮಳೆ ನಕ್ಷತ್ರ: ಪೂರ್ವಭಾದ್ರಾ 04.03.2025ರಿಂದ 16.03.2025
ಕ್ರೋಧಿನಾಮ ಸಂವತ್ಸರ, ಉತ್ತರಾಯಣ, ಶಿಶಿರ ಋತು, ಫಾಲ್ಗುಣ ಮಾಸ, ಶುಕ್ಲ ಪಕ್ಷ,
ತಿಥಿ: ತ್ರಯೋದಶಿ, ನಕ್ಷತ್ರ: ಮಖ, ರಾಹುಕಾಲ: ಮಧ್ಯಾಹ್ನ 12 ರಿಂದ 1.30ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಬೆಳಗ್ಗೆ 6.30ರಿಂದ ಯೋಗ ಮಾಡಿ ಆರೋಗ್ಯವಾಗಿರಿ, ದೇಹ, ಮನಸ್ಸುಗಳ ಆರೋಗ್ಯಕ್ಕಾಗಿ ಯೋಗಾಭ್ಯಾಸ ತರಗತಿ, ಬೆಳಗ್ಗೆ 9 ರಿಂದ ಇಸುಬು ತಪಾಸಣಾ ಶಿಬಿರ, ಒಟೋಮೈಕೋಸಿಸ್–ಕಿವಿಯ ಫಂಗಲ್ ಸೋಂಕಿಗೆ ಚಿಕಿತ್ಸಾ ಶಿಬಿರ, ಸಂಯಾಟಿಕ ರೋಗದ ಚಿಕಿತ್ಸಾ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಲಲಿತಾದ್ರಿ ರಸ್ತೆ, ಆಲನಹಳ್ಳಿ.

■ **ರಾಮ್‌ಸನ್ಸ್ ಪ್ರತಿಷ್ಠಾನ:** ಬೊಂಬೆ ಮನೆ, ದಸರೆ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, 91, ಆಮ್ರಪಾಲಿ ಸೀರೆ ಮಳಿಗೆ ಮೇಲೆ, ನಜರ್‌ಬಾದ್ ಮುಖ್ಯರಸ್ತೆ, ಬೆಳಗ್ಗೆ 10ಕ್ಕೆ.

■ **ಮಹಾರಾಣಿ ಮಹಿಳಾ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು, ಸಾಂಸ್ಕೃತಿಕ ವೇದಿಕೆ :** ಜಾನಪದ ಉತ್ಸವ, ಪ್ರಾದೇಶಿಕ ಮಟ್ಟದ ಜಾನಪದ ನೃತ್ಯ ಹಾಗೂ ಗಾಯನ ಸ್ಪರ್ಧೆ, ಅಧ್ಯಕ್ಷತೆ : ಕಾಲೇಜು ಪ್ರಿನ್ಸಿಪಾಲ್ ಪ್ರೊ. ಸೋಮಣ್ಣ, ಉದ್ಘಾಟನೆ : ಜಾನಪದ ವಿದ್ವಾಂಸ ಪ್ರೊ. ಕೃಷ್ಣಮೂರ್ತಿ, ಸ್ಥಳ: ಕಾಲೇಜು ಸಭಾಂಗಣ, ಬೆಳಗ್ಗೆ 10ಕ್ಕೆ

■ **ಮೈಸೂರು ವಿಶ್ವವಿದ್ಯಾಲಯ, ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ, ಶ್ರೀ ಬಸವೇಶ್ವರ ಸಾಮಾಜಿಕ ಪರಿಷ್ಕರಣೆ, ಸಂಶೋಧನೆ ಅಧ್ಯಯನ ಹಾಗೂ ವಿಸ್ತರಣಾ ಕೇಂದ್ರ :** ಸರಣಿ ಉಪನ್ಯಾಸ ಮಾಲಿಕೆ, ಪ್ರೊ. ಎಸ್.ಡಿ. ಶಶಿಕಲಾ ಅವರಿಂದ ಉರಲಿಂಗ ಪೆದ್ದಿಯ ಪತ್ನಿ ಕಾಳವ್ವೆಯ ವಚನಗಳಲ್ಲಿಯ ಚಿಂತನೆ ಕುರಿತು ಉಪನ್ಯಾಸ, ಅಧ್ಯಕ್ಷತೆ : ಪ್ರಾಂಶುಪಾಲ ಪ್ರೊ. ಜಿ.ಆರ್. ನಟರಾಜು, ಸ್ಥಳ: ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು, ವಿಜಯನಗರ, ಬೆಳಗ್ಗೆ 10.30ಕ್ಕೆ.

■ **ರೀಜನಲ್ ಟಿಬೇಟನ್ ವುಮನ್ಸ್ ಅಸೋಸಿಯೇಷನ್ :** 66ನೇ ನ್ಯಾಷನಲ್ ಟಿಬೇಟನ್ ಮಹಿಳಾ ದಂಗೆ ದಿನದ ಸ್ಮರಣಾರ್ಥ ಶಾಂತಿಯುತ ಮೆರವಣಿಗೆ, ಸ್ಥಳ: ಕೋಟೆ ಆಂಜನೇಯಸ್ವಾಮಿ ದೇವಸ್ಥಾನ, ಬೆಳಗ್ಗೆ 10.30 ರಿಂದ.

■ **ಕರ್ನಾಟಕ ಸರ್ಕಾರ ಧಾರ್ಮಿಕ ದತ್ತಿ ಇಲಾಖೆ :** ಮೈಸೂರು ನಗರ ಹಳೇ ಸಂತೇಪೇಟೆಯಲ್ಲಿರುವ ಶ್ರೀ ಪ್ರಸನ್ನ ನಂಜುಂಡೇಶ್ವರ ಸ್ವಾಮಿಯವರ ಬ್ರಹ್ಮೋತ್ಸವ, ರಾತ್ರಿ ಗಜಾರೋಹಣ, ಸ್ಥಳ: ದೇವಸ್ಥಾನದ ಪ್ರಾಂಗಣ, ಹಳೇ ಸಂತೇಪೇಟೆ.

■ **ಶರಣ ಸಾಹಿತ್ಯ ಪರಿಷತ್ತು ಮೈಸೂರು ನಗರ ಘಟಕ, ಕದಳಿ ಮಹಿಳಾ ವೇದಿಕೆ, ಕೇಂದ್ರ ಕಾರಾಗೃಹ:** ಕದಳಿ ಮಹಿಳಾ ವೇದಿಕೆಯ ರಜತೋತ್ಸವದ ಅಂಗವಾಗಿ ವಚನಗಳ ಚಿತ್ತ ಕಾರಾಗೃಹದತ್ತ... ಉಪನ್ಯಾಸ ಹಾಗೂ ವಚನ ಗಾಯನ ಕಾರ್ಯಕ್ರಮ, ಉದ್ಘಾಟನೆ : ಕೇಂದ್ರ ಕಾರಾಗೃಹ ಮುಖ್ಯ ಅಧೀಕ್ಷಕ ಪಿ.ಎಸ್. ರಮೇಶ್, ನಿವೃತ್ತ ಉಪನ್ಯಾಸ ಎಸ್.ಎಸ್. ರಮೇಶ್ ಅವರಿಂದ ಪರಿವರ್ತನೆಯ ಹಾದಿಯಲ್ಲಿ ವಚನಗಳು ಕುರಿತು ಉಪನ್ಯಾಸ, ಮುಖ್ಯ ಅತಿಥಿಗಳು : ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಮ.ಗು. ಸದಾನಂದಯ್ಯ, ಕನ್ನಡ ಸಾಹಿತ್ಯ ಕಲಾಕೂಟ ಅಧ್ಯಕ್ಷ ಎಂ. ಚಂದ್ರಶೇಖರ್, ಅಧ್ಯಕ್ಷತೆ : ಕದಳಿ ಮಹಿಳಾ ವೇದಿಕೆ ಅಧ್ಯಕ್ಷೆ ಶ್ರೀಮತಿ ಶಾರದಾ ಶಿವಲಿಂಗಸ್ವಾಮಿ, ಜನಪದ ಗಾಯಕ ಅಮ್ಮ ರಾಮಚಂದ್ರ ಅವರಿಂದ ವಚನ ಗಾಯನ, ಸ್ಥಳ: ಕೇಂದ್ರ ಕಾರಾಗೃಹ ಆವರಣ, ಬೆಳಗ್ಗೆ 11ಕ್ಕೆ

ಕಳಲೆ ಗ್ರಾಮ, ನಂಜನಗೂಡು ತಾಲೂಕು

■ **ಶ್ರೀ ಕಳಲೆ ಕೈವಲ್ಯಾದೇವಿ ಅಮ್ಮನವರ ದೇವಸ್ಥಾನ :** ಶ್ರೀ ಕಳಲೆ ಕೈವಲ್ಯಾದೇವಿ ಅಮ್ಮನವರ ಮಡೆ ಉತ್ಸವ, ಸಂಜೆ ಪೂಜಾ ಕೈಂಕರ್ಯಗಳು, ಸಂಜೆ 5.30ರ ನಂತರ ಶ್ರೀ ಅಮ್ಮನವರಿಗೆ ಅಭಿಷೇಕ, ಮೈಸೂರು ವಿದ್ವಾನ್ ವಿ. ಪ್ರಕಾಶ್ ಮತ್ತು ವೃಂದದವರಿಂದ ನಾದಸ್ವರ, ಶ್ರೀ ಅಮ್ಮನವರ ಉತ್ಸವ ಮತ್ತು ಮಡೆ ಸೇವೆ, ಸ್ಥಳ : ಶ್ರೀ ಕಳಲೆ ಕೈವಲ್ಯಾದೇವಿ ಅಮ್ಮನವರ ದೇವಸ್ಥಾನ, ಕಳಲೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ರಂಗ ದಿಗ್ಗಜರು, ಮೈಸೂರು, ಮಂಡ್ಯ, ಚಾಮರಾಜನಗರ ಜಿಲ್ಲೆಯ ಮರೆಯಬಾರದ ಮಹನೀಯರು, ಲೇಖನ ಹಾಗೂ ನಿರೂಪಣೆ–ಎಸ್. ರಾಮನಾಥ್, ನಿರ್ಮಾಣ–ಪ್ರಭುಸ್ವಾಮಿ ಮಳಿಮಠ್, 6.40 ಅರಿವಿನ ಶಿಖರ : ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಅಂಬಯ್ಯನುಲಿ, ಟಿ. ಎಸ್. ಸ್ನೇಹಾ, ವ್ಯಾಖ್ಯಾನ– ಡಾ. ಹೆಚ್.ಎನ್. ಮಂಜುರಾಜ್, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು, 8.30 ಚಿತ್ರಗೀತೆಗಳು, 9.00 ವೃತ್ತಿ ಮಾರ್ಗದರ್ಶನ, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ, ಡಾ. ಎಂ. ಮಂಜುನಾಥ್ ಮತ್ತು ಸುಮಂತ್ ಮಂಜುನಾಥ್–ಯುಗಳ ವೈಯೋಲಿನ್ ವಾದನ, 10.30 ಹಿಂದಿ ಚಿತ್ರಗೀತೆಗಳು, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಹಾಗೂ ಪತ್ರೋತ್ತರ

ಮಧ್ಯಾಹ್ನ: 12.35 ದೇವರನಾಮ, 12.45 ಜನಪದ ಸಂಗೀತ : ಟಿ. ನರಸೀಪುರ ತಾಲೂಕು ಬನ್ನೂರಿನ ಮಂಚಮ್ಮ ಮತ್ತು ಸಂಗಡಿಗರಿಂದ ಬಿಳಿಗಿರಿ ರಂಗಯ್ಯನ ಹಾಡು, 1.00 ಪ್ರಗತಿ ಪಥ – ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಕುರಿತು ಸರಣಿ, 1.20 ಭಾವಗೀತೆಗಳು, 2.40 ಚಿತ್ರಗೀತೆಗಳು, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಗಾನ ಸರಸ್ವತಿ–ಹಾಡುಗಾರಿಕೆ, 4.00 ಮಹಿಳಾರಂಗ, 5.05 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.50 ಕೃಷಿರಂಗ, ಮೇವು ಮೆಲುಕು–ಮೇವಿನ ಬೆಳೆಗಳ ಬೇಸಾಯ ತಾಂತ್ರಿಕತೆಗಳನ್ನು ಕುರಿತ ಬಾನುಲಿ ಸರಣಿ ಮೇವು ಬೆಳೆಗಳ ರೋಗ ನಿರ್ವಹಣೆ. ಈ ಕುರಿತು ಮಂಡ್ಯದ ವಿ. ಸಿ. ಫಾರಂ ವಲಯ ಕೃಷಿ ಸಂಶೋಧನಾ ಕೇಂದ್ರದ ಮೇವು ಅಭಿವೃದ್ಧಿ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ.ಎನ್. ಮಲ್ಲಿಕಾರ್ಜುನ್ ಅವರೊಂದಿಗೆ ಸಂದರ್ಶನ. ಸಂದರ್ಶಕರು: ಎನ್. ಕೇಶವಮೂರ್ತಿ, 7.45– ವಿಧಾನಮಂಡಲದಲ್ಲಿ ಇಂದು, 8.00 –ಕರ್ನಾಟಕ ಶಾಸ್ತ್ರೀಯ ಸಂಗೀತ : ಸಿ.ವಿ. ಶೃತಿ–ವೈಯೋಲಿನ್, 9.30–ಕ್ರೀಡಾಲೋಕ, 10.00 ಜನಪದ ಸಂಗೀತ, 10.30 ಸವಿನೆನಪು

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮಾರ್ಚ್ 12 ಬುಧವಾರ 2025

ಸಂಪುಟ: 45 | ಸಂಚಿಕೆ: 322 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಪ್ರವಾಸಿಗರ ಸುರಕ್ಷತೆಯ ಖಾತ್ರಿ
ಹೋಂಸ್ಟೇ, ರೆಸಾರ್ಟ್ ಮಾಲೀಕರಿಗೆ ಹೊಸ ಮಾರ್ಗಸೂಚಿ

ಬೆಂಗಳೂರು, ಮಾ.11– ಮಾರ್ಚ್ 6ರಂದು ಕೊಪ್ಪಳ ಜಿಲ್ಲೆಯಲ್ಲಿ ಒಡಿಶಾದ ಪ್ರವಾಸಿಗರೊಬ್ಬರ ಕೊಲೆ ಹಾಗೂ ಇಸ್ರೇಲಿ ಪ್ರವಾಸಿ ಸೇರಿದಂತೆ ಇಬ್ಬರ ಮೇಲೆ ಅತ್ಯಾಚಾರ ನಡೆದ ನಂತರ ರಾಜ್ಯ ಸರ್ಕಾರ ಮಂಗಳವಾರ ಹೋಂಸ್ಟೇ, ರೆಸಾರ್ಟ್ ಮತ್ತು ಹೋಟೆಲ್‌ಗಳಿಗೆ ಹೊಸ ಮಾರ್ಗಸೂಚಿ ಗಳನ್ನು ಹೊರಡಿಸಿದೆ.


(ಸಂಗ್ರಹ ಚಿತ್ರ)

ಅತಿಥಿಗಳ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ಕಟ್ಟುನಿಟ್ಟಾದ ಭದ್ರತಾ ಕ್ರಮಗಳನ್ನು ಕಡ್ಡಾಯಗೊಳಿಸಿದೆ. ಸಣಾಪುರ ಘಟನೆಯು ದುಃಖಕರ ಮತ್ತು ವಿಷಾದನೀಯ ಎಂದಿರುವ ಸರ್ಕಾರ ಭವಿಷ್ಯದಲ್ಲಿ ಇಂತಹ ಘಟನೆಗಳನ್ನು ತಡೆಗಟ್ಟಲು ಹೊಸ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಅನುಸರಿಸಬೇಕು ಎಂದು ಹೇಳಿದೆ. ರಾಜ್ಯಾದ್ಯಂತ ಪ್ರವಾಸಿ ತಾಣಗಳಲ್ಲಿರುವ ಹೋಂಸ್ಟೇಗಳು ವಿದೇಶಿ ಪ್ರವಾಸಿಗರು ಸೇರಿದಂತೆ ಎಲ್ಲ ಪ್ರವಾಸಿಗರಿಗೆ ಸೂಕ್ತ ಭದ್ರತಾ ಕ್ರಮಗಳನ್ನು ಜಾರಿಗೊಳಿಸಬೇಕು ಎಂದು ಆದೇಶದಲ್ಲಿ ತಿಳಿಸಲಾಗಿದೆ. ಪ್ರವಾಸಿಗರನ್ನು ದೂರದ ಅಥವಾ ನಿರ್ಜನ ಪ್ರದೇಶಗಳಿಗೆ ಕರೆದೊಯ್ಯುವ ಮೊದಲು, ಪೂರ್ವ ಮಾಹಿತಿಯನ್ನು ಒದಗಿಸಬೇಕು ಮತ್ತು ಅದಕ್ಕೆ ಸಂಬಂಧಿತ ಪೊಲೀಸ್ ಠಾಣೆಯಿಂದ ಅನುಮತಿ ಪಡೆಯಬೇಕು ಎಂದು ಹೇಳಲಾಗಿದೆ. ಪೊಲೀಸ್ ಅಥವಾ ಅರಣ್ಯ ಇಲಾಖೆಯಿಂದ ಪೂರ್ವಾನುಮತಿ ಇಲ್ಲದೆ ಪ್ರವಾಸಿಗರನ್ನು ದೂರದ ಸ್ಥಳಗಳು, ಹೊರವಲಯಗಳು ಅಥವಾ ಅರಣ್ಯ ಪ್ರದೇಶಗಳಿಗೆ ಕರೆದೊಯ್ದರೆ, ದುಷ್ಕರ್ಮಿಗಳು ಅಥವಾ ಕಾಡುಪ್ರಾಣಿಗಳಿಂದ ಉಂಟಾಗುವ ಯಾವುದೇ ಘಟನೆಗಳಿಗೆ ಹೋಂಸ್ಟೇ ಮಾಲೀಕರನ್ನು ಹೊಣೆಗಾರರನ್ನಾಗಿ ಮಾಡಲಾಗುತ್ತದೆ. ಅಲ್ಲದೇ ಕಾನೂನು ಪರಿಣಾಮಗಳನ್ನು ಎದುರಿಸಬೇಕಾಗುತ್ತದೆ ಎಂದು ಆದೇಶದಲ್ಲಿ ತಿಳಿಸಲಾಗಿದೆ. ಹೋಂಸ್ಟೇಗಳು, ಹೋಟೆಲ್‌ಗಳು ಮತ್ತು ರೆಸಾರ್ಟ್‌ಗಳು ಮಾರ್ಗಸೂಚಿ

■ 6ನೇ ಪುಟಕ್ಕೆ

ಚಿನ್ನ ಕಳ್ಳ ಸಾಗಾಣೆ ಪ್ರಕರಣ: ನಟಿ ರನ್ಯಾರಾವ್ ಮನೆ, ಕಚೇರಿ ಮೇಲೆ ಸಿಬಿಐ ದಾಳಿ; ಕೆಲ ದಾಖಲೆಗಳು ವಶಕ್ಕೆ

● ವಿಮಾನ ನಿಲ್ದಾಣದಲ್ಲಿ ಪೊಲೀಸ್ ವೈಫಲ್ಯ ಸಂಬಂಧ ಸಿಐಡಿ ತನಿಖೆ ● ಗೃಹ ಸಚಿವರಿಂದ ಮುಖ್ಯಮಂತ್ರಿ ಮಾಹಿತಿ ಸಂಗ್ರಹ

ಬೆಂಗಳೂರು, ಮಾ. 11(ಕೆಎಂಶಿ)– ಚಿನ್ನ ಕಳ್ಳ ಸಾಗಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಬಿಐ, ರನ್ಯಾರಾವ್ ಮನೆ ಹಾಗೂ ಕಚೇರಿ ಮೇಲೆ ದಾಳಿ ನಡೆಸಿ, ಕೆಲವು ದಾಖಲೆಗಳನ್ನು ವಶಕ್ಕೆ ಪಡೆದಿದೆ.

ದೆಹಲಿಯಿಂದ ಬಂದ ಇಬ್ಬರು ಅಧಿಕಾರಿಗಳು ರಾಜ್ಯದಲ್ಲಿನ ಸಿಬಿಐ ಕೇಂದ್ರ ಕಚೇರಿ ಸಿಬ್ಬಂದಿ ಜೊತೆಗೂಡಿ ನಿನ್ನೆ ರಾತ್ರಿ ನಗರದ ಲ್ಯಾವೆಲ್ಲಿ ರಸ್ತೆಯಲ್ಲಿನ ಅವರ ಫ್ಲಾಟ್ ಮತ್ತು ವಿಕ್ಟೋರಿಯಾ ಲೇಔಟ್‌ನಲ್ಲಿನ ಕಚೇರಿ ಪರಿಶೀಲಿಸಿದರು. ಪ್ರಕರಣವನ್ನು ಸಿಬಿಐ ಕೈಗೆತ್ತಿಕೊಳ್ಳುತ್ತಿದ್ದಂತೆ ಎಚ್ಚೆತ್ತ ಸರ್ಕಾರ ರನ್ಯಾ ರಾವ್ ತಂದೆ, ಪೊಲೀಸ್ ಮಹಾನಿರ್ದೇಶಕ ರಾಮಚಂದ್ರ ರಾವ್ ಪಾತ್ರ ಕುರಿತು ತನಿಖೆಗೆ ಆದೇಶಿಸಿತ್ತು ಮತ್ತೊಂದೆಡೆ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ರಾಜ್ಯ ಪೊಲೀಸರ ವೈಫಲ್ಯದ ಬಗ್ಗೆಯೂ ತನಿಖೆ ನಡೆಸುವಂತೆ ಸಿಐಡಿಗೆ ಸೂಚಿಸಿದೆ.

ಗೃಹ ಸಚಿವರಿಂದ ಮುಖ್ಯಮಂತ್ರಿ ಮಾಹಿತಿ ಸಂಗ್ರಹ: ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಬಿಐ ತನಿಖೆ ತೀವ್ರಗೊಳಿಸುತ್ತಿದ್ದಂತೆ, ಮುಖ್ಯಮಂತ್ರಿ ಸಿದ್ದರಾಮಯ್ಯ, ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರನ್ನು ಕರೆಸಿಕೊಂಡು ಚಿನ್ನ ಕಳ್ಳಸಾಗಣೆಗೆ ಸಂಬಂಧಿಸಿದಂತೆ ವಿವರ ಪಡೆದಿದ್ದಾರೆ. ವಿಧಾನಸಭೆ ಕಲಾಪದಲ್ಲಿ ಭಾಗವಹಿಸಿದ್ದ ಡಾ.ಪರಮೇಶ್ವರ್ ಅವರನ್ನು ಮೊಗಸಾಲೆಯಲ್ಲಿನ ತಮ್ಮ ಕಚೇರಿಗೆ ಕರೆಸಿಕೊಂಡ ಮುಖ್ಯಮಂತ್ರಿಗಳು, ರಹಸ್ಯ ಮಾತುಕತೆ ನಡೆಸಿದರು. ಚಿನ್ನ ಕಳ್ಳಸಾಗಣೆಯಲ್ಲಿ ಇಬ್ಬರು ಸಚಿವರ ಪಾತ್ರ ಇದೆ ಎಂಬ ಬಗ್ಗೆ ಮಾಧ್ಯಮಗಳಲ್ಲಿ ಬರುತ್ತಿರುವ

■ 6ನೇ ಪುಟಕ್ಕೆ


ರನ್ಯಾರಾವ್


ವಿಮಾನ ನಿಲ್ದಾಣದಲ್ಲಿ ಶಿಷ್ಟಾಚಾರ ದುರ್ಬಳಕೆ; ತನಿಖೆಗೆ ಸರ್ಕಾರ ಆದೇಶ

ಬೆಂಗಳೂರು, ಮಾ. 11(ಕೆಎಂಶಿ)–ಚಿತ್ರನಟಿ ರನ್ಯಾರಾವ್ ದುಬೈನಿಂದ ಅಕ್ರಮವಾಗಿ ಚಿನ್ನ ಕಳ್ಳ ಸಾಗಣೆ ಮಾಡಿದ ಪ್ರಕರಣದಲ್ಲಿ ಶಿಷ್ಟಾಚಾರ ಸೌಲಭ್ಯ ದುರ್ಬಳಕೆಗೆ ಸಂಬಂಧಿಸಿದಂತೆ ಆಕೆಯ ತಂದೆ, ಪೊಲೀಸ್ ಮಹಾನಿರ್ದೇಶಕ ರಾಮಚಂದ್ರರಾವ್ ಪಾತ್ರ ಕುರಿತು ತನಿಖೆ ನಡೆಸುವಂತೆ ಸರ್ಕಾರ ಆದೇಶಿಸಿದೆ ರನ್ಯಾರಾವ್ ವಿಮಾನ ನಿಲ್ದಾಣದಲ್ಲಿ ಶಿಷ್ಟಾಚಾರ ಸೌಲಭ್ಯಗಳ ಬಳಕೆ ಪಡೆದುಕೊಳ್ಳಲು ಕಾರಣವಾದ ಸಂಗತಿ ಮತ್ತು ಸಂದರ್ಭಗಳು, ಈ ಪ್ರಕರಣದಲ್ಲಿ ರಾಮಚಂದ್ರ ರಾವ್ ಅವರ ಪಾತ್ರ ಏನಿದೆ ಎಂಬ ಬಗ್ಗೆ ತಿಳಿಯಲು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತ ಅವರಿಂದ ತನಿಖೆ ನಡೆಸಿ, ಒಂದು ವಾರದಲ್ಲಿ ವರದಿ ನೀಡುವಂತೆ ಸರ್ಕಾರ ಆದೇಶ ಹೊರಡಿಸಿದೆ. ಐಪಿಎಸ್ ಅಧಿಕಾರಿ ವಿರುದ್ಧ ತನಿಖೆಯನ್ನು ತಕ್ಷಣ ಪ್ರಾರಂಭಿಸಿ, ನಿಗದಿತ ಸಮಯದೊಳಗೆ ವರದಿ ನೀಡುವಂತೆ ಸಿಬ್ಬಂದಿ

■ 6ನೇ ಪುಟಕ್ಕೆ


ರಾಮಚಂದ್ರರಾವ್

ಕುಕ್ಕೆ ಸುಬ್ರಹ್ಮಣ್ಯದಲ್ಲಿ ಕತ್ರಿನಾ ಕೈಫ್!





ಮಂಗಳೂರು, ಮಾ.11– ಬಾಲಿವುಡ್ ನಟಿ ಕತ್ರಿನಾ ಕೈಫ್, ಮಂಗಳವಾರ ದಕ್ಷಿಣ ಕನ್ನಡ ಜಿಲ್ಲೆಯ ಕುಕ್ಕೆ ಶ್ರೀ ಸುಬ್ರಹ್ಮಣ್ಯ ದೇವಸ್ಥಾನಕ್ಕೆ ಭೇಟಿ ನೀಡಿ, ವಿಶೇಷ ಪೂಜೆ ಸಲ್ಲಿಸಿದರು. ಅವರು ತಮ್ಮ ಸ್ನೇಹಿತೆಯರೊಂದಿಗೆ ಸರ್ಪ ಸಂಸ್ಕಾರ ಪೂಜೆ ನಡೆಸಿದ್ದಾರೆ ಎಂದು ವರದಿಯಾಗಿದೆ.

ಸಾಮಾನ್ಯವಾಗಿ ಕುಕ್ಕೆ ಸುಬ್ರಹ್ಮಣ್ಯ ಕ್ಷೇತ್ರಕ್ಕೆ ಮದುವೆಯಾಗದವರು, ಮಕ್ಕಳಾಗದವರು ಹೆಚ್ಚಾಗಿ ಭೇಟಿ ನೀಡುತ್ತಾರೆ. ದೋಷ ನಿವಾರಣೆಗೆ ಅನೇಕರು ಸರ್ಪ ಸಂಸ್ಕಾರ ಪೂಜೆ ನೆರವೇರಿಸುತ್ತಾರೆ. ಇದೀಗ ಬಾಲಿವುಡ್ ನಟಿ ಕತ್ರಿನಾ ಕೂಡ ಸುಬ್ರಹ್ಮಣ್ಯನ ಮೊರೆ ಹೋಗಿರುವುದು ಅಚ್ಚರಿಗೆ ಕಾರಣವಾಗಿದೆ. ಮಂಗಳವಾರ ಮತ್ತು ಬುಧವಾರದಂದು ತಲಾ ನಾಲ್ಕರಿಂದ ಐದು ಗಂಟೆಗಳ ಕಾಲ ಎರಡು ಹಂತಗಳಲ್ಲಿ ಪೂಜೆ ನಡೆಸಲಾಗುತ್ತದೆ. ದೇವಸ್ಥಾನದ ವಿಐಪಿ ಅತಿಥಿ ಗೃಹದಲ್ಲಿ ಉಳಿದುಕೊಂಡಿರುವ ಕತ್ರಿನಾ ಬುಧವಾರ ಮಧ್ಯಾಹ್ನ 2 ಗಂಟೆಯ ವೇಳೆಗೆ ಧಾರ್ಮಿಕ ಕ್ರಿಯೆಯನ್ನು ಪೂರ್ಣಗೊಳಿಸುವ ನಿರೀಕ್ಷೆಯಿದೆ.

ಶಾಲಾ ವಿದ್ಯಾರ್ಥಿಗಳಿಗೆ ವಾರದಲ್ಲಿ ಒಂದು ದಿನ ನೈತಿಕ ಶಿಕ್ಷಣ


ಪರಿಷತ್‌ನಲ್ಲಿ ಭಾರತಿಶೆಟ್ಟಿ ಪ್ರಸ್ತಾಪಕ್ಕೆ ಸರ್ಕಾರ ಸಮ್ಮತಿ

ಬೆಂಗಳೂರು, ಮಾ.11– ಪ್ರಾಥಮಿಕ ಮತ್ತು ಪ್ರೌಢಶಾಲಾ ಹಂತದಲ್ಲಿ ಮಕ್ಕಳಿಗೆ ನೈತಿಕ ಶಿಕ್ಷಣ ಪಾಠಕ್ಕೆ ಅವಕಾಶ ಮಾಡಿಕೊಡುವ ಕುರಿತು ಚಿಂತನೆ ನಡೆಸಲಾಗುತ್ತಿದೆ ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರು ಹೇಳಿದ್ದಾರೆ. ವಿಧಾನಪರಿಷತ್ತಿನಲ್ಲಿ ಶೂನ್ಯ ವೇಳೆ ವಿಷಯ ಪ್ರಸ್ತಾಪಿಸಿದ ಬಿಜೆಪಿಯ ಭಾರತಿ ಶೆಟ್ಟಿ ಅವರು, ಹದಿಹರೆಯದ ಮಕ್ಕಳ ಸಮಸ್ಯೆಗಳನ್ನು ಎಳೆಎಳೆಯಾಗಿ ಬಿಚ್ಚಿಟ್ಟರು.


ಭಾರತಿಶೆಟ್ಟಿ

14 ರಿಂದ 17ನೇ ವಯಸ್ಸಿನ ಮಕ್ಕಳ ಮನಸ್ಸು ಚಂಚಲತೆಯಿಂದ ಕೂಡಿರುತ್ತದೆ. ಈ ವಯಸ್ಸಿನ ಮಕ್ಕಳ ಮೇಲೆ ಸೂಕ್ಷ್ಮ ನಿಗಾ ಇರಿಸಬೇಕು. ಶಾಲೆಯಲ್ಲಿ ಪಾಠದ ಒತ್ತಡ, ಮನೆಯಲ್ಲಿ ಮೊಬೈಲ್‌ನಲ್ಲಿ ಆಟ ಎಂಬಂತಾಗಿ ಹದಿಹರೆಯದ ಮಕ್ಕಳು ದೈಹಿಕ ಮತ್ತು ಬೌದ್ಧಿಕವಾಗಿ ದುರ್ಬಲರಾಗುತ್ತಿದ್ದಾರೆ. ಸಾಮಾಜಿಕ ಜಾಲತಾಣಗಳಿಂದ ಅನೇಕ ಮಕ್ಕಳ ದಾರಿ ತಪ್ಪುತ್ತಿದ್ದಾರೆ ಎಂದು ಹೇಳಿದರು. ಅಪ್ರಾಪ್ತ ವಯಸ್ಸಿನ ಹೆಣ್ಣು ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯ ಹೆಚ್ಚುತ್ತಿದೆ. ಬಾಂಬೆ ರೆಡ್‌ಲೈಟ್ ಏರಿಯಾದಲ್ಲಿನ ಶೇ.99ರಷ್ಟು ಮಹಿಳೆಯರು ಅಪ್ರಾಪ್ತ ವಯಸ್ಸಿನಲ್ಲಿ ಮನೆ ಬಿಟ್ಟು ಓಡಿ ಹೋದವರಾಗಿದ್ದಾರೆ. ಇಂದಿನ ಹದಿಹರೆಯದ ಮಕ್ಕಳಿಗೆ ಲೈಂಗಿಕ ಶಿಕ್ಷಣ, ನೈತಿಕ ಶಿಕ್ಷಣ ಸಿಗುತ್ತಿಲ್ಲ. ಕಳೆದ ಎರಡು ವರ್ಷಗಳಲ್ಲಿ ರಾಜ್ಯದಲ್ಲಿ 33,000 ಕ್ಕೂ ಹೆಚ್ಚು ಹದಿಹರೆಯದ ಗರ್ಭಧಾರಣೆಯ ಪ್ರಕರಣಗಳು ವರದಿಯಾಗಿವೆ. ಇವು ನೋಂದಾಯಿತ ಪ್ರಕರಣಗಳಾಗಿದ್ದು, ನೋಂದಾಯಿಸದ ಪ್ರಕರಣಗಳನ್ನು ಸೇರಿಸಿದರೆ ಈ ಸಂಖ್ಯೆ ಇನ್ನೂ ಹೆಚ್ಚಾಗಬಹುದು. ಇದನ್ನು ಗಂಭೀರವಾಗಿ ಪರಿಗಣಿಸಬೇಕಿದೆ ಎಂದು ತಿಳಿಸಿದರು. ರಾಜ್ಯ ಸರ್ಕಾರವು ಲೈಂಗಿಕ ಶಿಕ್ಷಣವನ್ನು ನೀಡುತ್ತಿದೆ, ಸೆಮಿನಾರ್‌ಗಳನ್ನು ನಡೆಸುತ್ತಿರುವುದಾಗಿ ಹೇಳಿಕೊಳ್ಳುತ್ತದೆ. ನಾನು ಅನೇಕ ಶಾಲೆಗಳಿಗೆ ಭೇಟಿ ನೀಡಿದ್ದೇನೆ. ಅಲ್ಲಿ ಯಾವ ಶಿಕ್ಷಣವನ್ನು ನೀಡಲಾಗಿಲ್ಲ. ಹುಡುಗರು ಮತ್ತು ಹುಡುಗಿಯರಿಗೆ ಇದರ ಬಗ್ಗೆ ತಿಳಿದೇ ಇರುವುದಿಲ್ಲ. ಈ ಹಿಂದೆ ಶಾಲೆಗಳಲ್ಲಿ ಕಡ್ಡಾಯ ನೈತಿಕ ಶಿಕ್ಷಣ ಮತ್ತು ಪರೀಕ್ಷೆಗಳಿದ್ದವು. ಅದರಿಂದ ನಾವು ಸಾಕಷ್ಟು ಕಲಿಯುತ್ತಿದ್ದೆವು. ಆದರೆ, ಈಗ ಅದು ಇಲ್ಲ ಎಂದರು.


ಮಧು ಬಂಗಾರಪ್ಪ



■ 6ನೇ ಪುಟಕ್ಕೆ

ರನ್ಯಾ ಪತಿಗೆ ಸದ್ಯ ರಿಲೀಫ್

ಚಿನ್ನದ ಕಳ್ಳಸಾಗಣೆ ಪ್ರಕರಣದಲ್ಲಿ ಸಿಕ್ಕಿಬಿದ್ದ ನಟಿ ರನ್ಯಾರಾವ್ ಈಗ ನ್ಯಾಯಾಂಗ ಬಂಧನದಲ್ಲಿದ್ದಾರೆ. ಈ ಪ್ರಕರಣ ದಿನದಿಂದ ದಿನಕ್ಕೆ ತಿರುವು ಪಡೆದುಕೊಳ್ಳುತ್ತಿದೆ.

ರನ್ಯಾರಾವ್ ಅವರನ್ನು ಡಿಆರ್‌ಐ ಅಧಿಕಾರಿಗಳು ಬಂಧಿಸಿದ ಹಿನ್ನೆಲೆಯಲ್ಲಿ ಅವರ ಪತಿ ಜತಿನ್ ಹುಕ್ಕೇರಿ ಬಂಧನದ ಭೀತಿಯಿಂದಾಗಿ ಹೈಕೋರ್ಟ್ ಮೆಟ್ಟಿಲೇರಿದ್ದಾರೆ. ಜತಿನ್ ಹುಕ್ಕೇರಿ ಪರವಾಗಿ ಹಿರಿಯ ವಕೀಲ ಪ್ರಭುಲಿಂಗ್ ನಾವದಗಿ ವಾದ ಮಂಡಿಸಿದ್ದು, ಪತ್ನಿಯ ಮೇಲಿನ ಆರೋಪಗಳಿಗೂ ಜತಿನ್ ಅವರಿಗೂ ಯಾವುದೇ ಸಂಬಂಧವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಡಿಆರ್‌ಐ ಅಧಿಕಾರಿಗಳು ಸಮನ್ಸ್ ನೀಡಿದಾಗ ಜತಿನ್ ಅವರು ತನಿಖೆಗೆ ಸಂಪೂರ್ಣ ಸಹಕಾರ ನೀಡಿದ್ದಾರೆ. ಮತ್ತು ಎರಡನೇ ಬಾರಿ ಕರೆದಾಗಲೂ ವಿಚಾರಣೆಗೆ ಹಾಜರಾಗಿದ್ದಾರೆ. ಸುಪ್ರೀಂ ಕೋರ್ಟ್ ನಿರ್ದೇಶನಗಳನ್ನು ಪಾಲಿಸದೆ ಡಿಆರ್‌ಐ ಅಧಿಕಾರಿಗಳು ಜತಿನ್ ಅವರನ್ನು ಬಂಧಿಸುವ ಸಾಧ್ಯತೆ ಇದೆ ಎಂದು ಪ್ರಭುಲಿಂಗ್ ನಾವದಗಿ ವಾದಿಸಿದ್ದರು.

ಬೆಂಗಳೂರಿನಲ್ಲಿ ವರ್ಷಧಾರೆ!

ಬೆಂಗಳೂರು: ಬಿಸಿಲ ಧಗೆಯಿಂದ ಬೇಸತ್ತು ಹೋಗಿದ್ದ ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ಕೊನೆಗೂ ವರ್ಷಧಾರೆಯಾಗಿದ್ದು, ಇಂದು ಸಂಜೆ ಸುರಿದ ಮಾರ್ಚ್ ತಿಂಗಳ ಮೊದಲ ಮಳೆಯಿಂದಾಗಿ ನಗರದ ತಾಪಮಾನ ಗಣನೀಯವಾಗಿ ಇಳಿಕೆಯಾಗಿದೆ. ಸಂಜೆ 6 ಗಂಟೆ ಹೊತ್ತಿಗೆ ಬೆಂಗಳೂರಿನ ಶಾಂತಿನಗರ, ಕಾರ್ಪೊರೇಷನ್, ರಿಚ್ಮಂಡ್ ಸರ್ಕಲ್, ಕೆ.ಆರ್. ಮಾರ್ಕೆಟ್, ಮೆಜೆಸ್ಟಿಕ್ ಸೇರಿದಂತೆ ಹಲವೆಡೆ ಮಳೆ ಸುರಿದು ನಂತರ ಹಲಸೂರು, ಇಂದಿರಾನಗರ, ಬನಶಂಕರಿ, ಜಯನಗರದಲ್ಲೂ ಮಳೆಯಾಗಿದೆ. ಬೆಂಗಳೂರಿನ HAL, ಮಾರತ್‌ಹಳ್ಳಿ, ವೈಟ್‌ಫೀಲ್ಡ್, ಲಾಲ್‌ಬಾಗ್, ರಿಚ್‌ಮಂಡ್ ಸರ್ಕಲ್, ಅವಲಹಳ್ಳಿಯಲ್ಲಿ 2 ಎಂಎಂ ಮಳೆಯಾಗಿದೆ ಎಂದು ಹವಾಮಾನ ಇಲಾಖೆ ಮಾಹಿತಿ ನೀಡಿದೆ.



ಕುಸಿದ ತಾಪಮಾನ: ಇಂದು ಸುರಿದ ಮಳೆಯಿಂದಾಗಿ ಬೆಂಗಳೂರಿನಲ್ಲಿ ತಾಪಮಾನ ಕುಸಿತವಾಗಿದ್ದು, ಮಧ್ಯಾಹ್ನ 27 ಡಿಗ್ರಿಯಷ್ಟಿದ್ದ ತಾಪಮಾನ ಸಂಜೆ ಮಳೆ ಬಳಿಕ 24 ಡಿಗ್ರಿಗೆ ಕುಸಿದಿದೆ.

ಮಂಡ್ಯ ಹೊರತಾಗಿ ಮೈಸೂರು, ಕೊಡಗು, ಚಾಮರಾಜನಗರ ಜಿಲ್ಲೆಗಳಲ್ಲಿ
ಸಾಧಾರಣ ಮಳೆ ಸಾಧ್ಯತೆ

ಮೈಸೂರು,ಮಾ.11(ಪಿಎಂ)– ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆಯಂತೆ ಮಂಡ್ಯ ಜಿಲ್ಲೆ ಹೊರತಾಗಿ ಮೈಸೂರು, ಕೊಡಗು ಹಾಗೂ ಚಾಮರಾಜನಗರ ಜಿಲ್ಲೆಗಳಲ್ಲಿ ಈ ವಾರ ಹಗುರ ಮಳೆಯಾಗುವ ಸಂಭವವಿದೆ.



ಮೈಸೂರು ಜಿಲ್ಲೆಯಲ್ಲಿ ಮಾ.12ರಿಂದ 16ರವರೆಗೆ ಮೋಡ ಕವಿದ ವಾತಾವರಣವಿದ್ದು, ಹಗುರ ಮಳೆ ಬರುವ ಸಂಭವವಿದೆ. ಗರಿಷ್ಠ ಉಷ್ಣಾಂಶ 35 ಡಿಗ್ರಿ ಸೆಲ್ಸಿಯಸ್ ಮತ್ತು ಕನಿಷ್ಠ ಉಷ್ಣಾಂಶ 19 ಡಿಗ್ರಿ ಸೆಲ್ಸಿಯಸ್ ವರೆಗೆ ದಾಖಲಾಗುವ ಸಾಧ್ಯತೆ ಇದೆ. ಬೆಳಗಿನ ಗಾಳಿಯ ತೇವಾಂಶ ಶೇ.70ರಿಂದ 78ರವರೆಗೆ ಮತ್ತು ಮಧ್ಯಾಹ್ನದ ತೇವಾಂಶ ಶೇ.30ರಿಂದ 36ರವರೆಗೆ ದಾಖಲಾಗುವ ಮತ್ತು ಗಾಳಿಯು ಗಂಟೆಗೆ 6ರಿಂದ 10 ಕಿಲೋಮೀಟರ್ ವೇಗದಲ್ಲಿ ಬೀಸುವ ಸಾಧ್ಯತೆಯಿದೆ. ಅಂತೆಯೇ ಕೊಡಗು ಜಿಲ್ಲೆಯಲ್ಲಿ 12ರಿಂದ 16ರವರೆಗೆ ಮೋಡ ಕವಿದ ವಾತಾವರಣವಿದ್ದು, ಹಗುರ ಮಳೆ ಬರುವ ಸಂಭವವಿದೆ. ಗರಿಷ್ಠ ಉಷ್ಣಾಂಶ 34ರಿಂದ 35 ಡಿಗ್ರಿ ಸೆಲ್ಸಿಯಸ್ ಮತ್ತು ಕನಿಷ್ಠ ಉಷ್ಣಾಂಶ 19 ಡಿಗ್ರಿ ಸೆಲ್ಸಿಯಸ್‌ವರೆಗೆ ದಾಖಲಾಗುವ ಸಾಧ್ಯತೆಯಿದೆ. ಬೆಳಗಿನ ಗಾಳಿಯ ತೇವಾಂಶ ಶೇ.74ರಿಂದ 77ರವರೆಗೆ ಮತ್ತು ಮಧ್ಯಾಹ್ನದ ತೇವಾಂಶ ಶೇ.31ರಿಂದ 38ರವರೆಗೆ ದಾಖಲಾಗುವ ಮತ್ತು ಗಾಳಿಯು ಗಂಟೆಗೆ 8ರಿಂದ 12 ಕಿಲೋಮೀಟರ್ ವೇಗದಲ್ಲಿ ಬೀಸುವ ಸಂಭವವಿದೆ.

ಅದೇ ರೀತಿ ಚಾಮರಾಜನಗರ ಜಿಲ್ಲೆಯಲ್ಲಿ ಮಾ.12ರಿಂದ 16ರವರೆಗೆ ಮೋಡ ಕವಿದ ವಾತಾವರಣವಿದ್ದು, ಹಗುರ ಮಳೆ ಬರುವ ಸಂಭವವಿದೆ. ಗರಿಷ್ಟ ಉಷ್ಣಾಂಶ 36 ಡಿಗ್ರಿ

■ 6ನೇ ಪುಟಕ್ಕೆ

ಪಾಕಿಸ್ತಾನದಲ್ಲಿ ರೈಲು ಹೈಜಾಕ್
ಉಗ್ರರಿಂದ 150ಕ್ಕೂ ಹೆಚ್ಚು ಸೈನಿಕರ ಹತ್ಯೆ

ಕರಾಚಿ: ಬಲೂಚಿಸ್ತಾನ್ ಪ್ರಾಂತ್ಯದ ಉಗ್ರಗಾಮಿಗಳು ಮಂಗಳವಾರ ಪೇಶಾವರ್‌ಗೆ ತೆರಳುತ್ತಿದ್ದ ರೈಲಿನ ಮೇಲೆ ದಾಳಿ ನಡೆಸಿ, ಅದನ್ನು ಹೈಜಾಕ್ ಮಾಡಿ, ಅದರಲ್ಲಿದ್ದ ಮಹಿಳೆಯರು ಮತ್ತು ಮಕ್ಕಳು ಸೇರಿದಂತೆ ಒಟ್ಟು ಸುಮಾರು 450 ಪ್ರಯಾಣಿಕರನ್ನು ಒತ್ತೆಯಾಳಾಗಿರಿಸಿಕೊಂಡಿದ್ದರು. ಇನ್ನು ರೈಲನ್ನು ಹೈಜಾಕ್ ಮಾಡಿದ ಬಲೂಚ್ ಲಿಬರೇಶನ್ ಸೇನೆಯ ವಶದಲ್ಲಿ ಇನ್ನು ನೂರಾರು ಮಂದಿ ಇದ್ದಾರೆ. ಏತನ್ಮಧ್ಯೆ, 150ಕ್ಕೂ ಅಧಿಕ ಪಾಕ್ ಸೈನಿಕರನ್ನು ಕೊಲ್ಲಲಾಗಿದೆ. ಎಂದು ಮೂಲಗಳು ಹೇಳಿವೆ. ಮತ್ತೊಂದೆಡೆ, ಬಲೂಚಿಸ್ತಾನ್ ಕಾರ್ಯಕರ್ತೆ ಮಾಮಾ ಖಾದೀರ್ ಬಲೂಚ್, ಪ್ರತ್ಯೇಕತಾವಾದಿ ಬಲೂಚ್ ಲಿಬರೇಶನ್ ಆರ್ಮಿಯ (ಬಿಎಲ್‌ಎ) ಕಾರ್ಯಾಚರಣೆಯ ಸಮಯದಲ್ಲಿ, ಜಾಫರ್ ಎಕ್ಸ್‌ಪ್ರೆಸ್‌ನಲ್ಲಿ ಪ್ರಯಾಣಿಸುತ್ತಿದ್ದ ಸುಮಾರು 150ಕ್ಕೂ ಅಧಿಕ ಮಿಲಿಟರಿ ಸಿಬ್ಬಂದಿ ಯನ್ನು ಉಗ್ರರು ಕೊಂದಿದ್ದಾರೆ ಎಂದು ಹೇಳಿದ್ದಾರೆ. ಸ್ವಾತಂತ್ರ್ಯಕ್ಕಾಗಿ ಬಿಎಲ್‌ಎ ಹಲವಾರು ಬಾರಿ ಇದೇ ರೀತಿಯ ಪ್ರಯತ್ನಗಳನ್ನು ಮಾಡಿದೆ. ಅವರು ಹಿಂದೆಯೂ ಅನೇಕ ಜನರನ್ನು ಸೆರೆಹಿಡಿದಿದ್ದಾರೆ ಎಂದು ಅವರು ಹೇಳಿದ್ದಾರೆ. ಈದ್‌ಗೆ ರಜೆಯಲ್ಲಿದ್ದ ಅನೇಕ ಸೇನಾ ಸಿಬ್ಬಂದಿ ಈ ರೈಲಿನಲ್ಲಿ ಪ್ರಯಾಣಿಸುತ್ತಿದ್ದಾರೆ ಎಂಬುದನ್ನು ತಿಳಿದು, ಅವರನ್ನು ಇತರರಿಂದ ಬೇರ್ಪಡಿಸಿ ನಂತರ ಕೊಲ್ಲಲಾಯಿತು. ಹೀಗೆ ಸುಮಾರು 150ಕ್ಕೂ ಅಧಿಕ ಸೈನಿಕರು ಕೊಲ್ಲಲ್ಪಟ್ಟರು. ಇದು ಅತಿದೊಡ್ಡ ಕಾರ್ಯಾಚರಣೆಯಾಗಿದೆ ಎಂದು ಹೇಳಿದ್ದಾರೆ.



■ 6ನೇ ಪುಟಕ್ಕೆ

ರಂಗನತಿಟ್ಟಲ್ಲಿ 'ಚಿಟ್ಟೆ ಪಾರ್ಕ್'



ಶ್ರೀರಂಗಪಟ್ಟಣ, ಮಾ.11–ಪ್ರಸಿದ್ಧ ಪ್ರವಾಸಿ ತಾಣ, ಮಂಡ್ಯ ಜಿಲ್ಲೆ ಶ್ರೀರಂಗಪಟ್ಟಣ ತಾಲೂಕಿನ ರಂಗನತಿಟ್ಟು ಪಕ್ಷಿಧಾಮದಲ್ಲಿ 30 ಲಕ್ಷ ರೂ. ವೆಚ್ಚದಲ್ಲಿ 'ಚಿಟ್ಟೆ ಪಾರ್ಕ್' ನಿರ್ಮಿಸಲು ಉದ್ದೇಶಿಸಲಾಗಿದೆ ಎಂದು ಅರಣ್ಯ ಸಚಿವ ಈಶ್ವರ ಬಿ.ಖಂಡ್ರೆ ತಿಳಿಸಿದ್ದಾರೆ.


ಖಂಡ್ರೆ

ವಿಧಾನಪರಿಷತ್‌ನಲ್ಲಿ ಮಧು ಜಿ.ಮಾದೇಗೌಡ ಕೇಳಿದ ಪ್ರಶ್ನೆಗೆ ಸಚಿವರು ಲಿಖಿತ ಉತ್ತರ ನೀಡಿದ್ದಾರೆ.

ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನದಲ್ಲಿ ನಿರ್ಮಿಸಿರುವ 'ಚಿಟ್ಟೆ ಪಾರ್ಕ್'ಗೆ ಫೆಬ್ರವರಿ ತಿಂಗಳಲ್ಲಿ ವಲಯ ಅರಣ್ಯಾಧಿಕಾರಿಗಳು, ವ್ಯಾಜೀವಿ ವಲಯ, ಮೈಸೂರು ಹಾಗೂ ಸಿಬ್ಬಂದಿ ಜೊತೆ ಕ್ಷೇತ್ರ ತಪಾಸಣೆ ಮಾಡಿ ಚಿಟ್ಟೆ ಪಾರ್ಕಿನ ಮಾದರಿಗಳನ್ನು ಹೇಗೆ ಅಳವಡಿಸಿಕೊಳ್ಳಬೇಕು ಎಂಬ ಬಗ್ಗೆ ಮಾಹಿತಿ ಪಡೆದು ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ವಿವರಿಸಿದರು. ಆ ಪಾರ್ಕ್‌ನಲ್ಲಿ ಚಿಟ್ಟೆಗಳ ಸಂತಾನೋತ್ಪತ್ತಿಗಾಗಿ 1,500 ಚದರ ಹಾಗೂ ಸಾರ್ವಜನಿಕ ವೀಕ್ಷಣೆಗಾಗಿ ಪ್ರದರ್ಶನಕ್ಕೆ 5,000 ಸಾವಿರ ಚದರ ಅಡಿ ಪ್ರದೇಶವನ್ನು ಮೀಸಲಿಡಲು ಉದ್ದೇಶಿಸಲಾಗಿದೆ. 2025–26ನೇ ಸಾಲಿನ ಕ್ರಿಯಾಯೋಜನೆಯಲ್ಲಿ ಅಳವಡಿಸಿಕೊಂಡು 'ಚಿಟ್ಟೆ ಪಾರ್ಕ್' ನಿರ್ಮಿಸಲಾಗುತ್ತಿದೆ ಎಂದು ತಿಳಿಸಿದ್ದಾರೆ.

ಮೈಸೂರು, ಧಾರವಾಡ ವಿವಿಗಳು ಸಂಕಷ್ಟದಲ್ಲಿವೆ, ನೆರವು ನೀಡಿ: ಕೇಂದ್ರವನ್ನು ಕೋರಿದ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು

ನವದೆಹಲಿ: ಕರ್ನಾಟಕದ ಪ್ರತಿಷ್ಠಿತ ವಿಶ್ವವಿದ್ಯಾಲಯಗಳಾದ ಮೈಸೂರು ಮತ್ತು ಧಾರವಾಡ ವಿವಿಗಳು ತೀವ್ರ ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದು, ಕೇಂದ್ರ ಸರ್ಕಾರ ಅವುಗಳ ನೆರವಿಗೆ ಧಾವಿಸಬೇಕು ಎಂದು ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ಮನವಿ ಮಾಡಿದರು.

ಈ ಬಗ್ಗೆ ರಾಜ್ಯಸಭೆಯಲ್ಲಿ ಸುದೀರ್ಘವಾಗಿ ಮಾತನಾಡಿದ ಅವರು; ಮೈಸೂರು ಮತ್ತು ಧಾರವಾಡ ವಿಶ್ವವಿದ್ಯಾಲಯಗಳು ಶಿಕ್ಷಣ ಕ್ಷೇತ್ರಕ್ಕೆ ಭಾರಿ ಕೊಡುಗೆ ನೀಡಿವೆ. ಆದರೆ, ಈಗ ತೀವ್ರವಾಗಿ ಆರ್ಥಿಕ ಬಿಕ್ಕಟ್ಟು ಎದುರಿಸುತ್ತಿವೆ. ಇದರಿಂದಾಗಿ ಬೋಧಕರು ಹಾಗೂ ಬೋಧಕೇತರ ಸಿಬ್ಬಂದಿಗೆ ವೇತನ ಪಾವತಿಸಲು ವಿವಿಗಳು ಹೆಣಗಾಡುತ್ತಿವೆ. ಉನ್ನತ ಶಿಕ್ಷಣಕ್ಕೆ ಬೆಂಬಲ ನೀಡುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಸಹಾಯಕ್ಕೆ ಬರಬೇಕು ಎಂದು ದೇವೇಗೌಡರು ಕೋರಿದರು.

ಶಿಕ್ಷಣವು ಅತ್ಯಂತ ಮಹತ್ವದ ವಿಷಯವಾಗಿದ್ದು, ಕೇಂದ್ರ ಮತ್ತು ರಾಜ್ಯಗಳೆರಡೂ ಶಿಕ್ಷಣ ಸಂಸ್ಥೆಗಳು ಆರ್ಥಿಕ ಕೊರತೆಯಿಂದ ಬಳಲದಂತೆ ನೋಡಿಕೊಳ್ಳಬೇಕು ಎಂದು ಅವರು ಸಲಹೆ ನೀಡಿದರು.

ಇಡೀ ಭಾರತದ ಆರನೇ ವಿಶ್ವವಿದ್ಯಾಲಯವಾಗಿ 1916ರಲ್ಲಿ ಸ್ಥಾಪನೆಯಾದ ಮೈಸೂರು ವಿಶ್ವವಿದ್ಯಾಲಯದ ಐತಿಹಾಸಿಕ ಮಹತ್ವವನ್ನು ಒತ್ತಿ ಹೇಳಿದ ದೇವೇಗೌಡರು, ಉನ್ನತ ಶಿಕ್ಷಣವನ್ನು ನೀಡುವಲ್ಲಿ ಈ ವಿವಿಯು ನಿರ್ಣಾಯಕ ಪಾತ್ರ ವಹಿಸಿದೆ ಎಂದರು.

ಅಷ್ಟೇ ಅಲ್ಲ, ಭಾರತೀಯ ವಿಜ್ಞಾನ ಕಾಂಗ್ರೆಸ್‌ನಂತಹ ಪ್ರಮುಖ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಮೈಸೂರು ವಿಶ್ವವಿದ್ಯಾಲಯವು ವಿವಿಧ ವಿಭಾಗಗಳಲ್ಲಿ ಸಂಶೋಧನೆ ಮತ್ತು ಬೋಧನೆಗೆ ಗಣನೀಯ ಕೊಡುಗೆ ನೀಡಿದೆ. ಅದರ ಪ್ರತಿಷ್ಠಿತ ಸ್ಥಾನಮಾನದ ಹೊರತಾಗಿಯೂ, ವಿಶ್ವವಿದ್ಯಾಲಯವು ಈಗ ಆರ್ಥಿಕ ಬಿಕ್ಕಟ್ಟನ್ನು ಎದುರಿಸುತ್ತಿದೆ. ಅಧ್ಯಾಪಕರನ್ನು ಉಳಿಸಿಕೊಳ್ಳಲು ಮತ್ತು ಸಂಬಳವನ್ನು ಪಾವತಿಸಲು ಹೆಣಗಾಡುತ್ತಿದೆ ಎಂದು ಕಳವಳ ವ್ಯಕ್ತಪಡಿಸಿದರು.


ಹೆಚ್.ಡಿ.ದೇವೇಗೌಡರು

ಅದೇ ರೀತಿ, ಉತ್ತರ ಕರ್ನಾಟಕ ಭಾಗದಲ್ಲಿ ಅಗಾಧ ಪ್ರಮಾಣದಲ್ಲಿ ಶೈಕ್ಷಣಿಕ ಸೇವೆ ಸಲ್ಲಿಸಿರುವ ಧಾರವಾಡ ವಿಶ್ವವಿದ್ಯಾಲಯವು ಸಹ ತೀವ್ರ ಆರ್ಥಿಕ ಸಂಕಷ್ಟದಲ್ಲಿದೆ. ಮಂಜೂರಾಗಿದ್ದರೂ ಬೋಧಕ ಹುದ್ದೆಗಳು ಖಾಲಿ ಉಳಿದಿವೆ ಮತ್ತು ಪ್ರಸ್ತುತ ಸೇವೆ ಸಲ್ಲಿಸುತ್ತಿರುವ ಬೋಧಕರಿಗೆ ಸಮಯಕ್ಕೆ ಸರಿಯಾಗಿ ಸಂಬಳ ಸಿಕ್ಕಿಲ್ಲ. ಈ ಆರ್ಥಿಕ ಬಿಕ್ಕಟ್ಟನ್ನು ಪರಿಹರಿಸಲು ರಾಜ್ಯ ಸರಕಾರಕ್ಕೆ ಸಾಕಷ್ಟು ಸಂಪನ್ಮೂಲಗಳಿಲ್ಲ. ಈ ವಿಷಯದಲ್ಲಿ ಕೇಂದ್ರವು ಮಧ್ಯಪ್ರವೇಶಿಸಬೇಕೆಂದು ಗೌಡರು ಒತ್ತಾಯಿಸಿದರು.

ಶಿಕ್ಷಕನಾಗಿ ನನ್ನ ಸ್ವಂತ ಅನುಭವದಿಂದ ವಿಶೇಷವಾಗಿ ಗ್ರಾಮೀಣ ಪ್ರದೇಶಗಳಲ್ಲಿ ಶಿಕ್ಷಣದ ಸ್ಥಿತಿಗತಿಗಳನ್ನು, ಶಿಕ್ಷಕರ ಸಮಸ್ಯೆಗಳನ್ನು ಅರಿತಿದ್ದೇನೆ. ಕರ್ನಾಟಕದ ಶಿಕ್ಷಣ ವ್ಯವಸ್ಥೆಯನ್ನು ಬಲಪಡಿಸಲು ನಾನು ಮುಖ್ಯಮಂತ್ರಿ ಆಗಿದ್ದಾಗ ಒಮ್ಮೆಲೇ 1.56 ಲಕ್ಷ ಮಹಿಳಾ ಶಿಕ್ಷಕರನ್ನು ನೇಮಿಸಿದೆ ಎಂದು ಅವರು ನೆನಪಿಸಿಕೊಂಡರು.

ಕರ್ನಾಟಕದಲ್ಲಿ ಉನ್ನತ ಶಿಕ್ಷಣದ ಭವ್ಯ ಭವಿಷ್ಯವು ಇಂಥ ವಿವಿಗಳ ಮೇಲೆ ಅವಲಂಬಿತವಾಗಿದೆ. ಶಿಕ್ಷಕರಿಗೆ ವೇತನ ಸಿಗುವಂತೆ ಮತ್ತು ವಿಶ್ವವಿದ್ಯಾಲಯಗಳು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸುವುದನ್ನು ಖಚಿತಪಡಿಸಿಕೊಳ್ಳಲು ಕೇಂದ್ರ ಸರಕಾರ ತಕ್ಷಣ ಆರ್ಥಿಕ ನೆರವು ನೀಡಲು ಮುಂದಾಗಬೇಕು ಎಂದು ಒತ್ತಿ ಹೇಳಿದರು. ಕೇಂದ್ರದ ಉನ್ನತ ಶಿಕ್ಷಣ ಸಚಿವರು, ಮೈಸೂರು ಮತ್ತು ಧಾರವಾಡ ವಿವಿಗಳ ಆರ್ಥಿಕ ಸಂಕಷ್ಟ ಪರಿಹಾರಕ್ಕೆ ತುರ್ತು ಕ್ರಮ ಕೈಗೊಳ್ಳಬೇಕು ಎಂದು ಅವರು ಕೋರಿದರು.

ನಕ್ಕರೆ ಅದೇ ಸ್ವರ್ಗ

ಕೆಲಸಗಾರ : ಊರಿಗೆ ಹೋಗಬೇಕು, ಒಂದು ವಾರ ರಜಾ ಕೊಡಿ.
ಮಾಲೀಕ : ನನ್ನ ಪ್ರಶ್ನೆಗೆ ಉತ್ತರ ಕೊಟ್ರೆ ರಜಾ ಕೊಡ್ತೀನಿ.
ಕೆಲಸಗಾರ : ಆಗಲಿ ಸಾರ್, ಪ್ರಶ್ನೆ ಕೇಳಿ.
ಮಾಲೀಕ : ಕಟ್ಟಪ್ಪ ಬಾಹುಬಲಿಯನ್ನು ಏಕೆ ಕೊಂದ?
ಕೆಲಸಗಾರ : ಕಟ್ಟಪ್ಪನಿಗೆ ಬಾಹುಬಲಿ ರಜೆ ಕೊಡಲಿಲ್ಲ ಅನ್ಸುತ್ತೆ.
ಮಾಲೀಕ : ಒಂದು ವಾರ ರಜಾ ಹೋಗು, ಮಜಾ ಮಾಡು.

ಮೈಸೂರು ಮಿತ್ರ

ಬುಧವಾರ, 12 ಮಾರ್ಚ್ 2025

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತ ವಾಹಿನಿ.........

ನೂರು ರೂಪಾಯಿ ಗಳಿಸುವ ಧಾವಂತದಲ್ಲಿ ಕೋಟಿ ರೂಪಾಯಿ ಬಾಂಧವ್ಯ ಕಳೆದುಕೊಳ್ಳಬೇಡಿ. – ನುಡಿಮುತ್ತು

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಹನುಮಂತಾನೆ ಬಾಲ ಕಡಿತಿರುವಾಗ, ಇವನ್ಯಾವನೋ ಶಾವಿಗೆ ಕೇಳಿದನಂತೆ.

ನಿಮ್ಮ ಪತ್ರಗಳು

ಅತ್ಯಾಚಾರ: ನಾಗರಿಕ ಸಮಾಜ ತಲೆತಗ್ಗಿಸುವಂಥ ದುಷ್ಕೃತ್ಯ

ಮಾನ್ಯರೆ,

ರಾಜ್ಯ ಹಾಗೂ ರಾಷ್ಟ್ರದ ನಾನಾ ಕಡೆ ಅತ್ಯಾಚಾರದಂತಹ ಅಮಾನವೀಯ ಕೃತ್ಯಗಳು ದಿನೇ ದಿನೆ ಹೆಚ್ಚಾಗುತ್ತಿರುವುದು ಕಳವಳಕಾರಿ ಸಂಗತಿಯಾಗಿದೆ. ಇತ್ತೀಚೆಗೆ ಹಂಪೆ ಬಳಿ ನಕ್ಷತ್ರ ವೀಕ್ಷಣೆ ಮಾಡುತ್ತಿದ್ದಾಗ 27 ವರ್ಷದ ಇಸ್ರೇಲಿ ಪ್ರವಾಸಿ ಸೇರಿದಂತೆ ಇಬ್ಬರು ಮಹಿಳೆಯರ ಮೇಲೆ ಸಾಮೂಹಿಕ ಅತ್ಯಾಚಾರ ಮತ್ತು ಹಲ್ಲೆ ನಡೆಸಲಾಗಿರುವುದು ನಾಗರಿಕ ಸಮಾಜ ತಲೆ ತಗ್ಗಿಸುವಂತೆ ಮಾಡಿದೆ. ಅದರಲ್ಲೂ ಯುನೆಸ್ಕೋ ವಿಶ್ವ ಪರಂಪರೆಯ ತಾಣವಾದ ಹಂಪಿಯಲ್ಲಿ ಪ್ರವಾಸಿಗರ ಸುರಕ್ಷತೆಯ ಬಗ್ಗೆ ಈ ಪ್ರಕರಣ ಮತ್ತಷ್ಟು ಆತಂಕವನ್ನು ಹೆಚ್ಚಿಸಿದೆ. ರಾಜ್ಯಕ್ಕೆ ಬರುವ ಪ್ರವಾಸಿಗರು ಸೇರಿದಂತೆ ಎಲ್ಲರಿಗೂ ರಕ್ಷಣೆ ನೀಡುವುದು ಹಾಗೂ ಇಂತಹ ಘಟನೆಗಳು ಮರುಕಳಿಸದಂತೆ ನೋಡಿಕೊಳ್ಳಲು ಅಗತ್ಯವಿರುವ ಎಲ್ಲಾ ಕ್ರಮಗಳನ್ನು ಸರ್ಕಾರ ತೆಗೆದುಕೊಳ್ಳಬೇಕಿದೆ.

ಮನುಷ್ಯರಾದ ನಮ್ಮಲ್ಲಿ ಬಹುಮಾನ್ಯವಾಗಿ ಸಾಮಾಜಿಕ ಮೌಲ್ಯಗಳು, ನೈತಿಕತೆ, ಸಹಾನುಭೂತಿ, ಸಹಾಯಹಸ್ತ ಸಾಮರ್ಥ್ಯ, ಪ್ರೀತಿಯಂತಹ ಅನೇಕ ಗುಣಗಳು ಸದಾ ಇರಬೇಕು. ಇವು ಒಳ್ಳೆಯ ಮಾನವನು ಸದ್ಗುಣ ಸಂಪನ್ನನಾಗಲು ಹೆಚ್ಚು ಸಹಕಾರಿಯಾಗುತ್ತವೆ. ಆದರೆ ಇವೆಲ್ಲವುಗಳನ್ನು ಬಿಟ್ಟು ನಮ್ಮ ಸಮಾಜದಲ್ಲಿ ಈ ರೀತಿ ಅತ್ಯಾಚಾರವೆಸಗಿದ ಪ್ರಕರಣಗಳನ್ನು ಗಮನಿಸಿದಾಗ, ಮನುಷ್ಯ ಯಾಕೆ ಹೀಗೆ ಮಾನವೀಯತೆಯನ್ನು ಮರೆತು ಮೃಗೀಯ ವರ್ತನೆಯಲ್ಲಿ ತೊಡಗುತ್ತಿದ್ದಾನೆ ಎಂಬುದು ತಿಳಿಯದಾಗಿದೆ. ಮಾನವ ತನ್ನ ಪ್ರೀತಿ, ಮಮತೆ, ವಾತ್ಸಲ್ಯ ಹಾಗೂ ಸ್ನೇಹ ಸಂಬಂಧಕ್ಕಿಂತ ಕ್ಷಣಿಕ ಲೈಂಗಿಕ ಸುಖಕ್ಕೆ ಹೆಚ್ಚು ಪ್ರಾಶಸ್ತ್ಯ ಕೊಟ್ಟು ಮೌಲ್ಯಗಳನ್ನು, ಸಂಬಂಧಗಳನ್ನು ಗಾಳಿಗೆ ತೂರಿ ಈ ರೀತಿಯ ಪಾಪಕೃತ್ಯಗಳಲ್ಲಿ ತೊಡಗಿಸಿಕೊಳ್ಳುವುದು ತರವಲ್ಲ. ಅಲ್ಲದೇ ಕ್ಷಣಿಕ ಸುಖಕ್ಕಾಗಿ ಮನುಷ್ಯ ಧರ್ಮವನ್ನು ಮರೆಯುವುದು ಶೋಭೆ ತರುವಂತಹದಲ್ಲ. ಇಂತಹ ವಿಷಯದಲ್ಲಿ ಮನುಷ್ಯ ಸ್ವಯಂ ನಿಗ್ರಹ ಹೊಂದುವುದು ಅವಶ್ಯಕ. ಇದರ ಜೊತೆಗೆ ಸರ್ಕಾರ ಹಾಗೂ ನ್ಯಾಯಾಂಗ ಕೂಡ ಅತ್ಯಾಚಾರದಂತಹ ಅಮಾನೀಯ ಕೃತ್ಯಗಳನ್ನು ಎಸಗಿದ ವ್ಯಕ್ತಿಗೆ ಕಠಿಣಾತೀ ಕಠಿಣ ಶಿಕ್ಷೆ ನೀಡುವುದರ ಮೂಲಕ ಈ ರೀತಿಯ ಪ್ರಕರಣಗಳು ಮತ್ತೊಮ್ಮೆ ಮರುಕಳಿಸದಂತೆ ಎಚ್ಚರವಹಿಸುವುದು ಅಗತ್ಯವಾಗಿದೆ.

–ಹರಳಹಳ್ಳಿ ಪುಟ್ಟರಾಜು, ಪಾಂಡವಪುರ

ದೂರ ಗ್ರಾಮದಲ್ಲಿ ಪ್ಲಾಸ್ಟಿಕ್ ತ್ಯಾಜ್ಯ ಸಂಗ್ರಹ

ಮಾನ್ಯರೆ,

ಮೈಸೂರು ನಗರದ ದೂರ ಗ್ರಾಮದಲ್ಲಿನ ರಸ್ತೆ ಬದಿಯಲ್ಲಿ ಪ್ಲಾಸ್ಟಿಕ್ ಚೀಲಗಳು ಮತ್ತು ತ್ಯಾಜ್ಯಗಳು ಹೆಚ್ಚುತ್ತಿದ್ದು, ಗ್ರಾಮದ ನಿವಾಸಿಗಳಲ್ಲಿ ಕಳವಳ ಉಂಟಾಗಿದೆ. ಈ ಶೇಖರಣೆಯು ನಮ್ಮ ಹಳ್ಳಿಯ ಸೌಂದರ್ಯದ ಮೇಲೆ ಪರಿಣಾಮ ಬೀರುವುದಲ್ಲದೆ, ಗ್ರಾಮಸ್ಥರಿಗೆ ಮತ್ತು ಪ್ರಾಣಿಗಳಿಗೆ ಪರಿಸರ ಮತ್ತು ಆರೋಗ್ಯದ ಮೇಲೆ ಅಪಾಯವನ್ನುಂಟುಮಾಡುತ್ತದೆ.

ಸ್ವಚ್ಛತಾ ಆಂದೋಲನವನ್ನು ಆಯೋಜಿಸುವ ಮೂಲಕ, ಗ್ರಾಮದ ಪ್ರಮುಖ ಸ್ಥಳಗಳಲ್ಲಿ ಕಸದ ತೊಟ್ಟಿಗಳನ್ನು ಇಡುವ ಮೂಲಕ, ಸರಿಯಾದ ವಿಲೇವಾರಿಗೆ ಉತ್ತೇಜನ ನೀಡುವ ಮೂಲಕ ಈ ಸಮಸ್ಯೆಯನ್ನು ಪರಿಹರಿಸಲು ಪಂಚಾಯತ್ ಕ್ರಮಗಳನ್ನು ತೆಗೆದುಕೊಳ್ಳಬೇಕು. ಪ್ಲಾಸ್ಟಿಕ್ ಬಳಕೆಯನ್ನು ಕಡಿಮೆ ಮಾಡುವ ಬಗ್ಗೆ ಜನರಿಗೆ ಜಾಗೃತಿ ಮೂಡಿಸಬೇಕು. ಏಕೆಂದರೆ ಇದು ಹಳ್ಳಿಗರು ಹೆಚ್ಚು ಸಮರ್ಥನೀಯ ಅಭ್ಯಾಸಗಳನ್ನು ಅಳವಡಿಸಿಕೊಳ್ಳಲು ಸಹಾಯ ಮಾಡಬಹುದು. ಹೀಗಾಗಿ ಪ್ರತಿಯೊಬ್ಬರಿಗೂ ಸ್ವಚ್ಛತೆ ಮತ್ತು ಆರೋಗ್ಯಕರ ವಾತಾವರಣವನ್ನು ಕಾಪಾಡಿಕೊಳ್ಳುವ ಮನೋಭಾವನೆ ಮೂಡಿಸಬೇಕು.

–ಕಾವ್ಯ.ಡಿ.ಎಂ., ಮಹಾರಾಣಿ ಮಹಿಳಾ ಕಲಾ ಕಾಲೇಜು, ಮೈಸೂರು

ನೀರಿನ ಸಮಸ್ಯೆ ಬಗೆಹರಿಸಿ

ಮಾನ್ಯರೆ,

ಮೈಸೂರಿನ ವಿದ್ಯಾರಣ್ಯಪುರಂನಲ್ಲಿ ಸುಮಾರು ಒಂದು ತಿಂಗಳಿನಿಂದ ನೀರಿನ ಸಮಸ್ಯೆ ಉಂಟಾಗಿದೆ. ಇದರಿಂದ ಇಲ್ಲಿನ ನಿವಾಸಿಗಳು ನೀರಿಗಾಗಿ ಪರದಾಡುವಂತಾಗಿದೆ. ಈ ವಾರ್ಡಿನಲ್ಲಿ ವಾಸವಾಗಿರುವ ಮಹಿಳೆಯರು ದಿನನಿತ್ಯದ ಕೆಲಸಕ್ಕಾಗಿ, ವ್ಯಾಪಾರಕ್ಕಾಗಿ ಹೋಗುವವರಿದ್ದಾರೆ. ಇದರಿಂದ ಬೆಳಗ್ಗೆ ಎದ್ದು ಅಡುಗೆ, ತಿಂಡಿ, ಸ್ನಾನ ಇತ್ಯಾದಿ ಕೆಲಸಗಳಿಗೆ ನೀರಿಲ್ಲದೆ ಪರದಾಡುವ ಪರಿಸ್ಥಿತಿ ಬಂದಿದೆ. ಒಂದು ದಿನ ನೀರು ಬಂದರೆ 2 ಗಂಟೆ ಬಿಡುತ್ತಾರೆ. ನೀರು ತುಂಬಾ ಸಣ್ಣದಾಗಿ ಬರುವುದರಿಂದ ಒಂದು ಬಿಂದಿಗೆ ನೀರು ತುಂಬಲು ಕಾಲು ಗಂಟೆ ಬೇಕು. ಇದರಿಂದಾಗಿ 4, 5 ಮನೆಗಳು ನೀರು ಹಿಡಿದುಕೊಳ್ಳುವವರಿಗೆ ನೀರು ನಿಂತು ಹೋಗುತ್ತದೆ. ಆದ್ದರಿಂದ ಇದಕ್ಕೆ ಸಂಬಂಧಪಟ್ಟ ಅಧಿಕಾರಿಗಳು ಇತ್ತ ಗಮನಹರಿಸಿ ಇಲ್ಲಿನ ನಿವಾಸಿಗಳ ನೀರಿನ ಸಮಸ್ಯೆಯನ್ನು ನಿವಾರಿಸಬೇಕೆಂದು ಈ ಮೂಲಕ ಮನವಿ.

– ನೊಂದ ಬಡಾವಣೆ ನಿವಾಸಿಗಳು, ವಿದ್ಯಾರಣ್ಯಪುರಂ, ಮೈಸೂರು.

ಅಶೋಕಪುರಂ ರೈಲು ನಿಲ್ದಾಣಕ್ಕೆ ನಗರ ಸಾರಿಗೆ ಬಸ್ ಸೌಲಭ್ಯ ಕಲ್ಪಿಸಿ

ಮಾನ್ಯರೆ,

ಮೈಸೂರಿನ ಅಶೋಕಪುರಂ ರೈಲು ನಿಲ್ದಾಣವು ನವೀಕರಣಗೊಂಡು ಕಳೆದ ವಾರದಿಂದ ಸಾರ್ವಜನಿಕ ಸೇವೆಗೆ ಲಭ್ಯವಾಗಿದೆ. ಪ್ರಸ್ತುತ ಈ ನಿಲ್ದಾಣದಿಂದ 8 ರೈಲುಗಳು ಕಾರ್ಯಾಚರಣೆಗೊಳ್ಳುತ್ತಿದ್ದು, ಇದರಿಂದ ಶ್ರೀರಾಂಪುರ, ಜೆ.ಪಿ.ನಗರ, ವಿಶ್ವೇಶ್ವರನಗರ, ಕುವೆಂಪುನಗರ, ಚಾಮುಂಡಿಪುರಂ ಮತ್ತಿತರ ಬಡಾವಣೆಗಳ ಸಾರ್ವಜನಿಕರಿಗೆ ಅನುಕೂಲವಾಗಿದೆ.

ಆದಕಾರಣ ಸಂಬಂಧಪಟ್ಟ ಸಾರಿಗೆ ಅಧಿಕಾರಿಗಳು ಇತ್ತ ಗಮನಹರಿಸಿ ರೈಲುಗಳ ವೇಳಾಪಟ್ಟಿಗೆ ಅನುಗುಣವಾಗಿ ನಗರ ಸಾರಿಗೆ ಬಸ್‌ಗಳನ್ನು ಅಶೋಕಪುರಂ ರೈಲು ನಿಲ್ದಾಣಕ್ಕೆ ಕಾರ್ಯಾಚರಣೆಗೊಳಿಸಬೇಕೆಂದು ಮತ್ತು ಬಸ್ಸುಗಳ ಕಾರ್ಯಾಚರಣೆ ಪ್ರಾರಂಭಿಸಿರುವ ಬಗ್ಗೆ ಮಾಧ್ಯಮ ಮೂಲಕ ಪ್ರಕಟಣೆ ನೀಡಬೇಕೆಂದು ಕಳಕಳಿಯಿಂದ ಕೋರುತ್ತೇನೆ.

–ಪರಶಿವಮೂರ್ತಿ, ಜೆ.ಪಿ.ನಗರ, ಮೈಸೂರು.



ಡಾ. ಹೆಚ್.ವಿ. ನಾಗರಾಜ ರಾವ್
ಮೈಸೂರು.

ಸಂಸ್ಕೃತಿ ಚಿಂತನಾ

ಅನುವಾದ ಕಲೆ ಸುಲಭವಲ್ಲ

ಅನುವಾದ ಮತ್ತು ಭಾಷಾಂತರ ಎಂಬ ಪದಗಳನ್ನು ನಾವು Translation ಎಂಬ ಆಂಗ್ಲಪದಕ್ಕೆ ಸಂವಾದಿಯಾಗಿ ಬಳಸಿದ್ದೇವೆ. ವಸ್ತುತಃ ಅನುವಾದ ಎಂದರೆ ಒಬ್ಬರು ಹೇಳಿದುದನ್ನು ಇನ್ನೊಬ್ಬರು ಹೇಳುವುದು. ಭಾಷಾಂತರ ಎಂಬ ಸಂಸ್ಕೃತ ಶಬ್ದದ ಮೂಲಾರ್ಥ ಇನ್ನೊಂದು ಭಾಷೆ ಎಂದು. ನಾವು ಈಗ ಒಂದು ಭಾಷೆಯಲ್ಲಿ ಒಬ್ಬರು ಹೇಳಿದುದನ್ನು ಅಥವಾ ಬರೆದುದನ್ನು ಇನ್ನೊಂದು ಭಾಷೆಯಲ್ಲಿ ಹೇಳುವುದನ್ನು ಅಥವಾ ಬರೆಯುವುದನ್ನು ಅನುವಾದ ಅಥವಾ ಭಾಷಾಂತರ ಎನ್ನುತ್ತೇವೆ. ಪ್ರಧಾನ ಮಂತ್ರಿಗಳು ಹಿಂದಿಯಲ್ಲಿ ಮಾಡಿದ ಭಾಷಣವನ್ನು ಮುಖ್ಯಮಂತ್ರಿಗಳು ಕನ್ನಡದಲ್ಲಿ ಅನುವಾದ ಮಾಡಿದರು ಅಥವಾ ಕನ್ನಡಕ್ಕೆ ಭಾಷಾಂತರಿಸಿದರು ಎಂಬ ಮಾತುಗಳನ್ನು ಗಮನಿಸಬಹುದು.

ಅನುವಾದದ ಆವಶ್ಯಕತೆ

ಪ್ರಪಂಚದಲ್ಲಿ ಸಾವಿರಾರು ಭಾಷೆಗಳಿವೆ. ಯಾವ ಮನುಷ್ಯನೂ ಎಲ್ಲ ಭಾಷೆಗಳನ್ನು ತಿಳಿದಿರುವುದು ಅಸಂಭವ. ಅನೇಕ ಭಾಷೆಗಳಲ್ಲಿ ಅತ್ಯುತ್ತಮ ಸಾಹಿತ್ಯ ಸೃಷ್ಟಿಯಾಗಿದೆ, ಆಗುತ್ತಲೂ ಇದೆ. ಆ ಸಾಹಿತ್ಯಗಳ ಸವಿಯನ್ನು ಆಸ್ವಾದಿಸಲು ಆ ಭಾಷೆಗಳನ್ನೆಲ್ಲ ಕಲಿಯುವುದು ಅಸಾಧ್ಯ. ಎರಡು ಭಾಷೆಗಳನ್ನು ಚೆನ್ನಾಗಿ ತಿಳಿದಿರುವವರು ಒಂದರಲ್ಲಿರುವ ಸಾಹಿತ್ಯವನ್ನು ಇನ್ನೊಂದಕ್ಕೆ ಅನುವಾದಿಸಿದರೆ ಸಾವಿರಾರು ಜನರು ತಮಗೆ ತಿಳಿಯದ ಭಾಷೆಯ ಸಾಹಿತ್ಯದ ಉತ್ತಮ ಕೃತಿಗಳ ರುಚಿಯನ್ನು ಸವಿಯಬಹುದು. ಬಂಗಾಳಿ ಭಾಷೆಯಲ್ಲಿ ಬಂಕಿಮ ಚಂದ್ರರು, ರವೀಂದ್ರನಾಥ ಠಾಕೂರ್, ಶರಚ್ಚಂದ್ರ ಚಟರ್ಜಿ ಮುಂತಾದ ಸಾಹಿತ್ಯ ದಿಗ್ಗಜರು ಬರೆದ ಕಾದಂಬರಿಗಳನ್ನು ನಾವು ಓದಿದುದು ಕನ್ನಡದಲ್ಲಿ. ಏಕೆಂದರೆ ಉಭಯ ಭಾಷೆಗಳನ್ನು ಬಲ್ಲ ಬಲ್ಲಿದರು ಅವುಗಳನ್ನು ಭಾಷಾಂತರಿಸಿಕೊಟ್ಟರು. ನಮ್ಮ ದೇಶದ ಕೋಟ್ಯಂತರ ಜನರಿಗೆ ಸಂಸ್ಕೃತ ಬರುವುದಿಲ್ಲ. ಆದರೆ ಸಂಸ್ಕೃತದಲ್ಲಿ ರಚಿತವಾದ ರಾಮಾಯಣ, ಮಹಾಭಾರತ, ಭಾಗವತ ಮುಂತಾದ ಕೃತಿಗಳನ್ನು ಬಹುಪಾಲು ಜನರು ಓದಿದ್ದಾರೆ. ಏಕೆಂದರೆ ಆ ಗ್ರಂಥಗಳ ಅನುವಾದಗಳು ಎಲ್ಲ ಭಾಷೆಗಳಲ್ಲಿ ಲಭ್ಯವಾಗಿವೆ. ಈಗ ವಿಜ್ಞಾನ ಯುಗ. ವಿಜ್ಞಾನದ ಆವಿಷ್ಕಾರಗಳ ಬಗೆಗೆ ಗ್ರಂಥಗಳು ಇಂಗ್ಲೀಷ್, ಫ್ರೆಂಚ್, ಜರ್ಮನ್ ಮುಂತಾದ ಭಾಷೆಗಳಲ್ಲಿ ಪ್ರಕಟಗೊಳ್ಳುತ್ತವೆ. ಅತ್ಯಂತ ಶೀಘ್ರವಾಗಿ ಅವುಗಳ ಭಾಷಾಂತರಗಳೂ ಪ್ರಕಟವಾಗುತ್ತವೆ. ಇಲ್ಲದಿದ್ದರೆ ಜ್ಞಾನಪ್ರಸಾರ ಬೇಗನೆ ಆಗುತ್ತಿರಲಿಲ್ಲ. ಹೀಗೆ ಸಾಹಿತ್ಯ ಮತ್ತು ವಿಜ್ಞಾನ ಎಂಬ ಎರಡು ಕ್ಷೇತ್ರಗಳಲ್ಲೂ ಅನುವಾದ ಕಾರ್ಯದ ಮಹತ್ತ್ವವೂ ಆವಶ್ಯಕತೆಯೂ ಸುಸ್ಪಷ್ಟವಾಗಿದೆ.

ಪ್ರಾಚೀನ ಕಾಲದಿಂದ ಭಾಷಾಂತರ ಕಾರ್ಯ ನಡೆಯುತ್ತಿದೆ

ಒಂದು ಭಾಷೆಯ ಕೃತಿಯನ್ನು ಇನ್ನೊಂದು ಭಾಷೆಗೆ ಪರಿವರ್ತಿಸುವ ಕಾರ್ಯ ಇಂದು ನಿನ್ನೆಯದಲ್ಲ. ಸಂಸ್ಕೃತದಲ್ಲಿ ರಚಿತವಾಗಿದ್ದ ಅನೇಕ ಮಹಾಯಾನ ಬೌದ್ಧ ಗ್ರಂಥಗಳನ್ನು ಸಾವಿರ ವರ್ಷಗಳ ಹಿಂದೆ ಟಿಬೇಟನ್ ಮತ್ತು ಚೈನೀ ಭಾಷೆಗಳಿಗೆ ಭಾಷಾಂತರಿಸಲಾಗಿತ್ತು. ಮೂಲ ಸಂಸ್ಕೃತ ಗ್ರಂಥಗಳು ಇಂದು ನಷ್ಟವಾಗಿದ್ದರೂ ಅವುಗಳ ಅನುವಾದಗಳು ಉಪಲಬ್ಧವಾಗಿರುವುದರಿಂದ ಆ ಜ್ಞಾನವು ಉಳಿದುಕೊಂಡಿದೆ. ಪೈಶಾಚೀ ಭಾಷೆಯಲ್ಲಿದ್ದ ಬೃಹತ್ಕಥೆಯನ್ನು ಕ್ರಿ.ಶ. 11–12ನೆಯ ಶತಮಾನದಲ್ಲೇ ಸಂಸ್ಕೃತಕ್ಕೆ ಭಾಷಾಂತರಿಸಲಾಗಿತ್ತು. ಸಂಸ್ಕೃತದ ನೈಷಧೀಯ ಚರಿತವನ್ನು ಶ್ರೀನಾಥನೆಂಬ ಆಂಧ್ರ ಕವಿಯು ತೆಲುಗು ಭಾಷೆಗೆ ಅನುವಾದಿಸಿದ್ದಾನೆ. ನಿಜಗುಣ ಶಿವಯೋಗಿಯ ವಿವೇಕ ಚಿಂತಾಮಣಿಯನ್ನು ಲಿಂಗರಾಜನೆಂಬ ಕವಿಯು ಸಂಸ್ಕೃತಕ್ಕೆ ಅನುವಾದಿಸಿದ್ದಾನೆ. ದಾರಾಶಿಕೋ ಉಪನಿಷತ್ತುಗಳನ್ನು ಪಾರ್ಷಿ ಭಾಷೆಗೆ ಅನುವಾದಿಸಿದ್ದನು. ಹೀಗೆ ಅನುವಾದ ಕಲೆ ನಿರಂತರವಾಗಿ ಬೆಳೆಯುತ್ತಿದೆ.

ಅನುವಾದದ ಸಮಸ್ಯೆಗಳು

ಮೂಲ ಕೃತಿಯು ಆ ಭಾಷೆಯನ್ನು ತಿಳಿದವರ ಮೇಲೆ ಬೀರುವಷ್ಟು ಪ್ರಭಾವವನ್ನೇ ಅನುವಾದವೂ ಅದರ ಭಾಷೆಯ ಓದುಗರ ಮೇಲೆ ಬೀರುವುದು ಎಂದಾದರೆ ಅನುವಾದವನ್ನು ಸಮರ್ಪಕ, ಸುಂದರ ಎಂದು ಕರೆಯಬಹುದು. ಇದು ಹಾಗೆ ಆಗುವ ಸಂದರ್ಭಗಳು ಕಡಿಮೆ ಎನ್ನುವುದು ಸತ್ಯ. ಏಕೆಂದರೆ ಮೂಲ ಕೃತಿಯನ್ನು ಅನುವಾದಕನು ಪೂರ್ಣವಾಗಿ ಅರಿತುಕೊಳ್ಳದಿರುವ ಪ್ರಸಂಗವೂ ಇರುತ್ತದೆ. ಮೂಲ ಲೇಖಕನೇ ತನ್ನ ಕೃತಿಯನ್ನು ಇನ್ನೊಂದು ಭಾಷೆಗೆ ಅನುವಾದ ಮಾಡುವ ಸಂದರ್ಭದಲ್ಲೂ ಆ ಇನ್ನೊಂದು ಭಾಷೆಯಲ್ಲಿ ಮೂಲದ ಶಬ್ದಗಳ ಸಮಾನಾರ್ಥಕ ಶಬ್ದಗಳೇ ಸಿಕ್ಕದೆ ಇರಬಹುದು. ಉದಾಹರಣೆಗೆ ಧರ್ಮ, ರಸ, ಶಾಸ್ತ್ರ ಮುಂತಾದ ಸಂಸ್ಕೃತ ಶಬ್ದಗಳನ್ನು ಇಂಗ್ಲೀಷಿಗೆ ಅನುವಾದಿಸುವುದು ಕಷ್ಟ, ಭಾರತೀಯ ಭಾಷೆಗಳಲ್ಲಿ ಆ ಶಬ್ದಗಳನ್ನೇ ಬಳಸಬಹುದು. ಪದ್ಯ ಕಾವ್ಯಗಳನ್ನು ಅನುವಾದಿಸುವಾಗ ಪದ್ಯ ರೂಪದಲ್ಲಿ ಅನುವಾದಿಸುವುದೋ, ಗದ್ಯದಲ್ಲಿ ಅನುವಾದಿಸುವುದೋ ಎಂಬ ಪ್ರಶ್ನೆ ಎದುರಾಗುತ್ತದೆ. ಪದ್ಯವನ್ನು ಪದ್ಯದಲ್ಲೇ ಅನುವಾದಿಸಿದರೂ ಮೂಲಪದ್ಯದ ಛಂದಸ್ಸನ್ನೇ ಉಪಯೋಗಿಸುವುದೋ, ಉದ್ದಿಷ್ಟ ಭಾಷೆಯಲ್ಲಿ ರೂಢಿಯಲ್ಲಿರುವ ಛಂದಸ್ಸನ್ನು ಉಪಯೋಗಿಸುವುದೋ ಎಂಬ ಸಂದೇಹವೂ ಉಂಟಾಗುತ್ತದೆ. ಶ್ಲೇಷವನ್ನುಳ್ಳ, ಎಂದರೆ ಅನೇಕಾರ್ಥದ ಶಬ್ದವು ಮೂಲದಲ್ಲಿದ್ದಾಗ ಅನುವಾದದಲ್ಲಿ ತೊಡಕು ಉಂಟಾಗುತ್ತದೆ. ಅಭಿಜಾತ ವಿದ್ವಾಂಸರೂ ಇಂತಹ ಸಂದರ್ಭದಲ್ಲಿ ಸೋಲುವುದುಂಟು. ಭಾರತೀಯ ಭಾಷೆಗಳಿಗೆ ಅನುವಾದಿಸುವಾಗ ಅವೇ ಶಬ್ದಗಳನ್ನು ಉಪಯೋಗಿಸಿ ದಾಟಿಕೊಳ್ಳಬಹುದೇನೋ.

ಕಾಳಿದಾಸನ ಅಭಿಜ್ಞಾನ ಶಾಕುಂತಲದ ನಾಲ್ಕನೆಯ ಅಂಕದಲ್ಲಿ ಮಹರ್ಷಿ ಕಣ್ವರು ಶಕುಂತಲೆಗೆ ಆಶೀರ್ವಾದವನ್ನು ನೀಡುವಾಗ ಋಗ್ವೇದದ ಛಂದಸ್ಸಿನಲ್ಲಿ ಹರಸುತ್ತಾರೆ–

ಅಮೀ ವೇದಿಂ ಪರಿತಃ ಕ್ಲಪ್ತಧಿಷ್ಣ್ಯಾಃ
ಸಮಿದ್ವಂತಃ ಪ್ರಾಂತಸಂಸ್ತೀರ್ಣದರ್ಭಾಃ।
ಅಪಘ್ನಂತೋ ದುರಿತಂ ಹವ್ಯಗಂಧೈ–
ರ್ವೈತಾನಾಸ್ತ್ವಾಂ ವಹ್ನಯಃ ಪಾವಯಂತು॥

ಇದನ್ನು ಅನುವಾದಿಸಲು ಸಾಧ್ಯವೇ ಅಭಿನವ ಕಾಳಿದಾಸರೆನಿಸಿದ ಬಸವಪ್ಪ ಶಾಸ್ತ್ರಿಗಳು–

ವೇದಿಯ ಸುತ್ತಲ್ ನೆಲೆಗೊಂ
ಡಾದಂ ಸಮಿಧೆಗಳನಾಂತು ಪೊಣ್ಮುವ ಹವ್ಯಾ
ಮೋದದಿನ್ ಅಘಪರಿಹಾರಕ
ಮಾದೀ ವೈತಾನವಹ್ನಿ ಸಲಹುಗೆ ನಿನ್ನಂ॥

ಎಂದು ಕಂದ ಪದ್ಯದಿಂದ ಅನುವಾದಿಸಿದ್ದಾರೆ. ಋಜ್ಞಾಂತ್ರದ ಗಾಂಭೀರ್ಯ ಇದಕ್ಕೆ ಬರುವುದು ಸಾಧ್ಯವೆ? ಇನ್ನು ಇಂಗ್ಲಿಷ್ ಅನುವಾದಗಳ ಕಥೆಯನ್ನಂತೂ ಹೇಳಬೇಕಾಗಿಲ್ಲ.

ಪದ್ಯಗಳ ಸೊಬಗು ಅನೇಕ ಸಲ ಪ್ರಾಸವನ್ನೆ ಅವಲಂಬಿಸಿರುತ್ತದೆ. ವೇದಾಂತ ದೇಶಿಕರು ಕೃಷ್ಣನನ್ನು ವರ್ಣಿಸುವ ಪರಿಯನ್ನು ನೋಡೋಣ –

ಲೋಲಾಪತನ್ನಿಖಿಲಲೀಲಾಹತಿಕ್ಷರಿತಹಾಲಾಹಲೇ ನಿಜಿಘಣೇ
ನೃತ್ಯಂತಮಪ್ರತಿಘಕೃತ್ಯಂ ತಮಪ್ರತಿಮಮತ್ಯಂತಚಾರುವ ಪುಷಮ್ ।
ದೇವಾದಿಭಿಃ ಸಮಯಸೇವಾದರತ್ವರಿತಹೇವಾಕ ಘೋಷ ಮುಖರೈಃ
ದೃಷ್ಟಾವಧಾನಮಥ ತುಷ್ಟಾವ ದೇವಮಹಿರಿಷ್ಟಾಪರೋಧಸಹಿತಃ॥

ಇದನ್ನು ಇಂಗ್ಲೀಷಿಗೋ ಫ್ರೆಂಚಿಗೋ ಅನುವಾದಿಸುವವರು ಇಲ್ಲಿರುವ ನೃತ್ಯತಾಳವನ್ನು ಅನುವಾದದಲ್ಲಿ ತರಲು ಶಕ್ಯವೇ?

ಆದುದರಿಂದ ಮೂಲ ಮೂಲವೇ, ಅನುವಾದ ಅನುವಾದವೇ.

ಭಾಷಾ ವೈಶಿಷ್ಟ್ಯಂ

ಒಂದೊಂದು ಭಾಷೆಗೂ ತನ್ನದೇ ಆದಿ ವೈಶಿಷ್ಟ್ಯವಿರುತ್ತದೆ. ತನ್ನವೇ ಆದ ನುಡಿಕಟ್ಟುಗಳಿರುತ್ತವೆ. ಪದಶಃ ಅವುಗಳ ಅನುವಾದ ಮಾಡಿದರೆ ಹಾಸ್ಯಾಸ್ಪದವಾಗುತ್ತದೆ. He kicked the bucket ಎಂಬ ಇಂಗ್ಲಿಷ್ ವಾಕ್ಯವನ್ನು ಕನ್ನಡದಲ್ಲಿ "ಅವನು ಬಕೀಟನ್ನು ಒದ್ದನು" ಎಂದು ಅನುವಾದಿಸಿದರೆ ಸರಿಯೆ? ಅದನ್ನು "ಅವನು ಸತ್ತು ಹೋದನು" ಎಂದು ಅನುವಾದಿಸಬೇಕು. ಆಪತ್ಕಾಲದಲ್ಲಿ ನನ್ನ ಆಪ್ತ ಸ್ನೇಹಿತನೇ ನನಗೆ ಕೈಕೊಟ್ಟ ಎಂಬ ವಾಕ್ಯವನ್ನು ಪದಶಃ 'In a critical juncture my close friend gave me a hand' ಎಂದು ಅನುವಾದ ಮಾಡಿದರೆ ವಿರುದ್ಧಾರ್ಥವೇ ಆಗುತ್ತದೆ. ಆದ್ದರಿಂದ ಪ್ರಸ್ತುತ ಭಾಷೆಯ ನುಡಿಕಟ್ಟಿನ ಅರ್ಥವನ್ನು ತಿಳಿದು ಉದ್ದಿಷ್ಟ ಭಾಷೆಯಲ್ಲಿ ಅನುವಾದವನ್ನು ಮಾಡುವುದು ಸೂಕ್ತ.

ಒಂದು ಗ್ರಂಥಕ್ಕೆ ಒಂದೇ ಅನುವಾದವೆಂದಿಲ್ಲ

ಯಾವ ಅನುವಾದವನ್ನೂ ಅಂತಿಮ, ಪರಿಪೂರ್ಣ ಎನ್ನಲಾಗದು. ಭಗವದ್ಗೀತೆಗೆ ಇಂಗ್ಲೀಷಿನಲ್ಲೇ ಅನೇಕ ಅನುವಾದಗಳಿವೆ. ಅಭಿಜ್ಞಾನ ಶಾಕುಂತಲಕ್ಕೆ ಕನ್ನಡದಲ್ಲಿ ಬಸವಪ್ಪ ಶಾಸ್ತ್ರಿ, ಎಸ್.ವಿ. ಪರಮೇಶ್ವರ ಭಟ್ಟ, ಸಿ.ಪಿ.ಕೆ. ಇತ್ಯಾದಿ ಹಲವರು ಅನುವಾದಗಳನ್ನು ಮಾಡಿದ್ದಾರೆ. ಓದುಗರಲ್ಲಿ ಕೆಲವರು ಒಂದು ಅನುವಾದವನ್ನು ಅತ್ಯುತ್ತಮ ಎಂದು ಹೊಗಳಿದರೂ ಅದು ಎಲ್ಲರಿಗೂ ಸಮ್ಮತವೆಂದು ಹೇಳಲಾಗದು. ಕಾಲಾಂತರದಲ್ಲಿ ಅದೇ ಭಾಷೆಯಲ್ಲಿ ಇನ್ನೊಂದು ಅನುವಾದದ ಆವಶ್ಯಕತೆ ತೋರಬಹುದು. ಮೂಲ ಒಂದೇ ಆದರೂ ಅನುವಾದಗಳು ಹಲವಿರಬಹುದು. ಒಬ್ಬ ಅನುವಾದಕನು ಮೂಲದಲ್ಲಿ ಕಾಣದ ಸೂಕ್ಷ್ಮಾರ್ಥಗಳನ್ನು ಇನ್ನೊಬ್ಬ ಅನುವಾದಕ ತೋರಿಸಬಹುದು.

ಅನುವಾದವು ಅನುವಾದದಂತೆ ತೋರಬಾರದು

ಮೂಲ ಕವಿಗೆ ಅಥವಾ ಮೂಲ ಲೇಖಕನಿಗಿರುವಷ್ಟು ಸ್ವಾತಂತ್ರ್ಯ ಅನುವಾದಕನಿಗೆ ಇರುವುದಿಲ್ಲ. ಮೂಲದಲ್ಲಿರುವುದನ್ನು ಬಿಟ್ಟಿದ್ದಾನೆ, ಮೂಲದಲ್ಲಿಲ್ಲದೆ ಇರುವುದನ್ನು ಸೇರಿಸಿದ್ದಾನೆ, ಮೂಲದ ಆಶಯವನ್ನೇ ಬದಲಾಯಿಸಿದ್ದಾನೆ ಎಂಬ ಆಕ್ಷೇಪಗಳು ಅನುವಾದಕನ ಮೇಲೆ ಬರುತ್ತವೆ. ಅನೇಕ ಮಿತಿಗಳ ಒಳಗೆ ಅವನು ಕೆಲಸವನ್ನು ಮಾಡಬೇಕಾಗುತ್ತದೆ. ಸ್ವಯಂ ರಚಿಸಿದ ಸ್ವತಂತ್ರ ಕೃತಿಯಂತೆ ಅನುವಾದ ಕಂಡುಬಂದರೆ ಅದು ಅನುವಾದಕನ ವಿಜಯ. ಹಾಗಾಗಬೇಕು ಎಂದಾದರೆ ಅನುವಾದಕನಿಗೆ ಕೃತಿಯ ಮೂಲ ಭಾಷೆಯ ಮೇಲೆ ಮತ್ತು ಉದ್ದಿಷ್ಟ ಅಥವಾ ಲಕ್ಷ್ಯ ಭಾಷೆಯ ಮೇಲೆ ಪ್ರಭುತ್ವವಿರಬೇಕು. ಒಂದೇ ಭಾಷೆಯ ಮೇಲೆ ಹಿಡಿತವನ್ನು ಹೊಂದಿದವರು ಅದರಲ್ಲಿ ಕಾವ್ಯವನ್ನೋ, ಕಾದಂಬರಿಯನ್ನೋ, ಪ್ರಬಂಧವನ್ನೋ ಬರೆಯಬಹುದು. ಆದರೆ ಅನುವಾದವನ್ನು ಮಾಡಲಾಗದು. ಆದ್ದರಿಂದ ಅನುವಾದ ಹೆಚ್ಚು ಜ್ಞಾನವನ್ನೂ, ಪರಿಶ್ರಮವನ್ನೂ ಅಪೇಕ್ಷಿಸುವುದರಿಂದ ಸುಲಭ ಅಲ್ಲ.

(ಅನುವಾದ ಕಲೆಯ ಬಗೆಗೆ ಹೆಚ್ಚು ಮಾಹಿತಿಯನ್ನು ಬಯಸುವವರು ಪ್ರೊ. ಪ್ರಧಾನ ಗುರುದತ್ತ ಅವರ 'ಭಾಷಾಂತರ ಕಲೆ' ಎಂಬ ಗ್ರಂಥವನ್ನು ಅವಲೋಕಿಸಬಹುದು).

ಪ್ರಾಣಿ–ಪಕ್ಷಿಗಳ ಪರಿಸರ ಉಳಿಸುವ ಸೇವಾ ಮನೋಭಾವ ಬೆಳೆಸಿಕೊಳ್ಳಿ

ಮೂಕಸ್ಪಂದನೆ ಜಾಗೃತಿ ಅಭಿಯಾನಕ್ಕೆ ಮಾಜಿ ಸಂಸದ ಪ್ರತಾಪ್ ಸಿಂಹ ಚಾಲನೆ

ಮೈಸೂರು, ಮಾ.11– ಮೈಸೂರಿನಲ್ಲಿ ಬೇಸಿಗೆಯ ತಾಪಮಾನದಿಂದ ಜೀವ ಸಂಕುಲ ತತ್ತರಿಸುತ್ತಿದ್ದು, ಪ್ರಾಣಿಪಕ್ಷಿಗಳನ್ನು ಸಂರಕ್ಷಿಸುವ ನಿಟ್ಟಿನಲ್ಲಿ ಕೆಎಂಪಿಕೆ ಚಾರಿಟೆಬಲ್ ಟ್ರಸ್ಟ್ ನಡೆಸುತ್ತಿರುವ ಅಭಿಯಾನಕ್ಕೆ ಚಾಮರಾಜ ಕ್ಷೇತ್ರದ ವಾರ್ಡ್ ನಂ.23ರ ದಿವಾನ್ಸ್ ರಸ್ತೆಯಲ್ಲಿ ಮರಗಿಡಗಳಲ್ಲಿ ಆಹಾರ, ನೀರಿನ ಬಟ್ಟಲು ಅಳವಡಿಸುವ ಮೂಲಕ ಮೂಕಸ್ಪಂದನೆ ಜಾಗೃತಿ ಅಭಿಯಾನಕ್ಕೆ ಮಾಜಿ ಸಂಸದ ಪ್ರತಾಪ್ ಸಿಂಹ ಚಾಲನೆ ನೀಡಿದರು.



ಚಾಮರಾಜ ಕ್ಷೇತ್ರದ ವಾರ್ಡ್ ನಂ.23ರ ದಿವಾನ್ಸ್ ರಸ್ತೆಯಲ್ಲಿ ಮರಗಿಡಗಳಲ್ಲಿ ಆಹಾರ, ನೀರಿನ ಬಟ್ಟಲು ಅಳವಡಿಸುವ ಮೂಲಕ ಮೂಕಸ್ಪಂದನೆ ಜಾಗೃತಿ ಅಭಿಯಾನಕ್ಕೆ ಮಾಜಿ ಸಂಸದ ಪ್ರತಾಪ್ ಸಿಂಹ ಚಾಲನೆ ನೀಡಿದರು.

ನಂತರ ಮಾತನಾಡಿದ ಅವರು, ಮನುಷ್ಯ ಪ್ರತಿಯೊಂದಕ್ಕೂ ಪರಿಸರದ ಮೇಲೆ ಅವಲಂಭಿತನಾಗುತ್ತಾನೆ. ಆದರೆ ಪ್ರಾಣಿಪಕ್ಷಿಗಳ ಪರಿಸರ ಉಳಿಸುವ ಮನೋಭಾವ ಬೆಳೆಸಿಕೊಳ್ಳಬೇಕು. ಭವಿಷ್ಯದ ಪರಿಸರ ಸಂರಕ್ಷಣೆಯ ಪರಿಕಲ್ಪನೆಯ ನಿಟ್ಟಿನಲ್ಲಿ ಮೈಸೂರು ಅರಸರು ಮೃಗಾಲಯ, ಕುಕ್ಕರಹಳ್ಳಿ ಕೆರೆ, ಕಾರಂಜಿ ಕೆರೆ, ಮಾದರಿ ಬಡಾವಣೆಗಳಲ್ಲಿ ಉದ್ಯಾನವನಗಳನ್ನು ನಿರ್ಮಿಸಿದ್ದಾರೆ. ಅದನ್ನು ಉಳಿಸಿಕೊಂಡು ಹೋಗುವುದು ಮೈಸೂರಿಗರ ಕರ್ತವ್ಯ ಎಂದರು.

ನಿಸರ್ಗದಲ್ಲಿ ಪಶು ಪಕ್ಷಿ ಜಲಚರಗಳೇ ಹಿರಿತನದಲ್ಲಿ ಇರುವುದು. ಮಾನವ ಇತ್ತೀಚಿನ ಸಂಕುಲ ತನ್ನ ಕ್ಷೇಮಕ್ಕಾಗಿ ಬಡಾವಣೆಗಳನ್ನು ನಿರ್ಮಿಸಿಕೊಂಡು ಕೆರೆ ಕಟ್ಟೆಗಳನ್ನು ಮುಚ್ಚಿ ವೃಕ್ಷಗಳನ್ನು ಕಡಿದು ಅಮಾಯಕ ಮೂಕ ಜೀವಿಗಳಿಗೆ ನೀರು ನೆರಳು ಇಲ್ಲದಂತೆ ಮಾಡಿರುವುದು ದುರಂತ. ಈ ನಿಟ್ಟಿನಲ್ಲಿ ಮಾನವೀಯತೆ ಹೊಂದಿರುವವರಿಗೆ ಮನುಷ್ಯ ಸಂಕುಲ ಈ ಬೇಸಿಗೆಯ ಧಗೆಯನ್ನು ನೀಗಿಸಲು ಅವುಗಳಿಗೆ ನೀರು ಆಹಾರವನ್ನು ನೀಡಿ ಸಕಲ ಜೀವರಾಶಿಗಳನ್ನು ಕಾಪಾಡಲು ಮುಂದಾಗಬೇಕೆಂದು ಕರೆ ನೀಡಿದರು.

ಕೆಎಂಪಿಕೆ ಚಾರಿಟೆಬಲ್ ಟ್ರಸ್ಟ್ ಅಧ್ಯಕ್ಷ ವಿಕ್ರಮ ಅಯ್ಯಂಗಾರ್, ಪಾಲಿಕೆ ಮಾಜಿ ಸದಸ್ಯ ಸುಬ್ಬಯ್ಯ, ಆರ್.ಪರಮೇಶ್‌ಗೌಡ, ಕಿರಣ್‌ಗೌಡ, ರಾಜೇಶ್, ಚೇತನ್, ನಂಜಪ್ಪ ಬೈರತಿ ಲಿಂಗರಾಜು, ವಿನೋದ್ ಅರಸ್, ನಾಗೇಶ್ ಯಾದವ್, ಶ್ರೀನಿವಾಸ್, ಶ್ರವಣ್, ಮಹಾನ್ ಶ್ರೇಯಸ್, ಅಮಿತ್, ನಾಣಿಗೌಡ, ಕೀರ್ತಿ, ಸುಚೇಂದ್ರ ಇದ್ದರು.

ಶ್ರೀ ಕಪ್ಪಡಿ ಕ್ಷೇತ್ರದ ಶ್ರೀರಾಚಪ್ಪಾಜಿ ಜಾತ್ರಾ ಮಹೋತ್ಸವ: ಪ್ರಾಣಿ, ಪಕ್ಷಿ ಬಲಿ ನಿಷೇಧ

ಮೈಸೂರು: ಸಾರ್ವಜನಿಕ ಹಿತದೃಷ್ಟಿಯಿಂದ ಕೆ.ಆರ್.ನಗರ ತಾಲೂಕು ಶ್ರೀ ಕಪ್ಪಡಿ ಕ್ಷೇತ್ರದ ಶ್ರೀ ರಾಚಪ್ಪಾಜಿ ಜಾತ್ರಾ ಮಹೋತ್ಸವದಲ್ಲಿ ಕರ್ನಾಟಕ ಪ್ರಾಣಿ ಬಲಿ ನಿಷೇಧ ಕಾಯ್ದೆ 1959 ಮತ್ತು ನಿಯಮ 1963ರನ್ವಯ ದೇವಸ್ಥಾನಗಳಲ್ಲಿ ದೇವರ ಹೆಸರಿನಲ್ಲಿ ಪ್ರಾಣಿಗಳ ಬಲಿ ನೀಡುವುದು ಕಾನೂನಿಗೆ ವಿರೋಧವಾಗಿರುವುದರಿಂದ ಹಾಗೂ ಕಾನೂನು ಸುವ್ಯವಸ್ಥೆ ಕಾಪಾಡುವ ಸಲುವಾಗಿ ಮಾರ್ಚ್ 25ರವರೆಗೆ ದೇವಸ್ಥಾನದ ಸುತ್ತಮುತ್ತ ಹಾಗೂ ಸಂಬಂಧಿಸಿದ ವ್ಯಾಪ್ತಿಯಲ್ಲಿ ಭಕ್ತಾದಿಗಳು, ಸಾರ್ವಜನಿಕರು ಯಾವುದೇ ಪ್ರಾಣಿ, ಪಕ್ಷಿ ಬಲಿ ನೀಡುವುದನ್ನು ನಿಷೇಧಿಸಿ ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತರೆಡ್ಡಿ ಆದೇಶಿಸಿದ್ದಾರೆ.

ಮೈಸೂರು ಜಿಲ್ಲೆಯ 8546 ಗ್ರಾಹಕರು ಗೃಹಜ್ಯೋತಿಯಿಂದ ವಂಚಿತರು

ಮೈಸೂರು, ಮಾ.11(ಎಸ್‌ಪಿಎನ್) –ರಾಜ್ಯಾದ್ಯಂತ ಗೃಹಜ್ಯೋತಿ ಯೋಜನೆ ಜಾರಿಯಾಗಿ ಒಂದೂವರೆ ವರ್ಷ ಕಳೆದರೂ ಬೇರೆ ಬೇರೆ ಕಾರಣಗಳಿಗಾಗಿ 8,546 ಗ್ರಾಹಕರು ಗೃಹಜ್ಯೋತಿ ಯೋಜನೆಯಿಂದ ವಂಚಿತರಾಗಿದ್ದಾರೆ.

ಮೈಸೂರು ಜಿಲ್ಲೆಯ ಮೈಸೂರು ನಗರ ಮತ್ತು ತಾಲೂಕಿನಲ್ಲಿ 4,004 ಮಂದಿ, ನಂಜನಗೂಡು 645, ತಿ.ನರಸೀಪುರ 105, ಹುಣಸೂರು 775, ಹೆಚ್.ಡಿ. ಕೋಟೆ 544, ಸರಗೂರು 387, ಕೆ.ಆರ್. ನಗರ 70, ಪಿರಿಯಾಪಟ್ಟಣ 1,592, ಸಾಲಿಗ್ರಾಮ 424 ಮಂದಿ ಗೃಹಜ್ಯೋತಿ ಯೋಜನೆಗೆ ನೋಂದಣಿಯಾಗಲು ಕ್ಯೂನಲ್ಲಿ ಇದೆ.

ಗೃಹಜ್ಯೋತಿ ಯೋಜನೆಯಲ್ಲಿ ಮೈಸೂರು ನಗರ ಮತ್ತು ತಾಲೂಕಿನಲ್ಲಿ 4,68,106 ಗ್ರಾಹಕರಿದ್ದು, ಮಾಸಿಕ ಸರಾಸರಿ 2363.58 ಲಕ್ಷ ರೂ.ನಂತೆ, 2025ರ ಫೆ.28ಕ್ಕೆ 44,908.03 ಲಕ್ಷ ರೂ ಸಹಾಯಧನ ಪಡೆದಿದ್ದಾರೆ.

> "ಮೈಸೂರು ಜಿಲ್ಲೆಯಲ್ಲಿ ಗೃಹಜ್ಯೋತಿ ಯೋಜನೆಯು ಶೇ.99.10ರಷ್ಟು ಅನುಷ್ಠಾನಗೊಂಡಿದ್ದು, ಇದರಿಂದ 9,35,864 ಗ್ರಾಹಕರು ಒಟ್ಟು 70,788.25 ಲಕ್ಷ ರೂ. ಸಹಾಯಧನ ಪಡೆದಿದ್ದಾರೆ. ತಾಂತ್ರಿಕ ಕಾರಣಗಳಿಗೆ ಗೃಹ ಯೋಜನೆಯಿಂದ ನೋಂದಣಿಯಾಗದಿರುವ 8,456 ಮಂದಿ ಗ್ರಾಹಕರು ಗೃಹಜ್ಯೋತಿಯಿಂದ ವಂಚಿತರಾಗಿದ್ದಾರೆ. ಅಲ್ಲದೆ, ಸೋಲಾರ್ ಯೋಜನೆಯಲ್ಲಿ ವಿದ್ಯುತ್ ಉತ್ಪಾದಿಸಲು 2200ಕ್ಕೂ ಹೆಚ್ಚು ಮಂದಿ ನೋಂದಣಿಯಾಗಿದ್ದು, ಈ ಗ್ರಾಹಕರನ್ನೂ ಗೃಹಜ್ಯೋತಿ ಯೋಜನೆ ವ್ಯಾಪ್ತಿಗೆ ತಂದಿಲ್ಲ. ಈ ವ್ಯಾಪ್ತಿಗೆ ತರಲು ರಾಜ್ಯ ಸರ್ಕಾರ ಪ್ರತ್ಯೇಕ ಆದೇಶ ಹೊರಡಿಸಿದರೆ ಮಾತ್ರ ಸಾಧ್ಯ.
> –ಸುನಿಲ್‌ಕುಮಾರ್, ಅಧೀಕ್ಷಕ ಅಭಿಯಂತರ, ಸೆಸ್ಕ್

ನಂಜನಗೂಡಿನಲ್ಲಿ 1,06,006 ಗ್ರಾಹಕರಿದ್ದು, ಮಾಸಿಕ 312.78 ಲಕ್ಷ ರೂ.ನಂತೆ ಒಟ್ಟು 5,942.74 ಲಕ್ಷ ರೂ., ತಿ.ನರಸೀಪುರದಲ್ಲಿ 76,582 ಗ್ರಾಹಕರಿದ್ದು, ಮಾಸಿಕ 251.19 ಲಕ್ಷ ರೂ. ನಂತೆ ಒಟ್ಟು 4,772.59 ಲಕ್ಷ ರೂ. ಸಹಾಯಧನ ಪಡೆದಿದ್ದಾರೆ.



ಹುಣಸೂರಿನಲ್ಲಿ 82,425 ಗ್ರಾಹಕರಿದ್ದು, ಮಾಸಿಕ 237.92 ಲಕ್ಷ ರೂ.ನಂತೆ ಒಟ್ಟು 4,520.46 ಲಕ್ಷ ರೂ., ಹೆಚ್.ಡಿ. ಕೋಟೆಯಲ್ಲಿ 36,553 ಗ್ರಾಹಕರಿದ್ದು, ಮಾಸಿಕ 94.77 ಲಕ್ಷ ರೂ.ನಂತೆ ಒಟ್ಟು 1,800.71 ಲಕ್ಷ ರೂ., ಸರಗೂರಿನಲ್ಲಿ 31,627 ಗ್ರಾಹಕರಿದ್ದು, ಮಾಸಿಕ 73.53 ಲಕ್ಷ ರೂ.ನಂತೆ ಒಟ್ಟು 1,397 ಲಕ್ಷ ರೂ., ಕೆ.ಆರ್. ನಗರದಲ್ಲಿ 42,037 ಗ್ರಾಹಕರಿದ್ದು, ಮಾಸಿಕ 127.85 ಲಕ್ಷ ರೂ.ನಂತೆ, ಒಟ್ಟು 2,429.14 ಲಕ್ಷ ರೂ. ಸಹಾಯಧನ ಪಡೆದಿದ್ದಾರೆ. ಪಿರಿಯಾಪಟ್ಟಣದಲ್ಲಿ 65,043 ಗ್ರಾಹಕರಿದ್ದು, ಮಾಸಿಕ 189.80 ಲಕ್ಷ ರೂ.ನಂತೆ, ಒಟ್ಟು 3,606.24 ಲಕ್ಷ ರೂ., ಸಾಲಿಗ್ರಾಮದಲ್ಲಿ 27,485 ಗ್ರಾಹಕರಿದ್ದು, ಮಾಸಿಕ 74.28 ಲಕ್ಷ ರೂ.ನಂತೆ ಒಟ್ಟು 1,411.34 ಲಕ್ಷ ರೂ. ಸಹಾಯಧನ ಪಡೆದಿದ್ದಾರೆ. ಇಲ್ಲಿಯವರೆಗೆ 9,35,864 ಗ್ರಾಹಕರು ಒಟ್ಟು 70788.25 ಲಕ್ಷ ರೂ. ಗೃಹಜ್ಯೋತಿ ಯೋಜನೆಯ ಸಹಾಯಧನ ಪಡೆದುಕೊಂಡಿದ್ದಾರೆ ಎನ್ನುತ್ತಾರೆ ಸೆಸ್ಕ್ ಅಧೀಕ್ಷಕ ಅಭಿಯಂತರ ಸುನಿಲ್‌ಕುಮಾರ್.

> "ಸೋಲಾರ್ ಮೂಲಕ ಬೇಸಿಗೆ ಕಾಲದಲ್ಲಿ ವಿದ್ಯುತ್ ಉತ್ಪಾದನೆ ಮಾಡಬಹುದು. ಆದರೆ, ಮಳೆಗಾಲ, ಚಳಿಗಾಲದಲ್ಲಿ ವಿದ್ಯುತ್ ಉತ್ಪಾದನೆಗೆ ಸೂರ್ಯನ ಬೆಳಕು ಹೆಚ್ಚು ಲಭ್ಯವಿಲ್ಲದ ಕಾರಣಕ್ಕೆ ವಿದ್ಯುತ್ ಉತ್ಪಾದನೆ ಸಾಧ್ಯವಾಗುವುದಿಲ್ಲ. ಇದನ್ನೇ ಮಾನದಂಡ ಮಾಡಿಕೊಂಡು ಸೋಲಾರ್ ಮೂಲಕ ವಿದ್ಯುತ್ ಉತ್ಪಾದನೆಗೆ ನೋಂದಣಿಯಾಗಿರುವ ಗ್ರಾಹಕರನ್ನು ಗೃಹಜ್ಯೋತಿ ವ್ಯಾಪ್ತಿಗೆ ತರಬೇಕು. –ಶೋಭಾನ ಸಾಂಬಶಿವ, ಸದಸ್ಯರು, ಎಂಜಿಪಿ

> "ಸಣ್ಣ ಪ್ರಮಾಣದಲ್ಲಿ ಸೋಲಾರ್ ಮೂಲಕ ವಿದ್ಯುತ್ ಉತ್ಪಾದಿಸುವ ಗ್ರಾಹಕರನ್ನೂ ಗೃಹಜ್ಯೋತಿ ವ್ಯಾಪ್ತಿಗೆ ತರಬೇಕು. ಈಗಾಗಲೇ ಗೃಹಜ್ಯೋತಿ ಯೋಜನೆಯಲ್ಲಿ ರಾಜ್ಯಾದ್ಯಂತ ಶೇ.99.19ರಷ್ಟು ಮಂದಿ ಫಲಾನುಭವಿಗಳಿದ್ದು, ಸೋಲಾರ್ ಮೂಲಕ ವಿದ್ಯುತ್ ಉತ್ಪಾದಿಸುವ ಸಣ್ಣ ಪ್ರಮಾಣದ ಗ್ರಾಹಕರನ್ನು ದೂರ ಇಡುವುದು ತರವಲ್ಲ. ಸರ್ಕಾರ ಇದರ ಬಗ್ಗೆ ಗಮನಹರಿಸಬೇಕು. –ದಯಾನಂದ ಸಾಗರ್, ಸದಸ್ಯರು, ಎಂಜಿಪಿ

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: mysoorumithra@gmail.com For advertisements: mysoorumithra@gmail.com

ತೇವಾಂಶ ಆವಿಯಾಗುತ್ತಾ ಹೋದಂತೆ ಬಿಸಿಲಿನ ತಾಪಮಾನ ಹೆಚ್ಚಳ

ಮೈಸೂರು, ಮಂಡ್ಯ, ಚಾಮರಾಜನಗರ, ಕೊಡಗು, ಹಾಸನದಲ್ಲಿ ಹೆಚ್ಚಾದ ಬಿಸಿಲಿನ ಬೇಗೆ

- ಮೈಸೂರಿನಲ್ಲಿ 34 ಡಿಗ್ರಿ ಸೆಲ್ಸಿಯಸ್ ದಾಖಲು
- ಈಗಾಗಲೇ ಒಮ್ಮೆಯಾದರೂ ಮಳೆಯಾಗಬೇಕಿತ್ತು
- ದೇಹ ತಂಪಾಗಲು ತರಹೇವಾರಿ ಹಣ್ಣು, ಐಸ್‌ಕ್ರೀ ಮೊರೆ
- ಪೂರ್ವ ಮುಂಗಾರು, ಮುಂಗಾರಲ್ಲಿ ಉತ್ತಮ ಮಳೆ ಸಾಧ್ಯತೆ

ಮೈಸೂರು, ಮಾ.11(ಬಿಎಲ್‌ಯು) –ಕಳೆದ ವರ್ಷದ ಡಿಸೆಂಬರ್‌ನಲ್ಲಿ ಉಂಟಾದ ಬಂಗಾಳಕೊಲ್ಲಿಯಲ್ಲಿನ ಚಂಡಮಾರುತ ನಂತರ ಈ ವರ್ಷದ 3 ತಿಂಗಳವರೆಗೆ ಯಾವುದೇ ಮಳೆಯಾಗದೇ ತೇವಾಂಶ ಆವಿಯಾಗುತ್ತಾ ಧಗೆ ಹೆಚ್ಚಾಗುತ್ತಿದೆ. ಮೈಸೂರು, ಮಂಡ್ಯ, ಚಾಮರಾಜನಗರ, ಹಾಸನ ಮತ್ತು ಕೊಡಗು ಜಿಲ್ಲೆಯಲ್ಲಿ ತಾಪಮಾನ ನಿರಂತರವಾಗಿ ಹೆಚ್ಚಳವಾಗುತ್ತಿದೆ.

ಮೈಸೂರಿನಲ್ಲಿ ಇಂದು ಗರಿಷ್ಟ 34 ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ದಾಖಲಾಗಿದ್ದು, ಇದು ಕಳೆದ ವರ್ಷಕ್ಕಿಂತ ಹೆಚ್ಚಿದೆ. ಬಿಸಿಲಿನ ಝಳದ ಪರಿಣಾಮ ಉಷ್ಣಗಾಳಿ ಬೀಸುತ್ತಿದೆ. ಜನರಂತೂ ಧಗೆ ತಣಿಸಬಹುದಾದ ನಾನಾ ರೀತಿಯ ಹಣ್ಣು ಐಸ್ ಕ್ರೀಂ ಮೊರೆ ಹೋಗುತ್ತಿದ್ದಾರೆ.

ಮಾರ್ಚ್‌ನಲ್ಲಿ ಒಮ್ಮೆಯಾದರೂ ಮಳೆ ಬೀಳಬೇಕಿದೆ. ಕಳೆದ 3 ತಿಂಗಳಲ್ಲಿ ಮಳೆಯಾಗದ ಕಾರಣ ವಾತಾವರಣದಲ್ಲಿದ್ದ ತೇವಾಂಶ ವೇಗವಾಗಿ ಆವಿಯಾಗಿ ತಾಪಮಾನ ಹೆಚ್ಚಾಗಿದ್ದು, ಬಿರು ಬಿಸಿಲಿನಿಂದ ಜನರು ತತ್ತರಿಸಿದ್ದಾರೆ. ಬೇಸಿಗೆಯ ಆರಂಭದಲ್ಲೇ ಉಷ್ಣತೆ ಹೆಚ್ಚಾಗಿದ್ದು, ಮುಂದೆ ಮತ್ತಷ್ಟು ಪ್ರಖರತೆ ಹೆಚ್ಚಾಗುವ ಸಾಧ್ಯತೆ ಇದ್ದು,



ಸುಡು ಬಿಸಿಲಲ್ಲಿ ಜನರಿಗೆ ನೆರಳು ನೀಡಲು ಮರಗಳು ಹಸಿರಿನಿಂದ ನಳನಳಿಸುತ್ತಿರುವುದು.

ತಾಪಮಾನವನ್ನು ಹೇಗೆ ತಡೆಯುವುದು ಎಂಬ ಆತಂಕ ಜನರನ್ನು ಕಾಡುತ್ತಿದೆ.

ಕಳೆದ ವರ್ಷವೂ ಅತೀ ಹೆಚ್ಚು ತಾಪಮಾನ ದಾಖಲಾಗಿತ್ತು ಆದರೆ, ಈ ವರ್ಷವೂ ಅಧಿಕ ಉಷ್ಣಾಂಶ ದಾಖಲಾಗಲಿದೆ ಎಂದು ಹವಾಮಾನ ಇಲಾಖೆ ಹೇಳುತ್ತಿದೆ.

ಹವಾಮಾನ ಇಲಾಖೆ ಮುನ್ಸೂಚನೆ ಪ್ರಕಾರ ಏಪ್ರಿಲ್ ಮತ್ತು ಮೇನಲ್ಲಿ ಪೂರ್ವ ಮುಂಗಾರಿನಲ್ಲಿ ವಾಡಿಕೆಗಿಂತ ಹೆಚ್ಚು ಮಳೆಯಾಗಲಿದೆ. ಹಾಗೆಯೇ ಜೂನ್, ಜುಲೈ, ಆಗಸ್ಟ್‌ನಲ್ಲೂ ಸಾಮಾನ್ಯಕ್ಕಿಂತ ಅಧಿಕ ಮುಂಗಾರು ಮಳೆ ಬೀಳಲಿದೆ. ಆದರೆ ಅಕ್ಟೋಬರ್, ನವೆಂಬರ್ ಹಾಗೂ ಡಿಸೆಂಬರ್‌ನಲ್ಲಿ ವಾಡಿಕೆಗಿಂತ ಕಡಿಮೆ ಮಳೆಯಾಗಬಹುದು ಎಂದು ಮುನ್ಸೂಚನೆ ನೀಡಿದೆ. ಮೈಸೂರು ಜಿಲ್ಲೆಯಲ್ಲಿ ಸಾಮಾನ್ಯವಾಗಿ ವರ್ಷಕ್ಕೆ 837 ಮಿಲಿ ಮೀಟರ್ ಮಳೆಯಾಗಲಿದ್ದು, ಈ ವರ್ಷ ಅಧಿಕ ಮಳೆ ನಿರೀಕ್ಷಿಸಲಾಗಿದೆ. ಕಳೆದ ವರ್ಷ ನಿರೀಕ್ಷೆಗಿಂತ 4 ದಿನಗಳ ಮುಂಚೆಯೇ ಅಂದರೆ ಜೂನ್ 4ರಂದು ದೇಶಕ್ಕೆ ಮಾನ್ಸೂನ್ ಪ್ರವೇಶ ನೀಡಿತ್ತು. ಆದರೆ ಈ ವರ್ಷ ಮೇ 31ಕ್ಕೆ ಕೇರಳಾಗೆ ಮುಂಗಾರು ಪ್ರವೇಶ ಮಾಡಲಿದೆ. ಉತ್ತಮ ಮಳೆಯ ಕಾರಣ ರೈತರ ಕೃಷಿ ಚಟುವಟಿಕೆಗೆ ಅನುಕೂಲವಾಗಲಿದೆ ಎಂಬ ನಿರೀಕ್ಷೆ ಇದೆ.

ನೆರಳು ನೀಡುವ ಮರಗಳ ಮಹತ್ವ ಈಗ ಅರಿವು

ಬೇಸಿಗೆಗೂ ಮುನ್ನ ಮರದ ಎಲೆಗಳು ಉದುರಿದ್ದು, ಈಗ ಹಸಿರು ಚಿಗುರೊಡೆದು ವಾತಾವಣವನ್ನು ತಂಪು ಮಾಡುತ್ತಿದೆ. ಮೈಸೂರಿನ ಎಲ್ಲಾ ರಸ್ತೆ ಬದಿಯ ಬಹಳಷ್ಟು ಮರಗಳನ್ನು ಗಮನಿಸಿದಾಗ ಬೇಸಿಗೆ ಆರಂಭಕ್ಕೆ ಮುನ್ನವೇ ಎಲೆಗಳು ಉದುರಿ ಮರಗಳು ಬೋಳಾಗಿದ್ದವು. ಆದರೆ ಬೇಸಿಗೆ ಆರಂಭದ ಸಂದರ್ಭದಲ್ಲಿ ಮರಗಳು ಮತ್ತೆ ಚಿಗುರೊಡೆದು ಹಸಿರು ನಳನಳಿಸುತ್ತಿದೆ. ಬೇಸಿಗೆಯ ಬಿರು ಬಿಸಿಲಿನಿಂದ ಜನ ಜಾನುವಾರುಗಳಿಗೆ ಮರಗಳು ಆಶ್ರಯದಾತವಾಗಿವೆ. ಬಿಸಿಲಿನಿಂದ ಕಂಗೆಟ್ಟವರು ನೆರಳಿಗೆ ಹಾತೊರೆಯುತ್ತಾರೆ. ಹಾಗಾಗಿ ಈಗ ಮರಗಳ ಮಹತ್ವ ಜನರಿಗೆ ಮನವರಿಕೆ ಆಗುತ್ತಿದೆ. ಇದರಿಂದ ಮರಗಳ ಅವಶ್ಯಕತೆ ಮನುಷ್ಯನಿಗೆ ಬೇಸಿಗೆಯಲ್ಲಿ ತಿಳಿಯುತ್ತಿದೆ.

> “ಡಿಸೆಂಬರ್‌ನಲ್ಲಿ ಉಂಟಾದ ಚಂಡಮಾರುತ ನಂತರದ ಮೂರು ತಿಂಗಳ ಅವಧಿಯಲ್ಲಿ ಒಮ್ಮೆಯಾದರೂ ಮಳೆಯಾಗಿದ್ದರೆ ಇಷ್ಟು ತಾಪಮಾನ ಇರುತ್ತಿರಲಿಲ್ಲ. ಆದರೆ ಒಮ್ಮೆಯೂ ಮಳೆಯಾಗದ ಕಾರಣ ಒಣ ಹವೆಯಿಂದ ಹೆಚ್ಚು ಉಷ್ಣಾಂಶ ದಾಖಲಾಗಿದೆ. ಬೇಸಿಗೆಯಲ್ಲಿ ಹೆಚ್ಚು ತಾಪಮಾನ ವಿದೆ ಎಂಬುದನ್ನು ಹೊರತುಪಡಿಸಿದರೆ ಈ ವರ್ಷ ಮುಂಗಾರು, ಪೂರ್ವ ಮುಂಗಾರು ಉತ್ತಮವಾಗಿದೆ. ಆ ವೇಳೆ ವಾತಾವರಣ ತಂಪಾಗಲಿದೆ.
>
> **–ಡಾ.ಜಿ.ಸುಮಂತ್‌ಕುಮಾರ್, ಸಹ ಸಂಶೋಧಕ, ಹವಾಮಾನ ಕ್ಷೇತ್ರ ವಿಭಾಗ, ನಾಗನಹಳ್ಳಿ**

ಬಿರುಬಿಸಿಲು: ಆರೋಗ್ಯ ರಕ್ಷಣೆಗೆ ವೈದ್ಯರ ಸಲಹೆ



ಮೈಸೂರು, ಮಾ. 11(ಆರ್‌ಕೆ)– ಈ ಬಾರಿ ಬೇಸಿಗೆ ಬಿಸಿಲಿನ ತಾಪಮಾನ ಅತಿರೇಕಕ್ಕೆ ಹೋಗುತ್ತಿರುವುದರಿಂದ ಜನರು ಆರೋಗ್ಯ ರಕ್ಷಣೆಗೆ ಹೆಚ್ಚಿನ ಆದ್ಯತೆ ನೀಡಬೇಕೆಂದು ಜಿಲ್ಲಾ ವೈದ್ಯಾಧಿಕಾರಿ ಡಾ.ಪಿ.ಸಿ.ಕುಮಾರಸ್ವಾಮಿ ಸಲಹೆ ನೀಡಿದ್ದಾರೆ.

ತಾಪಮಾನ 35 ಡಿಗ್ರಿ ಸೆಲ್ಸಿಯಸ್ ತಲುಪಿದ್ದು ಬಿಸಿಲಿನಿಂದ ಉಂಟಾಗಬಹುದಾದ ಆರೋಗ್ಯ ತೊಂದರೆ ತಪ್ಪಿಸಲು ಪ್ರತಿಯೊಬ್ಬರೂ ಕೆಲ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕೆಂದು ತಿಳಿಸಿದ್ದಾರೆ. ಬೇಸಿಗೆ ಕಾಲದಲ್ಲಿ ಬಿಸಿಲಿನ ಅತಿಯಾದ ಪ್ರಖರತೆಯಿಂದಾಗಿ ದೇಹದಲ್ಲಿ ನೀರಿನ ಅಂಶ ಬೇಗ ಕಡಿಮೆಯಾಗುವುದರಿಂದ ಡೀಹೈಡ್ರೇಷನ್ ಆಗುವುದನ್ನು ತಪ್ಪಿಸಲು ಯಥೇಚ್ಛವಾಗಿ ಕುದಿಸಿ ಆರಿಸಿದ ನೀರನ್ನು ಕುಡಿಯಬೇಕು. ಮನೆಯಲ್ಲೇ ತಯಾರಿಸಿದ ಓಆರ್‌ಎಸ್, ನಿಂಬೆಹಣ್ಣಿನ ರಸ, ಮಜ್ಜಿಗೆಯನ್ನು ಸೇವಿಸಬೇಕು ಎಂದು ತಿಳಿಸಿದರು.

ಫ್ರಿಡ್ಜ್‌ನಲ್ಲಿರಿಸಿದ ನೀರು, ಜ್ಯೂಸ್ ಅಥವಾ ಇತರ ಆಹಾರದಲ್ಲಿ ಹೆಚ್ಚಾಗಿ ಬ್ಯಾಕ್ಟೀರಿಯಾ ಜೀವಂತವಾಗಿರುವ ಕಾರಣ ಅವುಗಳನ್ನು ಸೇವಿಸಿದರೆ ಬಲು ಬೇಗ ನೆಗಡಿ, ಕೆಮ್ಮು, ಜ್ವರ ಬರುವ ಸಾಧ್ಯತೆ ಇರುತ್ತದೆ. ಆದ್ದರಿಂದ ತಣ್ಣನೆಯ ಪಾನೀಯ ಇನ್ನಿತರ ದ್ರವರೂಪದ ವಸ್ತು ಸೇವಿಸಬಾರದು ಎಂದು ಡಾ.ಕುಮಾರಸ್ವಾಮಿ ಸಲಹೆ ನೀಡಿದ್ದಾರೆ.

ಚೆನ್ನಾಗಿ ಬೇಯಿಸಿದ, ಮೃದು ಆಹಾರ ಪದಾರ್ಥ, ಹಣ್ಣುಗಳನ್ನು ತಿನ್ನುವುದು ಒಳಿತು. ರಸ್ತೆ ಬದಿ ಮಾರುವ ಹಣ್ಣು–ಹಂಪಲುಗಳ ಮೇಲೆ ಧೂಳು ಕೂರುವುರಿಂದ ಬೇಗ ರೋಗ ಹರಡುತ್ತವೆ. ಸಾಧ್ಯವಾದಷ್ಟೂ ಕೊಡೆ ಬಳಸಿ ಬಿಸಿಲಿನಿಂದ ರಕ್ಷಿಸಿಕೊಳ್ಳಬೇಕು. ರಸ್ತೆ ಬದಿ ತಿಂಡಿಗಳನ್ನು ಸದ್ಯದ ಮಟ್ಟಿಗೆ ಸೇವಿಸದಿರುವುದು ಒಳಿತು. ಜಾತ್ರೆ, ಸಂತೆ, ಹಬ್ಬಗಳಲ್ಲಿ ಸಿಗುವ ಆಹಾರ ಪದಾರ್ಥ, ತಂಪು ಪಾನೀಯಗಳನ್ನು ಸೇವಿಸದಿರುವುದು ಉತ್ತಮ ಎಂದು ತಿಳಿಸಿದ್ದಾರೆ.

ಬೇಸಿಗೆ ಕಾಲದಲ್ಲಿ ಉಂಟಾಗುವ ಆರೋಗ್ಯ ಸಮಸ್ಯೆಗೆ ಚಿಕಿತ್ಸೆ ನೀಡಲು ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರ, ಸಾರ್ವಜನಿಕ ಆಸ್ಪತ್ರೆಗಳಲ್ಲಿ ಫ್ಲೂಯಿಡ್, ಓಆರ್‌ಎಸ್ ಹಾಗೂ ಔಷಧಿಗಳನ್ನು ದಾಸ್ತಾನಿರಿಸಿಕೊಂಡು ಚಿಕಿತ್ಸೆ ನೀಡಲಾಗುತ್ತಿದೆ. ಆರೋಗ್ಯದಲ್ಲಿ ವ್ಯತ್ಯಾಸವಾದಲ್ಲಿ ತಕ್ಷಣ ಹತ್ತಿರದ ವೈದ್ಯರನ್ನು ಸಂಪರ್ಕಿಸಬೇಕು ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾ.ಕುಮಾರಸ್ವಾಮಿ ತಿಳಿಸಿದ್ದಾರೆ.

ಹಾಸನ ಮಿತ್ರ

ಈ ಬಾರಿ ಬಿರು ಬಿಸಿಲಿನ ಬೇಗೆ
ಕುಡಿಯುವ ನೀರು, ವಿದ್ಯುತ್‌ಗೆ ತೊಂದರೆಯಾಗುವುದು ಬೇಡ
ಅಧಿಕಾರಿಗಳಿಗೆ ಸಂಸದ ಶ್ರೇಯಸ್ ಪಟೇಲ್ ಸಲಹೆ



ಹೊಳೆನರಸೀಪುರ ತಾಲೂಕು ಕಚೇರಿ ಸಭಾಂಗಣದಲ್ಲಿ ಸಂಸದ ಶ್ರೇಯಶ್ ಪಟೇಲ್ ಅಧಿಕಾರಿಗಳ ಸಭೆ ನಡೆಸಿದರು.

ಹೊಳೆನರಸೀಪುರ: ಈ ಬಾರಿಯ ಬೇಸಿಗೆ ಅವಧಿಗಿಂತ ಮುನ್ನವೇ ಹೆಚ್ಚಿನ ತಾಪಮಾನ ಹೊರಹಾಕುತ್ತಿದೆ. ಅಧಿಕಾರಿಗಳು ಕುಡಿಯುವ ನೀರು ಹಾಗೂ ವಿದ್ಯುತ್ ವಿತರಣೆಗೆ ತೊಂದರೆ ಆಗದಂತೆ ನೋಡಿಕೊಳ್ಳಿ ಎಂದು ಸಂಸದ ಶ್ರೇಯಶ್ ಎಂ.ಪಟೇಲ್ ಸೂಚಿಸಿದರು.

ತಾಲೂಕು ಕಚೇರಿ ಸಭಾಂಗಣದಲ್ಲಿ ಕರೆದಿದ್ದ ತಾಲೂಕು ಅಧಿಕಾರಿಗಳ ಸಭೆಯಲ್ಲಿ ಮಾತನಾಡಿ, ಬೇಸಿಗೆ ಹೆಚ್ಚಾಗಿರುವ ಕಾರಣ ರೈತರು ಬೆಳೆದ ಬೆಳೆ ಒಣಗದಂತೆ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿಗೆ ತೊಂದರೆ ಆಗದಂತೆ ನಿರಂತರ ವಿದ್ಯುತ್ ಸರಬರಾಜು ಇರುವಂತೆ ನೋಡಿಕೊಳ್ಳಿ ಎಂದು ಅಧಿಕಾರಿಗಳಿಗೆ ಆದೇಶಿಸಿದರು.

ವಿದ್ಯುತ್ ಪರಿವರ್ತಕ ಕೆಟ್ಟಿದ್ದರೆ ಅರ್ಜಿ ಬಂದ 3 ದಿನದಲ್ಲಿ ಸಮಸ್ಯೆ ಬಗೆಹರಿಸಿ. ಅನಧಿಕೃತ ಸಂಪರ್ಕ ಪಡೆದವರಿಗೆ ಅಗತ್ಯ ತಿಳಿವಳಿಕೆ ನೀಡಿ, ನಿಯಮದಂತೆ ಅಗತ್ಯ ಕ್ರಮಕೈಗೊಂಡು ಅವರ ಬೆಳೆಗೂ ತೊಂದರೆಯಾಗದಂತೆ ಸೂಕ್ತ ವ್ಯವಸ್ಥೆ ಮಾಡಿ, ಅನಧಿಕೃತ ಎಂದು ಸಂಪರ್ಕ ಕಡಿತಗೊಳಿಸಬೇಡಿ ಎಂದು ಸೆಸ್ಕ್ ಎಂಜಿನಿಯರ್‌ಗಳಿಗೆ ಸೂಚಿಸಿದರು.

ಕೃಷಿ ಇಲಾಖೆ ಸಹಾಯಕ ನಿರ್ದೇಶಕಿ ಸ್ವಪ್ನಾ ಅವರಿಂದ ಗೊಬ್ಬರ ದಾಸ್ತಾನು, ಬಿತ್ತನೆ ಬೀಜ ವಿತರಣೆ, ಔಷಧಿ, ಯಂತ್ರೋಪಕರಣಗಳ ವಿತರಣೆ ಬಗ್ಗೆ ಮಾಹಿತಿ ಪಡೆದರು. ಪುರಸಭೆ ವಾಣಿಜ್ಯ ಸಂಕೀರ್ಣದ ನೆಲಮಹಡಿಯಲ್ಲಿ ಸಾವಿರಾರು ಲೀಟರ್ ನೀರು ಸಂಗ್ರಹವಾಗಿದೆ. ವರ್ಷದ 365 ದಿನವೂ ನೀರು ಇರುತ್ತೆ ಎಂದು ಪತ್ರಿಕೆಗಳಲ್ಲಿ ವರದಿ ಆಗಿದೆ. ಏನು ಕ್ರಮ ತೆಗೆದುಕೊಂಡಿದ್ದೀರಿ ಎಂದು ಪ್ರಶ್ನಿಸಿದರು.

ಮುಖ್ಯಾಧಿಕಾರಿ ಶಿವಶಂಕರ್ ಉತ್ತರಿಸಿ, ಮೋಟಾರ್ ಬಳಸಿ ನೀರು ಹೊರಹಾಕಲಾಗುತ್ತಿದೆ. ಇದಕ್ಕೆ ಶಾಶ್ವತ ಪರಿಹಾರದ ಬಗ್ಗೆ ಯೋಜನೆ ರೂಪಿಸುತ್ತಿದ್ದೇವೆ ಎಂದರು. ಅಗ್ನಿಶಾಮಕ ಠಾಣೆಗೆ ವಾಹನದ ಕೊರತೆ ಎಂದು ಬಂದ ವರದಿ ಓದಿದ್ದೇನೆ. ಕೂಡಲೇ ಸಂಬಂಧಪಟ್ಟ ಹಿರಿಯ ಅಧಿಕಾರಿಗಳೊಂದಿಗೆ ಮಾತನಾಡಿ ಹೊಸ ವಾಹನಗಳನ್ನು ಕೊಡಿಸುತ್ತೇನೆ ಎಂದು ಶ್ರೇಯಸ್ ಪಟೇಲ್ ತಿಳಿಸಿದರಲ್ಲದೆ, ವಿವಿಧ ಇಲಾಖೆ ಅಧಿಕಾರಿಗಳಿಂದ ಮಾಹಿತಿ ಪಡೆದು ಸಲಹೆ ನೀಡಿದರು.

ಕೇಂದ್ರ ಬಜೆಟ್‌ನಲ್ಲಿ ಕರ್ನಾಟಕದ ಹೆಸರೇ ಇಲ್ಲ

ಹಾಸನ: ಈ ಬಾರಿಯ ಬಜೆಟ್‌ನಲ್ಲಿ ಎಲ್ಲಾ ಜಿಲ್ಲೆ ಹಾಗೂ ಸಮುದಾಯಗಳನ್ನು ಸಮನಾಗಿ ನೋಡಲಾಗಿದೆ. ಆದರೆ ಎಚ್.ಡಿ.ರೇವಣ್ಣ ಅವರು ಹಾಸನ ಜಿಲ್ಲೆಯನ್ನು ಕಡೆಗಣಿಸಿ ಕೇವಲ ಗಾಂಜಾ, ಎಣ್ಣೆ, ಜೂಜು ಗ್ಯಾರಂಟಿಯನ್ನು ನೀಡಿದ್ದಾರೆ ಎಂಬ ಆರೋಪ ಸರಿಯಲ್ಲ ಎಂದು ಸಂಸದ ಶ್ರೇಯಸ್ ಪಟೇಲ್ ಹೇಳಿದರು.

ರಾಜ್ಯ ಬಜೆಟ್‌ನಲ್ಲಿ ಹಾಸನ ಜಿಲ್ಲೆಯನ್ನು ಕಡೆಗಣಿಸಲಾಗಿದೆ ಎಂಬ ಶಾಸಕ ಎಚ್.ಡಿ.ರೇವಣ್ಣ ಅವರ ಆರೋಪಕ್ಕೆ ಮಂಗಳವಾರ ಪ್ರತಿಕ್ರಿಯೆ ನೀಡಿದ ಅವರು, ರಾಜ್ಯ ಬಜೆಟ್‌ನಲ್ಲಿ ಹಾಸನದ ಹೆಸರಿಲ್ಲ ಎನ್ನುವವರು, ಕೇಂದ್ರ ಬಜೆಟ್‌ನಲ್ಲಿ ಕರ್ನಾಟಕ ಸೇರಿದಂತೆ ಹಾಸನದ ಹೆಸರು ಎಲ್ಲಿತ್ತು ಎಂಬುದನ್ನು ತಿಳಿಸಬೇಕು. ಐಐಟಿ ಸ್ಥಾಪನೆ ಹಾಗೂ ಇತರೆ ಯೋಜನೆ ಇಂದಿಗೂ ನನೆಗುದಿಗೆ ಬಿದ್ದಿವೆ ಎಂಬುದನ್ನು ಮರೆಯಬಾರದು ಎಂದು ತಿರುಗೇಟು ನೀಡಿದರು.

ಜಿಲ್ಲಾ ಪೊಲೀಸರ ಬಗ್ಗೆ ರೇವಣ್ಣ ಟೀಕೆ ಸರಿಯಲ್ಲ

> “ಜಿಲ್ಲಾ ಪೊಲೀಸ್ ಇಲಾಖೆ ಕಾರ್ಯವೈಖರಿ ಬಗ್ಗೆ ಎಚ್.ಡಿ.ರೇವಣ್ಣ ಆರೋಪ ಸರಿಯಲ್ಲ. ಎಣ್ಣೆ, ಗಾಂಜಾ, ಜೂಜು ಚಟುವಟಿಕೆಗಳು ಅವರ ಕಾಲದಲ್ಲಿಯೂ ಇತ್ತು ಎಂಬುದನ್ನು ಮರೆಯಬಾರದು. ಪೊಲೀಸರು ಅವರ ಕಾರ್ಯ ವ್ಯಾಪ್ತಿಯಲ್ಲಿ ಕೆಲಸ ಮಾಡುತ್ತಿದ್ದು, ದೂರುಗಳು ಕೇಳಿ ಬಂದರೆ ಸೂಕ್ತ ಕ್ರಮ ಕೈಗೊಳ್ಳುವ ನಿಟ್ಟಿನಲ್ಲಿ ಸರ್ಕಾರ ಮುಂದಾಗಲಿದೆ. **–ಶ್ರೇಯಸ್ ಪಟೇಲ್**

ನಗರದ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆಗೆ 9 ಕೋಟಿ ಒದಗಿಸಲಾಗುತ್ತಿದ್ದು, ಹೃದಯ, ನರರೋಗ ಸೇರಿದಂತೆ ಇತರೆ ತಜ್ಞರ ನೇಮಕಾತಿ ಸಂಬಂಧ ಮುಂದಿನ ದಿನಗಳಲ್ಲಿ ಕ್ರಮ ಕೈಗೊಳ್ಳಲಾಗುತ್ತಿದೆ. ಕಳೆದ ಕ್ಯಾಬಿನೆಟ್ ಸಭೆಯಲ್ಲಿ ಈ ತೀರ್ಮಾನ ಕೈಗೊಳ್ಳಲಾಗಿದೆ ಎಂದರು.

ಪುಷ್ಪಗಿರಿಗೆ 800 ಮಂದಿ ಪಾದಯಾತ್ರೆ

ಹಳೇಬೀಡು: ಜಾವಗಲ್‌ನಿಂದ ಪುಷ್ಪಗಿರಿ ಕ್ಷೇತ್ರಕ್ಕೆ 800 ಭಕ್ತರು ಪಾದಯಾತ್ರೆ ನಡೆಸಿದರು. ಬಿಸಿಲಿನ ತಾಪದಲ್ಲಿಯೂ ಭಕ್ತರು ಶ್ರದ್ಧಾಭಕ್ತಿಯಿಂದ ಕಾಲ್ನಡಿಗೆಯಲ್ಲಿ ತೆರಳಿ ದೇವರ ದರ್ಶನ ಪಡೆದರು. ಕೆಲವರು ಭಜನೆ ಮಾಡುತ್ತಾ ಸಾಗಿದರು. ಪುಷ್ಪಗಿರಿ ಬೆಟ್ಟದ ಮಲ್ಲಿಕಾರ್ಜುನ ಸ್ವಾಮಿ ದೇವಾಲಯ, ಆದಿಯೋಗಿ ಶಿವನ ಪ್ರತಿಮೆ, 108 ಶಿವಲಿಂಗ ಹಾಗೂ ಗುರುಕುರಿ ಬಸವೇಶ್ವರ ಅಜ್ಜಯ್ಯ ಮಂದಿರವನ್ನು ವೀಕ್ಷಿಸಿದರು. ದೇವಾಲಯದಲ್ಲಿ ಪಾದಯಾತ್ರಿಗಳಿಗಾಗಿ ವಿಶೇಷ ಪೂಜೆ ನಡೆಯಿತು. ಧಾರ್ಮಿಕ ಸಭೆಯಲ್ಲಿ ಸೋಮಶೇಖರ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ಪಾದಯಾತ್ರೆಯಿಂದ ದೇಹ ಹಾಗೂ ಮನಸ್ಸು ಪರಿಶುದ್ಧವಾಗುತ್ತದೆ ಎಂದರು. ಬ್ರಹ್ಮಕುಮಾರಿಯರಾದ ಭಾಗ್ಯ, ಆಶಾ, ಲೀಲಾ, ಕಳಸಾಪುರ ಸುರೇಶ್, ಸತ್ಯನಾರಾಯಣ ಚಂದ್ರಣ್ಣ, ಉದಯ, ಪುಷ್ಪಗಿರಿ ಗ್ರಾಮೀಣಾಭಿವೃದ್ಧಿ ಸಂಸ್ಥೆ ಯೋಜನಾಧಿಕಾರಿ ವಿನುತ ಧನಂಜಯ್ ಭಾಗವಹಿಸಿದ್ದರು.

ಎಸ್‌ಎಸ್‌ಎಲ್‌ಸಿ ಪೂರ್ವ ಸಿದ್ಧತಾ ಪರೀಕ್ಷೆ
ವಿದ್ಯಾರ್ಥಿಗಳಲ್ಲಿ ಆತ್ಮಸ್ಥೈರ್ಯ ತುಂಬಿದ ಶಿಕ್ಷಣಾಧಿಕಾರಿಗಳು

ಮೈಸೂರು,ಮಾ.11(ಎಸ್‌ಪಿಎನ್)–ಇತ್ತೀಚೆಗೆ ನಡೆದ ಎಸ್‌ಎಸ್‌ಎಲ್‌ಸಿ ಪೂರ್ವ ಸಿದ್ಧತಾ ಪರೀಕ್ಷೆಯಲ್ಲಿ ಕಡಿಮೆ ಅಂಕ ಗಳಿಸಿದ ವಿದ್ಯಾರ್ಥಿಗಳು, ಮುಂಬರುವ ಅಂತಿಮ ಪರೀಕ್ಷೆಗೆ ಸಿದ್ಧತೆ ಕುರಿತಂತೆ ಶಾಲಾ ಶಿಕ್ಷಣ ಇಲಾಖೆಯ ಡಿಡಿಪಿಐ ಜವರೇಗೌಡ ನೇತೃತ್ವದ ಅಧಿಕಾರಿಗಳ ತಂಡ ಮನೆ ಮನೆಗೆ ಭೇಟಿ ನೀಡಿ, ವಿದ್ಯಾರ್ಥಿಗಳಿಗೆ ಧೈರ್ಯ ಹೇಳಿದ್ದಾರೆ. ಮೈಸೂರು ನಗರ ವ್ಯಾಪ್ತಿಯ ಕುವೆಂಪು ನಗರ, ರಾಮಕೃಷ್ಣನಗರ, ಸಿದ್ಧಾರ್ಥನಗರ ಹಾಗೂ ಮೈಸೂರು ತಾಲೂಕು ವ್ಯಾಪ್ತಿಯಲ್ಲಿ ಸಂಚರಿಸಿ, ವಿದ್ಯಾರ್ಥಿಗಳಲ್ಲಿ ಅಂತಿಮ ಪರೀಕ್ಷೆಗೆ ಸಿದ್ಧಗೊಳ್ಳುವಂತೆ ಧೈರ್ಯ ಹೇಳುತ್ತಿದ್ದು, ಆಯಾಯ ಕ್ಲಸ್ಟರ್ ವ್ಯಾಪ್ತಿಯ ಸಿಆರ್‌ಪಿ, ಬಿಆರ್‌ಪಿ ಹಾಗೂ ಪ್ರೌಢಶಾಲಾ ಶಿಕ್ಷಕರೂ ಈ ಅಭಿಯಾನ ದಲ್ಲಿ ಪಾಲ್ಗೊಂಡು ಪೂರ್ವ ಸಿದ್ಧತಾ ಪರೀಕ್ಷೆಯಲ್ಲಿ ಕಡಿಮೆ ಅಂಕ ಗಳಿಸಿದವರು, ಸಿಂಗಲ್ ಪೇರೆಂಟ್, ಅಜ್ಜಿ–ತಾತಾ ಸುಪರ್ದಿನಲ್ಲಿ ಪರೀಕ್ಷೆ ಎದುರಿಸುತ್ತಿರುವ ವಿದ್ಯಾರ್ಥಿಗಳನ್ನು ಭೇಟಿ ಮಾಡಿ, ಯಾವ ವಿಷಯದಲ್ಲಿ ಆ ವಿದ್ಯಾರ್ಥಿ ಹಿಂದುಳಿದ್ದಾನೆ ಎಂಬುದನ್ನು ಗುರುತಿಸಿ, ಪರೀಕ್ಷೆಗೆ ಅಣಿಗೊಳಿಸುವ ಕಾರ್ಯಕ್ಕೆ ಇಲಾಖೆ ಮುಂದಾಗಿದೆ.

ಅಲ್ಲದೆ, ಕೆ.ಆರ್.ನಗರ, ಹುಣಸೂರು, ಪಿರಿಯಾಪಟ್ಟಣ, ನಂಜನಗೂಡು, ತಿ.ನರಸೀಪುರ ಸೇರಿದಂತೆ ಜಿಲ್ಲೆಯಾದ್ಯಂತ ಸಂಚರಿಸಿ, ಓದಿನಲ್ಲಿ ಹಿಂದುಳಿದ ಮಕ್ಕಳಿಗೆ ವಿಶೇಷ ತರಬೇತಿ ನೀಡಿ, ಪರೀಕ್ಷೆಗೆ ಅಣಿಗೊಳಿಸಲಾಗುತ್ತಿದೆ ಎಂದು ಶಿಕ್ಷಣ ಇಲಾಖೆ ಅಧಿಕಾರಿ ಯೊಬ್ಬರು 'ಮೈಸೂರು ಮಿತ್ರ'ನಿಗೆ ಮಾಹಿತಿ ನೀಡಿದರು.

ಈ ಬಾರಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಫಲಿತಾಂಶ ಟಾಪ್ 5 ಸ್ಥಾನದಲ್ಲಿ ಮೈಸೂರು ಜಿಲ್ಲೆ ಇರಬೇಕು ಉದ್ದೇಶ ದಿಂದ ಇಲಾಖೆ ಈಗಿನಿಂದಲೇ ಶ್ರಮಿಸುತ್ತಿದೆ ಎಂದರು.

ಗಗನಯಾತ್ರಿ ಸುನೀತ ವಿಲಿಯಮ್ಸ್ ಸುರಕ್ಷತೆಗೆ ವಿದ್ಯಾರ್ಥಿಗಳ ಪ್ರಾರ್ಥನೆ



ಗಗನಯಾತ್ರಿ ಸುನೀತ ವಿಲಿಯಮ್ಸ್ ಅವರು ಸುರಕ್ಷಿತವಾಗಿ ಮರಳಲಿ ಎಂದು ವಿದ್ಯಾರ್ಥಿಗಳು ಪ್ರಾರ್ಥನೆ ಸಲ್ಲಿಸಿದರು

ಮೈಸೂರು, ಮಾ.11(ಎಸ್‌ಪಿಎನ್)– ಕಳೆದ ಒಂಭತ್ತು ತಿಂಗಳ ಹಿಂದೆ ಬಾಹ್ಯಾಕಾಶಕ್ಕೆ ತೆರಳಿದ ಗಗನಯಾತ್ರಿ ಸುನೀತ ವಿಲಿಯಮ್ಸ್ ಅವರು ಸುರಕ್ಷಿತವಾಗಿ ಮರಳಲಿ ಎಂದು ಶ್ರೀ ಛಾಯಾದೇವಿ ಕಾಲೇಜಿನ ವಿದ್ಯಾರ್ಥಿಗಳು ಮಂಗಳವಾರ ಪ್ರಾರ್ಥಿಸಿದರು.

ಬಾಹ್ಯಾಕಾಶಕ್ಕೆ ತೆರಳಿದ ಸುನೀತ ವಿಲಿಯಮ್ಸ್ ಅವರು, ತಾಂತ್ರಿಕ ದೋಷದಿಂದಾಗಿ ಭೂಮಿಗೆ ಹಿಂದಿರುಗಲಾರದೆ ಬಾಹ್ಯಾಕಾಶದಲ್ಲಿಯೇ ಉಳಿದುಕೊಂಡಿದ್ದಾರೆ. ಇದೀಗ ಮರಳಿ ಬರುವ ಮುನ್ಸೂಚನೆ ಇರುವ ಹಿನ್ನಲೆಯಲ್ಲಿ ಸುನಿತ ಅವರು, ಸುರಕ್ಷಿತವಾಗಿ ಹಿಂತಿರುಗಲಿ ಎಂದು ಮೈಸೂರಿನ ಸಂತ ಫಿಲೋಮಿನಾ ಚರ್ಚ್‌ನ ಆವರಣದಲ್ಲಿ ಫಾದರ್ ನವೀನ್‌ಕುಮಾರ್ ಸಮ್ಮುಖದಲ್ಲಿ ಶ್ರೀ ಛಾಯಾದೇವಿ ಕಾಲೇಜಿನ ವಿದ್ಯಾರ್ಥಿಗಳು ಏಸುವಿನಲ್ಲಿ ಭಕ್ತಿ–ಭಾವದಿಂದ ಪ್ರಾರ್ಥಿಸಿದರು.

ಈ ವೇಳೆ ಶ್ರೀ ಛಾಯಾದೇವಿ ಬಿ.ಇಡಿ ಕಾಲೇಜಿನ ಪ್ರಾಂಶುಪಾಲ ಡಾ.ಅಂತೋಣಿ ಪಾಲ್ ರಾಜ್, ಬೋಧಕ ವೃಂದ ಹಾಗೂ ಪ್ರಶಿಕ್ಷಣಾರ್ಥಿಗಳು ಉಪಸ್ಥಿತರಿದ್ದರು.

ಮಾ.14ರಂದು ಶನಿಮಹಾಶಾಂತಿ

ಮೈಸೂರು,ಮಾ.11–ಮೈಸೂರಿನ ದೇವರಾಜ ಮೊಹಲ್ಲಾದಲ್ಲಿರುವ ಶ್ರೀ ಅಮೃತೇಶ್ವರ ದೇವಸ್ಥಾನದಲ್ಲಿ ಮಾ.14ರಂದು ಶುಕ್ರವಾರ ಹುಣ್ಣಿಮೆ ಪ್ರಯುಕ್ತ ಮೇಷ, ಕರ್ಕಾಟಕ, ಸಿಂಹ, ವೃಶ್ಚಿಕ, ಧನಸ್ಸು, ಮಕರ, ಕುಂಭ, ಮೀನ ರಾಶಿಯವರಿಗೆ ಶನಿಮಹಾ ಶಾಂತಿ ಮತ್ತು ಬಾಧಾನಿವಾರಕ ಸುದರ್ಶನ ಹೋಮ, ಕುಜದೋಷ, ನಿವೃತ್ತಿ ಶಾಂತಿ, ರಾಹು ಕೇತು ಶಾಂತಿ ಮತ್ತು ಮಹಾ ಮೃತ್ಯುಂಜಯ ಹೋಮ ಮತ್ತು ಶ್ರೀ ಸತ್ಯನಾರಾಯಣ ಪೂಜೆ ಏರ್ಪಡಿಸಲಾಗಿದೆ.

ಅಂದು ಬೆಳಗ್ಗೆ 9.30ಕ್ಕೆ ಪ್ರಾರಂಭವಾಗಿ ಮಧ್ಯಾಹ್ನ 12.30ಕ್ಕೆ ಪೂರ್ಣಾಹುತಿ. ವಿಶೇಷ ಶನಿಯು ಮಾ.29 ರಂದು ಮೀನ ರಾಶಿಗೆ ಪ್ರವೇಶಿಸುವುದರಿಂದ ಹುಣ್ಣಿಮೆಯಂದು ವಿಶೇಷ ಶನಿಶಾಂತಿ ಮಾಡಲಾಗುವುದು ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ.

ಮಾ.15ರಂದು ಬಿವಿಬಿಯಲ್ಲಿ ಡಾ.ಶುಭಾರಾಣಿ ಬೋಳಾರ್ ತಂಡದಿಂದ ಭರತನಾಟ್ಯ ಕಾರ್ಯಕ್ರಮ



ಮೈಸೂರು, ಮಾ.11–ತಿಂಗಳ ಸಂಗೀತ ಕಾರ್ಯಕ್ರಮದ ಅಂಗವಾಗಿ ವಿಜಯನಗರ 1ನೇ ಹಂತದಲ್ಲಿರುವ ಭಾರತೀಯ ವಿದ್ಯಾ ಭವನ, ಮೈಸೂರು ಕೇಂದ್ರವು ಮಾ.15 ರಂದು ಸಂಜೆ 6 ಗಂಟೆಗೆ ಭಾರತೀಯ ವಿದ್ಯಾಭವನದ ಪ್ರೊ.ವೈ.ಟಿ.ತಾತಾಚಾರಿ ಸಭಾಂಗಣದಲ್ಲಿ ವಿದ್ವಾನ್ ಡಾ. ಶುಭಾರಾಣಿ ಬೋಳಾರ್ ಮತ್ತು ತಂಡದಿಂದ ಭರತನಾಟ್ಯ ಕಾರ್ಯಕ್ರಮ ಏರ್ಪಡಿಸಲಾಗಿದೆ. ಶ್ರೀಮತಿ ಕವಿತಾ ಮತ್ತು ಶ್ರೀಮತಿ ಅಕ್ಷಯ ಅವರಿಂದ ಹಾಡುಗಾರಿಕೆ ಮತ್ತು ಪಕ್ಕವಾದ್ಯದಲ್ಲಿ ವಿದ್ವಾನ್ ಎಂ.ಕಿಶೋರ್–ಮೃದಂಗ ಮತ್ತು ವಿದ್ವಾನ್ ಕೆ.ಎಸ್. ಗಣೇಶ್–ಕೊಳಲು ಸಹಕಾರ ನೀಡಲಿದ್ದಾರೆ.

ಡಾ.ಶುಭರಾಣಿ ಬೋಳಾರ್ ಪರಿಚಯ

ಡಾ. ಶುಭರಾಣಿ ಬೋಳಾರ್ ಅವರು ಕರ್ನಾಟಕದ ಪಾಂಡನಲ್ಲೂರು ಶೈಲಿಯ ಶಾಸ್ತ್ರೀಯ ಭರತನಾಟ್ಯಂ ಕಲಾವಿದರು. 6 ವರ್ಷ ವಯಸ್ಸಿನಿಂದಲೇ ನೃತ್ಯದಲ್ಲಿ ತೀವ್ರ ಆಸಕ್ತಿಯನ್ನು ಬೆಳೆಸಿಕೊಂಡಿದ್ದರು. ಗುರು ಎಸ್.ಎನ್.ಭಾಸ್ಕರ್ ಮತ್ತು ಕೆ. ಮುರಳೀಧರ್‌ರಾವ್ ಅವರಿಂದ ನೃತ್ಯ ತರಬೇತಿ ಪ್ರಾರಂಭಿಸಿದರು. ಅಂತರರಾಷ್ಟ್ರೀಯ ಖ್ಯಾತಿ ಪಡೆದಿರುವ ಗುರು ಅಡ್ಯಾರ್ ಕೆ.ಲಕ್ಷ್ಮಣ್ ಮತ್ತು ಗುರು ಶ್ರೀಮತಿ ನರ್ಮದಾ ಅವರಿಂದ ಉನ್ನತ ತರಬೇತಿ ಪಡೆದರು. ಅವರು 30 ವರ್ಷಗಳಿಂದ 800ಕ್ಕೂ ಹೆಚ್ಚು ಏಕವ್ಯಕ್ತಿ ಪ್ರದರ್ಶನಗಳನ್ನು ನೀಡಿದ್ದಾರೆ. ಭಾರತ ಮತ್ತು ವಿದೇಶಗಳಲ್ಲಿ ನಡೆದ ಪ್ರಮುಖ ನೃತ್ಯ ಉತ್ಸವಗಳಲ್ಲಿ ಭಾಗವಹಿಸಿದ್ದರು. ಅವರು ಸಸ್ಯಶಾಸ್ತ್ರದಲ್ಲಿ ಡಾಕ್ಟರೇಟ್ ಪದವಿ ಪಡೆದಿದ್ದಾರೆ. ಬೆಂಗಳೂರಿನ ಬೆಂಗಳೂರು ವಿಶ್ವವಿದ್ಯಾಲಯದ ಸಸ್ಯಶಾಸ್ತ್ರ ವಿಭಾಗದಲ್ಲಿ ವಿಜ್ಞಾನಿಯಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಡಾ.ಶುಭಾ ರಾಷ್ಟ್ರೀಯ 'ಎ' ದರ್ಜೆಯ ಕಲಾವಿದೆ ಮತ್ತು ಅವರ ಪ್ರದರ್ಶನಗಳು 1986 ರಿಂದ ದೂರದರ್ಶನ ಪ್ರಾದೇಶಿಕ ಮತ್ತು ರಾಷ್ಟ್ರೀಯ ಜಾಲದಲ್ಲಿ ಪ್ರಸಾರವಾಗುತ್ತಿವೆ. ನವದೆಹಲಿಯ ಐಸಿಸಿಆರ್‌ನಿಂದ ಎಂಪನೇಲ್ ಮಾಡಲಾದ ಕಲಾವಿದೆಯಾಗಿ ಮತ್ತು ನವದೆಹಲಿಯ ಸಂಗೀತ ನೃತ್ಯ ಅಕಾಡೆಮಿ ಮತ್ತು ಕರ್ನಾಟಕದಿಂದ ಭರತನಾಟ್ಯದಲ್ಲಿ ಉನ್ನತ ಅಧ್ಯಯನಕ್ಕಾಗಿ ವಿದ್ಯಾರ್ಥಿವೇತನ ಪಡೆದ ಅಪರೂಪದ ಗೌರವ ಪಡೆದಿದ್ದಾರೆ. ಕರ್ನಾಟಕ ಸರ್ಕಾರ ನಡೆಸಿದ ವಿದ್ವತ್ ನೃತ್ಯ ಪರೀಕ್ಷೆಯಲ್ಲಿ ಅವರು ಅತ್ಯುತ್ತಮ ಶ್ರೇಣಿಯಲ್ಲಿ ಅರ್ಹತೆ ಪಡೆದಿದ್ದಾರೆ.

ಗ್ರೇಟರ್ ಬೆಂಗಳೂರು ಹೆಸರಿಗಷ್ಟೇ; ಏಳು ಭಾಗ ಮಾಡಿ ಲೂಟಿ ಹುನ್ನಾರ
ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಆಕ್ರೋಶ



ಬೆಂಗಳೂರು, ಮಾ. 11(ಕೆಎಂಶಿ)– ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ) ಏಳು ಭಾಗವಾಗಿಸಿ ಲೂಟಿ ಮಾಡಲು ಕಾಂಗ್ರೆಸ್ ಸರ್ಕಾರ ಮುಂದಾಗಿದೆ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಆರೋಪಿಸಿದ್ದಾರೆ.

ಹೋಳು ಮಾಡುವುದು, ಒಡೆದಾಳುವ ನೀತಿಯಲ್ಲಿ ಕಾಂಗ್ರೆಸ್ಸಿಗೆ ಕಾಂಗ್ರೆಸ್ಸೇ ಸಾಟಿಯಾಗಿದೆ, ಕಳೆದ 75 ವರ್ಷಗಳಿಂದ ದೇಶದಲ್ಲಿ ಇದನ್ನೇ ಮಾಡಿಕೊಂಡು ಬಂದಿದೆ ಎಂದಿದ್ದಾರೆ.

ಈ ಕುರಿತು ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿರುವ ಅವರು, ಬಿಬಿಎಂಪಿಯನ್ನು ಛಿದ್ರ ಮಾಡುವ ಸರ್ಕಾರದ ನಡೆ ಖಂಡನೀಯ, ಒಡೆದು ಆಳುವುದೇ ಕಾಂಗ್ರೆಸ್ ನೀತಿ, ಅಂದು ಅಖಂಡ ಭಾರತ ಹೋಳು ಮಾಡಿತು, ಇಂದು ಬೆಂಗಳೂರು ಮಹಾನಗರ ಹೋಳು ಮಾಡುತ್ತಿದೆ ಎಂದಿದ್ದಾರೆ.

ಬೆಂಗಳೂರು ನಿರ್ಮಾತೃ ನಾಡಪ್ರಭು ಕೆಂಪೇಗೌಡರ ಪರಂಪರೆಯನ್ನು ಬೇರು ಸಹಿತ ಕಿತ್ತು ಹಾಕುವುದೇ ಕಾಂಗ್ರೆಸ್ ಸರ್ಕಾರದ ದುರುದ್ದೇಶವಾಗಿದೆ. ಗ್ರೇಟರ್ ಬೆಂಗಳೂರು ಎನ್ನುವುದು ಹೆಸರಿಗಷ್ಟೇ. ಇದರ ಹಿಂದಿನ ಮರ್ಮ 'ಲೂಟರ್', ಅಂದರೆ ಕೊಳ್ಳೆ ಹೊಡೆಯುವುದಷ್ಟೇ.

ಬಿಬಿಎಂಪಿ ವಿಭಜನೆ ಅಧಿಕಾರ ಅಭಿವೃದ್ಧಿ ವಿಕೇಂದ್ರೀಕರಣವಲ್ಲ, ಲೂಟಿಯ ವಿಕೇಂದ್ರೀಕರಣ, ಲೂಟಿಕೋರರಾದ ಮಹಮ್ಮದ್ ಘಜ್ನಿ, ಮೊಹಮದ್ ಘೋರಿ ಸಂಪದ್ಭರಿತ ಭಾರತವನ್ನು ಲೂಟಿ ಮಾಡಿದರು.

ಸಂಪದ್ಭರಿತ ಬೆಂಗಳೂರು ನಗರ ಲೂಟಿಗೆ ಈಗೊಬ್ಬ ಘಜ್ನಿ, ಘೋರಿ ವಕ್ಕರಿಸಿದ್ದಾನೆ. ಅವನು ನಗರದ ಲೂಟಿಗೆ 7 ದಾರಿ ಹುಡುಕುತ್ತಿದ್ದಾನೆ ಎಂದು ಯಾರ ಹೆಸರನ್ನೂ ಹೇಳದೆ ಕುಮಾರಸ್ವಾಮಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಜಿಎಸ್‌ಟಿ ಜಾರಿಯಿಂದ ಹೋಟೆಲ್ ಉದ್ಯಮಕ್ಕೆ ಅನುಕೂಲವಾಗಿದೆ
ಜಿಎಸ್‌ಟಿ ಕುರಿತ ಜಾಗೃತಿ ಕಾರ್ಯಕ್ರಮದಲ್ಲಿ ಚಾರ್ಟರ್ಡ್ ಅಕೌಂಟೆಂಟ್ ಬಿ.ವಿ.ಮಹೇಶ್ ಅಭಿಮತ



ಮೈಸೂರಿನ ಕೃಷ್ಣಮೂರ್ತಿಪುರಂನಲ್ಲಿರುವ ಹೋಟೆಲು ಮಾಲೀಕರ ಸಂಘದ ಕಚೇರಿಯಲ್ಲಿ ಮಂಗಳವಾರ ಆಯೋಜಿಸಿದ್ದ ಜಿಎಸ್‌ಟಿ ಕುರಿತ ಜಾಗೃತಿ ಕಾರ್ಯಕ್ರಮದಲ್ಲಿ ಸೀನಿಯರ್ ಚಾರ್ಟರ್ಡ್ ಅಕೌಂಟೆಂಟ್ (ಸಿಎ) ಬಿ.ವಿ.ಮಹೇಶ್ ಮಾತನಾಡಿದರು.

ಮೈಸೂರು, ಮಾ. 11(ಆರ್‌ಕೆ)– ಜಿಎಸ್‌ಟಿ (ಸರಕು ಮತ್ತು ಸೇವಾ ತೆರಿಗೆ) ಜಾರಿ ಮಾಡಿರುವುದರಿಂದ ಹೋಟೆಲ್ ಉದ್ಯಮಕ್ಕೆ ಅನುಕೂಲವಾಗಿದೆ ಎಂದು ಸೀನಿಯರ್ ಚಾರ್ಟರ್ಡ್ ಅಕೌಂಟೆಂಟ್ (ಸಿಎ) ಬಿ.ವಿ. ಮಹೇಶ್ ತಿಳಿಸಿದ್ದಾರೆ.

ಮೈಸೂರಿನ ಕೃಷ್ಣಮೂರ್ತಿಪುರಂನಲ್ಲಿರುವ ಹೋಟೆಲು ಮಾಲೀಕರ ಸಂಘದ ಕಚೇರಿಯಲ್ಲಿ ಮಂಗಳವಾರ ಆಯೋಜಿಸಿದ್ದ ಜಿಎಸ್‌ಟಿ ಕುರಿತ ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದ ಅವರು, ಹೋಟೆಲ್ ಉದ್ಯಮ ಸೇವಾ ವಲಯದ ವ್ಯಾಪ್ತಿಗೆ ಬಂದರೂ ಸರಕು ಮತ್ತು ಸೇವಾ ತೆರಿಗೆ ಎರಡನ್ನೂ ಹೇರಲಾಗುತ್ತಿತ್ತು ಅದರಿಂದಾಗಿ ಹೋಟೆಲು ಮಾಲೀಕರಿಗೆ ಹೊರೆಯಾಗುತ್ತಿತ್ತಾದರೂ, ಅದು ಗೊತ್ತಾಗುತ್ತಿರಲಿಲ್ಲ ಎಂದರು.

ಇದೀಗ ಜಿಎಸ್‌ಟಿ ಅನುಷ್ಠಾನವಾಗಿರುವುದರಿಂದ ಆ ಹೊರೆ ತಪ್ಪಿದಂತಾಗಿದ್ದು, ಕಾನೂನು, ನಿಯಮಗಳು ಗೊತ್ತಿದ್ದರೆ ಬಹುತೇಕ ಸಮಸ್ಯೆಗಳು ಬಗೆಹರಿಯುತ್ತವೆ. ತೆರಿಗೆ ಪಾವತಿಸದಿದ್ದರೆ ಮಾತ್ರ ಅಧಿಕಾರಿಗಳು ನಿರ್ದಿಷ್ಟ ನಿದರ್ಶನದೊಂದಿಗೆ ಐಎನ್‌ಎಸ್01 ಕಾಯ್ದೆಯಡಿ ಉದ್ಯಮಗಳ ಪರಿಶೀಲನೆ ನಡೆಸಬೇಕೇ ಹೊರತು, ಅನಗತ್ಯ ತೊಂದರೆ ಕೊಡುವಂತಿಲ್ಲ ಎಂದು ಅವರು ಹೋಟೆಲ್ ಮಾಲೀಕರಿಗೆ ತಿಳಿಸಿದರು.


ನೀವು ಸೂಕ್ತ ರೀತಿಯಲ್ಲಿ ದಾಖಲೆಗಳನ್ನು ನಿರ್ವಹಣೆ ಮಾಡದಿದ್ದರೆ ಅಥವಾ ಜಿಎಸ್‌ಟಿ ಬಿಲ್ ನೀಡದಿದ್ದರೆ ಮಾತ್ರ ಇಲಾಖಾ ಅಧಿಕಾರಿಗಳಿಗೆ ಪರಿಶೀಲನೆ ವೇಳೆ ಭಯಪಡಬೇಕಾಗುತ್ತದೆ ಎಂದ ಮಹೇಶ್, ಈಗ ಪ್ರತಿಯೊಂದೂ ಆನ್‌ಲೈನ್‌ನಲ್ಲಿ ಕ್ಯೂಆರ್ ಕೋಡ್ ಮೂಲಕವೇ ಪಾವತಿಯಾಗುತ್ತಿರುವುದರಿಂದ ಬ್ಯಾಂಕ್ ಖಾತೆಯಲ್ಲಿ ನಮೂದಾಗುವ ಕಾರಣ ಯಾವುದೇ ವ್ಯವಹಾರವನ್ನು ಮರೆಮಾಚಲು ಸಾಧ್ಯವಿಲ್ಲ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಹೋಟೆಲ್ ಮಾಲೀಕರು ಜಿಎಸ್‌ಟಿ ಮತ್ತು ಇತರ ತೆರಿಗೆ ಕುರಿತು ಸಂದೇಹ, ಗೊಂದಲ, ಸಮಸ್ಯೆಗಳ ಬಗ್ಗೆ ಕೇಳಿದ ಪ್ರಶ್ನೆಗಳಿಗೆ ಮಹೇಶ್ ಹಾಗೂ ಮತ್ತೋರ್ವ ಚಾರ್ಟರ್ಡ್ ಅಕೌಂಟೆಂಟ್ ಪಿ.ಆರ್. ತೇಜಸ್ವಿನಿ ಸೂಕ್ತ ಉತ್ತರ ನೀಡಿ ಪರಿಹಾರ ಒದಗಿಸಿದರು.

ಹೋಟೆಲು ಮಾಲೀಕರು ಸಂಘದ ಅಧ್ಯಕ್ಷ ಸಿ.ನಾರಾಯಣಗೌಡ, ಹೋಟೆಲು ಮಾಲೀಕರ ಧರ್ಮದತ್ತಿ ಅಧ್ಯಕ್ಷ ರವಿಶಾಸ್ತ್ರಿ, ಹೋಟೆಲು ಮಾಲೀಕರ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ನಾರಾಯಣ ವಿ.ಹೆಗಡೆ, ಸುಬ್ರಹ್ಮಣ್ಯ ಆರ್.ತಂತ್ರಿ, ಆನಂದ ಶೆಟ್ಟಿ ಸೇರಿದಂತೆ 100ಕ್ಕೂ ಹೆಚ್ಚು ಹೋಟೆಲು ಮಾಲೀಕರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ವಿದ್ಯುತ್ ಶಾರ್ಟ್ ಸರ್ಕ್ಯೂಟ್: ಮನೆ ಸಂಪೂರ್ಣ ಭಸ್ಮ

ಮನೆಯಲ್ಲಿ ಯಾರೂ ಇರದಿದ್ದರಿಂದ ತಪ್ಪಿದ ಭಾರೀ ಅನಾಹುತ



ಅಗ್ನಿ ಅನಾಹುತದಿಂದ ಸುಟ್ಟು ಹೋಗಿರುವ ಮನೆ

ಕೆ.ಆರ್.ಪೇಟೆ,ಮಾ.11– ತಾಲೂಕಿನ ಹೊಸಹೊಳಲು ಗ್ರಾಮದ ಕಾಳಮ್ಮನ ಬೀದಿಯ ನಿವಾಸಿ ಮಹೇಶ್ ಅವರ ಮನೆಯಲ್ಲಿ ಮಂಗಳವಾರ ಮಧ್ಯಾಹ್ನ ವಿದ್ಯುತ್ ಶಾರ್ಟ್ ಸರ್ಕ್ಯೂಟ್‌ನಿಂದ ಅಗ್ನಿ ಅನಾಹುತ ಸಂಭವಿಸಿ ಮನೆ ಸಂಪೂರ್ಣ ಸುಟ್ಟು ಹೋಗಿರುವ ಘಟನೆ ನಡೆದಿದೆ.

ಘಟನೆಯಿಂದ ಮನೆ ಮತ್ತು ಮೇಲ್ಛಾವಣಿ ಹಾಗೂ ಮನೆಯಲ್ಲಿದ್ದ ದಿನ ಬಳಕೆಯ ವಸ್ತುಗಳು ಬೆಂಕಿಯ ಕೆನ್ನಾಲಿಗೆಗೆ ತುತ್ತಾಗಿವೆ ಇದರಿಂದ ಲಕ್ಷಾಂತರ ರೂ ನಷ್ಟಉಂಟಾಗಿದೆ. ಮನೆಯಲ್ಲಿ ಯಾರೂ ಇರದಿದ್ದರಿಂದ ಭಾರೀ ಅನಾಹುತ ತಪ್ಪಿದೆ. ಬೆಂಕಿ ಅವಘಡ ಸಂಭವಿಸಿದ ವೇಳೆ ಅಕ್ಕಪಕ್ಕದ ಮನೆಯವರು ಸಮಯ ಪ್ರಜ್ಞೆಯಿಂದ ಯಾವುದೇ ಪ್ರಾಣಾಪಾಯವಾಗುವುದನ್ನು ಉಂಟಾಗುವುದನ್ನು ತಪ್ಪಿಸಿದ್ದಾರೆ. ಮನೆಯಿಂದ ನೀರು ತಂದು ಹಾಕುವ ಮೂಲಕ ಬೆಂಕಿಯನ್ನು ನಂದಿಸಿ ಅಕ್ಕಪಕ್ಕದ ಮನೆಗೆ ಬೆಂಕಿ ಹೊತ್ತಿಕೊಳ್ಳದಂತೆ ತಡೆದು ಹೆಚ್ಚಿನ ಅನಾಹುತವನ್ನು ತಪ್ಪಿಸಿದ್ದಾರೆ. ಅವಗಡದಿಂದ ಮನೆಯನ್ನು ಕಳೆದುಕೊಂಡು ನಷ್ಟಕ್ಕೆ ಒಳಗಾಗಿರುವ ಮಹೇಶ್ ಅವರಿಗೆ ಸೂಕ್ತ ಪರಿಹಾರ ನೀಡುವಂತೆ ಗ್ರಾಮಸ್ಥರು ಸರ್ಕಾರವನ್ನು ಒತ್ತಾಯ ಮಾಡಿದ್ದಾರೆ

ಹೆಣ್ಣು ಭ್ರೂಣ ಹತ್ಯೆ ಪ್ರಕರಣದ ಬಗ್ಗೆ ಮಾಹಿತಿ ನೀಡಿದ್ದ ಪತ್ರಕರ್ತನಿಗೆ ಸರ್ಕಾರದಿಂದ 50 ಸಾವಿರ ಗೌರವಧನ

ಮಂಡ್ಯ,ಮಾ.11– ಹೆಣ್ಣು ಭ್ರೂಣ ಹತ್ಯೆ ಪ್ರಕರಣದ ಬಗ್ಗೆ ಸುಳಿವು ನೀಡಿದ್ದ ಮಂಡ್ಯದ ಹಿರಿಯ ಪತ್ರಕರ್ತ ಕೆ.ಎನ್.ನಾಗೇಗೌಡ ಅವರಿಗೆ ಸರ್ಕಾರ 50 ಸಾವಿರ ರಾಜ್ಯ ಮಟ್ಟದ ಗೌರವಧನ ನೀಡಿ ಗೌರವಿಸಿದ್ದು, ಉಳಿದ 50 ಸಾವಿರ ಬಹುಮಾನವನ್ನು ಮಂಡ್ಯ ಜಿಲ್ಲಾ ಆರೋಗ್ಯ ಇಲಾಖೆ ನೀಡಿ ಗೌರವಿಸಲಿದೆ.



ಪಾಂಡವಪುರ ಆರೋಗ್ಯ ಇಲಾಖೆಗೆ ಸೇರಿದ ವಸತಿ ಗೃಹದಲ್ಲಿ ಅನಧಿಕೃತವಾಗಿ ಗರ್ಭಪಾತ ಕೃತ್ಯದಲ್ಲಿ ತೊಡಗಿರುವ ಬಗ್ಗೆ ಪತ್ರಕರ್ತ ಕೆಎನ್.ನಾಗೇಗೌಡ ಅಧಿಕಾರಿಗಳಿಗೆ ಸುಳಿವು ನೀಡಿ ಬೆಳಕು ಚೆಲ್ಲಿದ್ದರು. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಹಲವರ ವಿರುದ್ಧ ಕಠಿಣ ಕ್ರಮವನ್ನು ಜರುಗಿಸಲಾಗಿತ್ತು.

> ಭ್ರೂಣ ಹತ್ಯೆ ನಡೆಯುತ್ತಿರುವ ಬಗ್ಗೆ ಮಾಹಿತಿದಾರರು ನೀಡುವ ಸುಳಿವು ಖಚಿತವಾದರೆ ಹಾಗೂ ಕೃತ್ಯ ನಡೆಯುತ್ತಿರುವುದು ಸಾಬೀತಾದರೆ, ಅಂತಹವರಿಗೆ 1 ಲಕ್ಷ ಬಹುಮಾನ ನೀಡಲು ಸರ್ಕಾರದಲ್ಲಿ ಅವಕಾಶವಿದೆ. ನಾಗೇಗೌಡ ನೀಡಿದ ಮಾಹಿತಿಯಿಂದ ಆರೋಪಿಗಳನ್ನು ವಶಕ್ಕೆ ಪಡೆದು ವಿಚಾರಣೆಗೊಳಪಡಿಸಿ ತನಿಖೆ ನಡೆಸಿದಾಗ ಹೆಣ್ಣು ಭ್ರೂಣ ಹತ್ಯೆ ನಡೆಯುತ್ತಿರುವುದು ಬೆಳಕಿಗೆ ಬಂದಿತ್ತು. ಇವರಿಗೆ ಸರ್ಕಾರ 50 ಸಾವಿರ ಬಹುಮಾನ ನೀಡಿದ್ದು, ಉಳಿದ 50 ಸಾವಿರ ಬಹುಮಾನವನ್ನು ಆರೋಗ್ಯ ಇಲಾಖೆಯಿಂದ ವಿತರಣೆ ಮಾಡಲಾಗುವುದು. ಇವರು ಸೂಕ್ತ ಸಮಯದಲ್ಲಿ ನೀಡಿದ ಮಾಹಿತಿಯಿಂದ ದೊಡ್ಡ ಅನಾಹುತವೊಂದು ತಪ್ಪಿದಂತಾಗಿತ್ತು.
> –ಡಾ.ಬೆಟ್ಟಸ್ವಾಮಿ, ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿ, ಮಂಡ್ಯ.

ಭ್ರೂಣಹತ್ಯೆ ಪ್ರಕರಣದಂತಹ ಸುಳಿವು ನೀಡಿ, ತನಿಖೆಯಿಂದ ಕೃತ್ಯ ನಡೆದಿರುವ ಬಗ್ಗೆ ಸಾಬೀತಾದರೆ, ರಾಜ್ಯ ಸರ್ಕಾರ ಅಂತಹವರಿಗೆ 1 ಲಕ್ಷರೂ. ಬಹುಮಾನ ಘೋಷಿಸಲಿದೆ. ಇದಲ್ಲದೆ ರಾಜ್ಯ ಸರ್ಕಾರ 50 ಸಾವಿರ ಹಾಗೂ ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣ ಇಲಾಖೆಯಿಂದ 50 ಸಾವಿರ ಸೇರಿ ಒಟ್ಟು 1 ಲಕ್ಷರೂ. ಬಹುಮಾನ ನೀಡಿ ಗೌರವಿಸಲಿದೆ.

ಇವರ ಸಾಮಾಜಿಕ ಕಳಕಳಿಯಿಂದ ಹೆಣ್ಣು ಭ್ರೂಣ ಹತ್ಯೆ ಕಳಂಕವನ್ನು ಹೊತ್ತಿರುವ ಮಂಡ್ಯ ಜಿಲ್ಲೆಯಲ್ಲಿ ನಡೆಯುತ್ತಿದ್ದ ಹೆಣ್ಣು ಭ್ರೂಣ ಹತ್ಯೆ ಜಾಲ ಪತ್ತೆಯಾಗಿದ್ದು, ಹಲವು ಮಂದಿಯನ್ನು ಬಂಧಿಸಲಾಗಿತ್ತು. ನಾಗೇಗೌಡ ನೀಡಿದ ಮಾಹಿತಿಯಿಂದ ದೊಡ್ಡ ಜಾಲವೊಂದನ್ನು ಆರೋಗ್ಯ ಇಲಾಖೆ ಸಿಬ್ಬಂದಿ ಹಾಗೂ ಪೊಲೀಸ್ ಇಲಾಖೆ ಬೇಧಿಸಿದ್ದನ್ನು ಇಲ್ಲಿ ಸ್ಮರಿಸಬಹುದು.

ಸೂಕ್ತ ಸಮಯಕ್ಕೆ ಮಾಹಿತಿ ನೀಡಿದ ಕೆ.ಎನ್.ನಾಗೇಗೌಡರಿಗೆ ಬಹುಮಾನ ನೀಡುವಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದರು. ಈ ರೀತಿಯ ಬಹುಮಾನ ನೀಡುವುದರಿಂದ ಅನಧಿಕೃತ ಕೃತ್ಯಗಳು ನಡೆಯುತ್ತಿರುವ ಬಗ್ಗೆ ಸಾರ್ವಜನಿಕರು ಮಾಹಿತಿ ನೀಡಲು ಮುಂದೆ ಬರುತ್ತಾರೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಆಯುಕ್ತಾಲಯಕ್ಕೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಬೆಟ್ಟಸ್ವಾಮಿ ಪ್ರಸ್ತಾಪಿಸಿದ್ದರು. ನಾಗೇಗೌಡ ಸಾಮಾಜಿಕ ಕಳಕಳಿ ಗುರುತಿಸಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಕಚೇರಿಯಲ್ಲಿ ಜಿಲ್ಲಾ ಆರೋಗ್ಯಾಧಿಕಾರಿ ಡಾ.ಮೋಹನ್ ಅಭಿನಂದಿಸಿ ಗೌರವಿಸಿದ್ದಾರೆ.

ಮುಟ್ಟನಹಳ್ಳಿ ಸೊಸೈಟಿಗೆ ನೂತನ ಅಧ್ಯಕ್ಷರಾಗಿ ರಾಜಕುಮಾರ್ ಆಯ್ಕೆ



ಭಾರತೀನಗರ ಸಮೀಪದ ಮುಟ್ಟನಹಳ್ಳಿ ವಿವಿದ್ದೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಎಂ.ಇ.ರಾಜಕುಮಾರ್ ಅವರು ಅವಿರೋಧವಾಗಿ ಆಯ್ಕೆಯಾದ ಹಿನ್ನೆಲೆಯಲ್ಲಿ ಸಂಘದ ಸದಸ್ಯರು, ಗ್ರಾಮದ ಮುಖಂಡರು ಅಭಿನಂದಿಸಿ ಗೌರವಿಸಿದರು.

ಭಾರತೀನಗರ, ಮಾ.11–ಇಲ್ಲಿಗೆ ಸಮೀಪದ ಮುಟ್ಟನಹಳ್ಳಿ ವಿವಿದ್ದೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಎಂ.ಇ.ರಾಜಕುಮಾರ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಈ ಹಿಂದಿನ ಅಧ್ಯಕ್ಷ ಚಿಕ್ಕನಾಥೇಗೌಡರು ರಾಜಿನಾಮೆ ನೀಡಿದ್ದರಿಂದ ತೆರವಾಗಿದ್ದ ಸ್ಥಾನಕ್ಕೆ ರಾಜಕುಮಾರ್ ಅವರನ್ನು ಹೊರತು ಪಡಿಸಿ ಬೇರ್‍ಯಾರು ನಾಮಪತ್ರ ಸಲ್ಲಿಸದ ಕಾರಣ ಅವಿರೋಧವಾಗಿ ಆಯ್ಕೆಗೊಂಡಿದ್ದಾರೆಂದು ಚುನಾವಣಾಧಿಕಾರಿ ಸುಧಾಕರ್ ಘೋಷಿಸಿದರು.

ಇದೇ ವೇಳೆ ತಾಪಂ ಮಾಜಿ ಸದಸ್ಯ ಭುತೇಶ್, ಸಂಘದ ಉಪಾಧ್ಯಕ್ಷೆ ಎನ್.ಮಂಜುಳಾ, ನಿರ್ದೇಶಕರಾದ ಎಂ.ಇ.ಮಹೇಂದ್ರ ಎಂ.ಟಿ.ಅಶೋಕ್, ಪುಟ್ಟಸ್ವಾಮಿ, ಟಿ.ವೆಂಕಟೇಶ್, ಕೃಷ್ಣಾ, ವೆಂಕಟಯ್ಯ, ಗೋಪಾಲ್, ಪ್ರಜ್ವಲ್, ಸಿಇಓ ಉಮೇಶ್, ಅರ್ಪಿತಾ, ಹರ್ಷ, ಮುಖಂಡರಾದ ಪುರುಷೋತ್ತಮ್, ಗಂಗಾಧರ್, ಅಂಗಡಿ ಪ್ರಕಾಶ್, ಮಂಚೇಗೌಡ ಸೇರಿದಂತೆ ಹಲವರಿದ್ದರು

ರಾಜ್ಯಕ್ಕೆ ನಬಾರ್ಡ್ ಹಣಕಾಸು ನೆರವು ಶೇ.58ರಷ್ಟು ಇಳಿಕೆ, ಆದರೂ ಗುರಿ ಸಾಧಿಸುತ್ತೇವೆ

ವಿಧಾನ ಪರಿಷತ್‌ನಲ್ಲಿ ಮಾಹಿತಿ ನೀಡಿದ ಸಹಕಾರ ಸಚಿವ ಕೆ.ಎನ್.ರಾಜಣ್ಣ



ಕೆ.ಎನ್.ರಾಜಣ್ಣ



ದಿನೇಶ್ ಗೂಳಿಗೌಡ

ಬೆಂಗಳೂರು: ನಬಾರ್ಡ್ ರಾಜ್ಯಕ್ಕೆ ನೀಡುವ ನೆರವನ್ನು ಶೇ.58ರಷ್ಟು ಕಡಿಮೆ ಮಾಡಿದ್ದರಿಂದ ರಾಜ್ಯದ ರೈತರಿಗೆ ಸಹಕಾರ ಸಂಘಗಳ ಮೂಲಕ ಸಾಲ ನೀಡಲು ಅಡಚಣೆಯಾಗಿದೆ. ಆದರೂ ಮುಖ್ಯಮಂತ್ರಿಗಳು ನೀಡಿದ ಗುರಿ ಸಾಧಿಸುತ್ತೇವೆ ಎಂದು ಸಹಕಾರ ಸಚಿವ ಕೆ.ಎನ್.ರಾಜಣ್ಣ ತಿಳಿಸಿದರು.

ವಿಧಾನ ಪರಿಷತ್ ಸದಸ್ಯ ದಿನೇಶ್ ಗೂಳಿಗೌಡರು, ವಿಧಾನಪರಿಷತ್‌ನಲ್ಲಿ ಮಂಗಳವಾರ ಕೇಳಿದ ಚುಕ್ಕೆ ಗುರುತಿನ ಪ್ರಶ್ನೆಗೆ ಅವರು ಉತ್ತರ ನೀಡಿದರು. ಆರ್ಥಿಕ ನೆರವು ಹೆಚ್ಚಿಸಲು ಕೇಂದ್ರ ಹಾಗೂ ನಬಾರ್ಡ್ ಜತೆ ಪತ್ರ ವ್ಯವಹಾರ ನಡೆಸಿದ್ದು, ಇನ್ನಷ್ಟು ನೆರವು ನೀಡುವ ನಿರೀಕ್ಷೆ ಇದೆ ಎಂದರು. ಹಾಗಾದರೆ, ಈ ವರ್ಷ ಮುಖ್ಯಮಂತ್ರಿಗಳು ನೀಡಿದ ಸಾಲದ ಗುರಿ ತಲುಪುವುದು ಕಷ್ಟವೇ ಎಂದು ದಿನೇಶ್ ಗೂಳಿಗೌಡ ಅವರ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿದ ಸಚಿವರು, ಮುಖ್ಯಮಂತ್ರಿಯವರು ನೀಡಿದ ಗುರಿಯನ್ನು ತಲುಪುವುದಾಗಿ ತಿಳಿಸಿದರು.

2,364 ಕೋಟಿ ರೂ. ನೆರವು ಇಳಿಕೆ: ನಬಾರ್ಡ್ ನೆರವು ಕಡಿಮೆಯಾಗಿದ್ದೇಕೆ..?. ರಾಜ್ಯ ಸರ್ಕಾರ ಪ್ರಸ್ತಾವನೆ ಕಳಿಸಲು ವಿಳಂಬವಾಯಿತಾ ಎಂದು ದಿನೇಶ್ ಅವರು ಪ್ರಶ್ನಿಸಿದರು. ಅದಕ್ಕೆ ಉತ್ತರಿಸಿದ ಸಚಿವರು, ರಾಜ್ಯದ ಸಹಕಾರ ಕ್ಷೇತ್ರಕ್ಕೆ ನಬಾರ್ಡ್, ಎನ್‌ಸಿಡಿಸಿ, ಎನ್‌ಜಿಡಿಬಿ ಮೂರು ಹಣಕಾಸು ಸಂಸ್ಥೆಗಳು ನೆರವು ನೀಡುತ್ತವೆ. ರಾಜ್ಯದ ರೈತರಿಗೆ ಅಫೆಕ್ಸ್ ಬ್ಯಾಂಕ್ ಮೂಲಕ ಅಲ್ಪಾವಧಿ, ಮಧ್ಯಮಾವಧಿ ಹಾಗೂ ದೀರ್ಘಾವಧಿ ಸಾಲ ನೀಡಉವ ಸಲುವಾಗಿ ನಬಾರ್ಡ್ 2023–24ನೇ ಸಾಲಿನಲ್ಲಿ 5,600 ಕೋಟಿ ರೂ.ಗಳನ್ನು ನೀಡಿತ್ತು ಆದರೆ, ಈ ವರ್ಷ 3,226 ಕೋಟಿ ರೂ. ಮಾತ್ರ ಆರ್ಥಿಕ ನೆರವು ನೀಡಿದೆ. ಎಂದರೆ, ಕಳೆದ ವರ್ಷಕ್ಕೆ ಹೋಲಿಸಿದರೆ 2,364 ಕೋಟಿ ರೂ. ಕಡಿಮೆಯಾಗಿದೆ ಕಳೆದ ಐದು ವರ್ಷದಲ್ಲಿ ನಬಾರ್ಡ್ ಹಾಗೂ ಇತರ ಸಂಸ್ಥೆಗಳು ರೈತರಿಗೆ ಸಾಲ ನೀಡಲು ನೀಡಿದ ನೆರವು 5,924 ಕೋಟಿ ರೂ.ಗಳಷ್ಟು ಕಡಿಮೆಯಾಗಿದೆ ಎಂದು ವಿವರಿಸಿದರು.

ನಿರಂತರ ಪತ್ರ ವ್ಯವಹಾರ: ಕೇಂದ್ರ ಸರ್ಕಾರ ಜನರಲ್ ಲೈನ್ ಆಫ್ ಕ್ರೆಡಿಟ್ ಆರ್ಗನೈಜೇಶನ್‌ನಿಂದ ನಬಾರ್ಡ್‌ಗೆ ಹಣ ಬಿಡುಗಡೆ ಆಗುತ್ತದೆ. ಅಲ್ಲಿಂದ ರೈತರಿಗೆ ಸಾಲ ಕೊಡಲು ರಾಜ್ಯ ಸರ್ಕಾರಗಳಿಗೆ ಹಣ ನೀಡಲಾಗುತ್ತದೆ. ಈ ವರ್ಷ ಮೊದಲ ಹಂತದಲ್ಲಿ ನಬಾರ್ಡ್ 2,340 ಕೋಟಿ ರೂ. ಮಾತ್ರ ಆರ್ಥಿಕ ನೆರವು ನೀಡಿತ್ತು. ನಂತರ ಮುಖ್ಯಮಂತ್ರಿಗಳು ಕೇಂದ್ರ ಸರ್ಕಾರಕ್ಕೆ ಪತ್ರ ಬರೆದು ಮನವಿ ಮಾಡಿದ್ದರು. ಸಹಕಾರ ಸಚಿವನಾಗಿ ನಾನೂ ಕೇಂದ್ರ ಸರ್ಕಾರಕ್ಕೆ ಹಾಗೂ ನಮ್ಮ ರಾಜ್ಯದ ಎಲ್ಲ ಲೋಕಸಭೆ, ರಾಜ್ಯಸಭೆ ಸದಸ್ಯರಿಗೆ ಪತ್ರ ಬರೆದು, ಹಣ ಬಿಡುಗಡೆ ಕಡಿಮೆಯಾಗಿದೆ ಎಂದು ಮನವರಿಕೆ ಮಾಡಿಕೊಟ್ಟಿದ್ದೆ. ನಬಾರ್ಡ್ ದೇಶದ ಎಲ್ಲ ರಾಜ್ಯಗಳಿಗೆ ಆರ್ಥಿಕ ನೆರವು ಕಡಿಮೆ ಮಾಡಿದೆ. ಆದರೆ, ನಮ್ಮ ರಾಜ್ಯದಿಂದ ನಿರಂತರವಾಗಿ ಪತ್ರ ವ್ಯವಹಾರ, ಮನವಿ ಮಾಡಿದ್ದರಿಂದ 896 ಕೋಟಿ ರೂ.ಗಳನ್ನು ನಂತರ ಎರಡನೇ ಹಂತದಲ್ಲಿ ಬಿಡುಗಡೆ ಮಾಡಲಾಯಿತು. ಇನ್ನೂ ಪತ್ರ ವ್ಯವಹಾರ ಮುಂದುವರಿಸಿದ್ದರಿಂದ ಮತ್ತಷ್ಟು ಹಣ ನೀಡುವ ಆಶಾಭಾವನೆ ಹೊಂದಿದ್ದೇವೆ ಎಂದರು.

ಶ್ರೀ ಆದಿಚುಂಚನಗಿರಿಯಲ್ಲಿ ಸರಳ ಸಾಮೂಹಿಕ ವಿವಾಹ



ಸಾಮೂಹಿಕ ವಿವಾಹವಾದ ಜೋಡಿಗಳಿಗೆ ಶ್ರೀಗಳು ಆಶೀರ್ವದಿಸಿದರು.

ನಾಗಮಂಗಲ ಮಾ.10– ಶ್ರೀ ಕ್ಷೇತ್ರ ಆದಿಚುಂಚನಗಿರಿ ಮಹಾಸಂಸ್ಥಾನ ಮಠದಲ್ಲಿ ಜಾತ್ರಾ ಮಹೋತ್ಸವದ ಪ್ರಯುಕ್ತ ಸರಳ ಸಾಮೂಹಿಕ ವಿವಾಹ ಹಾಗೂ ಹಿರಿಯ ದಂಪತಿಗಳಿಗೆ ಸನ್ಮಾನ ಸಮಾರಂಭ ಜರುಗಿತು. ನಾಗಮಂಗಲ ತಾಲೂಕಿನ ಶ್ರೀ ಕ್ಷೇತ್ರ ಆದಿಚುಂಚನಗಿರಿಯಲ್ಲಿ ನಡೆದ ಸರಳ ಸಾಮೂಹಿಕ ವಿವಾಹದಲ್ಲಿ ಪರಮಪೂಜ್ಯ ಮಹಾಸ್ವಾಮೀಜಿಯವರು ದಿವ್ಯಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಈ ಕಾರ್ಯಕ್ರಮದಲ್ಲಿ ಶ್ರೀ ಆದಿಚುಂಚನಗಿರಿ ಕ್ಷೇತ್ರದ ಪೂಜ್ಯ ಶ್ರೀಶ್ರೀ ಪ್ರಸನ್ನನಾಥ ಸ್ವಾಮೀಜಿಯವರು, ಆರ್‌ಎಸ್‌ಎಸ್ ಜಂಟಿ ಕಾರ್ಯದರ್ಶಿ ಪಟ್ಟಾಭಿರಾಮ, ಮಾಜಿ ಶಾಸಕ ರವೀಂದ್ರ ಶ್ರೀಕಂಠಯ್ಯ, ಐಎಎಸ್ ಅಧಿಕಾರಿ ರಂಗಪ್ಪ, ಗಣ್ಯರು, ನವದಂಪತಿಗಳು, ಹಿರಿಯ ದಂಪತಿಗಳು, ಜಾತ್ರಾ ಮಹೋತ್ಸವಕ್ಕೆ ಆಗಮಿಸಿರುವ ಸದ್ಭಕ್ತರು ಉಪಸ್ಥಿತರಿದ್ದರು.

ವೇತನ ನೀಡುವಂತೆ ಆಗ್ರಹಿಸಿ ನೀರುಗಂಟಿಗಳ ಪ್ರತಿಭಟನೆ

ಮದ್ದೂರು,ಮಾ.11– ನೀರು ಘಂಟಿಗಳಿಗೆ (ಸವಡೆಗಳಿಗೆ) 7 ತಿಂಗಳುಗಳಿಂದ ವೇತನ ನೀಡುತ್ತಿಲ್ಲವೆಂದು ಆರೋಪಿಸಿ ಪಟ್ಟಣದ ಕಾವೇರಿ ನೀರಾವರಿ ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ಕಚೇರಿ ಮುಂದೆ ಸೋಮವಾರ ಜಮಾಯಿಸಿದ ಸವಡೆಗಳು ಸಂಬಳ ನೀಡದ ಅಧಿಕಾರಿಗಳ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಟಾಸ್ಕ್ ವರ್ಕ್ ದಿನಗೂಲಿ ನೌಕರರ ಸಂಘದ ಅಧ್ಯಕ್ಷ ಜಗದೀಶ್ ಮಾತನಾಡಿ, ತಾಲೂಕಿನಲ್ಲಿ 44 ನೀರುಗಂಟಿಗಳು ಕೆಲಸ ನಿರ್ವಹಿಸುತ್ತಿದ್ದು, 7 ತಿಂಗಳುಗಳಿಂದ ಸಂಬಳ ನೀಡದೆ ಅಧಿಕಾರಿಗಳು ನಮ್ಮ ಬಳಿ ಕೆಲಸ ಮಾಡಿಸಿಕೊಳ್ಳುತ್ತಿದ್ದಾರೆ. ಸಂಬಳ ಕೇಳಿದರೆ ಉಡಾಫೆಯಾಗಿ ವರ್ತನೆ ಮಾಡುತ್ತಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು.

ಸಂಬಳ ನೀಡುವಂತೆ ಹಲವಾರು ಬಾರಿ ಅಧಿಕಾರಿಗಳಿಗೆ ಗಮನಕ್ಕೆ ತಂದರು ಯಾವುದೇ ಪ್ರಯೋಜನವಾಗಿಲ್ಲ. ಸಂಬಳ ನೀಡದ ಕಾರಣ ನಾವುಗಳು ಸಂಸಾರ ನಿರ್ವಹಣೆ ಮಾಡಲು ತುಂಬಾ ಕಷ್ಟಕರವಾಗಿದ್ದು. ಶೀಘ್ರವಾಗಿ ಸಂಬಳ ನೀಡದೆ ಹೋದರೆ ಅನಿರ್ದಿಷ್ಟಾವಧಿ ಮುಷ್ಕರ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಮೂರನೇ ಪುಟದಿಂದ

ಹೊಸ ಮಾರ್ಗಸೂಚಿ

ಪಾಲನೆ ಖಾತ್ರಿಗೆ ರಾಜ್ಯ ಸರ್ಕಾರವು ಜಿಲ್ಲಾ ಆಡಳಿತಕ್ಕೆ ನಿರ್ದೇಶನ ನೀಡಿದೆ. ಸಂಭಾವ್ಯ ಅಪಾಯಗಳನ್ನು ನಿರ್ಣಯಿಸಲು ಮತ್ತು ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ಜಿಲ್ಲಾ ಅಧಿಕಾರಿಗಳಿಗೆ ಸ್ಥಳ ಭೇಟಿ ಕಾರ್ಯಕ್ರಮಗಳ ಪಟ್ಟಿಯನ್ನು ಒದಗಿಸಬೇಕು ಎಂದು ಹೇಳಲಾಗಿದೆ. ಗುರುವಾರ ರಾತ್ರಿ ಹಂಪಿ ಬಳಿ ಸಂಗೀತ ಕೇಳುತ್ತಾ ಕುಳಿತಿದ್ದಾಗ 27 ವರ್ಷದ ಇಸ್ರೇಲಿ ಮಹಿಳೆ ಸೇರಿದಂತೆ ಇಬ್ಬರು ಮಹಿಳೆಯರ ಮೇಲೆ ಸಾಮೂಹಿಕ ಅತ್ಯಾಚಾರ ಎಸಗಲಾಗಿದೆ. ಮಹಿಳೆಯರೊಂದಿಗೆ ಇದ್ದ ಮೂವರು ಪುರುಷ ಪ್ರವಾಸಿಗರ ಮೇಲೂ ಹಲ್ಲೆ ನಡೆಸಿ ಕಾಲುವೆಗೆ ತಳ್ಳಲಾಗಿದೆ. ಅವರಲ್ಲಿ ಒಬ್ಬನ ಮೃತ ದೇಹ ಪತ್ತೆಯಾಗಿತ್ತು. ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮೂವರನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಕೆಲ ದಾಖಲೆಗಳು ವಶಕ್ಕೆ

ವರದಿ ಹಾಗೂ ಹಿರಿಯ ಪೊಲೀಸ್ ಅಧಿಕಾರಿಗಳ ಜೊತೆಗೆ ಕೆಲವು ಉದ್ದಿಮೆದಾರರು ಕೈಜೋಡಿಸಿದ್ದಾರೆ ಎಂಬ ವಿಚಾರಕ್ಕೆ ಸಂಬಂಧಿಸಿ ದಂತೆ ಗೃಹ ಸಚಿವರ ಜೊತೆ ಮುಖ್ಯಮಂತ್ರಿ ಚರ್ಚಿಸಿದರೆನ್ನಲಾಗಿದೆ. ಪ್ರಕರಣದಲ್ಲಿ ಸಚಿವರ ಪಾತ್ರ ಇದೆ ಎಂಬ ಮಾಹಿತಿ ಹೊರಬೀಳುತ್ತಿದ್ದಂತೆ ಮುಖ್ಯಮಂತ್ರಿ ಅವರು ನಿನ್ನೆಯೇ ಹಿರಿಯ ಪೊಲೀಸ್ ಅಧಿಕಾರಿಗಳ ಜೊತೆ ಸಭೆ ನಡೆಸಿದರಾದರೂ, ಗೃಹ ಸಚಿವರ ಜೊತೆ ಸಮಾಲೋಚನೆ ನಡೆಸಿರಲಿಲ್ಲ.

ಸಿಬಿಐ ರಂಗಪ್ರವೇಶ ಮಾಡುತ್ತಿದ್ದಂತೆ ಮುಖ್ಯ ಮಂತ್ರಿ ಅವರು, ಗೃಹ ಸಚಿವರೊಂದಿಗೆ ಮಾಹಿತಿ ಪಡೆದಿದ್ದಲ್ಲದೆ, ತಮ್ಮ ಕೆಲವು ಆಪ್ತ ಸಚಿವರೊಂದಿಗೆ ಸಮಾಲೋಚನೆ ಮಾಡಿದ್ದಾರೆ. ದುಬೈನಿಂದ ಚಿನ್ನ ತಂದು, ವಿಮಾನ ನಿಲ್ದಾಣದಲ್ಲಿ ವಿಐಪಿ ದ್ವಾರದ ಮೂಲಕ ಹೊರಬರುತ್ತಿದ್ದ ರನ್ಯಾ ರಾವ್ ಅವರನ್ನು ಕೇಂದ್ರ ಕಂದಾಯ ಗುಪ್ತಚರ ವಿಭಾಗ ವಶಕ್ಕೆ ಪಡೆದು ತನಿಖೆ ನಡೆಸಿತ್ತು. ಕಪ್ಪು ಹಣವನ್ನು ಬಿಳಿಯಾಗಿ ಪರಿವರ್ತಿಸುವಲ್ಲಿ ರನ್ಯಾರಾವ್ ಚಿನ್ನ ಕಳ್ಳಸಾಗಣೆ ಯಲ್ಲಿ ತೊಡಗಿದ್ದ ಮಾಹಿತಿ ಕಲೆ ಹಾಕಿದ್ದಲ್ಲದೆ, ಆರೋಪಿಗೆ ಪ್ರಭಾವೀ ರಾಜಕಾರಣಿಗಳು, ಹಿರಿಯ ಅಧಿಕಾರಿಗಳು ಹಾಗೂ ಉದ್ದಿಮೆದಾರರ ಸಂಪರ್ಕ ಇರುವುದು ತನಿಖೆಯಿಂದ ಬೆಳಕಿಗೆ ಬಂದಿದೆ. ಚಿನ್ನ ಕಳ್ಳಸಾಗಣೆ ಕೇವಲ ಬೆಂಗಳೂರಿಗೆ ಸೀಮಿತವಾಗದೆ, ರಾಷ್ಟ್ರವ್ಯಾಪಿ ಹಬ್ಬಿದೆ. ಅಲ್ಲದೆ, ದುಬೈ ವಿಮಾನ ನಿಲ್ದಾಣ ದಲ್ಲೂ ಆರೋಪಿಗೆ ಸಹಾಯ ಮಾಡಿದ್ದಾರೆ ಎನ್ನುವ ಮಾಹಿತಿಯನ್ನು ಸಿಬಿಐ ಮತ್ತು ಜಾರಿ ನಿರ್ದೇಶ ನಾಲಯ (ಇ.ಡಿ.)ಕ್ಕೆ ಕಂದಾಯ ಗುಪ್ತಚರ ವಿಭಾಗ ನೀಡಿದೆ. ಕರ್ನಾಟಕದಲ್ಲಿ ಸಿಬಿಐ ತನಿಖೆಗೆ ಮುಕ್ತ ಅವಕಾಶವನ್ನು ರಾಜ್ಯ ಸರ್ಕಾರ ಕೊಡುವುದಿಲ್ಲ ಎಂಬ ಹಿನ್ನೆಲೆಯಲ್ಲಿ ಗುಪ್ತಚರ ವಿಭಾಗದ ದೂರನ್ನೇ ಸಿಬಿಐ ಸ್ವಯಂ ಪ್ರೇರಿತವಾಗಿ ದೆಹಲಿಯಲ್ಲಿ ದಾಖಲು ಮಾಡಿಕೊಂಡು ತನಿಖೆ ಕೈಗೆತ್ತಿಕೊಂಡಿದೆ.

ತನಿಖೆಗೆ ಸರ್ಕಾರ ಆದೇಶ

ಮತ್ತು ಆಡಳಿತ ಸುಧಾರಣಾ ಅಧೀನ ಕಾರ್ಯದರ್ಶಿ ನಾಗಪ್ಪ ಎಸ್.ಪರೀಟ್ ಆದೇಶ ಮಾಡಿದ್ದಾರೆ. ಕಳೆದ ಒಂದು ವಾರದಿಂದ ನಟಿ ರನ್ಯಾ ರಾವ್ ಚಿನ್ನದ ಗಟ್ಟಿಗಳನ್ನು ಅಕ್ರಮವಾಗಿ ದುಬೈನಿಂದ ಬೆಂಗಳೂರಿಗೆ ಸಾಗಾಣಿಕೆ ಮಾಡುತ್ತಿದ್ದ ಸಂದರ್ಭದಲ್ಲಿ ಕಂದಾಯ ಗುಪ್ತಚರ ನಿರ್ದೇಶನಾಲಯದ ಅಧಿಕಾರಿಗಳು ಬಂಧಿಸಿದ್ದರು. ಬಂಧನ ಸಂದರ್ಭದಲ್ಲಿ ಇವರು ಶಿಷ್ಟಾಚಾರ ಸೌಲಭ್ಯಗಳನ್ನು ದುರ್ಬಳಕೆ ಮಾಡಿಕೊಂಡು ಈ ಅಕ್ರಮ ಎಸಗಿರುವ ಬಗ್ಗೆ ವರದಿಯಾಗಿದೆ. ಅಲ್ಲದೆ, ಉನ್ನತ ಅಧಿಕಾರಿಗಳಿಗೆ ವಿಮಾನ ನಿಲ್ದಾಣಗಳಲ್ಲಿ ನೀಡಲಾಗುವ ಶಿಷ್ಟಾಚಾರಗಳನ್ನು ತಮ್ಮ ತಂದೆಯವರಾದ ಪೊಲೀಸ್ ಮಹಾ ನಿರ್ದೇಶಕರ ಹೆಸರನ್ನು ಬಳಕೆ ಮಾಡಿಕೊಂಡು ಅವರಿಗೆ ನೀಡುವ ಶಿಷ್ಟಾಚಾರ ಸೇವೆಗಳನ್ನು ರನ್ಯಾ ರಾವ್ ದುರ್ಬಳಕೆ ಮಾಡಿಕೊಂಡು ವಿಮಾನ ನಿಲ್ದಾಣಗಳಲ್ಲಿ ತಪಾಸಣೆಯಿಂದ ತಪ್ಪಿಸಿಕೊಂಡು ಅಕ್ರಮ ಕೃತ್ಯಗಳನ್ನು ನಡೆಸಿರುವ ಬಗ್ಗೆ ವರದಿಯಾಗಿದೆ. ಆದ್ದರಿಂದ ಶಿಷ್ಟಾಚಾರ ಸೌಲಭ್ಯಗಳ ಬಳಕೆ ಹಾಗೂ ಕಾರಣವಾದ ಸಂಗತಿಗಳು, ಇಂತಹ ಸಂದರ್ಭದಲ್ಲಿ ಪೊಲೀಸ್ ಅಧಿಕಾರಿಯ ಪಾತ್ರ ಇದೆಯೇ ಎಂಬ ಬಗ್ಗೆ ತನಿಖೆ ನಡೆಸಬೇಕಾಗಿದೆ.

ಸಾಧಾರಣ ಮಳೆ ಸಾಧ್ಯತೆ

ಸೆಲ್ಸಿಯಸ್ ಮತ್ತು ಕನಿಷ್ಠ ಉಷ್ಣಾಂಶ 15ರಿಂದ 16 ಡಿಗ್ರಿ ಸೆಲ್ಸಿಯಸ್‌ವರೆಗೆ ದಾಖಲಾಗುವ ಸಾಧ್ಯತೆಯಿದೆ. ಬೆಳಗಿನ ಗಾಳಿಯ ತೇವಾಂಶ ಶೇ.72ರಿಂದ 77ರವರೆಗೆ ಮತ್ತು ಮಧ್ಯಾಹ್ನದ ತೇವಾಂಶ ಶೇ.23ರಿಂದ 30ರವರೆಗೆ ದಾಖಲಾಗುವ ಮತ್ತು ಗಾಳಿಯು ಗಂಟೆಗೆ 6ರಿಂದ 8 ಕಿಲೋಮೀಟರ್ ವೇಗದಲ್ಲಿ ಬೀಸುವ ಸಾಧ್ಯತೆಯಿದೆ. ಮಂಡ್ಯ ಜಿಲ್ಲೆಯಲ್ಲಿ ಮಾ.12ರಿಂದ 16ರವ ರೆಗೆ ಮೋಡ ಕವಿದ ವಾತಾವರಣವಿದ್ದು, ಮಳೆ ಬರುವ ಸಾಧ್ಯತೆಯಿಲ್ಲ. ಗರಿಷ್ಠ ಉಷ್ಣಾಂಶ 34ರಿಂದ 35 ಡಿಗ್ರಿ ಸೆಲ್ಸಿಯಸ್ ಮತ್ತು ಕನಿಷ್ಠ ಉಷ್ಣಾಂಶ 19 ಡಿಗ್ರಿ ಸೆಲ್ಸಿಯಸ್‌ವರೆಗೆ ದಾಖ ಲಾಗುವ ಸಾಧ್ಯತೆಯಿದೆ. ಬೆಳಗಿನ ಗಾಳಿಯ ತೇವಾಂಶ ಶೇ.72ರಿಂದ 77ರವರೆಗೆ ಮತ್ತು ಮಧ್ಯಾಹ್ನದ ತೇವಾಂಶ ಶೇ.26ರಿಂದ 30ರವರೆಗೆ ದಾಖಲಾಗುವ ಮತ್ತು ಗಾಳಿಯು ಗಂಟೆಗೆ 8ರಿಂದ 10 ಕಿಲೋಮೀಟರ್ ವೇಗದಲ್ಲಿ ಬೀಸುವ ಸಾಧ್ಯತೆಯಿದೆ ಎಂದು ನಾಗನಹಳ್ಳಿ ಕೃಷಿ ಹವಾಮಾನ ಕ್ಷೇತ್ರ ವಿಭಾಗದ ಪ್ರಕಟಣೆ ತಿಳಿಸಿದೆ.

ಶಾಲಾ ವಿದ್ಯಾರ್ಥಿಗಳಿಗೆ ವಾರದಲ್ಲಿ ಒಂದು ದಿನ ನೈತಿಕ ಶಿಕ್ಷಣ

ಈ ವೇಳೆ ಮಧ್ಯ ಪ್ರವೇಶಿಸಿದ ಸಭಾಪತಿ ಬಸವರಾಜ ಹೊರಟ್ಟಿ, 8–10ನೇ ತರಗತಿ ವಿದ್ಯಾರ್ಥಿಗಳಿಗೆ ಪ್ರತಿ ವಾರ ನೈತಿಕ ಶಿಕ್ಷಣ ಅವಧಿ ಇರುತ್ತಿತ್ತು. ಭಾರತಿ ಹೇಳುವುದು ನಿಜ, ನೈತಿಕ ವಿಜ್ಞಾನ ತರಗತಿಗಳು ಪ್ರಸ್ತುತ ಕಾಲದಲ್ಲಿ ಬಹಳ ಅವಶ್ಯಕ. 8 ರಿಂದ 10ನೇ ತರಗತಿ ಮಕ್ಕಳಿಗೆ ವಾರಕ್ಕೆ ಒಂದು ಗಂಟೆ ನೈತಿಕ ಶಿಕ್ಷಣ ನೀಡಬೇಕು. ಅದಕ್ಕೂ ಪ್ರತ್ಯೇಕ ಶಿಕ್ಷಕರು ಆಗಬೇಕೆಂದೇನೂ ಇಲ್ಲ. ಎಲ್ಲ ಶಿಕ್ಷಕರೂ ವಾರಕ್ಕೆ ಒಂದು ಬಾರಿ ನೈತಿಕ ಪಾಠ ಮಾಡಿದರೆ ಸಾಕು ಎಂದು ಸಲಹೆ ನೀಡಿದರು.

ಇದಕ್ಕೆ ಉತ್ತರಿಸಿದ ಶಿಕ್ಷಣ ಸಚಿವ ಮಧು ಬಂಗಾರಪ್ಪ, ನೈತಿಕ ಶಿಕ್ಷಣ ನೀಡುವ ವಿಚಾರವು ಚರ್ಚೆಯಲ್ಲಿದೆ. ಪರಿಸರ, ಸಂಚಾರ ಪ್ರಜ್ಞೆ ಸೇರಿ ವಾರದಲ್ಲಿ ಒಮ್ಮೆ ನೈತಿಕ ಶಿಕ್ಷಣ ತರಗತಿ ತೆಗೆದುಕೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಲಾಗುವುದು. ಶೀಘ್ರದಲ್ಲೇ ಈ ಬಗ್ಗೆ ಸಭೆ ನಡೆಸಲಾಗುವುದು ಎಂದು ಹೇಳಿದರು. ಇದೇ ವೇಳೆ ಭಾರತಿಯವರು ಈ ವಿಷಯಗಳಿಗೆ ಪರೀಕ್ಷೆಗಳನ್ನೂ ಕೂಡ ನಡೆಸಬೇಕೆಂದು ಒತ್ತಾಯಿಸಿದರು.

ಪಾಕಿಸ್ತಾನದಲ್ಲಿ ರೈಲು ಹೈಜಾಕ್

ಬಲೂಚ್ ಲಿಬರೇಶನ್ ಆರ್ಮಿ ಮಶ್ಕಾಫ್, ಧದರ್, ಮತ್ತು ಬೋಲನ್ ಪ್ರದೇಶಗಳಲ್ಲಿ ಸೂಕ್ಷ್ಮವಾಗಿ ಯೋಜಿಸಲಾದ ಕಾರ್ಯಾಚರಣೆಯನ್ನು ಆಯೋಜಿಸಿತ್ತು. ಅಲ್ಲಿ ನಮ್ಮ ಸ್ವಾತಂತ್ರ್ಯ ಹೋರಾಟಗಾರರು ರೈಲ್ವೆ ಹಳಿಯನ್ನು ಸ್ಫೋಟಿಸಿ, ಜಾಫರ್ ಎಕ್ಸ್‌ಪ್ರೆಸ್ ರೈಲನ್ನು ನಿಲ್ಲಿಸಿದರು. ತಕ್ಷಣವೇ ಹೋರಾಟಗಾರರು ರೈಲಿನ ಸಂಪೂರ್ಣ ನಿಯಂತ್ರಣವನ್ನು ಪಡೆದುಕೊಂಡು, ಎಲ್ಲಾ ಪ್ರಯಾಣಿಕರನ್ನು ಒತ್ತೆಯಾಳಾಗಿ ಇರಿಸಿಕೊಂಡರು" ಎಂದು ಗುಂಪು ತನ್ನ ಹೇಳಿಕೆಯಲ್ಲಿ ತಿಳಿಸಿದೆ.

ಹಣ ಪಾವತಿಸದ ಕಾರಣ ರನ್ಯಾರಾವ್‌ಗೆ ಭೂಮಿ ಹಸ್ತಾಂತರ ಮಾಡಿಲ್ಲ



ಎಂ.ಬಿ.ಪಾಟೀಲ್

ಬೆಂಗಳೂರು, ಮಾ.11– ಚಿನ್ನ ಕಳ್ಳಸಾಗಣೆ ಪ್ರಕರಣದಲ್ಲಿ ಆರೋಪಿಯಾಗಿರುವ ನಟಿ ರನ್ಯಾ ರಾವ್‌ಗೆ ಸಂಬಂಧಿಸಿದ ಕ್ಸಿರೋಡಾ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಕಂಪನಿಗೆ ಮಂಜೂರಾದ 12 ಎಕರೆ ಭೂಮಿಯನ್ನು ಅಧಿಕೃತವಾಗಿ ಹಂಚಿಕೆ ಮಾಡಲಾಗಿಲ್ಲ ಎಂದು ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಸೋಮವಾರ ಹೇಳಿದ್ದಾರೆ. ತುಮಕೂರಿನ ಸಿರಾ ಕೈಗಾರಿಕಾ ಪ್ರದೇಶದಲ್ಲಿ ಸಂಸ್ಥೆಗೆ 12 ಎಕರೆ ಮಂಜೂರು ಮಾಡುವ ನಿರ್ಧಾರವನ್ನು ಜನವರಿ 2, 2023 ರಂದು ನಡೆದ 137 ನೇ ರಾಜ್ಯ ಮಟ್ಟದ ಏಕಗವಾಕ್ಷಿ ತೆರವು ಸಮಿತಿ (SLSWCC) ಸಭೆಯಲ್ಲಿ ತೆಗೆದುಕೊಳ್ಳಲಾಗಿತ್ತು. ಆ ಸಮಯದಲ್ಲಿ ರಾಜ್ಯದಲ್ಲಿ ಬಿಜೆಪಿ ಸರ್ಕಾರ ಅಧಿಕಾರದಲ್ಲಿತ್ತು. ಮೇ 2023ರಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದಿತು.

ನಿಗದಿತ ಸಮಯದೊಳಗೆ ಕಂಪನಿಯು ಅಗತ್ಯ ಮೊತ್ತವನ್ನು ಪಾವತಿಸದ ಕಾರಣ ಅಧಿಕೃತವಾಗಿ ಭೂಮಿಯನ್ನು ಹಸ್ತಾಂತರಿಸಲಾಗಿಲ್ಲ ಎಂದು ಸಚಿವರು ತಿಳಿಸಿದರು. ಸ್ಟೀಲ್ ಟಿಎಂಟಿ ಬಾರ್‌ಗಳು, ರಾಡ್‌ಗಳು ಮತ್ತು ಅದಕ್ಕೆ ಸಂಬಂಧಿಸಿದ ಉತ್ಪನ್ನಗಳ ಉತ್ಪಾದನಾ ಘಟಕವನ್ನು ಸ್ಥಾಪಿಸಲು ಕಂಪನಿಯು ಪ್ರಸ್ತಾವನೆಯನ್ನು ಸಲ್ಲಿಸಿದ್ದು, 138 ಕೋಟಿ ರೂ.ಗಳ ಈ ಯೋಜನೆಯು ಸರಿಸುಮಾರು 160 ಉದ್ಯೋಗಗಳನ್ನು ಸೃಷ್ಟಿಸುವ ನಿರೀಕ್ಷೆಯಿದೆ.

ಮುರಗೇಶ ನಿರಾಣಿ ಸ್ಪಷ್ಟನೆ: ನಟಿ ರನ್ಯಾ ರಾವ್‌ಗೆ ಸೇರಿದ ಸಂಸ್ಥೆಗೆ ಭೂಮಿ ಹಂಚಿಕೆಯಲ್ಲಿ ಯಾವುದೇ ಲೋಪವಾಗಿಲ್ಲ. ಅದಕ್ಕಾಗಿಯೇ ಪ್ರತ್ಯೇಕ ಸಮಿತಿ ಇದ್ದು, ಆ ಸಮಿತಿಯಲ್ಲೇ ಆದ ನಿರ್ಧಾರದಂತೆ ಹಂಚಿಕೆಯಾಗಿದೆ ಎಂದು ಕೈಗಾರಿಕೆ ಇಲಾಖೆ ಮಾಜಿ ಸಚಿವ, ಬಿಜೆಪಿ ರಾಜ್ಯ ಉಪಾಧ್ಯಕ್ಷ ಮುರಗೇಶ ನಿರಾಣಿ ಸ್ಪಷ್ಟಪಡಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರನ್ಯಾರಾವ್ ಎಂಬ ಉದ್ಯಮಿ 2022ರಲ್ಲಿ 12 ಎಕರೆ ಭೂಮಿ ಬೇಕೆಂದು ಅರ್ಜಿ ಕೊಟ್ಟಿದ್ದರು. 2023ರ ಜನವರಿಯಲ್ಲಿ ಅದು ಕ್ಲಿಯರ್ ಆಗಿದೆ. ಇದರಲ್ಲಿ ಕೈಗಾರಿಕಾ ಸಚಿವರದ್ದಾಗಲಿ, ನಮ್ಮ ಹಿರಿಯ ಅಧಿಕಾರಿಗಳದ್ದಾಗಲಿ ಯಾವುದೇ ರೀತಿಯ ಕಾನೂನು ಲೋಪದೋಷಗಳಾಗಿಲ್ಲ. ಅವರ ಪರವಾಗಿ ಯಾವುದೇ ನಿರ್ಧಾರ ಮಾಡಿಲ್ಲ. ಈ ಬಗ್ಗೆ ಯಾವುದೇ ರೀತಿಯ ಅನುಮಾನಗಳಿದ್ದರೆ ನನ್ನನ್ನು ನೇರವಾಗಿ ಸಂಪರ್ಕ ಮಾಡಬಹುದು. ನಾನು ಕೈಗಾರಿಕಾ ಸಚಿವನಾಗಿದ್ದ ಅವಧಿಯಲ್ಲಿ ಕಾನೂನು ಪ್ರಕಾರ, ಜಮೀನು ಮಂಜೂರು ಮಾಡಲಾಗಿತ್ತು. 2022ರಲ್ಲಿ 12 ಎಕರೆ ಜಮೀನಿಗಾಗಿ ಮನವಿ ಸಲ್ಲಿಸಿದ್ದರು ಎಂದರು.

ವಿಜಯೇಂದ್ರಗೆ ದುಬೈ ಕನೆಕ್ಷನ್ ಜಾಸ್ತಿ ಅಂತಾರೆ ಯತ್ನಾಳ್...!



ಪ್ರಿಯಾಂಕ್ ಖರ್ಗೆ

ಬೆಂಗಳೂರು: ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರಿಗೆ ದುಬೈ ನಂಟಿದೆ ಎಂದು ಬಿಜೆಪಿ ಹಿರಿಯ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹೇಳುತ್ತಿದ್ದಾರೆ. ಹೀಗಾಗಿ ರನ್ಯಾರಾವ್ ಚಿನ್ನ ಕಳ್ಳಸಾಗಣೆ ಪ್ರಕರಣದಲ್ಲಿ ವಿಜಯೇಂದ್ರ ಕೈವಾಡ ಇದೆಯೇ ಎಂಬ ದಿಕ್ಕಿನಲ್ಲೂ ತನಿಖೆ ನಡೆಯಬೇಕು ಎಂದು ಸಚಿವ ಪ್ರಿಯಾಂಕ್ ಖರ್ಗೆ, ಮಂಗಳವಾರ ಹೇಳಿದ್ದಾರೆ.

ರನ್ಯಾರಾವ್ ಚಿನ್ನ ಕಳ್ಳಸಾಗಣೆ ಪ್ರಕರಣದಲ್ಲಿ ಇಬ್ಬರ ಸಚಿವರು ಶಾಮೀಲಾಗಿದ್ದರೆ ಎಂದು ಬಿ.ವೈ.ವಿಜಯೇಂದ್ರ ಆರೋಪಿಸಿದ್ದು, ಇಂದು ಈ ಬಗ್ಗೆ ಪ್ರತಿಕ್ರಿಯಿಸಿದ ಪ್ರಿಯಾಂಕ್ ಖರ್ಗೆ ಅವರು, ಆ ಸಚಿವರ ಹೆಸರು ಹೇಳಲಿ. ಗಾಳಿಯಲ್ಲಿ ಗುಂಡು ಹಾರಿಸುವುದು ಬೇಡ ಎಂದು ತಿರುಗೇಟು ನೀಡಿದ್ದಾರೆ. ಸಿಬಿಐ ಮತ್ತು

ಆ ಬಗ್ಗೆಯೂ ತನಿಖೆಯಾಗಲಿ

ಡಿಆರ್‌ಐ ಎರಡೂ ಕೇಂದ್ರ ಸರ್ಕಾರದ ಅಧೀನದಲ್ಲಿರುವ ಸಂಸ್ಥೆಗಳು, ತನಿಖೆ ಮಾಡಿಸಲಿ ಎಂದು ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ. ವಿಜಯೇಂದ್ರ ಅವರಿಗೆ ದುಬೈ ಕನೆಕ್ಷನ್ ಜಾಸ್ತಿ, ಅಲ್ಲೂ ಅವರ ಬ್ಯಾಂಕ್ ಖಾತೆಗಳಿವೆ ಅಂತ ಬಸನಗೌಡ ಪಾಟೀಲ್ ಯತ್ನಾಳ್ ಹೇಳಿದ್ದಾರೆ. ಅವರಿಗೆ ಸಚಿವರು ಶಾಮೀಲಾಗಿರುವ ಬಗ್ಗೆ ಮಾಹಿತಿ ಇರಬಹುದು, ಹೆಸರು ಹೇಳಲಿ ಎಂದು ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಆದಾಗ್ಯೂ ಸಿಬಿಐ ಮೂಲಕ ಬಿಜೆಪಿಯವರು ತನಿಖೆಯನ್ನು ಹಳ್ಳ ಹಿಡಿಸುವ ಸಾಧ್ಯತೆಯನ್ನೂ ಅಲ್ಲಗಳೆಯುವಂತಿಲ್ಲ. ಯಾಕೆಂದರೆ, ರನ್ಯಾ ರಾವ್‌ಗೆ 12 ಎಕರೆ ಜಾಗ ಕೊಟ್ಟಿರೋದೆ ಬಿಜೆಪಿ ಸರ್ಕಾರ. ಅಂದರೆ, ಆಕೆಯ ಜೊತೆಗೆ ಬಿಜೆಪಿ ನಾಯಕರಿಗೆ ಅಷ್ಟೊಂದು ನಿಕಟ ಸಂಪರ್ಕ ಇದೆ ಎಂದು ಅಂದಾಜಿಸಬಹುದು. ಇಲ್ಲದಿದ್ದರೆ 12 ಎಕರೆ ಜಾಗ ಮಂಜೂರು ಮಾಡುವುದು ಸಾಧ್ಯವೇ? ಈ ದಿಕ್ಕಿನಲ್ಲಿ ನಿಷ್ಪಕ್ಷಪಾತ ತನಿಖೆ ನಡೆದಾಗಲೇ ಸತ್ಯ ಹೊರಬರಬಹುದು ಎಂದು ಸಚಿವರು ಹೇಳಿದ್ದಾರೆ. ದುಬೈನಿಂದ 14.80 ಕೆಜಿ ಚಿನ್ನವನ್ನು ಕಳ್ಳಸಾಗಣೆ ಮಾಡಿದ ಆರೋಪದ ಮೇಲೆ ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಕಂದಾಯ ಗುಪ್ತಚರ ನಿರ್ದೇಶನಾಲಯ (ಡಿಆರ್‌ಐ) ರನ್ಯಾ ರಾವ್ ಅವರನ್ನು ಮಾರ್ಚ್ 3 ರಂದು ಬಂಧಿಸಿದೆ. ಬೆಂಗಳೂರಿನ ಸುತ್ತಲೂ ಕೇಂದ್ರೀಕೃತವಾಗಿರುವ ಈ ಪ್ರಕರಣವು ರಾಜ್ಯ ಸರ್ಕಾರದ ಪ್ರಭಾವಿ ವ್ಯಕ್ತಿಗಳ ಸುತ್ತ ಅನುಮಾನ ಹುಟ್ಟುಹಾಕಿದೆ. ಪ್ರಕರಣದಲ್ಲಿ ಇಬ್ಬರು ಸಚಿವರು ಭಾಗಿಯಾಗಿರುವ ಕುರಿತು ವರದಿಯಾಗಿದ್ದು, ಇದು ತುಂಬಾ ಕಳವಳಕಾರಿ ಬೆಳವಣಿಗೆ ಎಂದು ವಿಜಯೇಂದ್ರ ಹೇಳಿದ್ದರು.

ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್ ವಿವಿ: ಮರು ನಾಮಕರಣ ಮಸೂದೆ ವಿಧಾನಸಭೆಯಲ್ಲಿ ಮಂಡನೆ

ಬೆಂಗಳೂರು: ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯವನ್ನು ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಎಂದು ಮರುನಾಮಕರಣ ಮಾಡುವ ಮಸೂದೆಯನ್ನು ಮಂಗಳವಾರ ವಿಧಾನಸಭೆಯಲ್ಲಿ ಮಂಡಿಸಲಾಯಿತು.

2016 ರ ಕಾಯಿದೆಯನ್ನು ಮತ್ತಷ್ಟು ತಿದ್ದುಪಡಿ ಮಾಡುವ 'ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ (ತಿದ್ದುಪಡಿ) ಮಸೂದೆ, 2025'ನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಅವರು ವಿಧಾನಸಭೆಯಲ್ಲಿ ಮಂಡಿಸಿದರು. ಪ್ರಸ್ತಾವಿತ ಶಾಸನೀಯ ಕ್ರಮವು ಯಾವುದೇ ಹೆಚ್ಚುವರಿ ವೆಚ್ಚವನ್ನು ಹೊಂದಿರುವುದಿಲ್ಲ ಎಂದು ಮಸೂದೆಯಲ್ಲಿ ಹೇಳಲಾಗಿದೆ.

ಅಧಿಕಾರಿಗಳ ವರ್ಗಾವಣೆ ವಿಚಾರಕ್ಕೆ ಸಿಎಂ ಸಿದ್ದರಾಮಯ್ಯ ಸಮ್ಮುಖದಲ್ಲಿ ಸಚಿವರ ಜಟಾಪಟಿ



ಬೆಂಗಳೂರು: ನಗರದ ರ್‍ಯಾಡಿಸನ್ ಬ್ಲ್ಯೂ ಹೋಟೆಲ್‌ನಲ್ಲಿ ಸೋಮವಾರ (ಮಾರ್ಚ್ 10) ರಾತ್ರಿ ನಡೆದ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆಯಲ್ಲಿ, ಅಧಿಕಾರಿಗಳ ವರ್ಗಾವಣೆ ವಿಚಾರ ಪ್ರಸ್ತಾಪವಾಗಿ ಶಾಸಕರು ಮತ್ತು ಸಚಿವರ ನಡುವೆ ಮಾತಿನ ಚಕಮಕಿ ನಡೆದಿದೆ.

ಶಾಸಕರ ಅಭಿಪ್ರಾಯ ಕೇಳಿ ಅಧಿಕಾರಿಗಳ ವರ್ಗಾವಣೆ ಮಾಡಿದರೆ ಮಾತ್ರ ಆಡಳಿತದಲ್ಲಿ ಹಿಡಿತ ಸಾಧಿಸಲು ಸಾಧ್ಯ. ಆದರೆ, ಜಿಲ್ಲಾ ಉಸ್ತುವಾರಿ ಸಚಿವರು ಶಾಸಕರ ಮಾತಿಗೆ ಬೆಲೆ ಕೊಡುವುದಿಲ್ಲ. ತಮಗೆ ಬೇಕಾದವರನ್ನು ವರ್ಗಾವಣೆ ಮಾಡಿಸಿಕೊಂಡರೆ ಹೇಗೆ ಎಂದು ಕಂಪ್ಲಿ ಶಾಸಕ ಕಂಪ್ಲಿ ಗಣೇಶ್ ಪ್ರಶ್ನಿಸಿದ್ದಾರೆ. ಆಗ ಮಧ್ಯಪ್ರವೇಶಿಸಿದ ಶಾಸಕಾಂಗ ಪಕ್ಷದ ನಾಯಕರೂ ಆಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಶಾಸಕರು ಮತ್ತು ಜಿಲ್ಲಾ ಉಸ್ತುವಾರಿ ಸಚಿವರು ಒಟ್ಟಾಗಿ ಬಂದರೆ ಅಧಿಕಾರಿಗಳ ವರ್ಗಾವಣೆ ವಿಚಾರದಲ್ಲಿ ಗೊಂದಲಕ್ಕೆ ಅವಕಾಶ ಆಗುವುದಿಲ್ಲ. ಆದರೆ, ಆ ರೀತಿ ಆಗುತ್ತಿಲ್ಲ. ರಾಯ ಚೂರು ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಅಲ್ಲಿನ ಶಾಸಕರು ಒಂದಾಗಿ ಬರುತ್ತಾರೆಯೇ ಎಂದರು. ಆಗ ರಾಯ ಚೂರು ಜಿಲ್ಲೆಯ ಅಧಿಕಾರಿಗಳ ವರ್ಗಾ ವಣೆ ವಿಚಾರಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಸಚಿವ ಎನ್.ಎಸ್. ಬೋಸರಾಜು, ನಾನು ರಾಯಚೂರು ಜಿಲ್ಲೆಯವನು. ವರ್ಗಾವಣೆ ವಿಚಾರಕ್ಕೆ ನೀವು ಯಾಕೆ ಪತ್ರ ನೀಡುತ್ತೀರಾ ಎಂದು ಸಚಿವ ಡಾ. ಶರಣಪ್ರಕಾಶ್ ಪಾಟೀಲ ಅವರನ್ನು ಪ್ರಶ್ನಿಸಿದರು. ಅದಕ್ಕೆ ಶರಣ ಪ್ರಕಾಶ್ ಪಾಟೀಲ, ನಾನು ರಾಯ ಚೂರು ಜಿಲ್ಲಾ ಉಸ್ತುವಾರಿ ಸಚಿವ. ಸ್ಥಳೀಯ ಶಾಸಕರು ಕೇಳಿದ ಕಾರಣಕ್ಕೆ ಪತ್ರ ನೀಡಿದ್ದೇನೆ. ಶಾಸಕರ ಬೇಡಿಕೆಗಳಿಗೆ ಸ್ಪಂದಿಸುವುದು ನನ್ನ ಕೆಲಸ ಎಂದು ಪ್ರತಿಕ್ರಿಯಿಸಿದ್ದಾರೆ.

ವರ್ಗಾವಣೆಗೆ ಸಂಬಂಧಿಸಿದಂತೆ, ಶಾಸಕ ಬಸನಗೌಡ ದದ್ದಲ್ ಅವರಿಗೆ ಶರಣಪ್ರಕಾಶ್ ಪಾಟೀಲ ಪತ್ರ ಕೊಟ್ಟಿದ್ದರು. ಇದು ಬೋಸರಾಜು ಅವರನ್ನು ಕೆರಳಿಸಿತ್ತು. ನನ್ನನ್ನು ಕೇಳದೆ ಹೇಗೆ ಪತ್ರ ಕೊಟ್ಟಿದ್ದೀರಿ ಎಂದು ಬೋಸರಾಜು ಮರು ಪ್ರಶ್ನಿಸಿದ್ದು, ಇಬ್ಬರು ಸಚಿವರ ನಡುವೆ ಜಟಾಪಟಿಗೆ ಕಾರಣವಾಯಿತು ಎಂದು ಹೇಳಲಾಗಿದೆ.

ಬಸವಣ್ಣನ ಕಾಯಕ, ದಾಸೋಹ ಪರಿಕಲ್ಪನೆಯಡಿ ಸರ್ಕಾರದ ಕಾರ್ಯಕ್ರಮ

ಆಂಬುಲೆನ್ಸ್‌ಗಳ ಲೋಕಾರ್ಪಣೆಗೊಳಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸಮರ್ಥನೆ



ಉಚಿತ ಸಂಚಾರಿ ಆಸ್ಪತ್ರೆ ಆರೋಗ್ಯ ಘಟಕ ಆಂಬುಲೆನ್ಸ್‌ಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಲೋಕಾರ್ಪಣೆಗೊಳಿಸಿದರು.

ಬೆಂಗಳೂರು, ಮಾ. 11(ಕೆಎಂಶಿ)– ಸಾಮಾಜಿಕ ಕ್ರಾಂತಿಕಾರಿ ಬಸವಣ್ಣನವರ ಕಾಯಕ–ದಾಸೋಹ ಪರಿಕಲ್ಪನೆಯಲ್ಲಿ ಕಾರ್ಯಕ್ರಮ ರೂಪಿಸುತ್ತಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಕಾರ್ಮಿಕ ಇಲಾಖೆ ಕಟ್ಟಡ ಕಾರ್ಮಿಕರಿಗಾಗಿ ಸಿದ್ಧಪಡಿಸಿರುವ 135 ಉಚಿತ ಸಂಚಾರಿ ಆಸ್ಪತ್ರೆ ಆರೋಗ್ಯ ಘಟಕ ಆಂಬುಲೆನ್ಸ್‌ಗಳ ಲೋಕಾರ್ಪಣೆ ಮಾಡಿ ಮಾತನಾಡಿದ ಅವರು, ಸಮಾಜದಲ್ಲಿ ದುಡಿಯುವ ವರ್ಗ ಒಂದು ಕಡೆ ಇದ್ದರೆ, ದುಡಿಸಿಕೊಳ್ಳುವ ವರ್ಗ ಮತ್ತೊಂದು ಕಡೆ ಇದೆ, ಯಾರು ಉತ್ಪಾದನಾ ಚಟುವಟಿಕೆಯಲ್ಲಿ ಭಾಗವಹಿಸುವರೋ ಅವರೇ ದೇಶದ ನಿರ್ಮಾತೃಗಳು ಎಂದರು.

ದೇಶ ಕಾರ್ಮಿಕರ ಶ್ರಮ ಅವಲಂಬಿಸಿದೆ. ಸಮಾಜದಲ್ಲಿ ಒಂದೇ ವರ್ಗ ದುಡಿಯುತ್ತಿರಬಾರದು, ಎಲ್ಲಾ ವರ್ಗ ದುಡಿಯಬೇಕು. ಆಗ ಮಾತ್ರ ಬುದ್ಧ, ಬಸವ, ಅಂಬೇಡ್ಕರ್ ಆಶಯದ ಸಮ ಸಮಾಜ ನಿರ್ಮಾಣ ಸಾಧ್ಯ. ಕಾರ್ಮಿಕರ ಸೆಸ್ ಹಣದಿಂದ ಕಾರ್ಮಿಕ ಕಲ್ಯಾಣ ಮಂಡಳಿ ಸುಸಜ್ಜಿತ ಸಂಚಾರಿ ಆಸ್ಪತ್ರೆಗಳನ್ನು ಲೋಕಾರ್ಪಣೆಗೊಳಿಸಲಾಗಿದೆ. ಕಟ್ಟಡ ಮತ್ತು ಇತರೆ ಕಾರ್ಮಿಕರ ಮಕ್ಕಳು ಶಿಕ್ಷಣದಿಂದ ವಂಚಿತರಾಗಬಾರದು ಎಂಬ ಕಾರಣದಿಂದ ಸರ್ಕಾರ ಕಾರ್ಮಿಕರ ಮಕ್ಕಳಿಗಾಗಿ ಉಚಿತ ಊಟ ಮತ್ತು ವಸತಿ ಶಾಲೆಗಳನ್ನು ತೆರೆಯಲಿದೆ ಎಂದು ಘೋಷಿಸಿದರು. ಸರ್ಕಾರದ ಈ ಎಲ್ಲಾ ಸವಲತ್ತುಗಳನ್ನು ಕಾರ್ಮಿಕರು ಸದುಪಯೋಗಪಡಿಸಿಕೊಳ್ಳಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದರು.

ಅರ್ಥಪೂರ್ಣ ಮಹಿಳಾ ದಿನಾಚರಣೆ



ಮೈಸೂರು ಲೇಡಿಸ್ ಅಸೋಸಿಯೇಷನ್ ವತಿಯಿಂದ ಮಹಿಳಾ ದಿನ ಆಚರಣೆ.

ಮೈಸೂರು,ಮಾ.11(ಎಂಟಿವೈ)– ವಿಶ್ವ ಮಹಿಳಾ ದಿನದ ಅಂಗವಾಗಿ ಮೈಸೂರು ಲೇಡಿಸ್ ಅಸೋಸಿಯೇಷನ್ ವತಿಯಿಂದ ಮಹಿಳೆಯರಿಗೆ ವಿವಿಧ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಮೈಸೂರಿನ ಕನ್ನಡ ಸಾಹಿತ್ಯ ಪರಿಷತ್ ಸಭಾಂಗಣದಲ್ಲಿ ಮೈಸೂರು ಲೇಡಿಸ್ ಅಸೋಸಿಯೇಷನ್ ಆಯೋಜಿಸಿದ್ದ ಮಹಿಳಾ ದಿನದ ಕಾರ್ಯಕ್ರಮವನ್ನು ಮೈಸೂರು ಸೈಬರ್ ಅಪರಾಧ ವಿಭಾಗದ ಎಸಿಪಿ ಸ್ನೇಹಾ ರಾಜ್, ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಡಾ.ಎಂ.ಜೆ.ರೂಪ ಹಾಗೂ ವಾಸು ಅಗರಬತ್ತಿ ಸಂಸ್ಥೆಯ ಜಾಹ್ನವಿ ಮೂರ್ತಿ ಚಾಲನೆ ನೀಡಿ, ಶುಭ ಕೋರಿದರು. ಮಹಿಳೆಯರ ಸಬಲೀಕರಣ, ಆರೋಗ್ಯ ಹಾಗೂ ಮಹಿಳೆಯರಿಗೆ ಸಂಬಂಧಪಟ್ಟ ವಿವಿಧ ವಿಷಯಗಳ ಬಗ್ಗೆ ಮಹಿಳೆಯರಲ್ಲಿ ಜಾಗೃತಿ ಮೂಡಿಸಿದರು.

ಇದೇ ವೇಳೆ ಮಹಿಳೆಯರಿಗಾಗಿ ವಿವಿಧ ಆಟೋಟ ಸ್ಪರ್ಧೆ, ಭಾವಗೀತೆ, ಭಕ್ತಿಗೀತೆ ಗಾಯನ ಸ್ಪರ್ಧೆಯನ್ನೂ ನಡೆಸಲಾಯಿತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮೃಗಾಲಯ ಪ್ರಾಧಿಕಾರದ ಮಾಜಿ ಅಧ್ಯಕ್ಷೆ ಮಲ್ಲಿಗೆ ವೀರೇಶ್ ವಹಿಸಿದ್ದರು. ಮೈಸೂರು ಲೇಡಿಸ್ ಅಸೋಸಿಯೇಷನ್ ಪದಾಧಿಕಾರಿಗಳು ಹಾಗೂ ಸದಸ್ಯರು ಪಾಲ್ಗೊಂಡಿದ್ದರು.

ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರ ಜಿಲ್ಲಾ ಪ್ರವಾಸ

ಮೈಸೂರು: ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ನಾಗಲಕ್ಷ್ಮಿ ಚೌಧರಿ ಮಾ.13ರಂದು ಮೈಸೂರು ಜಿಲ್ಲಾ ಪ್ರವಾಸವನ್ನು ಹಮ್ಮಿಕೊಂಡಿದ್ದಾರೆ. ಅಂದು ಬೆಳಗ್ಗೆ 11:30 ಗಂಟೆಗೆ ಕಾರಾಗೃಹ ಮತ್ತು ಸುಧಾರಣಾ ಸೇವೆ ಇಲಾಖೆ ಕೇಂದ್ರ ಕಾರಾಗೃಹ, ಮೈಸೂರು ಇಲ್ಲಿನ ಹಮ್ಮಿಕೊಂಡಿರುವ ಮಹಿಳಾ ದಿನಾಚರಣೆಯ ಅಧ್ಯಕ್ಷತೆಯನ್ನು ವಹಿಸುವರು ಎಂದು ಅವರ ಆಪ್ತ ಕಾರ್ಯದರ್ಶಿ ತಿಳಿಸಿದ್ದಾರೆ.

ಮೈಸೂರು ವಿವಿ ಕಾರ್ಯಸೌಧ ಕ್ರಾಫರ್ಡ್ ಭವನದ ಮುಂದೆ ವಿದ್ಯಾರ್ಥಿಗಳ ಪ್ರತಿಭಟನೆ

ಮೈಸೂರು, ಮಾ.11(ಬಿಎಲ್‌ಯು)– ಮಾನಸಗಂಗೋತ್ರಿಯಲ್ಲಿರುವ ಎಲ್‌ಎಲ್‌ಎಂ ವಿಭಾಗಕ್ಕೆ ಮೂಲಸೌಕರ್ಯ ಕಲ್ಪಿಸುವಂತೆ ಆಗ್ರಹಿಸಿ ಮೈಸೂರು ವಿಶ್ವವಿದ್ಯಾನಿಲಯದ ಕಾನೂನು ವಿದ್ಯಾರ್ಥಿಗಳು ಮಂಗಳವಾರ ಪ್ರತಿಭಟನೆ ನಡೆಸಿದರು.



ಮೈಸೂರು ವಿಶ್ವವಿದ್ಯಾನಿಲಯದ ಕ್ರಾಫರ್ಡ್ ಭವನದ ಮುಂದೆ ಪ್ರತಿಭಟನೆ ನಡೆಸಿದ ವಿದ್ಯಾರ್ಥಿಗಳು ಮೂಲಸೌಕರ್ಯವಿಲ್ಲದೆ ತಾವು ಅನುಭವಿಸುತ್ತಿರುವ ನಾನಾ ತೊಂದರೆ ವಿವರಿಸಿದರು. ಕುಡಿಯುವ ನೀರು, ಶೌಚಾಲಯ ಸೇರಿದಂತೆ ಹಲವು ಮೂಲ ಸೌಕರ್ಯಗಳಿಲ್ಲ. ಗ್ರಂಥಾಲಯದಲ್ಲಿ ಅವಶ್ಯ ಪುಸ್ತಕಗಳಿಲ್ಲ ಎಂದು ಕಿಡಿಕಾರಿದರು. ಈ ಬಗ್ಗೆ ಹಲವು ಬಾರಿ ಮನವಿ ಮಾಡಿದರು. ಸಮಸ್ಯೆ ಪರಿಹಾರ ಮಾಡದ ಹಿನ್ನೆಲೆಯಲ್ಲಿ ತರಗತಿಗೆ ಗೈರಾಗಿ ಪ್ರತಿಭಟನೆ ನಡೆಸುತ್ತಿರುವುದಾಗಿ ತಿಳಿಸಿದರು.

ಸ್ಪರ್ಧಾತ್ಮಕ ಪರೀಕ್ಷೆಗಳ ಎದುರಿಸುವುದು ಹೇಗೆ?; ಮಾ.27, ಉಚಿತ ತರಬೇತಿ

ಮೈಸೂರು, ಮಾ. 11– ಮೈಸೂರಿನ ಒಕ್ಕಲಿಗ ಯುವ ಬ್ರಿಗೇಡ್, ಮಹಾಜನ ಎಜುಕೇಶನ್ ಸೊಸೈಟಿ ಸಹಯೋಗದೊಂದಿಗೆ ಮಾ.27ರಂದು ಬೆಳಗ್ಗೆ 10ರಿಂದ ಮಧ್ಯಾಹ್ನ 2ರವರೆಗೆ ಕೆ.ಆರ್.ರಸ್ತೆಯ ಪೂಜಾ ಭಗವತ್ ಮಹಾಜನ ಸ್ನಾತಕೋತ್ತರ ಕೇಂದ್ರದಲ್ಲಿ ಐಎಎಸ್, ಕೆಎಎಸ್ ಹಾಗೂ ಮತ್ತಿತರ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸುವುದು ಹೇಗೆ? ಕುರಿತು ಒಂದು ದಿನದ ಉಚಿತ ತರಬೇತಿ ಏರ್ಪಡಿಸಿದೆ. ವಿದ್ಯಾರ್ಥಿಗಳಿಗೆ ಇನ್ಸೈಟ್'ಸ್ ಐಎಎಸ್ ಸಂಸ್ಥಾಪಕ ವಿನಯ್‌ಕುಮಾರ್, ನಿಖಿಲ್ ಹಾಗೂ ಗರಣಿ ಕೃಷ್ಣಮೂರ್ತಿ ತರಬೇತಿ ನೀಡಲಿದ್ದಾರೆ. ಪೊಲೀಸ್ ಅಧೀಕ್ಷಕ ಕಾಶಿ ಕಾರ್ಯಕ್ರಮ ಉದ್ಘಾಟಿಸುವರು. ಪೂಜಾ ಭಗವತ್ ಸಂಸ್ಥೆಯ ನಿರ್ದೇಶಕ ರೇಣು ಕಾರ್ಯ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಹಿರಿಯ ಪತ್ರಕರ್ತರಾದ ಅಂಶಿ ಪ್ರಸನ್ನಕುಮಾರ್, ಎಂ.ಆರ್.ಸತ್ಯನಾರಾಯಣ ಭಾಗವಹಿಸಲಿದ್ದಾರೆ. ಒಕ್ಕಲಿಗ ಯುವ ಬ್ರಿಗೇಡ್‌ನ ಸಂಸ್ಥಾಪಕ ಅಧ್ಯಕ್ಷ ನಂಜೇಗೌಡ ನಂಜುಂಡ, ಸಮಾಜ ಕಾರ್ಯ ವಿಭಾಗದ ಮುಖ್ಯಸ್ಥೆ ಡಾ.ಭಾವನಾ ಉಪಸ್ಥಿತರಿರುವರು.

ಗ್ಯಾರಂಟಿ ಅನುಷ್ಠಾನ ಸಮಿತಿಗೆ ಕಾಂಗ್ರೆಸ್ ಕಾರ್ಯಕರ್ತರ ನೇಮಕ

ವಿಧಾನಸಭೆಯಲ್ಲಿ ವಿಪಕ್ಷಗಳ ಗದ್ದಲ, ಕೋಲಾಹಲ

ಬೆಂಗಳೂರು: ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಮೇಲ್ವಿಚಾರಣೆಗಾಗಿ ರಾಜ್ಯ, ಜಿಲ್ಲಾ ಮತ್ತು ತಾಲೂಕು ಮಟ್ಟದಲ್ಲಿ ಕಾಂಗ್ರೆಸ್ ನಾಯಕರು, ಕಾರ್ಯಕರ್ತರನ್ನು ನೇಮಕ ಮಾಡಿರುವುದನ್ನು ವಿರೋಧಿಸಿ ಪ್ರತಿಪಕ್ಷಗಳಾದ ಬಿಜೆಪಿ, ಜೆಡಿಎಸ್ ಸದಸ್ಯರು ಧರಣಿ ನಡೆಸಿ, ಪದೇ ಪದೆ ಕಲಾಪಕ್ಕೆ ಅಡ್ಡಿಪಡಿಸಿದ್ದರಿಂದ ವಿಧಾನಸಭೆಯಲ್ಲಿಂದು ಅಕ್ಷರಶಃ ಕೋಲಾಹಲ ಉಂಟಾಯಿತು



ಶಾಸಕರ ಅಧಿಕಾರ ಮೊಟಕು ಆರೋಪ: ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಮೇಲ್ವಿಚಾರಣೆಗೆ ಕಾಂಗ್ರೆಸ್ ಕಾರ್ಯಕರ್ತರನ್ನು ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರನ್ನಾಗಿ ನೇಮಿಸುವ ಮೂಲಕ ಸರ್ಕಾರ ಶಾಸಕರ ಅಧಿಕಾರವನ್ನು ಮೊಟಕುಗೊಳಿಸಿದೆ ಎಂದು ಆರೋಪಿಸಿದ ಪ್ರತಿಪಕ್ಷಗಳು, ಈ ಪಕ್ಷದ ಕಾರ್ಯಕರ್ತರಿಗೆ ಗೌರವಧನ ನೀಡಲು ರಾಜ್ಯದ ಬೊಕ್ಕಸದಿಂದ ಹಣವನ್ನು ಬಳಸಬಾರದು ಎಂದು ಆಕ್ರೋಶ ವ್ಯಕ್ತಪಡಿಸಿದವು. ಈ ಎಲ್ಲ ಸಮಿತಿಗಳನ್ನು ರದ್ದುಪಡಿಸುವಂತೆ ಒತ್ತಾಯಿಸಿ ಪ್ರತಿಪಕ್ಷಗಳು ಸದನದ ಬಾವಿಗಿಳಿದು ಪ್ರತಿಭಟನೆ ನಡೆಸಿದವು. ಪ್ರತಿಪಕ್ಷಗಳ ಬೇಡಿಕೆಯನ್ನು ಸಚಿವ ಸಂಪುಟದಲ್ಲಿ ಪರಿಶೀಲಿಸಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಭರವಸೆ ನೀಡಿದರು.

ದೊಡ್ಡ ಮಟ್ಟದ ವೇತನ: ರಾಜ್ಯ ಮಟ್ಟದ ಸಮಿತಿಯ ಅಧ್ಯಕ್ಷರು ಮತ್ತು ಐವರು ಉಪಾಧ್ಯಕ್ಷರಿಗೆ ರಾಜ್ಯ ಸಚಿವರ ಸೌಲಭ್ಯ, ಜಿಲ್ಲಾ ಮತ್ತು ತಾಲೂಕು ಮಟ್ಟದ ಸಮಿತಿಗಳ ಅಧ್ಯಕ್ಷರಿಗೆ ಕ್ರಮವಾಗಿ ರೂ.40,000 ಮತ್ತು ರೂ.25,000 ಮಾಸಿಕ ಗೌರವಧನ ನೀಡಿರುವುದು ಪ್ರತಿಪಕ್ಷಗಳ ತೀವ್ರ ಟೀಕೆಗೆ ಗುರಿಯಾಯಿತು. ಜಿಲ್ಲಾ ಸಮಿತಿಯ ಉಪಾಧ್ಯಕ್ಷರಿಗೆ ಮಾಸಿಕ 10 ಸಾವಿರ ಗೌರವಧನ ನೀಡಿದರೆ, ಜಿಲ್ಲಾ ಮತ್ತು ತಾಲೂಕು ಮಟ್ಟದ ಸಮಿತಿ ಸದಸ್ಯರಿಗೆ ಕ್ರಮವಾಗಿ 1,100 ಮತ್ತು 1,000 ರೂ. ಗೌರವ ಧನ ನೀಡಲಾಗುತ್ತಿದೆ. ರಾಜ್ಯ ಮಟ್ಟದ ಸಮಿತಿಯಲ್ಲಿ ಅಧ್ಯಕ್ಷರು, ಐವರು ಉಪಾಧ್ಯಕ್ಷರು ಹಾಗೂ 31 ಮಂದಿ ಸದಸ್ಯರಿದ್ದಾರೆ. ಜಿಲ್ಲಾ ಮಟ್ಟದ ಸಮಿತಿಯಲ್ಲಿ ಅಧ್ಯಕ್ಷರು, ಐವರು ಉಪಾಧ್ಯಕ್ಷರು ಮತ್ತು 15 ಸದಸ್ಯರನ್ನು ಹೊಂದಿದ್ದರೆ, ತಾಲೂಕು ಮಟ್ಟದ ಸಮಿತಿಗೆ ಅಧ್ಯಕ್ಷರು, 14 ಮಂದಿ ಸದಸ್ಯರಿದ್ದಾರೆ.

ರಾಜ್ಯದ ಬೊಕ್ಕಸದಿಂದ ಕಾಂಗ್ರೆಸ್ ಕಾರ್ಯಕರ್ತರಿಗೆ ಹಣ: ಪ್ರಶ್ನೋತ್ತರ ಕಲಾಪದಲ್ಲಿ ವಿಷಯ ಪ್ರಸ್ತಾಪಿಸಿದ ಜೆಡಿಎಸ್ ಶಾಸಕ ಎಂ. ಪಿ. ಕೃಷ್ಣಪ್ಪ, ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಸಮಿತಿಗೆ ಸರ್ಕಾರ ಏಕೆ ಕಾಂಗ್ರೆಸ್ ಕಾರ್ಯಕರ್ತರನ್ನು ನೇಮಕ ಮಾಡಿದೆ ಎಂದು ಎಂದು ಪ್ರಶ್ನಿಸಿದರು. ಶಾಸಕರು ಮತ್ತು ಅಧಿಕಾರಿಗಳು ಇಲ್ಲವೇ ರಾಜ್ಯದ ಬೊಕ್ಕಸವನ್ನು ಕಾಂಗ್ರೆಸ್ ಕಾರ್ಯಕರ್ತರಿಗೆ ಈ ರೀತಿ ನೀಡಬಹುದೇ. ಈ ದೇಶದಲ್ಲಿ ವಿವಿಧ ಪಕ್ಷಗಳು ಹಲವಾರು ಕಾರ್ಯಕ್ರಮಗಳನ್ನು ಜಾರಿಗೆ ತಂದಿವೆ. ಆದರೆ ಅದರ ಅನುಷ್ಠಾನಕ್ಕೆ ಎಂದಿಗೂ ಪಕ್ಷದ ಕಾರ್ಯಕರ್ತರನ್ನು ನೇಮಿಸಿಲ್ಲ. ಇದು ತಪ್ಪು. ಇದು ಕಾನೂನುಬಾಹಿರ ಎಂದರು. ಅನೇಕ ಬಿಜೆಪಿ ಮತ್ತು ಜೆಡಿಎಸ್ ಸದಸ್ಯರು ಕೃಷ್ಣಪ್ಪ ಅವರೊಂದಿಗೆ ಸೇರಿಕೊಂಡು ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

ಬಿಜೆಪಿ ಶಾಸಕ ಸುನೀಲ್ ಕುಮಾರ್ ಮಾತನಾಡಿ, ಅಂಗನವಾಡಿ ಮತ್ತು ಆಶಾ ಕಾರ್ಯಕರ್ತರ ಸಂಬಳ ಹೆಚ್ಚಿಸಲು ಹಿಂಜರಿಯುವ ಸರ್ಕಾರ, ಗ್ಯಾರಂಟಿ ಅನುಷ್ಠಾನ ಸಮಿತಿಗೆ ಕಾಂಗ್ರೆಸ್ ಕಾರ್ಯಕರ್ತರನ್ನು ನೇಮಿಸಿ ದೊಡ್ಡ ಸಂಬಳ ನೀಡಲಾಗುತ್ತಿದೆ. ಏನಿದರ ಅರ್ಥ. ಎಲ್ಲಾ ಯೋಜನೆಗಳು ಡಿಬಿಟಿ ಮೂಲಕ ಆನ್‌ಲೈನ್‌ನಲ್ಲಿ ಅನುಷ್ಠಾನಗೊಳ್ಳುತ್ತಿರುವಾಗ ಇಂತಹ ಸಮಿತಿ ಏನು ಮಾಡುತ್ತವೆ ಎಂದು ಪ್ರಶ್ನಿಸಿದರು. ಡಿಕೆ ಶಿವಕುಮಾರ್ ಕಾಂಗ್ರೆಸ್ ಅಧ್ಯಕ್ಷರಾದ ನಂತರ ಸರ್ಕಾರ ಮತ್ತು ಕಾಂಗ್ರೆಸ್ ಪಕ್ಷದ ನಡುವೆ ಯಾವುದೇ ವ್ಯತ್ಯಾಸ ಇಲ್ಲದಂತಾಗಿದೆ. ಸರ್ಕಾರದ ಹಣವನ್ನು ಕಾಂಗ್ರೆಸ್ ತೆಗೆದುಕೊಳ್ಳುತ್ತಿದೆ ಎಂದು ಆರೋಪಿಸಿದರು.

ಕಲಾಪ ಕೆಲಕಾಲ ಮುಂದೂಡಿಕೆ: ಈ ವೇಳೆ ಮಾತನಾಡಿದ ಕಂದಾಯ ಸಚಿವ ಕೃಷ್ಣ ಬೈರೇಗೌಡ, ಈ ವಿಚಾರದಲ್ಲಿ ವಿಪಕ್ಷಗಳು ರಾಜಕೀಯ ಮಾಡುತ್ತಿವೆ ಎಂದು ಆರೋಪಿಸಿದರು. ಇದರಿಂದ ವಿಪಕ್ಷಗಳ ಸದಸ್ಯರು ಕೆರಳಿದ್ದರಿಂದ ಆಡಳಿತ ಹಾಗೂ ವಿಪಕ್ಷ ಸದಸ್ಯರ ನಡುವೆ ವಾಗ್ದಾಳಿ ನಡೆಯಿತು. ಮಧ್ಯ ಪ್ರವೇಶಿಸಿದ ಶಿವಕುಮಾರ್, ಇದು ಸರ್ಕಾರದ ಇಚ್ಛಾಶಕ್ತಿ. ಈ ಸರ್ಕಾರವನ್ನು ಅಧಿಕಾರಕ್ಕೆ ತಂದ ಪಕ್ಷದ ಕಾರ್ಯಕರ್ತರಿಗೆ ಈ ಸರ್ಕಾರದ ಕಾರ್ಯಕ್ರಮಗಳನ್ನು ಜಾರಿಗೊಳಿಸುವ ಹಕ್ಕಿದೆ ಎಂದು ಸಮರ್ಥಿಸಿಕೊಂಡರು. ಗದ್ದಲ ಮುಂದುವರಿದ ಕಾರಣ ಸ್ಪೀಕರ್ ಯುಟಿ ಖಾದರ್ ಸದನವನ್ನು ಕೆಲಕಾಲ ಮುಂದೂಡಿದರು. ಕಲಾಪ ಮತ್ತೆ ಸಮಾವೇಶ ಗೊಂಡಾಗ ಶಾಸಕರು ತಮ್ಮ ತಮ್ಮ ಭಾಗದಲ್ಲಿ ಸರ್ಕಾರದ ಯೋಜನೆಗಳ ಅನುಷ್ಠಾನವನ್ನು ನೋಡಿಕೊಳ್ಳುತ್ತಾರೆ ಮತ್ತು ಶಾಸಕರನ್ನು ಕಡೆಗಣಿಸಿ ಈ ಸಮಿತಿಗಳನ್ನು ರಚಿಸುವುದು ಕಾನೂನುಬಾಹಿರ ಎಂದು ಕೃಷ್ಣಪ್ಪ ಹೇಳಿದರು.

ಶಾಸಕರ ಅಧಿಕಾರ ಮೊಟಕುಗೊಳಿಸುತ್ತಿಲ್ಲ: ಇದೇ ವೇಳೆ, ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಪ್ರತಿಪಕ್ಷಗಳು ಗ್ಯಾರಂಟಿ ಯೋಜನೆಗಳನ್ನು ವಿರೋಧಿಸುತ್ತಿವೆ ಎಂದು ಆರೋಪಿಸಿದ ಶಿವಕುಮಾರ್, ಈ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿರುವವರೆಗೆ ಈ ಯೋಜನೆಗಳನ್ನು ನಿಲ್ಲಿಸುವುದು ಅಸಾಧ್ಯ. 52,000 ಕೋಟಿ ರೂ.ಗಳ ಯೋಜನೆಗಳ ಅನುಷ್ಠಾನದ ಮೇಲುಸ್ತುವಾರಿ ಮಾಡಲು ಕಾಂಗ್ರೆಸ್ ಕಾರ್ಯಕರ್ತರಿಗೆ ಅವಕಾಶ ನೀಡಿರುವುದನ್ನು ಪ್ರತಿಪಕ್ಷಗಳು ಅರಗಿಸಿಕೊಳ್ಳಲು ಸಾಧ್ಯವಾಗುತ್ತಿಲ್ಲ. ಶಾಸಕರ ಯಾವುದೇ ಅಧಿಕಾರವನ್ನು ಮೊಟಕುಗೊಳಿಸುತ್ತಿಲ್ಲ. ಒಂದು ವೇಳೆ ಆ ಸಮಿತಿಗೆ ಶಾಸಕರೇ ಮೇಲ್ವಿಚಾರಣೆ ಮಾಡಬೇಕೇ ಎಂಬುದರ ಕುರಿತು ಕ್ಯಾಬಿನೆಟ್‌ನಲ್ಲಿ ಚರ್ಚಿಸಿ ತಿಳಿಸುತ್ತೇವೆ ಎಂದು ಹೇಳಿದರು.

ಹಣಕಾಸು ಬಿಲ್ ಮಸೂದೆಗೆ ಬಿಡಲ್ಲ: ಸರ್ಕಾರವನ್ನು ತೀವ್ರವಾಗಿ ಖಂಡಿಸಿದ ಅಶೋಕ, ಹಣಕಾಸು ಮಸೂದೆ ಅಂಗೀಕಾರಕ್ಕೆ ಪ್ರತಿಪಕ್ಷಗಳು ಅಡ್ಡಿಪಡಿಸುವುದಾಗಿ ಎಚ್ಚರಿಸಿದರು. ಕಾಂಗ್ರೆಸ್ ಕಾರ್ಯಕರ್ತರ ಸಂತೋಷಕ್ಕಾಗಿ ರಾಜ್ಯದ ಬೊಕ್ಕಸದಿಂದ ಹಣ ಪಾವತಿಸುವುದನ್ನು ನಾವು ಏಕೆ ಅನುಮೋದಿಸಬೇಕು. ಶಾಸಕರು ಚುನಾಯಿತರಾಗಿದ್ದಾರೆ ಮತ್ತು ಅವರ ಅಧಿಕಾರವನ್ನು ಮೊಟಕುಗೊಳಿಸಬಾರದು, ಅವರು ಈ ಸಮಿತಿಗಳನ್ನು ರದ್ದುಗೊಳಿಸಬೇಕು. ಸಮಿತಿಯಲ್ಲಿ ಐದರಿಂದ ಹತ್ತು ಸದಸ್ಯರಿರಬಹುದು, ಆದರೆ ಶಾಸಕರ ನೇತೃತ್ವದಲ್ಲಿರಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು.

ಸದನದ ಬಾವಿಗಿಳಿದು ವಿಪಕ್ಷಗಳ ಪ್ರತಿಭಟನೆ: ಮಹಾರಾಷ್ಟ್ರದಲ್ಲಿ ಬಿಜೆಪಿ ಸಚಿವರಿಗೆ ಆರೆಸ್ಸೆಸ್ ಕಾರ್ಯಕರ್ತರನ್ನು ಆಪ್ತ ಸಹಾಯಕರನ್ನಾಗಿ ನೇಮಿಸಲಾಗುತ್ತಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಪ್ರಸ್ತಾಪಿಸಿದಂತೆ ಕಾಂಗ್ರೆಸ್ ಮತ್ತು ಪ್ರತಿಪಕ್ಷಗಳ ನಡುವೆ ತೀವ್ರ ವಾಗ್ವಾದ ನಡೆಯಿತು. ಇದರ ಬೆನ್ನಲ್ಲೇ ಬಿಜೆಪಿ ಮತ್ತು ಜೆಡಿಎಸ್ ಸದಸ್ಯರು ಸದನದ ಬಾವಿಗೆ ನುಗ್ಗಿ ಪ್ರತಿಭಟನೆ ಆರಂಭಿಸಿದರು.

ಅತಿಕ್ರಮ ಪ್ರವೇಶ ಮಾಡಿ ಜಾಗದ ಮಾಲೀಕರಿಗೆ ಬೆದರಿಕೆ ಆರೋಪ

ಚಾಮುಂಡಿಬೆಟ್ಟ ಗ್ರಾಪಂ ಉಪಾಧ್ಯಕ್ಷ ಸೇರಿ ನಾಲ್ವರ ವಿರುದ್ಧ ಪ್ರಕರಣ ದಾಖಲು

ಮೈಸೂರು,ಮಾ.11(ಆರ್‌ಕೆ)– ಖಾಸಗಿ ಸ್ವತ್ತಿಗೆ ಅತಿಕ್ರಮ ಪ್ರವೇಶ ಮಾಡಿ ಮಾಲೀಕರ ಬೆದರಿಸಿ, ನಿಂದನೆ ಮಾಡಿದ ಆರೋಪದ ಮೇಲೆ ಚಾಮುಂಡಿಬೆಟ್ಟ ಗ್ರಾಮ ಪಂಚಾಯ್ತಿ ಉಪಾಧ್ಯಕ್ಷ ವೈ.ಎಸ್. ರವಿಕುಮಾರ್, ಸಹೋದರ ವೈ.ಎಸ್. ರಮೇಶ್‌ಬಾಬು, ತಾವರೆಕಟ್ಟೆ ನಿವಾಸಿಗಳಾದ ವಿ.ಶ್ರೀನಿವಾಸ ಮತ್ತು ರಘು ಎಂಬುವರ ವಿರುದ್ಧ ಕೆ.ಆರ್.ಠಾಣೆ ಪೊಲೀಸರು ನಿನ್ನೆ (ಮಾ. 10) ಪ್ರಕರಣ ದಾಖಲಿಸಿದ್ದಾರೆ.

ದಿ ಭಾರತೀಯ ನ್ಯಾಯ ಸಂಹಿತೆ 2023ರ ಕಲಂ 126(3), 351(2), 329(3) ಹಾಗೂ 352 ರೀತ್ಯಾ ಪ್ರಕರಣ (0014/2025) ಕೆ.ಆರ್. ಠಾಣೆ ಸಬ್‌ಇನ್‌ಸ್ಪೆಕ್ಟರ್ ಪಿ.ವೈ.ಹರೀಶ್ ಸೋಮವಾರ ನ್ಯಾಯಾಲಯದ ಪಿಸಿಆರ್ ಸಂಖ್ಯೆ 170/2025ರಂತೆ ಎಫ್‌ಐಆರ್ ದಾಖಲಿಸಿದ್ದಾರೆ.

'ಸಾಧ್ವಿ' ದಿನಪತ್ರಿಕೆ ಸಂಪಾದಕರಾದ ಎಂ. ಮಂಜೀತ್ ದೂರುದಾರರಾಗಿದ್ದು, ಅವರ ತಂದೆ ಲೇಟ್ ಸಿ. ಮಹೇಶ್ವರನ್ ಮೈಸೂರು ತಾಲೂಕು, ಕಸಬಾ ಹೋಬಳಿ ಕುರುಬಾರಹಳ್ಳಿ ಸರ್ವೆ ನಂ.91 (ಹಳೇ ನಂ. 04)ರ ಸ್ವತ್ತಿನ ಮಾಲೀಕರಾಗಿದ್ದಾರೆ. ಸದರಿ 1.20 ಎಕರೆ ಸ್ವತ್ತು ಈ ಹಿಂದೆ ಮೈಸೂರು ಮಹಾರಾಜರಾಗಿದ್ದ ಶ್ರೀ ಜಯಚಾಮರಾಜ ಒಡೆಯರ್ ಅವರಿಗೆ ಸೇರಿದ್ದಾಗಿದ್ದು, ಅದರ ಜಿಪಿಎದಾರರಾಗಿದ್ದ ನಾಗರಾಜಪ್ಪ ಎಂಬುವರು 1971ರ ಏಪ್ರಿಲ್ 22ರಂದು ಟಿ.ವಿ. ಅಲಮೇಲು ರಿಜಿಸ್ಟರ್ಡ್ ಸೇಲ್ ಡೀಡ್ ಮೂಲಕ ತೆಗೆದುಕೊಂಡಿದ್ದರು ಎಂದು ಎಫ್‌ಐಆರ್‌ನಲ್ಲಿ ನಮೂದಿಸಲಾಗಿದೆ.

ನಂತರ ಟಿ.ವಿ. ಅಲಮೇಲು ಅವರು ಸ್ವತ್ತನ್ನು 2003ರ ಅಕ್ಟೋಬರ್ 3ರಂದು ಸಿ.ಮಹೇಶ್ವರನ್ ಅವರಿಗೆ ನೋಂದಣಿ ಕ್ರಯದ ಮೂಲಕ ಮಾರಾಟ ಮಾಡಿದ್ದು, ಖಾತಾ ಕಂದಾಯವಾಗಿದೆ. 2024ರ ನವೆಂಬರ್ 26ರಂದು ಸರ್ವೆ ಇಲಾಖೆ ಅಧಿಕಾರಿಗಳು ಅಳತೆ ಮಾಡಿ ಪೋಡಿ ಆದೇಶ ಹಾಗೂ ಹದ್ದುಬಸ್ತು ಮಾಡಿ ಗಡಿ ಗುರುತಿಸಿದ್ದರು ಎಂದು ದೂರಿನಲ್ಲಿ ತಿಳಿಸಲಾಗಿದೆ.

2024ರ ನವೆಂಬರ್ 26ರಂದು ಸದರಿ ಸ್ವತ್ತಿನ ಗಡಿಗೆ ಕಾಂಪೌಂಡ್ ನಿರ್ಮಿಸುತ್ತಿದ್ದಾಗ ತಾವರೆಕಟ್ಟೆ ಗ್ರಾಮದ ರವಿಕುಮಾರ್, ರಮೇಶ್‌ಬಾಬು, ಶ್ರೀನಿವಾಸ, ರಘು ಅವರು ಅತಿಕ್ರಮ ಪ್ರವೇಶ ಮಾಡಿ ತಡೆಯೊಡ್ಡಿ ಅವಾಚ್ಯ ಶಬ್ದಗಳಿಂದ ನಿಂದಿಸಿ, ಪ್ರಾಣ ಬೆದರಿಕೆ ಹಾಕಿದ್ದಾರೆ ಎಂದು ದೂರುದಾರ ಮಂಜೀತ್ ಆರೋಪಿಸಿದ್ದರು. ದೂರಿನನ್ವಯ ಪ್ರಕರಣವನ್ನು ದಾಖಲಿಸಿಕೊಂಡಿರುವ ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

ಎಂ.ಸೋನಿ ಕರೀಗೌಡರ ಕುಟುಂಬದಿಂದ ಕೊಡುಗೆ



ಮೈಸೂರು ಕನ್ನೇಗೌಡ ಕೊಪ್ಪಲಿನ ಶ್ರೀ ಮಾರಮ್ಮ ದೇವಿಯ ಮೂಲ ಮಡೆ, ಕೊಳಗ ಸ್ಥಾನಕ್ಕೆ ನಿವೇಶನ ಹಾಗೂ ಪೂರ್ಣಗೊಂಡ ಕಟ್ಟಡದ ಕೀಯನ್ನು ಶ್ರೀ ಮಾರಮ್ಮ ದೇವಿಯ ಟ್ರಸ್ಟ್ ಅಧ್ಯಕ್ಷ ರಾಮೇಗೌಡ, ಕಾರ್ಯದರ್ಶಿ ಬಸವರಾಜು, ಖಜಾಂಚಿ ಶಿವಕುಮಾರ್, ಈಶ್ವರ್, ಶಿವಣ್ಣ ಅವರಿಗೆ ಕನ್ನೇಗೌಡಕೊಪ್ಪಲಿನ ಎಂ.ಸೋನಿ ಕರೀಗೌಡರ ಮೊಮ್ಮಗ, ಇಂಡಿಯನ್ ಟಿವಿ ಮ್ಯಾನೇಜಿಂಗ್ ಡೈರೆಕ್ಟರ್ ಎಸ್.ವೆಂಕಟೇಶ್‌ಕುಮಾರ್ ಹಸ್ತಾಂತರಿಸಿದರು.

ಮಾತೃಭಾಷೆ ಬಳಸದ ಕನ್ನಡಿಗರು ಬೇರೆ ಭಾಷೆ ಕಲಿಯಲು ಅನರ್ಹರು

'ಮಂದಮತಿಯ ಸಾಮತಿ', 'ಸೀತಾಳೆ ಹೂದಂಡೆ' ಕೃತಿಗಳ ಬಿಡುಗಡೆ ಕಾರ್ಯಕ್ರಮದಲ್ಲಿ ಆಧ್ಯಾತ್ಮ ಚಿಂತಕ ವಿದ್ವಾನ್ ಜಿ.ಎಸ್.ನಟೇಶ್ ಅಭಿಮತ

ಮೈಸೂರು,ಮಾ.11 (ಪಿಎಂ)– ಮಾತೃಭಾಷೆ ಬಳಸದ ಕನ್ನಡಿಗರು ಬೇರೆ ಭಾಷೆ ಕಲಿಯಲು ಅನರ್ಹರು ಎಂದು ಆಧ್ಯಾತ್ಮ ಚಿಂತಕ, ಮಂಕುತಿಮ್ಮನ ಕಗ್ಗದ ಪ್ರವಚನಕಾರ ವಿದ್ವಾನ್ ಜಿ.ಎಸ್.ನಟೇಶ್ ಹೇಳಿದರು.



ಮೈಸೂರಿನ ಕುವೆಂಪು ನಗರದ ಉತ್ತರ ಕನ್ನಡ ಜಿಲ್ಲಾ ಸಾಂಸ್ಕೃತಿಕ ಸಂಘದ ಆವರಣದಲ್ಲಿ 'ಮಂದಮತಿಯ ಸಾಮತಿ' ಮತ್ತು 'ಸೀತಾಳೆ ಹೂದಂಡೆ' ಕೃತಿಗಳನ್ನು ಬಿಡುಗಡೆ ಮಾಡಲಾಯಿತು.

ಮೈಸೂರಿನ ಕುವೆಂಪುನಗರದ ಉತ್ತರ ಕನ್ನಡ ಜಿಲ್ಲಾ ಸಾಂಸ್ಕೃತಿಕ ಸಂಘದ ಆವರಣದಲ್ಲಿ ಭಾರತೀ ಪ್ರಕಾಶನ ವತಿಯಿಂದ ಹಮ್ಮಿಕೊಂಡಿದ್ದ ರವೀಂದ್ರಭಟ್ ದೊಡ್ನಳ್ಳಿ ಅವರ 'ಮಂದಮತಿಯ ಸಾಮತಿ (ಕ್ಲುಪ್ತ ವಿವರಣೆಗಳನ್ನೊಳಗೊಂಡ ಮುಕ್ತಕಗಳ ಸಂಗ್ರಹ)' ಮತ್ತು 'ಸೀತಾಳೆ ಹೂದಂಡೆ (ಕವನ ಸಂಕಲನ)' ಕೃತಿಗಳ ಬಿಡುಗಡೆ ಕಾರ್ಯಕ್ರಮದಲ್ಲಿ 'ಮಂದಮತಿಯ ಸಾಮತಿ' ಕುರಿತು ಅವರು ಮಾತನಾಡಿದರು.

ಕನ್ನಡ ಮಾತನಾಡುವವರ ಸಂಖ್ಯೆ ಇಂದು ಕಡಿಮೆಯಾಗುತ್ತಿದ್ದು, ಹೀಗಾಗಿ ಕನ್ನಡದ ಮೇಲೆ ಅಭಿಮಾನ ಮೂಡಿಸುವ ಕನ್ನಡ ಪ್ರೇಮವನ್ನೂ ಲೇಖಕರು ಈ ಕೃತಿಯಲ್ಲಿ ಮೆರೆದಿದ್ದಾರೆ. ಸಮಾಜದ ವೈರುಧ್ಯ ತಿದ್ದುವ ಪ್ರಯತ್ನ ಕೂಡ ಈ ಕೃತಿಯಲ್ಲಿ ಅಡಕವಾಗಿದೆ. 'ಸಾಮತಿ' ಅಂದರೆ ಲೋಕೋಕ್ತಿ, ಹಿತೋಕ್ತಿಯಾಗಿದ್ದು, ಜೊತೆಗೆ ಅನೇಕ ವಿಚಾರಗಳನ್ನು ಸಂಕ್ಷಿಪ್ತಗೊಳಿಸುವುದೂ ಆಗಿದೆ ಎಂದರು.

ಮಂದಮತಿ ಸಾಮತಿ ಕೃತಿಯಲ್ಲಿ ವಿಶೇಷವಾಗಿ ಯುವ ಜನರಿಗೆ ಅಗತ್ಯವಾದ ಅಂಶಗಳಿವೆ. ಈ ಕೃತಿಯಲ್ಲಿ ಕಗ್ಗದ ನೆರಳು ಸಹ ಇದೆ. ನಾವಿಂದು ಮೌಲ್ಯಗಳು ನಶಿಸುವ ಸಂದರ್ಭದಲ್ಲಿದ್ದು, ಮೌಲ್ಯಗಳನ್ನು ಅರಿಯಲು ಈ ಕೃತಿ ಸಹಕಾರಿಯಾಗಿದೆ. ಇದೊಂದು ಅರ್ಥಗರ್ಭಿತ ಪುಸ್ತಕವಾಗಿದ್ದು, ಇದನ್ನು ವಿಶೇಷವಾಗಿ ಯುವಜನರು ಓದಬೇಕು. 'ಮಂದಮತಿ' ಎಂದರೆ 'ವಿನಯಶಾಲಿ' ಎಂಬುದು ಇಲ್ಲಿಯ ಅರ್ಥವಾಗಿದೆ. ಇಂದಿನ ಶಿಕ್ಷಣದಲ್ಲಿ ಮೌಲ್ಯಗಳನ್ನು ಕಲಿಸುವ ಪದ್ಧತಿ ಬಹುತೇಕ ಇಲ್ಲವಾಗುತ್ತಿದ್ದು, ಇಂತಹ ಸಂದರ್ಭದಲ್ಲಿ ಮೌಲ್ಯಗಳನ್ನು ಪ್ರತಿಬಿಂಬಿಸುವ ಕೃತಿಗಳು ಅಗತ್ಯ. ಅಂತಹ ಅವಶ್ಯಕತೆಗೆ ಈ ಕೃತಿಯೂ ಸೇರಲಿದೆ ಎಂದರು.

ಕೃತಿಗಳ ಕರ್ತೃ ರವೀಂದ್ರಭಟ್ ದೊಡ್ನಳ್ಳಿ ಮಾತನಾಡಿ, 500 ಕವನಗಳು ಗುಚ್ಛವಾಗಿ ಮಂದಮತಿ ಸಾಮತಿ ಹೊರತರಲಾಗಿದೆ. ಈ 500 ಮುಕ್ತಕಗಳಿಗೆ ಅರ್ಥ ವಿವರಣೆ ನೀಡಲಾಗಿದೆ. ಇದರ ಜೊತೆಗೆ ಸೀತಾಳೆ ಹೂದಂಡೆ ಕೃತಿ ಸಹ ಹೊರತಂದಿದ್ದು, ಈ ಎರಡೂ ಕೃತಿಗಳು ಅವಳಿ ಜವಳಿಗಳು ಇದ್ದಂತೆ ಎಂದರು. ಇದಕ್ಕೂ ಮುನ್ನ ಕೃತಿಗಳನ್ನು ಬಿಡುಗಡೆ ಮಾಡಲಾಯಿತು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ವಾಗ್ಮಿಗಳೂ ಆದ ಸಾಹಿತಿ ಪ್ರೊ.ಎಂ.ಕೃಷ್ಣೇಗೌಡ 'ಸೀತಾಳೆ ಹೂದಂಡೆ' ಕುರಿತು ಮಾತನಾಡಿದರು. ಭಾರತೀ ಪ್ರಕಾಶನದ ಬಿ.ಎನ್.ಶ್ರೀನಿವಾಸ್ ಮತ್ತಿತರರು ಹಾಜರಿದ್ದರು.

ದೇಶ - ವಿದೇಶ

X ಮೇಲೆ ಸೈಬರ್ ದಾಳಿ: ಸಂಘಟಿತ ಗುಂಪು–ಒಂದು ರಾಷ್ಟ್ರದ ಕೈವಾಡ

ವಾಷಿಂಗ್ಟನ್: ಜನಪ್ರಿಯ ಸಾಮಾಜಿಕ ಜಾಲತಾಣ 'ಎಕ್ಸ್'ನಲ್ಲಿ ಭಾರಿ ತಾಂತ್ರಿಕ ಸಮಸ್ಯೆಗಳು ಕಂಡುಬಂದಿದ್ದು, ದೊಡ್ಡ ಮಟ್ಟದ ಸೈಬರ್ ದಾಳಿಯಿಂದಾಗಿ ಈ ರೀತಿ ಆಗಿದೆ ಎಂದು ಎಕ್ಸ್ ಮಾಲೀಕ ಎಲಾನ್ ಮಸ್ಕ್ ಹೇಳಿದ್ದಾರೆ.



ಈ ಕುರಿತು ತಮ್ಮ ಅಧಿಕೃತ ಎಕ್ಸ್ ಅಕೌಂಟ್‌ನಲ್ಲಿ ಪೋಸ್ಟ್ ಮಾಡಿರುವ ಅವರು, 'ಎಕ್ಸ್' ಮೇಲೆ ಉದ್ದೇಶಪೂರ್ವಕ ಸೈಬರ್ ದಾಳಿ ನಡೆದಿದ್ದು, ಸಂಘಟಿತ ಗುಂಪು ಅಥವಾ ವಿರೋಧಿ ರಾಷ್ಟ್ರವೇ ಇದರ ಹಿಂದೆ ಇರಬಹುದು ಎಂದು ಸಂಶಯ ವ್ಯಕ್ತಪಡಿಸಿದ್ದಾರೆ. 'X' ವಿರುದ್ಧ ದೊಡ್ಡ ಮಟ್ಟದ ಸೈಬರ್ ದಾಳಿ ನಡೆದಿದೆ. ಪ್ರತಿದಿನ ಇಂತಹ ದಾಳಿಗಳು ಸಾಮಾನ್ಯವಾದರೂ, ಈ ಬಾರಿ ಅತ್ಯಂತ ವ್ಯವಸ್ಥಿತವಾಗಿ ಸೈಬರ್ ದಾಳಿ ನಡೆಸಲಾಗಿದೆ. ಒಂದು ದೊಡ್ಡ ಸಂಘಟಿತ ಗುಂಪು ಅಥವಾ ಯಾವುದೋ ವಿರೋಧಿ ದೇಶ ಈ ಷಡ್ಯಂತ್ರದಲ್ಲಿ ಭಾಗಿಯಾಗಿದೆ. ಈ ಬಗ್ಗೆ ತನಿಖೆ ನಡೆಯುತ್ತಿದ್ದು, ದಾಳಿಯ ಮೂಲವನ್ನು ಪತ್ತೆಹಚ್ಚಲಾಗುತ್ತಿದೆ ಎಂದು ಹೇಳಿದ್ದಾರೆ. ಡೌನ್ ಡಿಟೆಕ್ಟರ್ ಪ್ರಕಾರ ಎಕ್ಸ್ ಸಾಮಾಜಿಕ ಜಾಲತಾಣವು ದಿನವಿಡೀ 3 ಬಾರಿ ಸ್ಥಗಿತಗೊಂಡಿದೆ. ಭಾರತೀಯ ಬಳಕೆದಾರರಿಂದ ಸುಮಾರು 2,200 ದೂರುಗಳು ಕೂಡ ದಾಖಲಾಗಿವೆ.

ಹೊಲದಲ್ಲಿ ವಿಷದ ಇಂಜೆಕ್ಷನ್ ಚುಚ್ಚಿದ ಅಪರಿಚಿತರು; ಬಿಜೆಪಿ ನಾಯಕ ಸಾವು!

ಸಂಭಾಲ್: ಉತ್ತರಪ್ರದೇಶದ ಸಂಭಾಲ್ ಜಿಲ್ಲೆಯ ಬಿಜೆಪಿ ನಾಯಕನೊಬ್ಬನಿಗೆ ಮೂವರು ಅಪರಿಚಿತ ವ್ಯಕ್ತಿಗಳು ವಿಷಕಾರಿ ವಸ್ತುವನ್ನು ಚುಚ್ಚಿದ್ದರಿಂದ ಅವರು ಸಾವಿಗೀಡಾಗಿದ್ದಾರೆ. ವೃತ್ತ ಅಧಿಕಾರಿ (ಗುನ್ನೌರ್) ದೀಪಕ್ ತಿವಾರಿ ಮಾತನಾಡಿ, ಸೋಮವಾರ ಸಂಜೆ ದಫ್ತಾರಾ ಗ್ರಾಮದಲ್ಲಿರುವ ತಮ್ಮ ಜಮೀನಿನಲ್ಲಿ ಗುಲ್ಫಾಮ್ ಸಿಂಗ್ ಯಾದವ್ (60) ಕುಳಿತಿದ್ದಾಗ, ಮೂವರು ವ್ಯಕ್ತಿಗಳು ಮೋಟಾರ್ ಸೈಕಲ್‌ನಲ್ಲಿ ಅಲ್ಲಿಗೆ ಬಂದಿದ್ದಾರೆ. ಬಳಿಕ ವಿಷದ ಇಂಜೆಕ್ಷನ್ ಚುಚ್ಚಿ ಅಲ್ಲಿಂದ ಪರಾರಿಯಾಗಿದ್ದಾರೆ ಎಂದು ತಿಳಿಸಿದ್ದಾರೆ.



ಯಾದವ್ ಅವರನ್ನು ಕೂಡಲೇ ಚಿಕಿತ್ಸೆಗಾಗಿ ಅಲಿಘರ್ ಆಸ್ಪತ್ರೆಗೆ ಕರೆದೊಯ್ಯಲಾಯಿತು. ಆದರೆ, ಮಾರ್ಗಮಧ್ಯೆಯಲ್ಲಿಯೇ ಅವರು ಕೊನೆಯುಸಿರೆಳೆದಿದ್ದಾರೆ. ಸದ್ಯ ಸಂತ್ರಸ್ತರ ಕುಟುಂಬಸ್ಥರಿಂದ ಯಾವುದೇ ಔಪಚಾರಿಕ ದೂರು ದಾಖಲಾಗಿಲ್ಲ. ಪ್ರಕರಣದ ತನಿಖೆಗಾಗಿ ಪೊಲೀಸ್ ತಂಡವನ್ನು ನಿಯೋಜಿಸಲಾಗಿದೆ ಎಂದು ತಿಳಿಸಿದರು.

ಯಾದವ್ ಬಿಜೆಪಿಯೊಂದಿಗೆ ಸಂಬಂಧ ಹೊಂದಿದ್ದಾರೆ. ಅವರು ಬಿಜೆಪಿ ಟಿಕೆಟ್‌ನಲ್ಲಿ ವಿಧಾನಸಭಾ ಉಪಚುನಾವಣೆಯಲ್ಲಿ ಸ್ಪರ್ಧಿಸಿದ್ದರು ಎನ್ನಲಾಗಿದೆ.

ಟ್ರಂಪ್‌ಗೆ ಝೆಲೆನ್ಸ್ಕಿ ಪತ್ರ: ಕ್ಷಮೆಯಾಚನೆ

ವಾಷಿಂಗ್‌ಟನ್: ಓವಲ್ ಕಚೇರಿ ಸಭೆಯ ಸಂದರ್ಭದಲ್ಲಿ ಸಾರ್ವಜನಿಕವಾಗಿ ನಡೆದ ವಾಗ್ವಾದದ ನಂತರ ಉಕ್ರೇನಿಯನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್‌ಗೆ ಪತ್ರ ಬರೆದು ಕ್ಷಮೆಯಾಚಿಸಿದ್ದಾರೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ವಿಶೇಷ ರಾಯಭಾರಿ ಸ್ಟೀವ್ ವಿಟ್ಕಾಫ್ ಹೇಳಿದ್ದಾರೆ ಎಂದು ದಿ ಹಿಲ್ ವರದಿ ಮಾಡಿದೆ. ರಷ್ಯಾದೊಂದಿಗಿನ ಸಂಘರ್ಷವನ್ನು ಕೊನೆಗೊಳಿಸಲು ಶಾಂತಿ ಮಾತುಕತೆಗಳನ್ನು ಕೈಗೊಳ್ಳಲು ಯುಎಸ್, ಉಕ್ರೇನಿಯನ್ ಅಧಿಕಾರಿಗಳು ಈ ವಾರ ಸೌದಿ ಅರೇಬಿಯಾದಲ್ಲಿ ಭೇಟಿಯಾಗಲಿದ್ದಾರೆ. ಉದ್ರಿಕ್ತ ಸಭೆಗೆ ಕ್ಷಮೆಯಾಚಿಸಲು ಝೆಲೆನ್ಸ್ಕಿ ಪತ್ರವನ್ನು ಕಳುಹಿಸುವ ಕ್ರಮವನ್ನು "ಪ್ರಗತಿ"ಯ ಸಂಕೇತ ಎಂದು ವಿಟ್ಕಾಫ್ ಹೇಳಿದ್ದಾರೆ. ಝೆಲೆನ್ಸ್ಕಿ ಮತ್ತು ಟ್ರಂಪ್ ನಡುವಿನ ಉದ್ವಿಗ್ನ ಸಭೆಯ ಸ್ವಲ್ಪ ಸಮಯದ ನಂತರ ಪ್ರತಿಕ್ರಿಯೆ ನೀಡಿದ್ದ ಉಕ್ರೇನಿಯನ್ ನಾಯಕ ಇದನ್ನು "ವಿಷಾದನೀಯ" ಸಭೆ ಎಂದು ಕರೆದರು ಆದರೆ ಕ್ಷಮೆಯಾಚಿಸಲು ನಿರಾಕರಿಸಿದ್ದರು. ಈ ನಡುವೆ ಸೋಮವಾರ ದೈನಂದಿನ ರಂಜಾನ್ ಉಪವಾಸ ಮುಗಿದ ನಂತರ ಝೆಲೆನ್ಸ್ಕಿ ಕ್ರೌನ್ ಪ್ರಿನ್ಸ್ ಮೊಹಮ್ಮದ್ ಬಿನ್ ಸಲ್ಮಾನ್ ಅವರನ್ನು ಭೇಟಿ ಮಾಡಿ ಸಂಕ್ಷಿಪ್ತ ಮಾತುಕತೆ ನಡೆಸಿದ್ದಾರೆ.



5 ವರ್ಷದ ಬಾಲಕಿ ಕುತ್ತಿಗೆ ಸೀಳಿ, ದೇವಾಲಯಕ್ಕೆ ರಕ್ತತರ್ಪಣ!

ಗುಜರಾತ್: ವ್ಯಕ್ತಿಯೊಬ್ಬ ಐದು ವರ್ಷದ ಬಾಲಕಿಯ ಕುತ್ತಿಗೆ ಸೀಳಿಗೆ ದೇವಾಲಯದ ಮೆಟ್ಟಿಲುಗಳಿಗೆ ರಕ್ತತರ್ಪಣ ಮಾಡಿರುವ ಭೀಬತ್ಸ ಘಟನೆ ಗುಜರಾತಿನ ಛೋಟೌದೇಪುರ ಜಿಲ್ಲೆಯಲ್ಲಿ ನಡೆದಿದೆ. ಇದು ನರಬಲಿ ಪ್ರಕರಣವಾಗಿರಬಹುದು ಎಂದು ಪೊಲೀಸರು ಶಂಕಿಸಿದ್ದಾರೆ. ಪಣೆಜ್ ಗ್ರಾಮದ ಮನೆಯಿಂದ ತಾಯಿಯ ಸಮ್ಮುಖದಲ್ಲಿಯೇ ಬಾಲಕಿಯನ್ನು ಆರೋಪಿ ಲಾಲಾ ತಾಡ್ವಿ ಅಪಹರಿಸಿದ್ದಾನೆ. ನಂತರ ಬಾಲಕಿಯನ್ನು ತನ್ನ ಮನೆಗೆ ಕರೆದೊಯ್ದು ಕೊಡಲಿಯಿಂದ ಆಕೆಯ ಕುತ್ತಿಗೆ ಸೀಳಿ ಹತ್ಯೆ ಮಾಡಿದ್ದಾನೆ. ಬಳಿಕ ಕೋಡಿಯಂತೆ ಹರಿಯುತ್ತಿದ್ದ ರಕ್ತವನ್ನು ಸಂಗ್ರಹಿಸಿದ್ದು, ತನ್ನ ಮನೆ ಸಮೀಪದ ಚಿಕ್ಕ ದೇವಾಲಯದ ಮೆಟ್ಟಿಲುಗಳಿಗೆ ತರ್ಪಣ ಮಾಡಿದ್ದಾನೆ. ಬಾಲಕಿಯ ತಾಯಿ ಮತ್ತು ಗ್ರಾಮದ ಇತರರು ಈ ಭೀಬತ್ಸ ಕೃತ್ಯವನ್ನು ನೋಡಿ ಶಾಕ್ ಆಗಿದ್ದಾರೆ. ಆದರೆ, ಆರೋಪಿ ಬಳಿ ಕೊಡಲಿ ಇದ್ದುದ್ದರಿಂದ ಏನೂ ಮಾಡದೇ ಮೂಕಪ್ರೇಕ್ಷಕರಾಗಿದ್ದಾರೆ ಎಂದು ಎಎಸ್‌ಪಿ ಗೌರವ್ ಅಗರ್‌ವಾಲ್ ತಿಳಿಸಿದ್ದಾರೆ. ಬಾಲಕಿಯ ಕುಟುಂಬದ ದೂರಿನ ಮೇರೆಗೆ ಭಾರತೀಯ ನ್ಯಾಯ ಸಂಹಿತೆಯ ಅಡಿಯಲ್ಲಿ ಕೊಲೆ ಮತ್ತು ಅಪಹರಣದ ಸೆಕ್ಷನ್‌ಗಳ ಅಡಿಯಲ್ಲಿ ಆರೋಪಿ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ ಎಂದು ಅಗರವಾಲ್ ಮಾಹಿತಿ ನೀಡಿದ್ದಾರೆ.

ನಿರುದ್ಯೋಗ, ಹಣದ ಸಮಸ್ಯೆ: ಒಂದೇ ಕುಟುಂಬದ ನಾಲ್ವರು ನೇಣಿಗೆ ಶರಣು

ಹೈದರಾಬಾದ್: ತೆಲಂಗಾಣದಲ್ಲಿ ನಿರುದ್ಯೋಗ ಹಾಗೂ ಅನಾರೋಗ್ಯದಿಂದ ಬಳಲುತ್ತಿದ್ದ ದಂಪತಿ ತಮ್ಮ ಇಬ್ಬರು ಮಕ್ಕಳನ್ನು ಕೊಂದು ತಾವು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಇಲ್ಲಿನ ಹಬ್ಸಿನಗಢದಲ್ಲಿ ನಡೆದಿದೆ. ಮೃತರನ್ನು ಚಂದ್ರಶೇಖರ್ ರೆಡ್ಡಿ (44), ಅವರ ಪತ್ನಿ ಕವಿತಾ (35), ಮಕ್ಕಳಾದ ವಿಶ್ವನ್ ರೆಡ್ಡಿ (11), ಶ್ರೀಷಾ ರೆಡ್ಡಿ (15) ಎಂದು ಗುರುತಿಸಲಾಗಿದೆ. ದಂಪತಿ ಮೃತದೇಹಗಳು ಪ್ರತ್ಯೇಕ ಕೋಣೆಗಳಲ್ಲಿ ಪತ್ತೆಯಾದರೆ, ಮಕ್ಕಳ ಮೃತದೇಹಗಳು ಮಲಗುವ ಕೋಣೆಯಲ್ಲಿ ಪತ್ತೆಯಾಗಿವೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ. ದಯವಿಟ್ಟು ನನ್ನ ಕ್ಷಮಿಸಿ ಬಿಡಿ, ನನ್ನ ಜೀವನವನ್ನು ಕೊನೆಗೊಳಿಸುವುದನ್ನು ಬಿಟ್ಟರೆ, ನನಗೆ ಬೇರೆ ಆಯ್ಕೆಗಳು ಇರಲಿಲ್ಲ. ವೃತ್ತಿ ಜೀವನದಲ್ಲಿ ಸಾಕಷ್ಟು ಹೋರಾಟ ನಡೆಸಿದ್ದೇನೆ. ಆದರೆ ಸರಿಯಾಗಿ ಉದ್ಯೋಗ ದೊರಕಲಿಲ್ಲ. ಇದರಿಂದ ನಾನು ಮಾನಸಿಕವಾಗಿ ಕುಗ್ಗಿ ಹೋಗಿದ್ದೆ. ಇದರ ನಡುವೆ ಮಧುಮೇಹ, ನರ ಮತ್ತು ಕಿಡ್ನಿ ಸಂಬಂಧಿತ ಸಮಸ್ಯೆಗಳಿಂದ ಬಳಲುತ್ತಿದ್ದೆ. ಆಗಾಗಿ ನಾನು ಈ ನಿರ್ಧಾರಕ್ಕೆ ಬಂದೆ, ದಯಮಾಡಿ ನನ್ನ ಕ್ಷಮಿಸಿ ಎಂದು ಚಂದ್ರಶೇಖರ್ ರೆಡ್ಡಿ ಬರೆದಿರುವ ಮರಣ ಪತ್ರ ಪೊಲೀಸರಿಗೆ ದೊರೆತಿದೆ. ಈ ಸಂಬಂಧ ತೆಲಂಗಾಣ ಪೊಲೀಸರು ತನಿಖೆ ನಡೆಸುತ್ತಿದ್ದಾರೆ.



ಮಡಿಕೇರಿ ನಗರಸಭೆಯಲ್ಲಿ 1.33 ಕೋಟಿ ಉಳಿತಾಯ ಬಜೆಟ್ ಮಂಡನೆ

ಆಸ್ತಿ ತೆರಿಗೆ, ಅಂಗಡಿ ಮಳಿಗೆಗಳ ಹರಾಜು, ಮಾರುಕಟ್ಟೆ ಹರಾಜು, ವಿವಿಧ ನಿಧಿಗಳ ನೆರವನ್ನು ಉಲ್ಲೇಖಿಸಿ, 23.48 ಕೋಟಿ ರೂ. ಸಂಗ್ರಹ ನಿರೀಕ್ಷೆ

ಮಡಿಕೇರಿ,ಮಾ.11: ಮಡಿಕೇರಿ ನಗರಸಭೆ 2025–26ನೇ ಸಾಲಿನಲ್ಲಿ ಒಟ್ಟು 1.33 ಕೋಟಿ ರೂ. ಉಳಿತಾಯ ಬಜೆಟ್ ಮಂಡಿಸಿದೆ.

ನಗರಸಭೆ ಆಡಳಿತಾಧಿಕಾರಿ ಹಾಗೂ ಜಿಲ್ಲಾಧಿಕಾರಿ ವೆಂಕಟ್‌ರಾಜ ಅಧ್ಯಕ್ಷತೆಯಲ್ಲಿ ನಡೆಸಲಾದ ಸಭೆಯಲ್ಲಿ ಪೌರಾಯುಕ್ತ ರಮೇಶ್ ಅವರು ಬಜೆಟ್ ಮಂಡಿಸಿದರು. ಆಸ್ತಿ ತೆರಿಗೆ, ನಗರಸಭಾ ಅಂಗಡಿ ಮಳಿಗೆಗಳ ಬಾಡಿಗೆ, ಮಾರುಕಟ್ಟೆ ಹರಾಜು, ಸರಕಾರದ ವಿವಿಧ ನಿಧಿಗಳ ನೆರವು ಸೇರಿದಂತೆ ವಿವಿಧ ಆದಾಯ ಮೂಲಗಳನ್ನು ಉಲ್ಲೇಖಿಸಿ ಒಟ್ಟು 23 ಕೋಟಿ 48 ಲಕ್ಷ ರೂ.ಗಳ ಬಜೆಟ್ ಮಂಡಿಸಿದರು. ಈ ಪೈಕಿ ನಗರದ ವಿವಿಧೆಡೆಯ ಅಭಿವೃದ್ಧಿ ಕಾಮಗಾರಿಗಳು, ಮಾರುಕಟ್ಟೆ ಅಭಿವೃದ್ಧಿ, ಕಟ್ಟಡಗಳ, ಚರಂಡಿ, ಪೌರಕಾರ್ಮಿಕರ ವಸತಿ ಗೃಹ ನಿರ್ಮಾಣ, ಕಚೇರಿ ನಿರ್ವಹಣೆ, ಹೊರಗುತ್ತಿಗೆ ಸಿಬ್ಬಂದಿಗಳ ವೇತನ, ವಾಹನಗಳ ಇಂಧನ ದರ ಪಾವತಿ ಸೇರಿದಂತೆ ವಿವಿಧ ವೆಚ್ಚಗಳನ್ನು ಮಂಡಿಸಿ 1 ಕೋಟಿ 33 ಲಕ್ಷದ 88 ಸಾವಿರದ 282 ರೂ.ಗಳ ಉಳಿತಾಯ ಬಜೆಟ್ ಅನ್ನು ಘೋಷಿಸಲಾಯಿತು.

ಚರ್ಚೆಗೆ ಅವಕಾಶ: ಬಜೆಟ್ ಕುರಿತು ಪ್ರತಿಕ್ರಿಯಿಸಿದ ಹಿರಿಯ ಸದಸ್ಯ ಕೆ.ಎಸ್.ರಮೇಶ್ ನಗರಸಭೆಯಿಂದ ಉಳಿತಾಯದ ಬಜೆಟ್ ಮಂಡಿಸಿರುವುದನ್ನು ಸ್ವಾಗತಿಸುವುದಾಗಿ ಹೇಳಿದರಲ್ಲದೇ, ಬಜೆಟ್ ಮೇಲಿನ ಚರ್ಚೆ ನಡೆಸಲು ಕನಿಷ್ಠ 15 ದಿನಗಳ ಕಾಲಾವಕಾಶ ನೀಡಬೇಕು ಎಂದು ರಮೇಶ್ ಇದೇ ಸಂದರ್ಭ ಆಡಳಿತಾಧಿಕಾರಿಗಳ ಬಳಿ ಮನವಿ ಮಾಡಿದರು. ಇದಕ್ಕೆ ಇತರ ಸದಸ್ಯರು ಕೂಡ ಧ್ವನಿಗೂಡಿಸಿದರು. ಮಾರ್ಚ್ 29ರ ಒಳಗೆ ಬಜೆಟ್ ಕುರಿತು ಚರ್ಚಿಸಲು ಸಭೆಯ ದಿನಾಂಕ ನಿಗದಿ ಮಾಡಲಾಗುತ್ತದೆ. ಈ ವೇಳೆ ಯಾವುದೇ ರೀತಿಯ ಮಾಹಿತಿ ಬೇಕಿದ್ದಲ್ಲಿ ಲಿಖಿತ ರೂಪದಲ್ಲಿ ಸಲ್ಲಿಸುವಂತೆ ಜಿಲ್ಲಾಧಿಕಾರಿ ವೆಂಕಟ್‌ರಾಜ ಸಭೆಗೆ ತಿಳಿಸಿದರು. ಸದಸ್ಯ ಮನ್ಸೂರ್ ಮಾತನಾಡಿ, ಬಜೆಟ್ ಉಪಯೋಗ ಆದು ನೋಡಬೇಕಿದೆ. ಮಡಿಕೇರಿ ಗುಡ್ಡಗಾಡು ಪ್ರದೇಶವಾದ ಕಾರಣ ತಡೆಗೋಡೆ, ಚರಂಡಿಗಳಿಗೆ ಹೆಚ್ಚಿನ ಅನುದಾನ ನೀಡಬೇಕು ಎಂದು ಹೇಳಿದರು. ಮಾಜಿ ಅಧ್ಯಕ್ಷೆ ಅನಿತಾ ಪೂವಯ್ಯ ಮಾತನಾಡಿ, ನಗರದ ಸರ್ವತೋಮುಖ ಅಭಿವೃದ್ಧಿಗೆ ಹೆಚ್ಚಿನ ಅನುದಾನ ಇಡಬೇಕು ಎಂದು ಹೇಳಿದರು.



ಹೊರೆಯಾಗದಂತೆ ತೆರಿಗೆ ವಿಧಿಸಿ: ಆಸ್ತಿ ತೆರಿಗೆ ಹೆಚ್ಚಳ ಮಾಡುವ ಕುರಿತು ಸರಕಾರ ಸುತ್ತೋಲೆ ಹೊರಡಿಸಿದೆ. ಈ ಸುತ್ತೋಲೆ ಪ್ರಕಾರ ಕನಿಷ್ಠ ಶೇ.3ರಿಂದ ಗರಿಷ್ಟ ಶೇ.5 ರಷ್ಟು ತೆರಿಗೆ ವಿಧಿಸಲು ಅವಕಾಶವಿದೆ ಎಂದು ನಗರಸಭಾ ಅಧಿಕಾರಿ ತಾಹೀರ್ ಸಭೆಯ ಗಮನಕ್ಕೆ ತಂದರು. ಇದಕ್ಕೆ ಪ್ರತಿಕ್ರಿಯಿಸಿದ ಸದಸ್ಯ ಅರುಣ್ ಶೆಟ್ಟಿ ಮತ್ತು ಇತರರು, ಈಗಾಗಲೇ ಆಸ್ತಿ ತೆರಿಗೆ ಹೆಚ್ಚಳವಾಗಿದ್ದು, ಅಗತ್ಯ ವಸ್ತುಗಳ ಬೆಲೆಗಳು ಕೂಡ ಏರಿಕೆಯಾಗಿದೆ. ಈ ಹಿನ್ನೆಲೆಯಲ್ಲಿ ಜನಸಾಮಾನ್ಯರಿಗೆ ಹೊರೆಯಾಗದಂತೆ ಕನಿಷ್ಟ ಶೇ.3ರಷ್ಟು ತೆರಿಗೆ ವಿಧಿಸಲು ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು. ಕನಿಷ್ಠ ತೆರಿಗೆ ವಿಧಿಸಲು ಸಭೆಯಲ್ಲಿ ಸರ್ವ ಮತದ ಅನುಮೋದನೆ ಪಡೆಯಲಾಯಿತು.

ಹಂತ ಹಂತವಾಗಿ ಜಾರಿ ಮಾಡಿ: ಮಡಿಕೇರಿ ನಗರದಲ್ಲಿ 1 ಲೀಟರ್ ನೀರಿನ ಪ್ಲಾಸ್ಟಿಕ್ ಬಾಟಲಿ ನಿಷೇಧದ ಕುರಿತು ಮಾತನಾಡಿದ ಸದಸ್ಯರ ಕೆ.ಎಸ್.ರಮೇಶ್, ನೀರಿನ ಬಾಟಲಿ ನಿಷೇಧ ಕ್ರಮ ಸ್ವಾಗತಾರ್ಹ. ಆದರೆ ನೀರಿನ ಬಾಟಲಿಗಳ ಜೊತೆಯಲ್ಲೇ ಜ್ಯೂಸ್ ಬಾಟಲಿಗಳು ಕೂಡ ತುಂಬಿ ಹೋಗಿವೆ. ಅವುಗಳ ಮೇಲೂ ನಿಷೇಧ ಹೇರಬೇಕಾಗುತ್ತದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು. ಈ ಕುರಿತು ಮೊದಲು ಜನ ಜಾಗೃತಿ ಮೂಡಿಸಬೇಕು ಎಂದು ಸಲಹೆ ನೀಡಿದರು. ಪ್ಲಾಸ್ಟಿಕ್ ಬಾಟಲಿಗಳ ಜೊತೆಯಲ್ಲಿಯೇ ಜ್ಯೂಸ್, ಪ್ಲಾಸ್ಟಿಕ್ ಪ್ಯಾಕೇಟ್‌ಗಳ ಚಿಪ್ಸ್‌ಗಳು ಕೂಡ ಮಾರುಕಟ್ಟೆಯಲ್ಲಿವೇ. ಇವುಗಳನ್ನು ಹಂತ ಹಂತವಾಗಿ ನಿಷೇಧಿಸಲು ಕೂಡ ಕ್ರಮ ಕೈಗೊಳ್ಳಬೇಕು. ಈಗಾಗಲೇ ಸಂಗ್ರಹ ಮಾಡಿರುವ ನೀರಿನ ಬಾಟಲಿಗಳ ಮಾರಾಟಕ್ಕೆ ಅವಕಾಶ ನೀಡಬೇಕು. ನಿಷೇಧಕ್ಕೆ ಒಂದು ಕಾಲಮಿತಿಯನ್ನು ಅಳವಡಿಸುವಂತಾಗಬೇಕು ಎಂದು ಸಲಹೆ ನೀಡಿದರು.

ಪ್ರತಿಮೆ ನಿರ್ಮಾಣಕ್ಕೆ ಅನುಮೋದನೆ: ನಗರದ ಸುದರ್ಶನ ವೃತ್ತದ ಬಳಿ ಸಂವಿಧಾನ ಶಿಲ್ಪಿ ಡಾ. ಅಂಬೇಡ್ಕರ್ ಅವರ ಪ್ರತಿಮೆ ನಿರ್ಮಿಸಲು ಸ್ಥಳಾವಕಾಶವಿದೆ. ಅಲ್ಲಿಯೇ ಪ್ರತಿಮೆ ನಿರ್ಮಾಣಕ್ಕೆ ನಗರ ಸಭೆ ಅನುಮತಿ ನೀಡುವಂತೆ ಸದಸ್ಯ ಸತೀಶ್ ಸಭೆಯ ಗಮನ ಸೆಳೆದರು. ಇದಕ್ಕೆ ಪ್ರತಿಕ್ರಿಯಿಸಿದ ಸದಸ್ಯ ಬಷೀರ್, ಸುದರ್ಶನ ವೃತ್ತ ಬಳಿ ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳು ಹಾದು ಹೋಗಿವೆ. ಭವಿಷ್ಯದ ದಿನಗಳಲ್ಲಿ ಈ ರಸ್ತೆಗಳು ವಿಸ್ತರಣೆಯಾಗುತ್ತವೆ. ಆ ಸಂದರ್ಭ ಪ್ರತಿಮೆಯನ್ನು ತೆರವು ಮಾಡಬೇಕಾಗುತ್ತದೆ ಈ ಹಿನ್ನೆಲೆಯಲ್ಲಿ ಈಗಿರುವ ನೂತನ ಖಾಸಗಿ ಬಸ್ ನಿಲ್ದಾಣದ ಪಾರ್ಕ್ ಸ್ಥಳ ಅಥವಾ ಹಳೇ ಖಾಸಗಿ ಬಸ್ ನಿಲ್ದಾಣದ ಮೇಲ್ಭಾಗ ಅಂಬೇಡ್ಕರ್ ಅವರ ಪ್ರತಿಮೆ ನಿರ್ಮಿಸುವುದು ಸೂಕ್ತ ಎಂದು ಹೇಳಿದರು.

ಇದಕ್ಕೆ ಸಭೆಯಲ್ಲಿ ಪರ ವಿರೋಧ ಅಭಿಪ್ರಾಯಗಳು ವ್ಯಕ್ತವಾಯಿತು. ಈ ಸಂದರ್ಭ ಮಧ್ಯ ಪ್ರವೇಶಿಸಿದ ಆಡಳಿತಾಧಿಕಾರಿ ಹಾಗೂ ಜಿಲ್ಲಾಧಿಕಾರಿ ವೆಂಕಟ್‌ರಾಜ ಅವರು, ಸದಸ್ಯರ ಒಪ್ಪಿಗೆಯನ್ನು ಬಹುಮತಕ್ಕೆ ಒಳಪಡಿಸಿದರು. ಬಹುತೇಕ ಎಲ್ಲ ಸದಸ್ಯರು ಕೈ ಎತ್ತುವ ಮೂಲಕ ಸುದರ್ಶನ ವೃತ್ತ ಬಳಿ ಇರುವ ನಗರಸಭೆ ಪಾರ್ಕ್‌ನಲ್ಲಿಯೇ ಸಂವಿಧಾನ ಶಿಲ್ಪಿ ಡಾ.ಅಂಬೇಡ್ಕರ್ ಅವರ ಪ್ರತಿಮೆ ನಿರ್ಮಿಸಲು ಒಪ್ಪಿಗೆ ಸೂಚಿಸಿದರು.

ಇನ್ನುಳಿದಂತೆ ಕುಡಿಯುವ ನೀರಿನ ಸಮಸ್ಯೆ, ಬೀದಿನಾಯಿಗಳ ಹಾವಳಿ, ಕೆರೆಗಳು ಮತ್ತು ನಗರದ ಪಾರ್ಕ್‌ಗಳ ಅಭಿವೃದ್ಧಿ, ಕಸ ಸಹಿತ ಘನ ತ್ಯಾಜ್ಯ ವಿಲೇವಾರಿ, ಗಾಂಧಿ ಮೈದಾನದಲ್ಲಿ ನೂತನ ರಂಗ ಮಂದಿರ ನಿರ್ಮಾಣ, ಪಾರ್ಕಿಂಗ್ ಸಮಸ್ಯೆ ಸೇರಿದಂತೆ ಮತ್ತಿತ್ತರ ವಿಚಾರಗಳ ಕುರಿತು ಚರ್ಚೆ ನಡೆಯಿತು.

ಕೊಡಗಿಗೆ ಮಲತಾಯಿ ಧೋರಣೆ ಖಂಡಿಸಿ ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಪ್ರತಿಭಟನೆ



ಕುಶಾಲನಗರ: ರಾಜ್ಯ ಕಾಂಗ್ರೆಸ್ ಸರ್ಕಾರ ಕೊಡಗಿನ ಬಗ್ಗೆ ಮಲತಾಯಿ ಧೋರಣೆ ಅನುಸರಿಸುತ್ತಿದೆ ಎಂದು ಆರೋಪಿಸಿ ಮಂಗಳವಾರ ಸೋಮವಾರ ಪೇಟೆ ತಾಲೂಕು ಮಂಡಲ ಬಿಜೆಪಿ ವತಿಯಿಂದ ಪಟ್ಟಣದಲ್ಲಿ ಪ್ರತಿಭಟನೆ ನಡೆಸಲಾಯಿತು.

ಇಲ್ಲಿನ ಫೀಲ್ಡ್ ಮಾರ್ಷಲ್ ಕಾರ್ಯಪ್ಪ ವೃತ್ತದಲ್ಲಿ ಜಮಾವಣೆಗೊಂಡ ಬಿಜೆಪಿ ಕಾರ್ಯಕರ್ತರು ಕೊಡಗು ವಿವಿ ರದ್ದುಪಡಿಸಲು ಹೊರಟಿರುವ ಸರ್ಕಾರದ ಕ್ರಮವನ್ನು ತೀವ್ರವಾಗಿ ಖಂಡಿಸಿದರು. ರಾಜ್ಯ ಸರ್ಕಾರ ಹಾಗೂ ಕೊಡಗಿನ ಶಾಸಕರ ವಿರುದ್ಧ ಧಿಕ್ಕಾರ ಕೂಗಿದರು. ಕೆಲಕಾಲ ಮಾನವ ಸರಪಳಿ ನಡೆಸಿ ರಸ್ತೆ ತಡೆ ಮಾಡಿದರು. ಇದರಿಂದ ವಾಹನ ಸಂಚಾರಕ್ಕೆ ತೊಂದರೆ ಉಂಟಾಯಿತು.

ಮಾಜಿ ಶಾಸಕ ಅಪ್ಪಚ್ಚುರಂಜನ್ ಮಾತನಾಡಿ, ಬಿಜೆಪಿ ಸರ್ಕಾರದ ಅವಧಿಯಲ್ಲಿ ಕೊಡಗಿಗೆ ನೀಡಿದ ಪ್ರತ್ಯೇಕ ವಿಶ್ವವಿದ್ಯಾಲಯವನ್ನು ಅನುದಾನದ ಕೊರತೆಯ ನೆಪವೊಡ್ಡಿ ಕಾಂಗ್ರೆಸ್ ಸರ್ಕಾರ ರದ್ದುಪಡಿಸಲು ಮುಂದಾಗಿರುವ ಕ್ರಮ ಖಂಡನೀಯ ಎಂದರು.

ಈ ಸಂದರ್ಭ ಪ್ರತಿಭಟನೆಯಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ನಾಪಂಡ ರವಿ ಕಾಳಪ್ಪ, ಭಾರತೀಯ ಜನತಾ ಪಕ್ಷದ ಮಾಜಿ ಅಧ್ಯಕ್ಷ ಬಿ.ಬಿ. ಭಾರತೀಶ್, ರಾಬಿನ್ ದೇವಯ್ಯ, ಸೋಮವಾರಪೇಟೆ ಮಂಡಲ ಅಧ್ಯಕ್ಷ ಗೌತಮ್, ವಿರಾಜಪೇಟೆ ಮಂಡಲ ಅಧ್ಯಕ್ಷ ಸುವಿನ್ ಗಣಪತಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ವಿ.ಕೆ. ಲೋಕೇಶ್, ಜಿಲ್ಲಾ ಉಪಾಧ್ಯಕ್ಷ ಆರ್.ಕೆ.ಚಂದ್ರು, ಮಾದಪ್ಪ, ಜಿಲ್ಲಾ ಯುವ ಮೋರ್ಚಾ ಅಧ್ಯಕ್ಷ ಮಹೇಶ್ ತಿಮ್ಮಯ್ಯ, ಪ್ರಧಾನ ಕಾರ್ಯದರ್ಶಿ ರಕ್ಷಿತ್ ಮಾವಾಜಿ, ಮಂಡಲ ಯುವ ಮೋರ್ಚಾ ಅಧ್ಯಕ್ಷ ಮೋಹಿತ್, ಮಂಡಲ ಉಪಾಧ್ಯಕ್ಷ ಕಿಟ್ಟಿ, ಮಹಿಳಾ ಮೋರ್ಚಾ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪುಷ್ಪ ನಾಗೇಶ್, ಕುಶಾಲನಗರ ನಗರ ಘಟಕದ ಅಧ್ಯಕ್ಷ ಚರಣ್, ನಗರ ಪ್ರಧಾನ ಕಾರ್ಯದರ್ಶಿ ಮಧುಸೂದನ್, ರಾಮನಾಥನ್, ಕಾರ್ಯದರ್ಶಿ ಸಚಿನ್, ಆದರ್ಶ, ಗುಡ್ಡೆ ಹೊಸೂರು ಗ್ರಾಪಂ ಅಧ್ಯಕ್ಷ ಪ್ರವೀಣ್ ಕುಶಾಲಪ್ಪ, ಕೂಡುಮಂಗಳೂರು ಅಧ್ಯಕ್ಷ ಭಾಸ್ಕರ್ ನಾಯಕ್, ಜೈವರ್ಧನ್, ಅಮೃತ್‌ರಾಜ್, ಡಿ.ಕೆ.ತಿಮ್ಮಪ್ಪ ಚಂದ್ರಶೇಖರ್ ಹೇರೂರು, ನವನೀತ್, ಪ್ರಭಾಕರ್, ದಿನೇಶ್, ಮಣಿಕಂಠ ಅವಿನಾಶ್, ಸಂತೋಷ್, ಇಂದಿರಾ ರಮೇಶ್, ನಿತ್ಯಾನಂದ ಸೇರಿದಂತೆ ಜನಪ್ರತಿನಿಧಿಗಳು, ವಿವಿಧ ಘಟಕಗಳ ಪ್ರಮುಖರು, ಕಾರ್ಯಕರ್ತರು ಪಾಲ್ಗೊಂಡಿದ್ದರು.

ಕೊಡವ ಲ್ಯಾಂಡ್ ಭೂ ರಾಜಕೀಯ ಸ್ವಾಯತ್ತತೆಗೆ ಸಿಎನ್‌ಸಿ ಆಗ್ರಹ

ಆಯೋಗ ರಚನೆ ಸಂಬಂಧ ಹೈಕೋರ್ಟ್‌ನಲ್ಲಿ ವಿಚಾರಣೆ

ಜೂ.9ಕ್ಕೆ ವಿಚಾರಣೆ ಮುಂದೂಡಿದ ನ್ಯಾಯಾಲಯ

ಮಡಿಕೇರಿ,ಮಾ.11– ಕೊಡವ ಲ್ಯಾಂಡ್ ಭೂ ರಾಜಕೀಯ ಸ್ವಾಯತ್ತತೆ ಬೇಕೆಂದು ಒತ್ತಾಯಿಸುತ್ತಿರುವ ಕೊಡವ ನ್ಯಾಷನಲ್ ಕೌನ್ಸಿಲ್ ಸಂಘಟನೆಯ ಬೇಡಿಕೆಗೆ ಪೂರಕವಾಗಿ ಆಯೋಗವನ್ನು ರಚಿಸಬೇಕೆಂದು ಖ್ಯಾತ ಅರ್ಥಶಾಸ್ತ್ರಜ್ಞ,ಹಾರ್ವರ್ಡ್ ವಿದ್ವಾಂಸ, ಕೇಂದ್ರದ ಮಾಜಿ ಸಚಿವ ಡಾ.ಸುಬ್ರಮಣಿಯನ್ ಸ್ವಾಮಿ ಅವರು ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿಯ ರಿಟ್ ಅರ್ಜಿ ವಿಚಾರಣೆ ಇಂದು ಹೈಕೋರ್ಟ್‌ನಲ್ಲಿ ನಡೆಯಿತು.

ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿ ಎನ್.ವಿ.ಅಂಜರಿಯಾ ಹಾಗೂ ನ್ಯಾಯಮೂರ್ತಿ ಎಂ.ಐ.ಅರುಣ್ ಅವರ ವಿಭಾಗೀಯ ಪೀಠ ರಿಟ್ ಅರ್ಜಿಯ ವಿಚಾರಣೆ ನಡೆಸಿತು. ಡಾ.ಸುಬ್ರಮಣಿಯನ್ ಸ್ವಾಮಿ ಹಾಗೂ ಅವರ ಕಾನೂನು ಸಹಾಯಕರು ವಿಚಾರಣೆ ಸಂದರ್ಭ ಭಾಗಿಯಾಗಿದ್ದರು. ಸಿಎನ್‌ಸಿ ಬೇಡಿಕೆಗೆ ಆಕ್ಷೇಪ ಸಲ್ಲಿಸಿದ ಪ್ರತಿವಾದಿಗಳ ಅಹವಾಲನ್ನು ಕೂಡ ಆಲಿಸಿದ ಮುಖ್ಯ ನ್ಯಾಯಾಧೀಶರು ವಿಚಾರಣೆಯ ಮುಂದಿನ ದಿನಾಂಕವನ್ನು 2025 ಜೂ.9ಕ್ಕೆ ನಿಗದಿಪಡಿಸಿದರು.



ಹೈಕೋರ್ಟ್‌ನಲ್ಲಿ ಮಾಜಿ ಸಚಿವ ಡಾ.ಸುಬ್ರಮಣಿಯನ್ ಸ್ವಾಮಿ ಅವರೊಂದಿಗೆ ಸಿಎನ್‌ಸಿ ಎನ್.ಯು.ನಾಚಪ್ಪ ಮತ್ತು ಅವರ ತಂಡ

ವಿಚಾರಣೆ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಎನ್.ಯು.ನಾಚಪ್ಪ, ಜೂ.9ರಂದು ಡಾ.ಸುಬ್ರಮಣಿಯನ್ ಸ್ವಾಮಿ ಅವರು ನ್ಯಾಯಾಲಯದಲ್ಲಿ ಸಮಗ್ರ ವಾದ ಮಂಡನೆ ಮಾಡಲಿದ್ದಾರೆ. ಸಂವಿಧಾನದ ಆಶಯಗಳಿಗೆ ಪೂರಕವಾಗಿ ಕಾನೂನು ಹೋರಾಟದಿಂದ ಕೊಡವ ಬುಡಕಟ್ಟು ಜನಾಂಗಕ್ಕೆ ನ್ಯಾಯ ಸಿಗಲಿದೆ. ಕೊಡವ ಲ್ಯಾಂಡ್ ಭೂ ರಾಜಕೀಯ ಸ್ವಾಯತ್ತತೆ ಮತ್ತು ಎಸ್‌ಟಿ ಟ್ಯಾಗ್ ಪಡೆಯುವ ವಿಶ್ವಾಸವಿದೆ ಎಂದರು.

ಕೊಡವ ಲ್ಯಾಂಡ್ ಬೇಡಿಕೆ ತಾರ್ಕಿಕ ಅಂತ್ಯ ಕಾಣುವಲ್ಲಿಯವರೆಗೆ ಹೋರಾಟ ಅಚಲ ಮತ್ತು ಮುಂದುವರಿಯಲಿ. ಕಳೆದ 35 ವರ್ಷಗಳಿಂದ ಸಿಎನ್‌ಸಿ ಸಂಘಟನೆ ಕೊಡವರ ಸಾಂವಿಧಾನಿಕ ಹಕ್ಕುಗಳಿಗಾಗಿ ಶಾಂತಿಯುತ ಹೋರಾಟವನ್ನು ನಡೆಸಿಕೊಂಡು ಬರುತ್ತಿದೆ, ಕೊಡವರಿಗೆ ಕೊಡವ ಲ್ಯಾಂಡ್ ಬಿಟ್ಟರೆ ಬೇರೆ ಪ್ರದೇಶವಿಲ್ಲ. ಆದ್ದರಿಂದ ಕೊಡವ ಲ್ಯಾಂಡ್ ಅನ್ನು ಶಾಶ್ವತವಾಗಿ ಉಳಿಸಿಕೊಳ್ಳಲು ಕಾನೂನಿನ ನೆರವು ಕೋರಲಾಗಿದೆ ಎಂದು ತಿಳಿಸಿದರು.

ವಕೀಲರುಗಳಾದ ಕಿರಣ್ ನಾರಾಯಣ್, ಸತ್ಯ ಸಭರ್ವಾಲ್, ಕುಮಾರಿ ಪಾಲಕ್ ಬಿಷ್ಣೋಯ್, ಶ್ರೀಕಾಂತ ಶರ್ಮಾ, ಅಭಿಷೇಕ್.ಜಿ, ಕುಮಾರಿ ಮದಿಹಾ ನುಯೀಮ್, ಅನನ್ಯ ದೀಕ್ಷಿತ್, ಮಹೇಶ್ ಯಾದವ್ ಹಾಗೂ ಕುಶೇಂದ್ರ ಶಾಹಿ ಅವರುಗಳು ಡಾ.ಸುಬ್ರಮಣಿಯನ್ ಸ್ವಾಮಿ ಅವರಿಗೆ ಸಹಕರಿಸಿದರು. ಜಗದೀಶ್ ಶೆಟ್ಟಿ, ವಿಎಚ್‌ಎಸ್ ರಾಜ್ಯಾಧ್ಯಕ್ಷ ನಿಖುಂಜ್ ಶಾ, ರೇಖಾ ನಾಚಪ್ಪ, ಕುಮಾರಿ ಶ್ರೇಯಾ ನಾಚಪ್ಪ, ಪಟ್ಟಮಾಡ ಕುಶ, ಮಂದಪಂಡ ಮನೋಜ್, ಅರೆಯಡ ಗಿರೀಶ್, ಬೊಟ್ಟಂಗಡ ಗಿರೀಶ್, ಪಾಲಂದಿರ ಜೋಯಪ್ಪ ಬೇಪಡಿಯಂಡ ಬಿದ್ದಪ್ಪ, ಬೇಪಡಿಯಂಡ ದಿನು, ಕಿರಿಯಮಾಡ ಶೆರಿನ್, ಕಾವಾಡಿಚಂಡ ಮೇದಪ್ಪ, ವಿಎಚ್‌ಎಸ್ ಸದಸ್ಯರಾದ ನಟರಾಜ್, ಎ.ಬಿ.ಪಾಟೀಲ್, ರವಿಶಂಕರ್ ಹಾಗೂ ಶಿವು ಈ ಸಂದರ್ಭ ಹಾಜರಿದ್ದರು.

ಲಾರಿ ಡಿಕ್ಕಿ: ಬೈಕ್ ಸವಾರ ಸಾವು

ಕುಶಾಲನಗರ: ಪಿರಿಯಾಪಟ್ಟಣ ತಾಲೂಕಿನ ಹೊನ್ನೂರು ಗೇಟ್ ಸಮೀಪ ರಾಷ್ಟ್ರೀಯ ಹೆದ್ದಾರಿ ಬಳಿ ಮಂಗಳವಾರ ನಡೆದ ರಸ್ತೆ ಅಪಘಾತದಲ್ಲಿ ಬೈಕ್ ಸವಾರ ಸ್ಥಳದಲ್ಲಿ ಮೃತಪಟ್ಟ ಘಟನೆ ನಡೆದಿದೆ.



ಕುಶಾಲನಗರದ ಕರಿಯಪ್ಪ ಬಡಾವಣೆ ನಿವಾಸಿ ದೇವಾಂಗ ಸಮಾಜದ ಸಂಚಾಲಕರಾದ ಡಿ.ಎನ್.ಶಶಿ(46) ಎಂಬಾತನೆ ಮೃತ ವ್ಯಕ್ತಿ. ಮಂಗಳವಾರ ಬೆಳಿಗ್ಗೆ ಮಕ್ಕಳನ್ನು ಶಾಲೆಗೆ ಬಿಟ್ಟು, ವ್ಯವಹಾರ ನಿಮಿತ್ತ ಬೈಲುಕುಪ್ಪೆ ಕಡೆಗೆ ಹೋಗಿ ಕುಶಾಲನಗರಕ್ಕೆ ಬರುತ್ತಿರುವ ಸಂದರ್ಭ ಎದುರಿನಿಂದ ಬಂದ ಲಾರಿ ಡಿಕ್ಕಿ ಹೊಡೆದಿದೆ. ಇದರಿಂದ ತಲೆಗೆ ಗಂಭೀರವಾಗಿ ಗಾಯ ಉಂಟಾಗಿ ತೀವ್ರ ರಕ್ತಸ್ರಾವದಿಂದ ಸ್ಥಳದಲ್ಲಿಯೇ ಮೃತಪಟ್ಟಿದ್ದಾರೆ. ಮೃತರು ಪತ್ನಿ ಹಾಗೂ ಮೂವರು ಮಕ್ಕಳನ್ನು ಅಗಲಿದ್ದಾರೆ. ಬೈಲುಕುಪ್ಪೆ ಪೊಲೀಸ್ ಠಾಣೆಯಲ್ಲಿ ಈ ಕುರಿತು ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.

ಮಾ.21 ರಿಂದ ನೆಸ್‌ಕೆಫ್ ಕೊಡಗು ಕಪ್ ಹಾಕಿ ಪಂದ್ಯಾವಳಿ

ಗೋಣಿಕೊಪ್ಪ: ನೆಸ್ಲೇ ಇಂಡಿಯಾ ಲಿಮಿಟೆಡ್ ಹಾಗೂ ಹಾಕಿ ಕೂರ್ಗ್ ಸಹಯೋಗದಲ್ಲಿ ಮಾ.21ರಿಂದ ಗೋಣಿಕೊಪ್ಪ ಕಾವೇರಿ ಕಾಲೇಜು ಮೈದಾನದಲ್ಲಿ ನೆಸ್‌ಕೆಫ್ ಕೊಡಗು ಕಪ್ ಹಾಕಿ ಪಂದ್ಯಾವಳಿ ಆಯೋಜಿಸಲಾಗಿದೆ ಎಂದು ಹಾಕಿಕೂರ್ಗ್ ಅಧ್ಯಕ್ಷ ಪಳಂಗಡ ಲವಕುಮಾರ್ ತಿಳಿಸಿದ್ದಾರೆ.

ಮಾ.23 ರವರೆಗೆ ಮೂರು ದಿನಗಳ ಹಾಕಿ ಟೂರ್ನಿಯಲ್ಲಿ 8 ತಂಡಗಳು ಸೆಣಸಾಟ ನಡೆಸಲಿವೆ ಎಂದು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಮೂರ್ನಾಡು ಬ್ಲೇಜ್ ಕ್ಲಬ್, ಮೂರ್ನಾಡು ಎಂಆರ್‌ಎಫ್, ಬೇರಳಿನಾಡ್ ಯುಎಸ್‌ಸಿ, ಬಲಮುರಿ ಕ್ಲಬ್, ಬೇಗೂರು ಈಶ್ವರ ಯೂತ್ ಕ್ಲಬ್, ಕೋಣಕಟ್ಟೆ ಇಲೆವೆನ್, ಕಕ್ಕಬ್ಬೆ ಮಲ್ಮ, ಕುಂದ ಬೊಟ್ಟಿಯತ್ತ್‌ನಾಡ್ ತಂಡಗಳು ಸ್ಪರ್ಧಿಸಲಿವೆ ಎಂದು ತಿಳಿಸಿದರು.

ವಿಜೇತ ತಂಡಗಳಲ್ಲಿ ಪ್ರಥಮ ತಂಡಕ್ಕೆ 75 ಸಾವಿರ ನಗದು, ದ್ವಿತೀಯ ತಂಡಕ್ಕೆ 50 ಸಾವಿರ, ಸೆಮಿಗೆ ಪ್ರವೇಶಿಸಿದ ಎರಡು ತಂಡಗಳಿಗೆ ತಲಾ 25 ಸಾವಿರ, ಉಳಿದ ತಂಡಗಳಿಗೆ ತಲಾ 10 ಸಾವಿರ ನಗದು ಬಹುಮಾನ ನೀಡಲಾಗುತ್ತದೆ ಎಂದರು.

ಉದ್ಘಾಟನೆ ಕಾರ್ಯಕ್ರಮಕ್ಕೆ ಕ್ಲಾಸ್ ಮುಖ್ಯಸ್ಥ ದತ್ತ ಕರುಂಬಯ್ಯ, ನೆಸ್ಲೆ ವ್ಯವಹಾರಿಕ ಅಭಿವೃದ್ಧಿ ಮಾಜಿ ವ್ಯವಸ್ಥಾಪಕ ಕರ್ತಮಾಡ ವಿಕ್ರಂ ಸುಬ್ಬಯ್ಯ, ಅಪ್ಪಚೆ ಟ್ಟೋಳಂಡ ಮನು ಮುತ್ತಪ್ಪ ಭಾಗವಹಿಸಲಿದ್ದಾರೆ. ಸಮಾರೋಪಕ್ಕೆ ನೆಸ್ಲೆ ಇಂಡಿಯಾ ಲಿಮಿಟೆಡ್ ಮುಖ್ಯಸ್ಥ ಸುರೇಶ್ ನಾರಾಯಣ್, ಸಿಇಒ ಮನೀಶ್ ತಿವಾರಿ, ಸಂಸದ ಯದುವೀರ್ ಒಡೆಯರ್, ಮಾಜಿ ಸಂಸದ ಪ್ರತಾಪ್ ಸಿಂಹ, ವಿ.ಆರ್.ರಘುನಾಥ್, ಸಣ್ಣುವಂಡ.ಕೆ. ಉತ್ತಪ್ಪ ಅಶ್ವಿನಿ ನಾಚಪ್ಪ ಭಾಗವಹಿಸಲಿದ್ದಾರೆ ಎಂದು ತಿಳಿಸಿದರು. ಗೋಷ್ಠಿಯಲ್ಲಿ ಹಾಕಿಕೂರ್ಗ್ ಉಪಾಧ್ಯಕ್ಷೆ ಯಮುನ ಚೆಂಗಪ್ಪ, ಕಾರ್ಯದರ್ಶಿ ಅಮ್ಮಾಂಡೀರ ಚೇತನ್ ಇದ್ದರು.

ಬೌದ್ಧ ಭಿಕ್ಕುಗಳ ಮೇಲೆ ಹಲ್ಲೆ ಖಂಡಿಸಿ ಪ್ರತಿಭಟನೆ



ಬೌದ್ಧ ಸಂಘ ಸಂಸ್ಥೆಗಳು ಹಾಗೂ ದಲಿತ ಸಂಘಟನೆಗಳ ಒಕ್ಕೂಟದಿಂದ ಚಾಮರಾಜನಗರದಲ್ಲಿ ಪ್ರತಿಭಟನೆ ನಡೆಸಲಾಯಿತು.

ಚಾಮರಾಜನಗರ, ಮಾ.11– ಬಿಹಾರದ ಮಹಾಬೋಧಿ ಮಹಾ ವಿಹಾರದ ಮುಕ್ತಿಗೆ ಆಗ್ರಹಿಸಿ ಅನಿರ್ದಿಷ್ಟಾವಧಿ ಮುಷ್ಕರ ಕೈಗೊಂಡಿದ್ದ ಬೌದ್ಧ ಭಿಕ್ಕುಗಳ ಮೇಲೆ ಪೊಲೀಸರು ದೌರ್ಜನ್ಯ ನಡೆಸಿದ್ದಾರೆ ಎಂದು ಆರೋಪಿಸಿ ನಗರದಲ್ಲಿ ಬೌದ್ಧ ಸಂಘ ಸಂಸ್ಥೆಗಳು ಹಾಗೂ ದಲಿತ ಸಂಘಟನೆಗಳ ಒಕ್ಕೂಟದಿಂದ ಪ್ರತಿಭಟನೆ ನಡೆಯಿತು.

ನಗರದ ಜಿಲ್ಲಾಡಳಿತ ಭವನದ ಆವರಣದಲ್ಲಿ ಜಮಾವಣೆಗೊಂಡ ಪ್ರತಿಭಟನಾಕಾರರು ಬಿಹಾರ ಸರ್ಕಾರ ಹಾಗೂ ಮುಖ್ಯಮಂತ್ರಿ ನಿತೀಶ್‌ಕುಮಾರ್ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಬಳಿಕ ಜಿಲ್ಲಾಡಳಿತದ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಿದರು.

ತಿ.ನರಸೀಪುರದ ನಳಂದ ಬೌದ್ಧ ವಿಹಾರದ ಬೋಧಿರತ್ನ ಬಂತೇಜಿ ಮಾತನಾಡಿ, ಬಿಹಾರದ ಬೋಧ್‌ಗಯಾ ದೇವಾಲಯ ಕಾಯ್ದೆ (1949) ಯನ್ನು ರದ್ದುಗೊಳಿಸಬೇಕು. ಮಹಾ ವಿಹಾರದ ಆಡಳಿತವನ್ನು ಸಂಪೂರ್ಣವಾಗಿ ಬೌದ್ಧರಿಗೆ ವಹಿಸಬೇಕು ಎಂದು ಆಗ್ರಹಿಸಿದರು.

ಫೆ. 12ರಿಂದ ಹಲವು ರಾಜ್ಯಗಳ ಬೌದ್ಧ ಭಿಕ್ಕುಗಳು ಡಾರ್ಜಿಲಿಂಗ್‌ನ ಆನಂದ್ ಲಾಮಾ ನೇತೃತ್ವದಲ್ಲಿ ಶಾಂತಿಯುತವಾಗಿ ಸರದಿ ಅಮರಣಾಂತ ಉಪವಾಸ ಸತ್ಯಾಗ್ರಹ ನಡೆಸುತ್ತಿದ್ದರು. ಬಿಹಾರ ಸರ್ಕಾರ ಮಾತುಕತೆಗೆ ಆಹ್ವಾನಿಸಿದರೂ ಉಪವಾಸನಿರತ ಭಿಕ್ಕುಗಳು ತಿರಸ್ಕರಿಸಿದ್ದಾರೆ ಎಂದು ಬಿಹಾರದ ಪೊಲೀಸರು ಫೆ. 27 ರಂದು ತಡರಾತ್ರಿ ಮಲಗಿದ್ದ ಭಿಕ್ಕುಗಳನ್ನು ನಿಮ್ಮ ಆರೋಗ್ಯ ಸರಿಯಿಲ್ಲ ಎಂದು ಬಲವಂತವಾಗಿ ಆಂಬುಲೆನ್ಸ್‌ನಲ್ಲಿ ಕೂರಿಸಿದ್ದಾರೆ. ಕೆಲವರನ್ನು ಸತ್ಯಾಗ್ರಹಕ್ಕೆ ಅನುಮತಿ ಪಡೆದಿಲ್ಲ ಎಂದು ಪೊಲೀಸ್ ವ್ಯಾನಿಗೆ ಬಲವಂತವಾಗಿ ಹತ್ತಿಸಿಕೊಂಡು ದೌರ್ಜನ್ಯ ನಡೆಸಿದ್ದಾರೆ ಎಂದು ದೂರಿದರು.

ದೌರ್ಜನ್ಯ ಎಸಗಿರುವ ಪೊಲೀಸರನ್ನು ತಕ್ಷಣ ಸೇವೆಯಿಂದ ವಜಾಗೊಳಿಸಬೇಕು. ಬೌದ್ಧ ಮಹಾ ವಿಹಾರದ ಆಡಳಿತವನ್ನು ಸಂಪೂರ್ಣವಾಗಿ ಬೌದ್ಧರಿಗೆ ವಹಿಸಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಕೊಳ್ಳೇಗಾಲ ಜೇತವನ ಬೌದ್ಧವಿಹಾರದ ಮನೋರಕ್ಕಿತಾ ಬಂತೇಜಿ, ಮೈಸೂರು ಡಾಲ ಕಲ್ಯಾಣಸಿರಿ ಬಂತೇಜಿ, ನಳಂದ ಬೋಧಿರತ್ನ ಬಂತೇಜಿ, ಯಳಂದೂರಿನ ಬುದ್ಧ ರತ್ನ ಬಂತೇಜಿ, ಭಾರತೀಯ ಬೌದ್ಧ ಮಹಾಸಭೆ ಜಿಲ್ಲಾಧ್ಯಕ್ಷ ಬಸವರಾಜು, ಮುಖಂಡರಾದ ಸಿ.ಎಂ. ಕೃಷ್ಣಮೂರ್ತಿ, ಶಿವನಾಗಣ್ಣ, ಮಹೇಶ್, ಮಲ್ಲಿಕಾರ್ಜುನ ಸ್ವಾಮಿ, ಕೆ.ಎಂ. ನಾಗರಾಜು, ಸಿ.ಎಂ. ಕೃಷ್ಣಮೂರ್ತಿ, ದೊಡ್ಡಿಂದುವಾಡಿ ಸಿದ್ದ ರಾಜು, ಮಹೇಶ್, ದಡದಹಳ್ಳಿ ಶಂಕರ್, ಮಣಿ, ದೇವೇಂದ್ರ ಇತರರು ಭಾಗವಹಿಸಿದ್ದರು.

ಇಂದು ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ

ಚಾಮರಾಜನಗರ, ಮಾ.11– ಜಿಲ್ಲಾಡಳಿತ, ಜಿಪಂ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಾಲಾ ಶಿಕ್ಷಣ ಇಲಾಖೆ ಹಾಗೂ ವಿವಿಧ ಇಲಾಖೆಗಳ ಮತ್ತು ಎನ್‌ಆರ್‌ಎಲ್‌ಎಂ ಸಹಯೋಗದೊಂದಿಗೆ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಮಾ.12ರಂದು ನಗರದ ಜೆ.ಹೆಚ್.ಪಟೇಲ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್ ಕಾರ್ಯಕ್ರಮ ಉದ್ಘಾಟಿಸುವರು. ಸಂಸದ ಸುನೀಲ್ ಬೋಸ್ ಉಪಸ್ಥಿತರಿರುವರು. ಶಾಸಕ ಸಿ.ಪುಟ್ಟರಂಗಶೆಟ್ಟಿ ಅಧ್ಯಕ್ಷತೆ ವಹಿಸುವರು. ಶಾಸಕರಾದ ಎ.ಆರ್.ಕೃಷ್ಣಮೂರ್ತಿ, ಎಂ.ಆರ್.ಮಂಜುನಾಥ್, ಹೆಚ್.ಎಂ.ಗಣೇಶ್ ಪ್ರಸಾದ್, ಡಾ.ಡಿ.ತಿಮ್ಮಯ್ಯ, ಸಿ.ಎನ್.ಮಂಜೇಗೌಡ, ಮಧು ಜಿ.ಮಾದೇಗೌಡ, ಕೆ.ವಿವೇಕಾನಂದ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ರಾಜ್ಯ ಉಪಾಧ್ಯಕ್ಷೆ ಡಾ. ಪುಷ್ಪಾ ಅಮರನಾಥ್, ಕಾವೇರಿ ಜಲಾನಯನ ಯೋಜನೆ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪಿ.ಮರಿಸ್ವಾಮಿ, ಚಾಮರಾಜನಗರ–ರಾಮಸಮುದ್ರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಹಮ್ಮದ್ ಅಸ್ಗರ್ ಮುನ್ನ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಹೆಚ್.ವಿ.ಚಂದ್ರು, ನಗರಸಭೆ ಅಧ್ಯಕ್ಷ ಎಸ್.ಸುರೇಶ್, ಉಪಾಧ್ಯಕ್ಷೆ ಮಮತ, ಜಿಪಂ ಆಡಳಿತಾಧಿಕಾರಿ ಮೇಜರ್ ಮಣಿವಣ್ಣನ್ ಪಿ., ಮೈಸೂರು ವಿಭಾಗ ಪ್ರಾದೇಶಿಕ ಆಯುಕ್ತರು ಹಾಗೂ ತೋಟಗಾರಿಕೆ ಇಲಾಖೆ ನಿರ್ದೇಶಕರಾದ ಡಿ.ಎಸ್.ರಮೇಶ್, ಜಿಲ್ಲಾಧಿಕಾರಿ ಶಿಲ್ಪಾನಾಗ್, ಜಿಪಂ ಸಿಇಓ ಮೋನಾ ರೋತ್, ಎಸ್‌ಪಿ ಡಾ.ಬಿ.ಟಿ.ಕವಿತಾ, ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ಜಿಪಂ ಉಪ ಕಾರ್ಯದರ್ಶಿ ಪಿ.ಲಕ್ಷ್ಮಿ, ಜಿಪಂ ಯೋಜನಾ ನಿರ್ದೇಶಕ ಕಿರಣ್ ಪೆಡ್ನೇಕರ್, ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರು ಹಾಗೂ ರಾಜ್ಯ ಉಪಾಧ್ಯಕ್ಷೆ ಸಿ.ಎನ್.ರೇಣುಕಾ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.



ಬಿರು ಬಿಸಿಲಿನ ನಡುವೆ ಬಂಡೀಪುರದಲ್ಲಿ ಪ್ರವಾಸಿಗರಿಗೆ ರಸದೌತಣ

ಹುಲಿಗಳು, ನವಿಲುಗಳು, ಚಿರತೆಗಳು, ಆನೆಗಳು, ಜಿಂಕೆಗಳ ದರ್ಶನ

● ಸೋಮಶೇಖರ್

ಗುಂಡ್ಲುಪೇಟೆ, ಮಾ.11– ದಿನೇ ದಿನೆ ಹೆಚ್ಚುತ್ತಿರುವ ಬಿಸಿಲಿನಿಂದ ಅರಣ್ಯ ಪ್ರದೇಶ ಒಣಗುತ್ತಿದ್ದರೂ ಸಫಾರಿಗೆ ತೆರಳುವ ಪ್ರವಾಸಿಗರಿಗೆ ವನ್ಯಜೀವಿಗಳು ಕಾಣಿಸಿಕೊಳ್ಳುವ ಮೂಲಕ ಪ್ರವಾಸಿಗರಿಗೆ ಮುದ ನೀಡಿದೆ.

ಬಿರು ಬೇಸಿಗೆಯ ಹಿನ್ನೆಲೆಯಲ್ಲಿ ಬಂಡೀಪುರದಲ್ಲಿ ಮರಗಿಡಗಳು ಒಣಗುತ್ತಿವೆ. ಸದಾ ದಟ್ಟ ಹಸುರಿನಿಂದ ಕಂಗೊಳಿಸುತ್ತಿದ್ದ ಅರಣ್ಯದಲ್ಲಿರುವ ಮರಗಿಡಗಳು ಎಲೆಯುದುರಿಸಿ ಬೋಳಾಗುತ್ತಿವೆ. ಬೇಸಿಗೆ ಹಿನ್ನೆಲೆಯಲ್ಲಿ ಆಕಸ್ಮಿಕ ಬೆಂಕಿಯಿಂದ ಅರಣ್ಯವನ್ನು ರಕ್ಷಿಸುವ ಸಲುವಾಗಿ ಅರಣ್ಯ ಇಲಾಖೆ ಫೈರ್ ಲೈನ್ ನಿರ್ಮಾಣ ಹಾಗೂ ಒಣಹುಲ್ಲನ್ನು ಸುಟ್ಟಿರುವುದರಿಂದ ಅರಣ್ಯ ಪ್ರದೇಶವು ಹಿಂದಿಗಿಂತಲೂ ವಿಶಾಲವಾಗಿ ಕಾಣುತ್ತಿದೆ. ಅಲ್ಲಲ್ಲಿ ಒಣಗಿದ ಪೊದೆಗಳ ನಡುವೆ ಹಾಗೂ ಕೆರೆಕಟ್ಟೆಗಳ ಬಳಿ ಹುಲಿಗಳು, ಗರಿಗೆದರಿದ ನವಿಲುಗಳು, ಮರದ ಕೊಂಬೆಗಳ ಮೇಲೆ ಮೈಚಾಚಿದ ಚಿರತೆಗಳು, ಒಣ ಗಿಡಮರಗಳ ನಡುವೆ ಆಹಾರ ಹುಡುಕುವ ಆನೆಗಳು ಹಾಗೂ ಜಿಂಕೆಗಳು ಪ್ರವಾಸಿಗರ ಕಣ್ಣಿಗೆ ಬೀಳುತ್ತಿವೆ.

> ಬಂಡೀಪುರದ ಬಹುತೇಕ ಕೆರೆಗಳಲ್ಲಿ ಸಮರ್ಪಕವಾಗಿ ನೀರಿನ ಸಂಗ್ರಹವಿರುವುದರಿಂದ ಬಿಸಿಲಿನ ತಾಪದಿಂದ ಪಾರಾಗಲು ಹಾಗೂ ದಾಹ ತಣಿಸಲು ಹೆಚ್ಚಿನ ವನ್ಯಜೀವಿಗಳು ಕೆರೆಗಳ ಸಮೀಪ ಕಾಣಿಸಿಕೊಳ್ಳುತ್ತಿವೆ. ಫೈರ್ ಲೈನ್ ಗಾಗಿ ಒಳ ಹುಲ್ಲುಗಳನ್ನು ಸುಟ್ಟಿರುವುದರಿಂದ ಪ್ರವಾಸಿಗರಿಗೆ ಮೂರುಕೆರೆ ಮತ್ತು ಬಸವನಕಟ್ಟೆ ಸಮೀಪದಲ್ಲಿ ವನ್ಯಜೀವಿಗಳು ಕಂಡುಬರುತ್ತಿವೆ. ಪ್ರಾಣಿಗಳಿಗೆ ಸದ್ಯಕ್ಕೆ ನೀರಿನ ತೊಂದರೆ ಕಂಡು ಬರುತ್ತಿಲ್ಲ.
>
> -ಪ್ರಭಾಕರನ್, ಸಿ.ಎಫ್, ಬಂಡೀಪುರ ಹುಲಿಯೋಜನೆ.





ಹತ್ತಾರು ಸಫಾರಿ ವಾಹನಗಳ ನಡುವೆ ಯಾವ ಅಳುಕು ಇಲ್ಲದೆ ಹಾದು ಹೋಗುವ ಹುಲಿಗಳು ಪ್ರವಾಸಿಗರನ್ನು ಸಫಾರಿಗೆ ಕೈಬೀಸಿ ಕರೆಯುತ್ತಿವೆ.ಈ ಬಾರಿ ಪ್ರವಾಸಿಗರಿಗೆ ಯಥೇಚ್ಛವಾಗಿ ದರ್ಶನ ನೀಡುತ್ತಿರುವ ಮೂರು ಕೆರೆ ಸಮೀಪ ಹುಲಿಯೊಂದು ತನ್ನ ಮರಿಗಳ ಜತೆ ಕಾಣಿಸಿಕೊಳ್ಳುತ್ತಿದೆ.



ಕಳೆದ ವರ್ಷ ಸಮರ್ಪಕ ಪ್ರಮಾಣದಲ್ಲಿ ಮಳೆಬಿದ್ದ ಪರಿಣಾಮ ಹುಲಿ ಸಂರಕ್ಷಿತ ಪ್ರದೇಶದ ಎಲ್ಲಾ ಕೆರೆಗಳಲ್ಲಿಯೂ ನೀರಿನ ಸಂಗ್ರಹವಿದೆ. ಬಹುತೇಕ ಕೆರೆಗಳ ಸಮೀಪ ಒಂದಲ್ಲಾ ಒಂದು ವನ್ಯಜೀವಿಗಳು ಕಾಣಿಸಿಕೊಳ್ಳುತ್ತಿವೆ. ಬಿಸಿಲ ತಾಪದಿಂದ ಪಾರಾಗಲು ಸೊಂಡಿಲಿನಿಂದ ಮೈಮೇಲೆ ನೀರು ಎರಚಿಕೊಳ್ಳುವ ಆನೆಗಳು, ಕೆರೆಯ ಆಸುಪಾಸಿನಲ್ಲಿ ಗರಿಬಿಚ್ಚಿ ಮೈಮರೆತು ನರ್ತಿಸುವ ನವಿಲುಗಳು, ತನ್ನ ಮರಿಗೆ ಹಾಲುಣಿಸುವ ಜಿಂಕೆ, ಮರದ ಕೊಂಬೆಯ ಮೇಲೆ ಕುಳಿತ ವಾನರಗಳು ಪ್ರವಾಸಿಗರನ್ನು ಆಕರ್ಷಿಸುತ್ತಿವೆ. ಹೆಚ್ಚಿನ ಪ್ರವಾಸಿಗರು ವನ್ಯಜೀವಿಗಳನ್ನು ಸೆರೆಹಿಡಿದು ಸಾಮಾಜಿಕ ಜಾಲತಾಣಗಳಲ್ಲಿ ಹರಿಯಬಿಡುತ್ತಿದ್ದಾರೆ. ಇದರಿಂದ ಹವ್ಯಾಸಿ ಛಾಯಾಗ್ರಾಹಕರು, ವನ್ಯಜೀವಿ ಪ್ರಿಯರು ಹೆಚ್ಚಿನ ಸಂಖ್ಯೆಯಲ್ಲಿ ಸಫಾರಿಗೆ ತೆರಳುತ್ತಿದ್ದಾರೆ. ತಮ್ಮ ಕ್ಯಾಮೆರಾಗಳಲ್ಲಿ ಸೆರೆಹಿಡಿದ ಚಿತ್ರಗಳನ್ನು ವೈರಲ್ ಮಾಡುತ್ತಿದ್ದಾರೆ.

ಮಾಜಿ ಸಂಸದ ಧ್ರುವನಾರಾಯಣ ಅವರ 2ನೇ ವರ್ಷದ ಪುಣ್ಯಸ್ಮರಣೆ

ಅಭಿಮಾನಿ ಬಳಗದಿಂದ ಅನ್ನಸಂತರ್ಪಣೆ



ಆರ್. ಧ್ರುವನಾರಾಯಣ ಅವರ 2ನೇ ವರ್ಷದ ಪುಣ್ಯಸ್ಮರಣೆ ಆಚರಿಸಲಾಯಿತು.

ಚಾಮರಾಜನಗರ, ಮಾ.11– ಮಾಜಿ ಸಂಸದ ಹಾಗೂ ಕೆಪಿಸಿಸಿ ಕಾರ್ಯಾಧ್ಯಕ್ಷರಾಗಿದ್ದ ದಿವಂಗತ ಆರ್. ಧ್ರುವನಾರಾಯಣ ಅವರ 2ನೇ ವರ್ಷದ ಪುಣ್ಯ ಸ್ಮರಣೆಯನ್ನು ಅವರ ಅಭಿಮಾನಿಗಳ ಬಳಗದಿಂದ ನಗರದಲ್ಲಿ ಆಚರಣೆ ಮಾಡಲಾಯಿತು.

ನಗರದ ಚಾಮರಾಜೇಶ್ವರ ಉದ್ಯಾನವನ ಮುಂಭಾಗದಲ್ಲಿ ಶಾಮಿಯಾನ ಹಾಕಿ, ಧ್ರುವನಾರಾಯಣ್ ಅವರು ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಅಭಿಮಾನಿ ಬಳಗದಿಂದ ಪುಷ್ಪ ನಮನ ಸಲ್ಲಿಸಲಾಯಿತು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಾದ ಪಿ. ಮರಿಸ್ವಾಮಿ ಮಾತನಾಡಿ, ಧ್ರುವನಾರಾಯಣ ಅವರು ಶಾಸಕರಾಗಿ, ಸಂಸದರಾಗಿ ಜಿಲ್ಲೆಯ ಅಭಿವೃದ್ಧಿಗೆ ಒತ್ತು ನೀಡಿದ್ದರು. ಅವರು ಸರಳ, ಸಜ್ಜನಿಕೆಯ ರಾಜಕಾರಣಿಯಾಗಿದ್ದು, ಮಾನವೀಯ ಮೌಲ್ಯಗಳನ್ನು ಮೈಗೂಡಿಸಿಕೊಂಡಿದ್ದರು. ಜನರೊಂದಿಗೆ ಉತ್ತಮ ಒಡನಾಟವನ್ನು ಹೊಂದಿದ್ದರು ಎಂದರು.

ಈ ಸಂದರ್ಭದಲ್ಲಿ ಧ್ರುವನಾರಾಯಣ್ ಅಭಿಮಾನಿಗಳ ಬಳಗದ ಅಧ್ಯಕ್ಷ ಕಾಗಲವಾಡಿ ಚಂದ್ರು, ಚೂಡಾಧ್ಯಕ್ಷ ಮಹಮ್ಮದ್ ಅಸ್ಗರ್, ಜಿಪಂ ಮಾಜಿ ಸದಸ್ಯ ಕೆ.ಪಿ. ಸದಾಶಿವಮೂರ್ತಿ, ನಾಗರಾಜು, ಪಿ.ಕುಮಾರ್‌ನಾಯಕ್, ಡಿ.ಪಿ.ಪ್ರಕಾಶ್, ಎಸ್.ರಾಜು, ಕೆ.ಎಂ.ನಾಗರಾಜು, ನಾಗಯ್ಯ, ನಜುರುಲ್ಲಾ ಖಾನ್, ಯುವ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಯೋಗೇಂದ್ರ, ನಾಗೇಂದ್ರನಾಯಕ, ರಾಮಸಮುದ್ರ ಅಕ್ಷಯ್, ಕರಿನಂಜನಪುರ ಸ್ವಾಮಿ, ಭೋಗಾಪುರ ನಾಗೇಂದ್ರ, ಸೋಮಶೇಖರ್, ನಗರಸಭಾ ಸದಸ್ಯ ಚಿನ್ನಮ್ಮ, ಭಾಗ್ಯ, ನಾಗಶ್ರೀ, ಪುಟ್ಟಸ್ವಾಮಿ, ನಾಗಾರ್ಜುನ್, ಸ್ವಾಮಿ ಹಾಜರಿದ್ದರು.

ಲೋಕಾಯುಕ್ತ ಬಲೆಗೆ ಬಿದ್ದ ಪಿಡಬ್ಲ್ಯೂಡಿ ತಾಂತ್ರಿಕ ಸಹಾಯಕ

ಚಾಮರಾಜನಗರ, ಮಾ.11– ಪ್ರಸನ್ನ ಎಂಬುವರಿಗೆ ಎಂ.ಸ್ಯಾಂಡ್ ಗುಣಮಟ್ಟದ ಪ್ರಮಾಣ ಪತ್ರ ನೀಡಲು ಲಂಚ ಸ್ವೀಕರಿಸುತ್ತಿದ್ದಾಗ ಪಿಡಬ್ಲ್ಯುಡಿ ಇಲಾಖೆಯ ತಾಂತ್ರಿಕ ಸಹಾಯಕ ನಂದರಾಜು ಎಂಬಾತ ಕಚೇರಿಯಲ್ಲೇ ಲೋಕಾಯುಕ್ತ ಬಲೆಗೆ ಸಿಕ್ಕಿ ಬಿದ್ದಿದ್ದಾರೆ.

ನಂದರಾಜ್ ಐದೂವರೆ ಸಾವಿರ ರೂಪಾಯಿ ಲಂಚಕ್ಕೆ ಬೇಡಿಕೆ ಇಟ್ಟು ಮುಂಗಡವಾಗಿ ಒಂದು ಸಾವಿರ ರೂಪಾಯಿ ಪಡೆದಿದ್ದ. ಇಂದು ಉಳಿಕೆ ನಾಲ್ಕೂವರೆ ಸಾವಿರ ಹಣ ಸ್ವೀಕರಿಸುವಾಗ ಲೋಕಾಯುಕ್ತ ಪೊಲೀಸರು ದಾಳಿ ಮಾಡಿದ್ದಾರೆ.

ಲೋಕಾಯುಕ್ತ ಎಸ್‌ಪಿ ಉದ್ದೇಶ್ ಮತ್ತು ಡಿವೈಎಸ್‌ಪಿ ಮ್ಯಾಥೋ ಥಾಮಸ್ ಮಾರ್ಗದರ್ಶನದಲ್ಲಿ ಯಶಸ್ವಿ ಕಾರ್ಯಾಚರಣೆ ನಡೆಸಿದ ಚಾಮರಾಜನಗರ ಲೋಕಾಯುಕ್ತ ಇನ್‌ಸ್ಪೆಕ್ಟರ್ ಲೋಹಿತ್ ಮತ್ತು ತಂಡದವರು ಪಿಡಬ್ಲ್ಯೂಡಿ ತಾಂತ್ರಿಕ ಸಹಾಯಕ ನಂದರಾಜ್ ಲಂಚ ಪಡೆಯುವಾಗ ರೆಡ್‌ಹ್ಯಾಂಡ್ ಆಗಿ ಬಂಧಿಸಿದ್ದಾರೆ.

2020ರ ರಾಜ್ಯ ಚಲನಚಿತ್ರ ಪ್ರಶಸ್ತಿ ಘೋಷಣೆ

ಪ್ರಜ್ವಲ್ ದೇವರಾಜ್, ಅಕ್ಷತಾ ಅತ್ಯುತ್ತಮ ನಟ-ನಟಿ



ಪ್ರಜ್ವಲ್



ಅಕ್ಷತಾ

ಬೆಂಗಳೂರು: 2020ನೇ ಸಾಲಿನ ರಾಜ್ಯ ಚಲನಚಿತ್ರ ಪ್ರಶಸ್ತಿ ಪ್ರಕಟವಾಗಿದ್ದು 'ಜಂಟಲ್‌ಮ್ಯಾನ್' ಚಿತ್ರದ ಅಭಿನಯಕ್ಕಾಗಿ ಪ್ರಜ್ವಲ್ ದೇವರಾಜ್ ಅತ್ಯುತ್ತಮ ನಟ ಪ್ರಶಸ್ತಿ ಪಡೆದಿದ್ದಾರೆ. ಇನ್ನು ಅತ್ಯುತ್ತಮ ನಟಿ ವಿಭಾಗದಲ್ಲಿ 'ಪಿಂಕಿ ಎಲ್ಲಿ' ಚಿತ್ರದಲ್ಲಿ ನಟಿಸಿದ್ದು ಅಕ್ಷತಾ ಪಾಂಡವಪುರ ಆಯ್ಕೆಯಾಗಿದ್ದಾರೆ. ಅತ್ಯುತ್ತಮ ಸಿನಿಮಾ ವಿಭಾಗದಲ್ಲಿ 'ಪಿಂಕಿ ಎಲ್ಲಿ' ಚಿತ್ರ ಆಯ್ಕೆಯಾಗಿದ್ದರೆ, 'ವರ್ಣಪಟಲ' ಚಿತ್ರಕ್ಕೆ 2ನೇ ಅತ್ಯುತ್ತಮ ಸಿನಿಮಾ ಪ್ರಶಸ್ತಿ ಸಿಕ್ಕಿದೆ. 'ಹರಿವ ನದಿಗೆ ಮೈಯೆಲ್ಲ ಕಾಲು' ಚಿತ್ರಕ್ಕೆ ಮೂರನೇ ಅತ್ಯುತ್ತಮ ಚಿತ್ರ ಪ್ರಶಸ್ತಿ ಸಿಕ್ಕಿದೆ.

ರಾಜ್ಯ ಚಲನಚಿತ್ರ ಪ್ರಶಸ್ತಿ ಪಟ್ಟಿ: ಅತ್ಯುತ್ತಮ ನಟ: ಪ್ರಜ್ವಲ್ ದೇವರಾಜ್ (ಜಂಟಲ್‌ಮನ್), **ಅತ್ಯುತ್ತಮ ನಟಿ:** ಅಕ್ಷತಾ ಪಾಂಡವಪುರ (ಪಿಂಕಿ ಎಲ್ಲಿ), **ಅತ್ಯುತ್ತಮ ಚಿತ್ರ:** ಪಿಂಕಿ ಎಲ್ಲಿ, **2ನೇ ಅತ್ಯುತ್ತಮ ಚಿತ್ರ:** ವರ್ಣಪಟಲ, **3ನೇ ಅತ್ಯುತ್ತಮ ಚಿತ್ರ:** ಹರಿವ ನದಿಗೆ ಮೈಯೆಲ್ಲಾ ಕಾಲು, **ವಿಶೇಷ ಸಾಮಾಜಿಕ ಕಾಳಜಿಯ ಚಿತ್ರ:** ಗಿಳಿಯು ಪಂಜರದೊಳಿಲ್ಲ ಮತ್ತು ಈ ಮಣ್ಣು, **ಅತ್ಯುತ್ತಮ ಜನಪ್ರಿಯ ಮನರಂಜನಾ ಚಿತ್ರ:** ಫೋರ್ ವಾಲ್ಸ್, **ಅತ್ಯುತ್ತಮ ಮಕ್ಕಳ ಚಿತ್ರ:** ಪದಕ, **ನಿರ್ದೇಶಕರ ಪ್ರಥಮ ನಿರ್ದೇಶನದ ಅತ್ಯುತ್ತಮ ಚಿತ್ರ:** ನೀಲಿ ಹಕ್ಕಿ, **ಅತ್ಯುತ್ತಮ ಕರ್ನಾಟಕ ಪ್ರಾದೇಶಿಕ ಚಿತ್ರ:** ಜೀಟಿಗೆ, **ಅತ್ಯುತ್ತಮ ಸಂಗೀತ ನಿರ್ದೇಶಕ:** ಗಗನ್ ಬಡೇರಿಯಾ, **ಅತ್ಯುತ್ತಮ ಸಂಕಲನ:** ನಾಗೇಂದ್ರ, **ಅತ್ಯುತ್ತಮ ಪೋಷಕ ನಟ:** ರಮೇಶ್ ಪಂಡಿತ್, **ಅತ್ಯುತ್ತಮ ಪೋಷಕ ನಟಿ:** ಮಂಜುಳಮ್ಮ, **ಅತ್ಯುತ್ತಮ ಕಥೆ:** ಶಶಿಕಾಂತ್ ಗಟ್ಟಿ, **ಅತ್ಯುತ್ತಮ ಚಿತ್ರಕಥೆ:** ರಾಘವೇಂದ್ರ ಕುಮಾರ್, **ಅತ್ಯುತ್ತಮ ಸಂಭಾಷಣೆ:** ವೀರಪ್ಪ ಮರಳವಾಡಿ, **ಅತ್ಯುತ್ತಮ ಛಾಯಾಗ್ರಹಣ:** ಅಶೋಕ್ ಕಶ್ಯಪ್.

ರಾಜ್ಯ ಮಹಿಳಾ ನಿಲಯದಲ್ಲಿ ಇಂದು ವಿವಾಹ ಸಂಭ್ರಮ

ಇಬ್ಬರು ಹೆಣ್ಣು ಮಕ್ಕಳ ಶಾಸ್ತ್ರೋಕ್ತ ವಿವಾಹಕ್ಕೆ ಸಿದ್ಧತೆ ಮಾಡಿಕೊಂಡಿರುವ ಮೈಸೂರು ಜಿಲ್ಲಾಡಳಿತ



ಮೈಸೂರು, ಮಾ.11(ಎಸ್‌ಬಿಡಿ)- ಮೈಸೂರು ವಿಜಯನಗರದಲ್ಲಿರುವ ರಾಜ್ಯ ಮಹಿಳಾ ನಿಲಯದಲ್ಲಿ ಮದುವೆ ಸಂಭ್ರಮ ಮನೆ ಮಾಡಿದೆ.

ನಿಲಯದ ಇಬ್ಬರು ಹೆಣ್ಣು ಮಕ್ಕಳ ವಿವಾಹ ಸಮಾರಂಭ ಬುಧವಾರ ಶಾಸ್ತ್ರೋಕ್ತವಾಗಿ ನೆರವೇರಲಿದ್ದು, ಇದಕ್ಕಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯಿತಿ ಸಹಯೋಗದಲ್ಲಿ ಎಲ್ಲಾ ಸಿದ್ಧತೆಯನ್ನೂ ಮಾಡಿಕೊಳ್ಳಲಾಗಿದೆ. ನಿಲಯದ ಅಧಿಕಾರಿಗಳು, ಸಿಬ್ಬಂದಿ ಹಾಗೂ ನಿವಾಸಿಗಳು ತಮ್ಮ ಸಹೋದರಿಯರಿಬ್ಬರ ಮದುವೆ ಖುಷಿಯಲ್ಲಿದ್ದಾರೆ. ಅರಿಶಿನ ಶಾಸ್ತ್ರ, ವೀಳ್ಯೆ ಶಾಸ್ತ್ರ, ಬಳೆ ಶಾಸ್ತ್ರ ಸೇರಿದಂತೆ ವಿವಾಹ ಪೂರ್ವ ಕಾರ್ಯಕ್ರಮಗಳನ್ನು ಸೋಮವಾರವೇ ನಡೆಸಲಾಗಿದೆ.

ಶುಭ ಲಗ್ನದಲ್ಲಿ ಧಾರೆ: ಮಹಿಳಾ ನಿಲಯದಲ್ಲಿ ಬುಧವಾರ ಬೆಳಗ್ಗೆ 8.15ರಿಂದ 9.55ರೊಳಗೆ ಸಲ್ಲುವ ಕನ್ಯಾ ಮತ್ತು ಮೇಷ ಲಗ್ನದಲ್ಲಿ ಸಂಸ್ಥೆಯ ನಿವಾಸಿಗಳಾದ ಅಶ್ವಿನಿ ಹಾಗೂ ಆಯೇಷಾ ವಿವಾಹವನ್ನು ನಿಗದಿಪಡಿಸಲಾಗಿದೆ. ಚಿತ್ರದುರ್ಗ ಜಿಲ್ಲೆಯ ಜಿ.ಆರ್.ಸಂದೀಪ್, ಅಶ್ವಿನಿಯೊಂದಿಗೆ ಹಾಗೂ ವಿಜಯನಗರ ಜಿಲ್ಲೆಯ ಕೆ.ವಿಕಾಸ್, ಆಯೇಷಾ ಅವರೊಂದಿಗೆ ಸಪ್ತಪದಿ ತುಳಿಯಲಿದ್ದಾರೆ. ಜಿಲ್ಲಾಧಿಕಾರಿಗಳೂ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ನಿಲಯದ ನಿವಾಸಿಗಳ ಸಮ್ಮುಖದಲ್ಲಿ ಶಾಸ್ತ್ರೋಕ್ತವಾಗಿ ಮಾಂಗಲ್ಯ ಧಾರಣೆ ನೆರವೇರಲಿದೆ. ವಿವಾಹದ ಬಳಿಕ ವಿಶೇಷ ಭೋಜನ ವ್ಯವಸ್ಥೆಯನ್ನೂ ಮಾಡಲಾಗಿದೆ.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಯೂ ಆದ ಹಿರಿಯ ಸಿವಿಲ್ ನ್ಯಾಯಾಧೀಶ ದಿನೇಶ್, ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ, ಜಿಲ್ಲಾ ಪಂಚಾಯಿತಿ ಸಿಇಓ ಎಸ್.ಯುಕೇಶ್ ಕುಮಾರ್, ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಸ್.ವಿಷ್ಣುವರ್ಧನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕ ಬಿ.ಬಸವರಾಜು, ರಾಜ್ಯ ಮಹಿಳಾ ನಿಲಯದ ಅಧೀಕ್ಷಕಿ ಎಂ.ಆರ್.ಶೈಲಾ, ಸಿಬ್ಬಂದಿ ವರ್ಗ, ಇಲ್ಲಿನ ನಿವಾಸಿಗಳು, ವರರ ಸಂಬಂಧಿಕರು ವಿವಾಹ ಮಹೋತ್ಸವದಲ್ಲಿ ಪಾಲ್ಗೊಳ್ಳಲಿದ್ದಾರೆ.

ಸರ್ಕಾರದ ಕಾರ್ಯಕ್ರಮ: ಪೋಷಕರು ಅಥವಾ ನೋಡಿಕೊಳ್ಳುವವರು ಯಾರೂ ಇಲ್ಲದ ಹೆಣ್ಣು ಮಕ್ಕಳಿಗೆ ಸರ್ಕಾರ ಈ ಮಹಿಳಾ ನಿಲಯದಲ್ಲಿ ಆಶ್ರಯ ನೀಡಿದೆ. ಮೈಸೂರು ಕೇಂದ್ರದಲ್ಲಿ ಸದ್ಯ 60 ಮಂದಿ ಇದ್ದಾರೆ. ಶಿಕ್ಷಣದ ಜೊತೆಗೆ ಆಸಕ್ತಿ ಅನುಸಾರವಾಗಿ ವೃತ್ತಿಪರ ತರಬೇತಿ ನೀಡಲಾಗುತ್ತದೆ. ಉದ್ಯೋಗಕ್ಕೆ ಸೇರುವ ಅವಕಾಶವೂ ಇರಲಿದೆ. ಹಾಗೆಯೇ ವಿವಾಹವಾಗಲು ಒಪ್ಪಿದರೆ ಪುನರ್ವಸತಿ ಕಾರ್ಯಕ್ರಮದಡಿ ಸೂಕ್ತ ವರನನ್ನು ನೋಡಿ, ವಿವಾಹ ಮಾಡಲಾಗುತ್ತದೆ. ನಿಲಯದಲ್ಲಿ ಐದು ವರ್ಷದ ಮಗುವಿನಿಂದ ಇರುವ ಅಶ್ವಿನಿ ಹಾಗೂ 10 ವರ್ಷದ ಮಗುವಿನಿಂದ ಇರುವ ಆಯೇಷಾ 10ನೇ ತರಗತಿವರೆಗೆ ವಿದ್ಯಾಭ್ಯಾಸ ಮಾಡಿದ್ದು, ಅವರ ಒಪ್ಪಿಗೆ ಮೇರೆಗೆ ವಿವಾಹ ಮಾಡಿಸಲಾಗುತ್ತಿದೆ.

ತವರಿನ ಜವಾಬ್ದಾರಿ: ನಿಲಯದ ಹೆಣ್ಣು ಮಕ್ಕಳನ್ನು ವಿವಾಹವಾಗಲು ಇಚ್ಛಿಸುವವರು ನೇರವಾಗಿ ನಮ್ಮ ನಿಲಯಕ್ಕೆ ವಿವಾಹ ಪ್ರಸ್ತಾಪಗಳನ್ನು ಸಲ್ಲಿಸುತ್ತಾರೆ. ನಂತರ ಅವರ ಪೂರ್ವಾಪರ ಪರಿಶೀಲಿಸಿದ ಬಳಿಕ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯ ವ್ಯವಸ್ಥಾಪಕ ಸಮಿತಿಯ ಮುಂದಿಡಲಾಗುತ್ತದೆ. ವರ ಹಾಗೂ ಅವರ ಕುಟುಂಬದ ಸದಸ್ಯರೊಂದಿಗೆ ಮದುವೆ ಮಾತುಕತೆ ನಡೆಸಲಾಗುತ್ತದೆ. ವಧು-ವರ ಪರಸ್ಪರ ಒಪ್ಪಿಗೆ ನೀಡಿದ ನಂತರವೇ ಮುಂದಿನ ಕಾರ್ಯ ಕೈಗೊಳ್ಳಲಾಗುತ್ತದೆ. ವಿವಾಹ ನೋಂದಣಿ ಜೊತೆಗೆ ಅವರ ಇಚ್ಛೆ ಅನುಸಾರ ಸಾಂಪ್ರದಾಯಿಕವಾಗಿ ಮದುವೆ ಮಾಡಿಸಲಾಗುತ್ತದೆ. ಮದುವೆ ವೇಳೆ ಸರ್ಕಾರದ ವತಿಯಿಂದ ದಂಪತಿ ಹೆಸರಲ್ಲಿ 15 ಸಾವಿರ ರೂ. ಡಿಪಾಸಿಟ್ ಇಡಲಾಗುತ್ತದೆ. ಐದು ವರ್ಷದವರೆಗೂ ದಂಪತಿ ಮೇಲೆ ಇಲಾಖೆ ನಿಗಾ ವಹಿಸಲಿದೆ ಎಂದು ಮೈಸೂರು ಮಹಿಳಾ ನಿಲಯದ ಅಧೀಕ್ಷಕಿ ಎಂ.ಆರ್.ಶೈಲಾ 'ಮೈಸೂರು ಮಿತ್ರ'ನಿಗೆ ತಿಳಿಸಿದರು.

ಕೋವಿಡ್ ಹಾಗೂ ಇನ್ನಿತರ ಕಾರಣಗಳಿಂದ ಆರೇಳು ವರ್ಷಗಳಿಂದ ನಿಲಯದಲ್ಲಿ ವಿವಾಹ ಮಹೋತ್ಸವ ನಡೆದಿರಲಿಲ್ಲ. ಬುಧವಾರ ಅಶ್ವಿನಿ ಹಾಗೂ ಆಯೇಷಾ ಅವರನ್ನು ಸಾಂಪ್ರದಾಯಿಕವಾಗಿ ಧಾರೆ ಎರೆದುಕೊಡಲಾಗುತ್ತಿದೆ. ಹೆಣ್ಣು ಮಕ್ಕಳನ್ನು ಧಾರೆ ಎರೆದು ಗಂಡನ ಮನೆಗೆ ಕಳುಹಿಸುವಾಗ ತವರು ಮನೆಯವರಿಗೆ ಹೇಗೆ ಸಂತೋಷದ ಜೊತೆಗೆ ಸಂಕಟವಾಗುತ್ತದೆಯೋ ಅದೇ ಅನುಭವ ನಮಗೂ ಆಗುತ್ತಿದೆ ಎಂದು ನುಡಿದರು.

ಮೈಸೂರು ನಿರ್ದೇಶಕ ಸಿದ್ದೇಗೌಡರ 'ಹೂವಿನ ಹಾರ'ಕ್ಕೆ ಅತ್ಯುತ್ತಮ ಸಂಭಾಷಣೆ ಪ್ರಶಸ್ತಿ



ಮೈಸೂರು, ಮಾ.11(ಎಸ್‌ಬಿಡಿ)- 2020ನೇ ಕ್ಯಾಲೆಂಡರ್ ವರ್ಷದ ರಾಜ್ಯ ವಾರ್ಷಿಕ ಚಲನಚಿತ್ರ ಪ್ರಶಸ್ತಿಗಳ ಪ್ರಕಟಗೊಂಡಿದ್ದು, ಮೈಸೂರಿನ ಜೀವಿತ ಕ್ರಿಯೇಷನ್ ಸಂಸ್ಥೆ ನಿರ್ಮಾಣದ 'ಹೂವಿನ ಹಾರ' ಚಿತ್ರಕ್ಕೆ 'ಅತ್ಯುತ್ತಮ ಸಂಭಾಷಣೆ' ಪ್ರಶಸ್ತಿ ಲಭಿಸಿದೆ.

ಈ ಚಿತ್ರಕ್ಕೆ ವೀರಪ್ಪ ಮರಳವಾಡಿ ಸಂಭಾಷಣೆ ಬರೆದಿದ್ದು, ಸಿದ್ದೇ ಗೌಡ (ಜಿಬಿಎಸ್) ಕಥೆ-ಚಿತ್ರಕಥೆಯೊಂದಿಗೆ ನಿರ್ದೇಶಿಸಿದ್ದಾರೆ. ಜೀವಿತ ಕ್ರಿಯೇಷನ್ ಸಂಸ್ಥೆಯ ಎಸ್.ಬಿ.ಶಿವು ನಿರ್ಮಾಣ ಮಾಡಿದ್ದಾರೆ. ಈ ಸಂಸ್ಥೆಯು 'ತರ್ಲೆ ವಿಲೇಜ್', 'ದಕ್ಷಯಜ್ಞ' ಸೇರಿದಂತೆ ಹಲವು ವಿಭಿನ್ನ ಚಿತ್ರಗಳನ್ನು ನಿರ್ಮಿಸಿದೆ.

ಈ ಬಗ್ಗೆ ಸಂತಸ ವ್ಯಕ್ತಪಡಿಸಿರುವ ನಿರ್ದೇಶಕ ಸಿದ್ದೇಗೌಡ, 'ಹೂವಿನ ಹಾರ' ಅತ್ಯುತ್ತಮ ಚಿತ್ರ, ಅತ್ಯುತ್ತಮ ಸಂಭಾ ಷಣೆಗೆ ಪ್ರಶಸ್ತಿ ಬಂದಿರುವುದು ಸಂತಸ ತಂದಿದೆ. ಅತ್ಯುತ್ತಮ ಚಿತ್ರ, ಅತ್ಯುತ್ತಮ ಕಥೆ ಹಾಗೂ ಅತ್ಯುತ್ತಮ ಚಿತ್ರಕಥೆ ವಿಭಾಗದಲ್ಲೂ ಪ್ರಶಸ್ತಿ ನಿರೀಕ್ಷಿಸಿದ್ದೆವು. ಚಿತ್ರದ ಸಂಭಾಷಣೆಕಾರರಾದ ವೀರಪ್ಪ ಮರಳವಾಡಿ, ನಿರ್ಮಾಪಕರಾದ ಎಸ್.ಬಿ.ಶಿವು, ಚಿತ್ರದ ಎಲ್ಲಾ ಕಲಾವಿದರು ಹಾಗೂ ತಂತ್ರಜ್ಞರಿಗೆ ಅಭಿನಂದನೆಗಳನ್ನು ತಿಳಿಸಿದ್ದಾರೆ.

ಭೋವಿ ನಿಗಮ ಹಗರಣ

ವಕೀಲೆ ಜೀವಾ ಆತ್ಮಹತ್ಯೆ ಪ್ರಕರಣ, ಸಿಐಡಿ ಡಿವೈಎಸ್‌ಪಿ ಕನಕಲಕ್ಷ್ಮಿ ಬಂಧನ!



ಜೀವಾ ಕನಕಲಕ್ಷ್ಮೀ

ಬೆಂಗಳೂರು, ಮಾ.11- ವಕೀಲೆ ಜೀವಾ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಡಿವೈಎಸ್‌ಪಿ ಕನಕಲಕ್ಷ್ಮೀ ಅವರನ್ನು SIT ಅಧಿಕಾರಿಗಳು ಇಂದು ಬಂಧಿಸಿದ್ದಾರೆ. ಕರ್ನಾಟಕ ಭೋವಿ ನಿಗಮ ಹಗರಣದ ತನಿಖೆ ಎದುರಿಸಿದಾಗ ಪೊಲೀಸ್ ಅಧಿಕಾರಿ ವಿವಸ್ತ್ರಗೊಳಿಸಿ ವಿಚಾರಣೆ ನಡೆಸಿ, 25 ಲಕ್ಷ ರೂ. ಲಂಚಕ್ಕೆ ಬೇಡಿಕೆ ಇಟ್ಟಿದ್ದರು ಎಂದು ಜೀವಾ 13 ಪುಟಗಳ ಡೆತ್‌ನೋಟ್ ಬರೆದಿಟ್ಟು ಆತ್ಮಹತ್ಯೆ ಮಾಡಿಕೊಂಡಿದ್ದರು. ಈ ಸಂಬಂಧ ಜೀವಾ ಸಹೋದರಿ ಸಿಐಡಿ ಡಿವೈಎಸ್‌ಪಿ ಕನಕಲಕ್ಷ್ಮಿ ವಿರುದ್ಧ ದೂರು ನೀಡಿದ್ದರು.

ಬಿಜೆಪಿ ಸರ್ಕಾರದ ಅವಧಿಯಲ್ಲಿ ಭೋವಿ ನಿಗಮದ ಅಕ್ರಮದ ಕುರಿತು ಕಾಂಗ್ರೆಸ್ ಸರ್ಕಾರ ಸಿಐಡಿ ತನಿಖೆಗೆ ವಹಿಸಿತ್ತು ಇದನ್ನು ಸಿಐಡಿ ಡಿವೈಎಸ್ಪಿ ಕನಕಲಕ್ಷ್ಮಿ ತನಿಖೆ ಕೈಗೊಂಡಿದ್ದು, ಭೋವಿ ನಿಗಮದ ಫಲಾನುಭವಿಗಳಿಗೆ ಮೆಟೀರಿಯಲ್ ಪೂರೈಸಿದ ಆರೋಪದ ಮೇಲೆ 34 ವರ್ಷದ ವಕೀಲೆ ಜೀವಾ ಎನ್ನುವವರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದ್ದರು. ಆದರೆ ವಿಚಾರಣೆ ಬಳಿಕ ವಕೀಲೆ ಜೀವಾ ಬೆಂಗಳೂರಿನ ಪದ್ಮನಾಭನಗರದ ತಮ್ಮ ನಿವಾಸದಲ್ಲಿ ನೇಣುಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದರು.

ಏನಿದು ಹಗರಣ: ಭೋವಿ ಅಭಿವೃದ್ಧಿ ನಿಗಮದಲ್ಲಿ ಸಾಲ ಕೊಡಿಸುವುದಾಗಿ ಮಹಿಳೆಯರು ಸೇರಿದಂತೆ ಹಲವರಿಂದ ಹಣ ಪಡೆದು ವಂಚಿಸಲಾಗಿದೆ ಎಂದು ಆರೋಪಿಸಿ ಕೆ.ಎನ್.ಸೂರ್ಯ ಕಲಾವತಿ ಎಂಬುವವರು ಮಾರ್ಚ್ 18, 2023ರಲ್ಲಿ ಸಿದ್ದಾಪುರ ಠಾಣೆಯಲ್ಲಿ ದೂರು ದಾಖಲಿಸಿದ್ದರು. 2021ರ ಅಕ್ಟೋಬರ್‌ನಲ್ಲಿ ತನ್ನನ್ನು ಸಂಪರ್ಕಿಸಿದ ಸರಸ್ವತಿ ಮತ್ತು ಲಕ್ಷ್ಮಿ ಎಂಬುವವರು ಭೋವಿ ಅಭಿವೃದ್ಧಿ ನಿಗಮದಿಂದ ಸಾಲ ಪಡೆಯಬಹುದಾಗಿದೆ. ಸಾಲ ತೀರಿದಾಗ ಲಂಚವಾಗಿ ರೂ. 25,000 ನೀಡುವಂತೆ ಹೇಳಿದ್ದರು. ಅದರಂತೆ ಸೂರ್ಯ ಕಲಾವತಿ ಅಗತ್ಯ ದಾಖಲೆಗಳು ಮತ್ತು ಎರಡು ಖಾಲಿ ಚೆಕ್‌ಗಳನ್ನು ಸಲ್ಲಿಸಿದರು ಮತ್ತು ಖಾಲಿ ಕಾಗದಗಳಿಗೆ ಸಹಿ ಹಾಕಿದ್ದರು.

ಸರಸ್ವತಿ ಮತ್ತು ಲಕ್ಷ್ಮಿಯವರು ಸಂಪರ್ಕಿಸಿದ 40 ಮಹಿಳೆಯರಲ್ಲಿ ಸೂರ್ಯ ಕಲಾವತಿ ಒಬ್ಬರು. ಒಂದು ತಿಂಗಳ ನಂತರ 50,000 ರೂ.ಗಳನ್ನು ಮಂಜೂರು ಮಾಡಲಾಗಿದ್ದು, ಒಪ್ಪಂದದಂತೆ 25,000 ರೂ.ಗಳನ್ನು ಅವರ ಖಾತೆಯಿಂದ ಹಿಂಪಡೆಯಲಾಗಿದೆ ಎಂದು ಆರೋಪಿತ ಮಹಿಳೆಯರು ಸೂರ್ಯಕಲಾವತಿ ಅವರಿಗೆ ಹೇಳಿದ್ದಾರೆ.

ಆದರೆ, ಡಿಸೆಂಬರ್ 2022ರಲ್ಲಿ, ಭೋವಿ ಅಭಿವೃದ್ಧಿ ನಿಗಮದ ಅಧಿಕಾರಿಗಳು ಅವರನ್ನು ಸಂಪರ್ಕಿಸಿದ್ದು, ಅವರು ನೀವು ತೆಗೆದುಕೊಂಡಿರುವ 5 ಲಕ್ಷ ರೂಪಾಯಿ ಸಾಲವನ್ನು ಮರು ಪಾವತಿಸಬೇಕೆಂದು ಹೇಳಿದ್ದಾರೆ. ಇದನ್ನು ತಿಳಿದು ಬೆಚ್ಚಿಬಿದ್ದ ಆಕೆ ಬ್ಯಾಂಕ್‌ಗೆ ತೆರಳಿ ಪರಿಶೀಲಿಸಿದಾಗ ಭೋವಿ ಅಭಿವೃದ್ಧಿ ನಿಗಮದಿಂದ ರೂ.5 ಲಕ್ಷ ಮಂಜೂರು ಆಗಿರುವುದು ತಿಳಿದುಬಂದಿದೆ.

ರೂ.5 ಲಕ್ಷದ ಹಣದಲ್ಲಿ 4,75,000 ರೂ.ಗಳನ್ನು ನ್ಯೂ ಡ್ರೀಮ್ಸ್ ಎಂಟರ್‌ಪ್ರೈಸಸ್‌ಗೆ ವರ್ಗಾಯಿಸಲಾಗಿದೆ. ಆಕೆಯ ದೂರಿನ ಆಧಾರದ ಮೇಲೆ ಸಿಐಡಿ ತನಿಖೆ ಆರಂಭಿಸಿತ್ತು ತನಿಖೆಯ ಸಂದರ್ಭದಲ್ಲಿ, ಹಲವಾರು ವ್ಯಕ್ತಿಗಳನ್ನು ವಿಚಾರಣೆಗೆ ಒಳಪಡಿಸಲಾಗಿತ್ತು ಅವರಲ್ಲಿ ವಕೀಲೆ ಜೀವಾ ಕೂಡಾ ಒಬ್ಬರಾಗಿದ್ದರು. ಆಕೆಯನ್ನು ವಿಚಾರಣೆಗಾಗಿ ಕರೆಸಲಾಗಿತ್ತು ಎನ್ನಲಾಗಿದೆ.

ನೈಜ ಇತಿಹಾಸ ಶೋಧನೆಗೆ ಚಾರಿತ್ರಿಕ ದಾಖಲೆ ಸಹಕಾರಿ

ವಿಭಾಗೀಯ ಪತ್ರಾಗಾರ ಕಚೇರಿ ಅಧಿಕಾರಿ ಹೆಚ್.ಎಲ್.ಮಂಜುನಾಥ್



ಬನ್ನೂರಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಚಾರಿತ್ರಿಕ ದಾಖಲೆಗಳ ಕುರಿತು ಉಪನ್ಯಾಸ ಕಾರ್ಯಕ್ರಮ ನಡೆಯಿತು.

ಮೈಸೂರು,ಮಾ.11(ಪಿಎಂ)- ದೇಶದ ನೈಜ ಇತಿಹಾಸ ಸಂಶೋಧನೆಗೆ ಚಾರಿತ್ರಿಕ ದಾಖಲೆಗಳು ಅತ್ಯಂತ ಸಹಕಾರಿಯಾಗುತ್ತವೆ ಎಂದು ಮೈಸೂರಿನ ವಿಭಾಗೀಯ ಪತ್ರಾಗಾರ ಕಚೇರಿಯ ಹಿರಿಯ ಸಹಾಯಕ ನಿರ್ದೇಶಕ ಹೆಚ್.ಎಲ್.ಮಂಜುನಾಥ್ ತಿಳಿಸಿದರು.

ಬನ್ನೂರಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಇತಿಹಾಸ ವಿಭಾಗದ ವತಿಯಿಂದ ಕಾಲೇಜಿನ ಸಭಾಂಗಣದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ವಿಶೇಷ ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ 'ಚಾರಿತ್ರಿಕ ದಾಖಲೆಗಳ ಪ್ರಾಮುಖ್ಯತೆ' ಕುರಿತು ಅವರು ಮಾತನಾಡಿದರು.

ದಾಖಲೆಗಳು ನಾಡಿನ ಸಂಪತ್ತು. ಅವುಗಳ ಸಂರಕ್ಷಣೆಯೊಂದಿಗೆ ದೇಶದ ಅಭಿವದ್ಧಿಗೆ ಪೂರಕವಾಗಿ ಅವುಗಳನ್ನು ಬಳಸಿಕೊಳ್ಳಬಹುದು. ಯಾವುದೇ ಚಾರಿತ್ರಿಕ ಘಟನೆಗಳ ಸತ್ಯ ಶೋಧನೆಯಲ್ಲಿ ದಾಖಲೆಗಳು ಮಹತ್ವದ ಪಾತ್ರ ವಹಿಸಲಿವೆ. ನೂರಾರು ವರ್ಷಗಳಿಂದ ಬಗೆಹರಿಯದೇ ಕೋರ್ಟ್‌ನಲ್ಲಿರುವ ಪ್ರಕರಣಗಳನ್ನು ಕೇವಲ ಒಂದು ಪುಟದ ಹಳೆಯ ದಾಖಲೆಗಳಿಂದ ಇತ್ಯರ್ಥಪಡಿಸುವ ಸಾಧ್ಯತೆಯೂ ಇರುತ್ತದೆ ಎಂದು ಹೇಳಿದರು. ಕಾಲೇಜಿನ ಪ್ರಾಂಶುಪಾಲ ಪ್ರೊ.ಹೆಚ್.ಸೀಗಾ ನಾಯಕ, ನಿವೃತ್ತ ತಹಸೀಲ್ದಾರ್ ಬಾಲಸುಬ್ರಹ್ಮಣ್ಯ, ಕಾಲೇಜಿನ ಇತಿಹಾಸ ವಿಭಾಗದ ಮುಖ್ಯಸ್ಥ ಡಾ.ಎನ್.ಸುಂದರೇಶ ಮತ್ತಿತರರು ಹಾಜರಿದ್ದರು.

ಪರಿಶಿಷ್ಟ ಜಾತಿ, ಪಂಗಡದ ಪತ್ರಕರ್ತರಿಗೆ 'ಮೋಜೋ ಕಿಟ್'ಗೆ ಅರ್ಜಿ ಆಹ್ವಾನ

ಬೆಂಗಳೂರು, ಮಾ.11- ಕರ್ನಾಟಕ ಮಾಧ್ಯಮ ಅಕಾಡೆಮಿಯು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪಯೋಜನೆಯಡಿ ಪತ್ರಕರ್ತರಿಗೆ ಉತ್ತೇಜನ ನೀಡುವ ಸಲುವಾಗಿ ಉಚಿತವಾಗಿ ಮೋ-ಜೋ ಕಿಟ್(Mo-Jo-Kit)ಗಳನ್ನು ವಿತರಿಸಲು ಅರ್ಜಿ ಆಹ್ವಾನಿಸಲಾಗಿದೆ.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಮಾನ್ಯತೆ ಪಡೆದ ಆಸಕ್ತ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಕ್ಕೆ ಸೇರಿದ ಪತ್ರಕರ್ತರು ಅರ್ಜಿ ಸಲ್ಲಿಸಬಹುದು. ವಾರ್ತಾ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ಪತ್ರಿಕೆಗಳು ಅಥವಾ ಉಪಗ್ರಹ ಸುದ್ದಿ ವಾಹಿನಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವವರೂ ಅರ್ಜಿ ಸಲ್ಲಿಸಬಹುದಾಗಿದೆ.

ಅಭ್ಯರ್ಥಿಗಳು ಸ್ವಯಂ ಅರ್ಜಿ ಜೊತೆಗೆ ಪೂರಕ ದಾಖಲೆಗಳನ್ನು ಮಾ.20 ರೊಳಗೆ **ಇ-ಮೇಲ್ ವಿಳಾಸ:** karnatakamediaacademy@gmail.com ಗೆ ಸಲ್ಲಿಸಬೇಕು. ಇಲ್ಲವೇ **ಅಂಚೆ ವಿಳಾಸ:** ಕಾರ್ಯದರ್ಶಿಗಳು, ಕರ್ನಾಟಕ ಮಾಧ್ಯಮ ಅಕಾಡೆಮಿ, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಕೇಂದ್ರ, ಡಾ.ಬಿ.ಆರ್.ಅಂಬೇಡ್ಕರ್ ಬೀದಿ, ಬೆಂಗಳೂರು-560001 ಇಲ್ಲಿಗೆ ಅರ್ಜಿಗಳನ್ನು ಕಳುಹಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಕ್ಯಾತಮಾರನಹಳ್ಳಿ ಶ್ರೀ ಹುಲಿಯಮ್ಮ ಜಾತ್ರೆ

ಅದ್ಧೂರಿಯಾಗಿ ನೆರವೇರಿದ ಹುಲಿವೇಷ; ಅಖಾಡದಲ್ಲಿ ಧೂಳೆಬ್ಬಿಸಿದ ಕುಸ್ತಿ ಪಟುಗಳು



ಶ್ರೀ ಹುಲಿಯಮ್ಮ ದೇವಸ್ಥಾನದ ಸಮೀಪದ ಕುಸ್ತಿ ಅಖಾಡದಲ್ಲಿ ಬಾಲ ಪೈಲ್ವಾನರು ಸೆಣಸಾಡುತ್ತಿರುವುದು

ಮೈಸೂರು,ಮಾ.11(ಪಿಎಂ)- ಕ್ಯಾತಮಾರನಹಳ್ಳಿ ಶ್ರೀ ಹುಲಿಯಮ್ಮ ಜಾತ್ರಾ ಮಹೋತ್ಸವದ 9ನೇ ದಿನವಾದ ಮಂಗಳವಾರ ಇಲ್ಲಿನ ಹುಲಿಯಮ್ಮ ದೇವಸ್ಥಾನದಲ್ಲಿ ವಿವಿಧ ಪೂಜಾ ಕೈಂಕರ್ಯಗಳು ನಡೆಯುವ ಜೊತೆಗೆ ದೇವಾಲಯ ಆವರಣದಲ್ಲಿ ಹುಲಿವೇಷ ಹಾಗೂ ಹುಲಿಯಾಡುವ ವಿಧಿವಿಧಾನ ಸಂಭ್ರಮದಿಂದ ನಡೆದವು.

ಅಲ್ಲದೆ, ದೇವಸ್ಥಾನದ ಸಮೀಪ ವ್ಯವಸ್ಥೆಗೊಳಿಸಿದ್ದ ಅಖಾಡದಲ್ಲಿ ನಡೆದ ಕುಸ್ತಿ ಪಂದ್ಯಗಳು ನೋಡುಗರಲ್ಲಿ ರೋಮಾಂಚನ ಉಂಟು ಮಾಡಿದವು. ಇಂದು ಬೆಳಗ್ಗೆ ದೇವಸ್ಥಾನದಲ್ಲಿರುವ ಹುಲಿಯಮ್ಮ ತಾಯಿಗೆ ವಿಶೇಷ ಅಲಂಕಾರದೊಂದಿಗೆ ಪೂಜಾ ಕೈಂಕರ್ಯ ನೆರವೇರಿಸಲಾಯಿತು. ನೂರಾರು ಮಂದಿ ಹುಲಿವೇಷ ಧರಿಸಿ ದೇವಸ್ಥಾನದ ಸುತ್ತ ಪ್ರದಕ್ಷಣೆ ಹಾಕುವ ಮೂಲಕ ಹರಕೆ ತೀರಿಸಿದರು. ಜೊತೆಗೆ ಹಲವರು ಹುಲಿಯಾಡುವ ವಿಧಿವಿಧಾನ ನೆರವೇರಿಸಿ ಹುಲಿಯಮ್ಮ ತಾಯಿಗೆ ಭಕ್ತಿ ಸಮರ್ಪಿಸಿದರು.

ಎರಡು ವರ್ಷಕ್ಕೊಮ್ಮೆ ನಡೆಯುವ ಹುಲಿಯಮ್ಮ ಜಾತ್ರೆಯ ಪ್ರಯುಕ್ತ ದೇವಸ್ಥಾನದ ಒಳಗೆ ಬಾಳೆದಿಂಡು ಚಪ್ಪರ ಹಾಕುವ ಪದ್ಧತಿ ಇದ್ದು, ಅಂತೆಯೇ ನಿರ್ಮಿಸಿರುವ ಚಪ್ಪರ, ಹಬ್ಬ ಮುಗಿಯುವವರೆಗೆ ಇರುವ ಮೂಲಕ ಅಸಂಖ್ಯಾತ ಭಕ್ತರು ಅದನ್ನು ಕಣ್ತುಂಬಿಕೊಳ್ಳಲಿದ್ದಾರೆ. ಹುಲಿಯಮ್ಮ ದೇವಸ್ಥಾನಕ್ಕೆ ಇಂದು ಅಪಾರ ಸಂಖ್ಯೆಯಲ್ಲಿ ಭಕ್ತರು ಭೇಟಿ ನೀಡಿ ತಾಯಿಯ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು.

ಮೈನವಿರೇಳಿಸಿದ ಕುಸ್ತಿ: ಜಾತ್ರೆ ಪ್ರಯುಕ್ತ ಇಂದು ದೇವಸ್ಥಾನದ ಸಮೀಪ ವ್ಯವಸ್ಥೆಗೊಳಿಸಿದ್ದ ಕುಸ್ತಿ ಅಖಾಡದಲ್ಲಿ ಸುಮಾರು 20 ಜೊತೆ ಕುಸ್ತಿ ಪಂದ್ಯ ನಡೆದವು. ಪೈಲ್ವಾನರು ಪರಸ್ಪರ ಸೆಣಸಾಡಿ ನೆರೆದವರಲ್ಲಿ ರೋಮಾಂಚನ ಉಂಟು ಮಾಡಿದರು. ಬಹುತೇಕ ಎಲ್ಲಾ ಕುಸ್ತಿಗಳಿಗೆ 3 ನಿಮಿಷದ ಅವಧಿ ನಿಗದಿಗೊಳಿಸಲಾಗಿತ್ತು ಕುಸ್ತಿ ಪಟುಗಳು ಪಟ್ಟಿಗೆ ಪ್ರತಿಪಟ್ಟು ಹಾಕಿ ಕಾದಾಡುವ ಮೂಲಕ ನೆರೆದವರಲ್ಲಿ ಮೈನವಿರೇಳುವಂತೆ ಮಾಡಿದರು. ಈ ಪೈಕಿ ಬಾಲ ಕುಸ್ತಿ ಪಟುಗಳು ವಿಶೇಷವಾಗಿ ಗಮನ ಸೆಳೆದರು. ಇದೇ ವೇಳೆ ಆಹ್ವಾನಿತ ಗಣ್ಯರನ್ನು ಸನ್ಮಾನಿಸಲಾಯಿತು.

ಜಾತ್ರೆಯ ಪ್ರಯುಕ್ತ ಇಂದು ಗ್ರಾಮಸ್ಥರು ತಮ್ಮ ಮನೆಗಳಲ್ಲಿ ಮಾಂಸಾಹಾರ ಸೇರಿದಂತೆ ವಿವಿಧ ಭಕ್ಷ್ಯಗಳನ್ನು ಮಾಡಿ ನೆಂಟರಿಷ್ಟರಿಗೆ ಉಣಬಡಿಸಿ, ತಾವೂ ಸವಿದು ಸಂಭ್ರಮಿಸಿದರು. ಅಲ್ಲದೆ, ದೇವಸ್ಥಾನದ ಆವರಣದಲ್ಲಿ ಕೋಲು ಕುಣಿತ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು. ನಾಳೆ ಸಹ ಮಾಂಸಾಹಾರ ಅಡುಗೆ ಮಾಡುವುದು ಜಾತ್ರೆಯ ವಿಶೇಷವಾಗಿದೆ.

ನಾಳೆ ಬುಧವಾರ (ಮಾ.12) ಜಾತ್ರೆಯ ಕೊನೆ ದಿನವಾಗಿದ್ದು, ಬೆಳಗ್ಗೆ 11 ಗಂಟೆಗೆ ಮಣ್ಣು ಮುದ್ದೆ ಪದ್ಧತಿಯ ಆಚರಣೆ ನಡೆಯಲಿದೆ. ಮಧ್ಯಾಹ್ನ 2 ಗಂಟೆಗೆ ಬಾಯಿಬೀಗ ಮೆರವಣಿಗೆ ನಡೆಯಲಿದ್ದು, ರಾತ್ರಿ 10 ಗಂಟೆಗೆ ಗ್ರಾಮದ ಅಶ್ವತ್ಥಕಟ್ಟೆ ಶ್ರೀ ನಾರಾಯಣಸ್ವಾಮಿ ಸಂಘದ ವತಿಯಿಂದ ನಡೆಯುವ ಪೌರಾಣಿಕ ನಾಟಕ ಪ್ರದರ್ಶನದೊಂದಿಗೆ ಈ ಬಾರಿಯ ಜಾತ್ರೆಗೆ ತೆರೆ ಬೀಳಲಿದೆ.

ಕ್ಯಾತಮಾರನಹಳ್ಳಿ ಶ್ರೀ ಹುಲಿಯಮ್ಮ ದೇವಸ್ಥಾನದ ಅಭಿವೃದ್ಧಿ ಟ್ರಸ್ಟ್ ಅಧ್ಯಕ್ಷ ಎಂ.ಲೋಕೇಶ್, ಕಾರ್ಯದರ್ಶಿ ಶಿವಕುಮಾರ್, ಸಹ ಕಾರ್ಯದರ್ಶಿ ಎಸ್.ಕುಮಾರ್, ಪದಾಧಿಕಾರಿ ಮಹದೇವಸ್ವಾಮಿ, ಹುಲಿಯಮ್ಮ ದೇವಸ್ಥಾನದ ಅರ್ಚಕ ಎಸ್.ಮಹೇಶ್ ಮತ್ತಿತರರು ಹಾಜರಿದ್ದು ಇಂದಿನ ಜಾತ್ರೆಯ ಕಾರ್ಯಕ್ರಮಗಳನ್ನು ನಡೆಸಿಕೊಟ್ಟರು.

ಇಂದಿರಾಗಾಂಧಿ ರಾಷ್ಟ್ರೀಯ ಮುಕ್ತ ವಿವಿಯಲ್ಲಿ ಪ್ರವೇಶ ಆರಂಭ

ವಿವಿಧ ಕೋರ್ಸ್‌ಗಳಿಗೆ ಅರ್ಜಿ ಆಹ್ವಾನ

ಮೈಸೂರು, ಮಾ.11(ಜಿಎ)-ಇಂದಿರಾ ಗಾಂಧಿ ರಾಷ್ಟ್ರೀಯ ಮುಕ್ತ ವಿವಿ ನೂತನ ಸಾಲಿನ ಪ್ರವೇಶ ಆರಂಭಿಸಿದ್ದು, ಪದವಿ, ಸ್ನಾತಕೋತ್ತರ ಪದವಿ, ಡಿಪ್ಲೊಮಾ ಮತ್ತು ಸರ್ಟಿಫಿಕೇಟ್ ಕೋರ್ಸ್‌ಗಳ ಹಂತದಲ್ಲಿ ಆನ್‌ಲೈನ್‌ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ವಿವಿಯ ಪ್ರಾದೇಶಿಕ ಉಪನಿರ್ದೇಶಕಿ ಡಾ.ಹೇಮಾಮಾಲಿನಿ ಈ ವಿಷಯ ತಿಳಿಸಿ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಗೆ ಶುಲ್ಕ ವಿನಾಯಿತಿಯೂ ಇದ್ದು, ಪ್ರವೇಶ ಪರೀಕ್ಷೆ ಇಲ್ಲದೆಯೇ ವಿದ್ಯಾರ್ಥಿಗಳು ನೇರವಾಗಿ ಎಂಬಿಎಗೆ ಪ್ರವೇಶ ಪಡೆಯಬಹುದಾಗಿದೆ. ವಿವಿಯಲ್ಲಿ ಲಭ್ಯವಿರುವ ಕೋರ್ಸ್‌ಗಳ ವಿವರವನ್ನು ಇಗ್ನೊ ಅಡ್ಮಿಷನ್ ಸಮರ್ಥ್ ವೆಬ್‌ಸೈಟ್‌ನಲ್ಲಿ ನೋಡಬಹುದು ಅಥವಾ ಮೈಸೂರಿನ ವಿದ್ಯಾವರ್ಧಕ ಕಾಲೇಜಿನಲ್ಲಿರುವ ಕೇಂದ್ರವನ್ನು 0821- 2423374 ಮೂಲಕ ಇಲ್ಲವೇ ಖುದ್ದಾಗಿ ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ ಎಂದರು.

ಗೋಷ್ಠಿಯಲ್ಲಿ ಸಂಯೋಜಕರಾದ ಡಾ.ಬಿ.ಎಸ್.ಶ್ರೀಹರ್ಷ, ಡಾ.ಸಿದ್ದರಾಜು, ರಮೇಶ್ ಉಪಸ್ಥಿತರಿದ್ದರು.

ಅಸಂಸದೀಯ ಹೇಳಿಕೆ: ರಾಜ್ಯಸಭೆಯಲ್ಲಿ ಕೋಲಾಹಲ;

ಕೊನೆಗೆ ಕ್ಷಮೆಯಾಚಿಸಿದ ವಿಪಕ್ಷ ನಾಯಕ ಖರ್ಗೆ!



ನವದೆಹಲಿ, ಮಾ.11- ಪ್ರತಿಪಕ್ಷ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರ ಅಸಂಸದೀಯ ಹೇಳಿಕೆ ಹಿನ್ನೆಲೆಯಲ್ಲಿ ಮಂಗಳವಾರ ರಾಜ್ಯಸಭೆಯಲ್ಲಿ ಕೋಲಾಹಲ ಉಂಟಾಯಿತು. ಕೊನೆಗೆ ದೇಶದಲ್ಲಿ ಪ್ರಾದೇಶಿಕ ವಿಭಜನೆ ಸೃಷ್ಟಿಸಿದ್ದಕ್ಕಾಗಿ ಬಿಜೆಪಿಯನ್ನು ಟೀಕಿಸಲು ಉದ್ದೇಶಿಸಿದ್ದೇನೆಯೇ ವಿನಃ ಉಪ ಸಭಾಪತಿಯನ್ನು ಉದ್ದೇಶಿಸಿ ನಾನು ಆ ಮಾತನ್ನು ಹೇಳಲಿಲ್ಲ ಎಂದು ಹೇಳುವ ಮೂಲಕ ಮಲ್ಲಿಕಾರ್ಜುನ ಖರ್ಗೆ ಕ್ಷಮೆ ಯಾಚಿಸಿದರು.

ಪ್ರಶ್ನೋತ್ತರ ಅವಧಿ ಮುಗಿಯುತ್ತಿದ್ದಂತೆಯೇ, ಮೇಲ್ಮನೆಯು ಶಿಕ್ಷಣ ಸಚಿವಾಲಯದ ಕಾರ್ಯನಿರ್ವಹಣೆಯ ಕುರಿತು ಚರ್ಚೆಯನ್ನು ಕೈಗೆತ್ತಿಕೊಂಡಾಗ ತಮಿಳುನಾಡು ಸರ್ಕಾರದ ವಿರುದ್ಧದ ಹೇಳಿಕೆಗಾಗಿ ಸಚಿವ ಧರ್ಮೇಂದ್ರ ಪ್ರಧಾನ್ ಕ್ಷಮೆ ಯಾಚಿಸಬೇಕೆಂದು ಪ್ರತಿಪಕ್ಷಗಳ ಸದಸ್ಯರು ಒತ್ತಾಯಿಸಿದರು. ರಾಷ್ಟ್ರೀಯ ಶಿಕ್ಷಣ ನೀತಿಯಡಿ (NEP) ತ್ರಿಭಾಷಾ ನೀತಿಯ ಬಗ್ಗೆ ತಮಿಳುನಾಡು ಸರ್ಕಾರದ ನಿಲುವಿಗೆ ಪ್ರಧಾನ್ ಸೋಮವಾರ ವಾಗ್ದಾಳಿ ನಡೆಸಿದ್ದರು. ರಾಜಕೀಯ ಕಾರಣದಿಂದ ರಾಜ್ಯದ ವಿದ್ಯಾರ್ಥಿಗಳ ಭವಿಷ್ಯವನ್ನು ಹಾಳುಮಾಡುತ್ತಿದೆ ಎಂದು ಅವರು ಮಂಗಳವಾರ ಆರೋಪಿಸಿದ್ದರು,

ಉಪ ಸಭಾಪತಿ ಹರಿವಂಶ್ ಅವರು ಶಿಕ್ಷಣ ಸಚಿವಾಲಯದ ಕಾರ್ಯನಿರ್ವಹಣೆಯ ಕುರಿತು ಚರ್ಚೆಯನ್ನು ಪ್ರಾರಂಭಿಸಲು ಕಾಂಗ್ರೆಸ್ ನಾಯಕ ದಿಗ್ವಿಜಯ್ ಸಿಂಗ್ ಅವರಿಗೆ ಅವಕಾಶ ನೀಡಿದರು. ಈ ವೇಳೆ ಕ್ಷೇತ್ರ ಪುನರ್ ವಿಂಗಡಣೆ ಮತ್ತು NEP ವಿರುದ್ಧ ಕಪ್ಪು ಬಟ್ಟೆ ಧರಿಸಿ ಬಂದಿದ್ದ ಡಿಎಂಕೆ ಸದಸ್ಯರು, ಪ್ರಧಾನ್ ಅವರು ಕ್ಷಮೆಯಾಚಿಸಬೇಕು ಎಂದು ಒತ್ತಾಯಿಸಿದರು.

ಗದ್ದಲದ ನಡುವೆ ಮಧ್ಯ ಪ್ರವೇಶಿಸಿದ ಪ್ರತಿಪಕ್ಷ ನಾಯಕ ಮಲ್ಲಿಕಾರ್ಜುನ ಖರ್ಗೆ, ಕಾಂಗ್ರೆಸ್ ಅಧ್ಯಕ್ಷರಿಗೆ ಬೆಳಿಗ್ಗೆಯೇ ಮಾತನಾಡಲು ಅವಕಾಶ ನೀಡಲಾಗಿದೆ ಎಂದು ಸಭಾಪತಿ ಹೇಳಿದರೂ, ಆ ಸಮಯದಲ್ಲಿ ಶಿಕ್ಷಣ ಸಚಿವರು ಸದನದಲ್ಲಿ ಇರಲಿಲ್ಲ ಎಂದು ಆರೋಪಿಸಿ, 'ಇದೊಂದು ರೀತಿ ಸರ್ವಾಧಿಕಾರ' ಎಂದರು. ದಿಗ್ವಿಜಯ್ ಸಿಂಗ್ ಮಾತನಾಡುವ ಸರದಿ ಎಂದು ಸಭಾಪತಿ ಹೇಳುತ್ತಿದ್ದಂತೆ, ಸರ್ಕಾರವನ್ನು ಮೂಲೆಗುಂಪು ಮಾಡಲು ಪ್ರತಿಪಕ್ಷಗಳು ಸಿದ್ಧವಾಗಿವೆ ಎಂದು ಖರ್ಗೆ ಹೇಳಿದರು.

ಮಲ್ಲಿಕಾರ್ಜುನ ಖರ್ಗೆ ಅವರು ತಮ್ಮ ಭಾಷಣದಲ್ಲಿ ಬಳಸಿದ 'ಠೋಕೆಂಗೆ' ಪದಕ್ಕೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ ಆಡಳಿತಾರೂಢ ಬಿಜೆಪಿ, 'ವಿಪಕ್ಷ ನಾಯಕರು ಉಪ ಸಭಾಪತಿಗಳನ್ನು ಉದ್ದೇಶಿಸಿ ಅವಮಾನಕಾರಿ ಪದ ಬಳಸಿದ್ದಾರೆ' ಎಂದು ತೀವ್ರ ಆಕ್ಷೇಪ ವ್ಯಕ್ತಪಡಿಸಿತು. ವಿರೋಧ ಪಕ್ಷದ ನಾಯಕರು ಬಳಸಿದ ಭಾಷೆ, ಪೀಠದ ಮೇಲಿನ ಆಕ್ಷೇಪಗಳು ಖಂಡನೀಯ...ಇದನ್ನು ಎಲ್ಲರೂ ಖಂಡಿಸಬೇಕು.ಸಭಾಪತಿಗೆ ಬಳಸಿರುವ ಪದಗಳು ಮತ್ತು ಭಾಷೆ ಅಕ್ಷಮ್ಯವಾಗಿದೆ, ಇನ್ನಾದರೂ ಅವರು ಕ್ಷಮೆಯಾಚಿಸಬೇಕು ಮತ್ತು ಪದವನ್ನು ಹೊರ ಹಾಕಬೇಕು ಎಂದು ಅವರು ಆಗ್ರಹಿಸಿದರು.

ನಿಮ್ಮನ್ನು ಎಲ್ಲಿ ಮತ್ತು ಹೇಗೆ ತಟ್ಟಬೇಕು ಎಂಬುದು ನಮಗೆ ಗೊತ್ತಿದೆ ಎಂಬ ಖರ್ಗೆ ಅವರ ಮಾತಿಗೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ ಬಿಜೆಪಿ ಸದಸ್ಯ ಜೆಪಿ ನಡ್ಡಾ, ಅತ್ಯಂತ ಹಿರಿಯ ಮತ್ತು ಸಂಸದೀಯ ಪ್ರಕ್ರಿಯೆಯ ಅನುಭವ ಹೊಂದಿರುವ ಮಲ್ಲಿಕಾರ್ಜುನ ಖರ್ಗೆ ಅವರು ಉಪ ಸಭಾಪತಿಗಳ ಬಗ್ಗೆ ಆಡಿರುವ ಮಾತುಗಳು ಅತ್ಯಂತ ಖಂಡನೀಯ ಎಂದು ಕಿಡಿಕಾರಿದರು.

ಖರ್ಗೆ ಕೂಡಲೇ ಅಂತಹ ಅಭಿವ್ಯಕ್ತಿಗಾಗಿ ಕ್ಷಮೆಯಾಚಿಸಿದರು. ಇದು ಕುರ್ಚಿಗಾಗಿ ಅಲ್ಲ, ಸರ್ಕಾರದ ನೀತಿಗಳಿಗಾಗಿ ಎಂದು ಸ್ಪಷ್ಟಪಡಿಸಿದರು. ನನ್ನನ್ನು ಕ್ಷಮಿಸಿ, ನಾನು ಉಪಸಭಾಪತಿ ಬಗ್ಗೆ ಮಾತನಾಡಿಲ್ಲ. ಅದು ಸರ್ಕಾರದ ನೀತಿಗಳ ಬಗ್ಗೆ ನನ್ನ ಹೇಳಿಕೆಯಿಂದ ನೋವಾಗಿದ್ದರೆ ಕ್ಷಮಿಸಿ, ನಾನು ನಿಮ್ಮಲ್ಲಿ ಕ್ಷಮೆಯಾಚಿಸುತ್ತೇನೆ ಎಂದು ಅವರು ಹೇಳಿದರು.

ಚುನಾವಣಾ ಪ್ರಕ್ರಿಯೆ ಬಲಪಡಿಸುವ ನಿಟ್ಟಿನಲ್ಲಿ ರಾಜಕೀಯ ಪಕ್ಷಗಳ ನಾಯಕರೊಂದಿಗೆ ಚುನಾವಣಾಧಿಕಾರಿಗಳ ಸಭೆ

ಬೆಂಗಳೂರು, ಮಾ.11- ಚುನಾವಣಾ ಪ್ರಕ್ರಿಯೆಗಳನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಕಾನೂನು ಚೌಕಟ್ಟಿನಲ್ಲಿ ಸಂವಹನ ನಡೆಸುವ ಉದ್ದೇಶದೊಂದಿಗೆ ರಾಷ್ಟ್ರೀಯ ಚುನಾವಣಾ ಆಯೋಗವು ರಾಜಕೀಯ ಪಕ್ಷಗಳ ಅಧ್ಯಕ್ಷರು ಹಾಗೂ ನಾಯಕರೊಂದಿಗೆ ಸಭೆ ನಡೆಸಲು ಎಲ್ಲಾ ಚುನಾವಣಾಧಿಕಾರಿಗಳಿಗೂ ಸೂಚಿಸಿದೆ.

ಈ ಕುರಿತು ರಾಜಕೀಯ ಪಕ್ಷಗಳಿಗೆ ಕಳುಹಿಸಲಾಗಿರುವ ಪತ್ರದಲ್ಲಿ ರಾಜಕೀಯ ಪಕ್ಷಗಳ ಅಧ್ಯಕ್ಷರು ಮತ್ತು ಪಕ್ಷದ ಹಿರಿಯ ಸದಸ್ಯರೊಂದಿಗೆ ಪರಸ್ಪರ ಅನುಕೂಲಕರ ಸಮಯದಲ್ಲಿ, ಸ್ಥಾಪಿತ ಕಾನೂನಿಗೆ ಅನುಗುಣವಾಗಿ ಚುನಾವಣಾ ಪ್ರಕ್ರಿಯೆಗಳನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಸಂವಾದವನ್ನು ರೂಪಿಸಲು ವೇದಿಕೆಯನ್ನು ಸೃಜಿಸಿರುವುದಾಗಿ ತಿಳಿಸಲಾಗಿದೆ.

ಚುನಾವಣೆಗಳಿಗೆ ಸಂಬಂಧಿಸಿದಂತೆ ತಾಲೂಕು ಮಟ್ಟದಲ್ಲಿ ಚುನಾವಣಾ ನೋಂದಣಾಧಿಕಾರಿಗಳು (ಇಆರ್‌ಓ), ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಚುನಾವಣಾಧಿಕಾರಿಗಳು(ಡಿಇಓ), ರಾಜ್ಯ ಮಟ್ಟದಲ್ಲಿ ಮುಖ್ಯ ಚುನಾವಣಾಧಿಕಾರಿಗಳು(ಸಿಇಓ) ಬಗೆಹರಿಸಲಾಗದ ಯಾವುದೇ ಸಮಸ್ಯೆಗಳಿಗೆ ಸಂಬಂಧಿಸಿದಂತೆ ಎಲ್ಲಾ ರಾಷ್ಟ್ರೀಯ ಹಾಗೂ ಪ್ರಾದೇಶಿಕ ಪಕ್ಷಗಳ ಸಲಹೆಗಳನ್ನು ಕ್ರೋಢೀಕರಿಸಿ, ಏಪ್ರಿಲ್ 30ರೊಳಗೆ ಭಾರತದ ಚುನಾವಣಾ ಆಯೋಗಕ್ಕೆ ಸಲ್ಲಿಸಲು ಸೂಚಿಸಲಾಗಿದೆ.

ಕಳೆದ ವಾರ ನಡೆದ ಎಲ್ಲಾ ರಾಜ್ಯಗಳ ಮುಖ್ಯ ಚುನಾವಣಾಧಿಕಾರಿಗಳ ಸಮ್ಮೇಳನದಲ್ಲಿ ರಾಷ್ಟ್ರೀಯ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಮಾತನಾಡಿ, ರಾಜ್ಯಗಳ ಮುಖ್ಯ ಚುನಾವಣಾಧಿಕಾರಿಗಳು, ಜಿಲ್ಲಾ ಚುನಾವಣಾಧಿಕಾರಿಗಳು ಸೇರಿದಂತೆ ಎಲ್ಲಾ ಚುನಾವಣಾ ನೋಂದಣಾಧಿಕಾರಿಗಳು, ರಾಜಕೀಯ ಪಕ್ಷಗಳೊಂದಿಗೆ ನಿಯಮಿತವಾಗಿ ಸಂವಹನ ನಡೆಸಲು ತಿಳಿಸಿದ್ದರಲ್ಲದೆ, ಚುನಾವಣಾ ಆಯೋಗದ ಈ ವಿನೂತನ ಕಾರ್ಯಕ್ಕೆ ರಾಜಕೀಯ ಪಕ್ಷಗಳೂ ಕೈಜೋಡಿಸುವ ಮೂಲಕ ಪ್ರಜಾಪ್ರಭುತ್ವವನ್ನು ಮತ್ತಷ್ಟು ಬಲಿಷ್ಠಗೊಳಿಸಲು ಮನವಿ ಮಾಡಿದ್ದರು.

ಆಯೋಗವು ರಾಜಕೀಯ ಪಕ್ಷಗಳಿಗೆ ಬರೆದ ಪತ್ರದಲ್ಲಿ ಜನರ ಪ್ರಾತಿನಿಧ್ಯ ಕಾಯ್ದೆ 1950 ಮತ್ತು 1951; ಮತದಾರರ ನಿಯಮಗಳ ನೋಂದಣಿ, 1960;ಚುನಾವಣಾ ನಿಯಮಗಳ ನಡವಳಿಕೆ, 1961;ಮಾನ್ಯ ಸುಪ್ರೀಂ ಕೋರ್ಟ್ ಮತ್ತು ಭಾರತದ ಚುನಾವಣಾ ಆಯೋಗವು ನೀಡಿದ ಸೂಚನೆಗಳು, ಕೈಪಿಡಿಗಳು ಮತ್ತು ಕೈಪಿಡಿಗಳ ಆದೇಶಗಳು ಭಾರತ ಚುನಾವಣಾ ಆಯೋಗದ ವೆಬ್‌ಸೈಟ್‌ನಲ್ಲಿ ಕಾಲಕಾಲಕ್ಕೆ ಲಭ್ಯವಿದೆ. ಮುಕ್ತ ಮತ್ತು ನ್ಯಾಯಯುತ ಚುನಾವಣೆಗಳನ್ನು ನಡೆಸಲು ವಿಕೇಂದ್ರೀಕೃತ ಮತ್ತು ಪಾರದರ್ಶಕ ಕಾನೂನು ಚೌಕಟ್ಟನ್ನು ಆಯೋಗವು ಸ್ಥಾಪಿಸಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ವಿವಿಧೆಡೆ ಮಾಜಿ ಸಂಸದ ಆರ್.ಧ್ರುವನಾರಾಯಣ್ ಪುಣ್ಯಸ್ಮರಣೆ

ಜನಪರ ರಾಜಕಾರಣಕ್ಕೆ ಧ್ರುವನಾರಾಯಣ್ ಮಾದರಿ

ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಮಾಜಿ ಸಚಿವ ವಿನಯ್ ಕುಮಾರ್ ಸೊರಕೆ

ನಂಜನಗೂಡು, ಮಾ.11– ಜನಪರ ರಾಜಕಾರಣಕ್ಕೆ ಮಾಜಿ ಸಂಸದ ದಿ.ಆರ್. ಧ್ರುವನಾರಾಯಣ್ ಮಾದರಿಯಾಗಿದ್ದ ಆದರ್ಶ ರಾಜಕಾರಣಿ ಎಂದು ಮಾಜಿ ಸಚಿವ ವಿನಯ್ ಕುಮಾರ್ ಸೊರಕೆ ತಿಳಿಸಿದರು.

ದಿ.ಆರ್.ಧ್ರುವನಾರಾಯಣ್ ಅವರ 2ನೇ ವರ್ಷದ ಪುಣ್ಯಸ್ಮರಣೆ ಹಿನ್ನೆಲೆಯಲ್ಲಿ ಚಾಮರಾಜನಗರದ ಹೆಗ್ಗವಾಡಿ ಗ್ರಾಮದಲ್ಲಿ ಆಯೋಜಿಸಿದ್ದ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಧ್ರುವನಾರಾಯಣ್ ಸಮಾಧಿಗೆ ಪುಷ್ಪಾರ್ಚನೆ ಮಾಡಿ ಮಾತನಾಡಿದ ಅವರು, ಧ್ರುವನಾರಾಯಣ್ ಅವರು ಎಲ್ಲರನ್ನೂ ಪ್ರೀತಿಸುವ ಗುಣ ಹೊಂದಿದ್ದರು. ಅಲ್ಲದೆ ಅವರು ಆರೋಗ್ಯವನ್ನು ಲೆಕ್ಕಿಸದೆ ತಮ್ಮ ಜೀವನವನ್ನೇ ಜನಸೇವೆಗಾಗಿ ಮುಡಿಪಾಗಿಟ್ಟಿದ್ದರು. ಆದ್ದರಿಂದಲೇ ಅವರು ಸರಳ ಸಜ್ಜನಿಕೆಯ, ಜನಾನುರಾಗಿ ರಾಜಕಾರಣಿ ಎಂದೇ ಬಿಂಬಿತವಾಗಿದ್ದರು. ಸಾಮಾನ್ಯವಾಗಿ ರಾಜಕಾರಣಿಗಳು ಅಧಿಕಾರವಿದ್ದಾಗ, ಬದುಕಿದ್ದಾಗ ಜನಪ್ರಿಯರಾಗುವುದು ಸಹಜ. ಆದರೆ ಧ್ರುವನಾರಾಯಣ್ ಅವರು ತಮ್ಮ ಅಭಿವೃದ್ಧಿ ಕೆಲಸಗಳಿಂದ ಕಾಲವಾದ ನಂತರವೂ ಸಹ ಅವರ ಜನಪ್ರಿಯತೆ ಹೆಚ್ಚಾಗುತ್ತಿದೆ ಎಂದರು.



ಮಾಜಿ ಸಂಸದ ಆರ್.ಧ್ರುವನಾರಾಯಣ್ ಸಮಾಧಿಗೆ ಶಾಸಕ ದರ್ಶನ್ ಮತ್ತು ಕುಟುಂಬ ವರ್ಗದವರು ಪೂಜೆ ಸಲ್ಲಿಸಿದರು.

ಆರ್.ಧ್ರುವನಾರಾಯಣ್ 2ನೇ ಪುಣ್ಯಸ್ಮರಣೆ ಹಿನ್ನೆಲೆಯಲ್ಲಿ ಹೆಗ್ಗವಾಡಿ ಗ್ರಾಮದಲ್ಲಿರುವ ಅವರ ಸಮಾಧಿಗೆ ಶಾಸಕ ದರ್ಶನ್ ಹಾಗೂ ಅವರ ಕುಟುಂಬ ವರ್ಗದವರು, ಜನಪ್ರತಿನಿಧಿಗಳು ಸೇರಿದಂತೆ ಕಾಂಗ್ರೆಸ್ ಪಕ್ಷದ ಮುಖಂಡರು, ಕಾರ್ಯಕರ್ತರು ವಿಶೇಷ ಪೂಜೆ ಸಲ್ಲಿಸಿದರು.

ನಂಜನಗೂಡಿನ ಆರ್.ಪಿ.ರಸ್ತೆಯಲ್ಲಿರುವ ಕಾಂಗ್ರೆಸ್ ಕಚೇರಿಯಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಅಪಾರ ಸಂಖ್ಯೆಯ ಅಭಿಮಾನಿಗಳು ದಿ.ಆರ್.ಧ್ರುವನಾರಾಯಣ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಗೌರವ ನಮನ ಸಲ್ಲಿಸಿದರು.

ಈ ವೇಳೆ ಶಾಸಕ ಗಣೇಶ್ ಪ್ರಸಾದ್, ಮಾಜಿ ಶಾಸಕರಾದ ಕೇಶವಮೂರ್ತಿ, ಬಾಲರಾಜು, ಹೆಚ್.ಪಿ.ಮಂಜುನಾಥ್, ಕಾಂಪೋಸ್ಟ್ ಅಭಿವೃದ್ಧಿ ನಿಗಮ ಮಾಜಿ ಅಧ್ಯಕ್ಷ ಎಸ್.ಮಹದೇವಯ್ಯ, ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷೆ ಪುಷ್ಪ ಅಮರನಾಥ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಸಿ.ಎಂ.ಶಂಕರ್, ಶ್ರೀಕಂಠನಾಯಕ, ತಗಡೂರು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಂಗಸ್ವಾಮಿ, ಕಾಡಾ ಅಧ್ಯಕ್ಷ ಮರಿಸ್ವಾಮಿ, ವಾಲ್ಮೀಕಿ ನಿಗಮ ಮಾಜಿ ಅಧ್ಯಕ್ಷ ಎಸ್.ಸಿ. ಬಸವರಾಜು, ವಿಶ್ವಕರ್ಮ ನಿಗಮ ಮಾಜಿ ಅಧ್ಯಕ್ಷ ನಂದಕುಮಾರ್, ಕಾಂಗ್ರೆಸ್ ಉಸ್ತುವಾರಿಗಳಾದ ಸೋಮೇಶ್, ಬಿ.ಕೆ. ರವಿಕುಮಾರ್, ಗ್ಯಾರಂಟಿ ಅನುಷ್ಠಾನ ಸಮಿತಿ ತಾಲೂಕು ಅಧ್ಯಕ್ಷ ಕೆ.ಮಾರುತಿ, ಕಾಂಗ್ರೆಸ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪ್ರದೀಪ್ ಕುಮಾರ್, ಮುಖಂಡರಾದ ಲತಾ, ಶಶಿರೇಖಾ, ರಾಜೇಶ, ಎಸ್.ಸಿ.ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶಿವಣ್ಣ, ನಾಗರಾಜಯ್ಯ, ಗೋವಿಂದರಾಜು, ಕುಳ್ಳಯ್ಯ, ಸೋಮು, ರಂಗದಾಸ್, ಕೆಪಿಸಿಸಿ ಸದಸ್ಯ ಅಕ್ಬರ್ ಅಲೀಮ್, ನಗರಸಭಾ ಅಧ್ಯಕ್ಷ ಶ್ರೀಕಂಠಸ್ವಾಮಿ ಸೇರಿದಂತೆ ಕಾಂಗ್ರೆಸ್ ಕಾರ್ಯಕರ್ತರು ಇದ್ದರು.

ತಂದೆ ಹಾದಿಯಲ್ಲಿ ಸಾಗುವೆ

ಶಾಸಕ ದರ್ಶನ್ ಮಾತನಾಡಿ, ನನ್ನ ತಂದೆ ಆರ್.ಧ್ರುವನಾರಾಯಣ್ ಅವರು ಕಾರ್ಯಕರ್ತರೊಂದಿಗೆ ನಿಕಟ ಸಂಪರ್ಕ ವಿಟ್ಟುಕೊಂಡು 2 ಬಾರಿ ಸಂಸದರಾಗಿ ಹೇಗೆ ಅಭಿವೃದ್ಧಿ ಕಾರ್ಯ ನಡೆಸುತ್ತಿದ್ದರೋ, ಕಾರ್ಯಕರ್ತರನ್ನು ಹೇಗೆ ವಿಶ್ವಾಸಕ್ಕೆ ತೆಗೆದುಕೊಳ್ಳುತ್ತಿದ್ದರೋ ಅದೇ ರಿತಿ ನಾನು ಸಹ ಅವರು ಹಾಕಿಕೊಟ್ಟ ದಾರಿಯಲ್ಲಿ ಮುನ್ನಡೆಯುತ್ತೇನೆ. ಕಾರ್ಯಕರ್ತರು, ನನ್ನ ತಂದೆ ಅಭಿಮಾನಿಗಳು ಯಾರು ಸಹ ಧೃತಿಗೆಡಬೇಕಾಗಿಲ್ಲ. ನಿಮ್ಮೆಲ್ಲರ ಸಂಕಷ್ಟಕ್ಕೆ ನಿಮ್ಮ ಜೊತೆ ನಿಲ್ಲುತ್ತೇನೆ. ನನ್ನ ತಂದೆ ತಾಯಿ ಕಳೆದುಕೊಂಡ ನಂತರ ಕ್ಷೇತ್ರದ ಮತದಾರರೇ ನನ್ನ ತಂದೆ ತಾಯಿ ಎಂದು ತಿಳಿದು ಅಭಿವೃದ್ಧಿ ಕೆಲಸಗಳಲ್ಲಿ ನಿರತರಾಗಿ, ಜನರ ಸಂಕಷ್ಟಗಳಿಗೆ ಸ್ಪಂದಿಸುತ್ತಿದ್ದೇನೆ. ಮುಂದಿನ ದಿನಗಳಲ್ಲಿ ನನ್ನ ತಂದೆ ಕನಸಿನಂತೆ ಕ್ಷೇತ್ರದಲ್ಲಿ ಅತಿ ಹೆಚ್ಚು ಅಭಿವೃದ್ಧಿ ಕೆಲಸಗಳನ್ನು ನಡೆಸಿ ತಂದೆ ಕನಸನ್ನು ನನಸು ಮಾಡುತ್ತೇನೆ ಎಂದರು.

ಪಕ್ಷಾತೀತ ಜನಪರ ನಾಯಕ ಆರ್. ಧ್ರುವನಾರಾಯಣ್



ಸರಗೂರಲ್ಲಿ ದಿ.ಆರ್.ಧ್ರುವನಾರಾಯಣ್ ಪುಣ್ಯಸ್ಮರಣೆ ನಡೆಯಿತು.

ಸರಗೂರು, ಮಾ.11– ಪಕ್ಷಾತೀತ ಜನಪರ ನಾಯಕ ದಿ.ಆರ್.ಧ್ರುವನಾರಾಯಣ್ ಎಂದು ಡಾ.ಅಂಬೇಡ್ಕರ್ ಭವನ ಟ್ರಸ್ಟ್ ಅಧ್ಯಕ್ಷ ಸಣ್ಣಸ್ವಾಮಿ ತಿಳಿಸಿದರು.

ಪಟ್ಟಣದ 4ನೇ ವಾರ್ಡ್ ಅಂಬೇಡ್ಕರ್ ಭವನದಲ್ಲಿ ಆದಿ ಕರ್ನಾಟಕ ಸಮಾಜ ಹಾಗೂ ಡಾ.ಬಿರ್.ಅಂಬೇಡ್ಕರ್ ಟ್ರಸ್ಟ್ ವತಿಯಿಂದ ನಡೆದ ದಿ.ಆರ್.ಧ್ರುವನಾರಾಯಣ್ ಅವರ 2ನೇ ವರ್ಷದ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ದಿ.ಆರ್.ಧ್ರುವನಾರಾಯಣ್ ಅವರು ತಾಲೂಕಿನ ಕಾಡಂಚಿನ ಗ್ರಾಮಗಳ ಅಭಿವೃದ್ಧಿಗೆ ಶ್ರಮಿಸಿದ್ದರು. ರಸ್ತೆ, ಆಸ್ಪತ್ರೆಗಳ ನಿರ್ಮಾಣಕ್ಕೆ ಒತ್ತು ನೀಡಿದ್ದರು. ಬಿ.ಮಟಕೆರೆ ಗ್ರಾಮವನ್ನು ಸಂಸದರ ಆದರ್ಶ ಗ್ರಾಮವನ್ನಾಗಿ ಆಯ್ಕೆ ಮಾಡಿಕೊಂಡು ಅಭಿವೃದ್ಧಿಗೊಳಿಸಿದ ಧ್ರುವನಾರಾಯಣ್ ಅವರಿಂದ ಸರಗೂರು ತಾಲೂಕು ಮತ್ತಷ್ಟು ಅಭಿವೃದ್ಧಿ ಹೊಂದಬೇಕಿತ್ತು. ಆದರೆ ಅವರು ನಮ್ಮನ್ನು ಅಗಲಿರುವುದು ತುಂಬಲಾರದ ನಷ್ಟ ಎಂದರು.

ಅಕ್ರಮ ಸಕ್ರಮ ಸಮಿತಿ ಸದಸ್ಯ ಶಿವಶಂಕರನ್ ಮಾತನಾಡಿ, ಧ್ರುವನಾರಾಯಣ್ ಅವರ ಸರಳತೆ, ನಾಯಕತ್ವ ಗುಣ, ಕಾರ್ಯವೈಖರಿಯನ್ನು ಎಷ್ಟು ಗುಣಗಾನ ಮಾಡಿದರೂ ಸಾಲದು. ಸರಗೂರು ತಾಲೂಕು ಕೇಂದ್ರವಾಗಲು ಅವಿರತವಾಗಿ ಶ್ರಮಿಸಿದರು. ಗ್ರಾಮೀಣ ಭಾಗದ ಪ್ರತಿ ಹಳ್ಳಿಗಳಲ್ಲಿ ಅಂಬೇಡ್ಕರ್, ವಾಲ್ಮೀಕಿ, ವಿಶ್ವಕರ್ಮ ಸಮುದಾಯ ಭವನ ಸೇರಿದಂತೆ ಇನ್ನಿತರ ಭವನಗಳು ನಿರ್ಮಾಣಗೊಳ್ಳಲು ಧ್ರುವ ಅವರ ಶ್ರಮ ಅಪಾರ ಎಂದರು.

ಇದೇ ವೇಳೆ ದಿ.ಆರ್.ಧ್ರುವನಾರಾಯಣ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಲಾಯಿತು. ಆದಿಕರ್ನಾಟಕ ಸಮಾಜದ ಯಜಮಾನ ಭೋಗಯ್ಯ, ರಂಗಯ್ಯ, ಮಾಜಿ ಯಜಮಾನರಾದ ಭೀಮಯ್ಯ, ಟ್ರಸ್ಟ್ ಖಜಾಂಚಿ ಕಾರಯ್ಯ, ಕಾರ್ಯದರ್ಶಿ ಗೋಪಾಲ್, ಮುಖಂಡರಾದ ಮಹದೇವ್, ಸಿದ್ದಲಿಂಗಪ್ಪ, ದೇವಯ್ಯ, ಜವರಯ್ಯ, ದೇವಪ್ಪ, ಜಯ, ನಂಜುಂಡಯ್ಯ, ಬಿಲ್ಲಯ್ಯ ಇನ್ನಿತರರಿದ್ದರು.

ಧ್ರುವನಾರಾಯಣ್ ಕೊಡುಗೆ ಅಪಾರ



ಹೆಡಿಯಾಲದಲ್ಲಿ ದಿ.ಆರ್. ಧ್ರುವನಾರಾಯಣ್ ಅವರ 2ನೇ ವರ್ಷದ ಪುಣ್ಯಸ್ಮರಣೆ ನಡೆಯಿತು.

ಮಲ್ಕುಂಡಿ, ಮಾ.11– ಇಲ್ಲಿಗೆ ಸಮೀಪದ ಹೆಡಿಯಾಲದಲ್ಲಿ ಮಾಜಿ ಸಂಸದ ದಿ.ಆರ್.ಧ್ರುವನಾರಾಯಣ್ ಅವರ 2ನೇ ವರ್ಷದ ಪುಣ್ಯಸ್ಮರಣೆ ಕಾರ್ಯಕ್ರಮ ನಡೆಯಿತು.

ಗ್ರಾಮದಲ್ಲಿ ಧ್ರುವನಾರಾಯಣ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದ ಗ್ರಾಪಂ ಸದಸ್ಯ ಗೋವಿಂದರಾಜು ಮಾತನಾಡಿ, ಸಂಸದ ದಿ.ಆರ್. ಧ್ರುವನಾರಾಯಣ್ ಅವರು ನಮ್ಮನ್ನು ಅಗಲಿ 2 ವರ್ಷ ಕಳೆದರೂ ಕ್ಷೇತ್ರದ ಜನಮಾನಸದಲ್ಲಿ ಇಂದಿಗೂ ಉಳಿದಿದ್ದಾರೆ. ಕೆಪಿಸಿಸಿ ಕಾರ್ಯಾಧ್ಯಕ್ಷರಾಗಿ ಹಗಲಿರುಳು ಪಕ್ಷ ಸಂಘಟಿಸಿದ್ದಾರೆ. 2 ಬಾರಿ ಸಂಸದರಾಗಿ ನಂಜನಗೂಡು ಕ್ಷೇತ್ರಕ್ಕೆ ಅಪಾರ ಕೊಡುಗೆ ನೀಡಿದ್ದಾರೆ. ಬಡಜನರ ಆಶಾಕಿರಣವಾಗಿ ಉತ್ತಮ ಸೇವೆ ಸಲ್ಲಿಸಿದ ಅವರು ನಮ್ಮನ್ನು ಅಗಲಿದ್ದು, ಪ್ರತಿಯೊಬ್ಬರೂ ಅವರ ಹಾದಿಯಲ್ಲಿ ಸಾಗಬೇಕಿದೆ ಎಂದರು. ಇದೇ ವೇಳೆ ಸಾರ್ವಜನಿಕರಿಗೆ ಮಜ್ಜಿಗೆ, ಪಾನಕ ವಿತರಿಸಲಾಯಿತು.

ಗ್ರಾಪಂ ಅಧ್ಯಕ್ಷ ದಿನೇಶ್, ತಾಪಂ ಮಾಜಿ ಸದಸ್ಯ ನಾಗರಾಜೇಗೌಡ, ಮುಖಂಡರಾದ ಸುಬ್ರಹ್ಮಣ್ಯ, ಪಟೇಲ್ ಮಹದೇವಪ್ಪ, ಕಾಳೇಗೌಡ, ಸಾದಿಕ್, ಅನ್ವರ್, ಸೋಮಣ್ಣ, ರವಿ, ಗುಂಡು, ಪುಟ್ಟೇಗೌಡ, ಪ್ರಕಾಶ್, ಹಾಲೇಗೌಡ, ಮಂಜು, ಪ್ರಕಾಶ್, ಬಾಬು, ಗೋವಿಂದ, ರಾಮಚಂದ್ರು, ನಂಜುಂಡಯ್ಯ, ಫಾರೂಕ್, ಚಿನ್ನಸ್ವಾಮಿ, ನಾಗೇಶ್, ಮಹದೇವು ಸೇರಿದಂತೆ ಇತರಿದ್ದರು.

ಕೋಟೆಯಲ್ಲಿ ಧ್ರುವನಾರಾಯಣ್ ಸ್ಮರಣೆ



ಕೋಟೆಯಲ್ಲಿ ಧ್ರುವನಾರಾಯಣ್ ಅವರ 2ನೇ ವರ್ಷದ ಪುಣ್ಯಸ್ಮರಣೆ ಕಾರ್ಯಕ್ರಮ ನಡೆಯಿತು.

ಹೆಚ್.ಡಿ.ಕೋಟೆ, ಮಾ.11– ಮಾಜಿ ಸಂಸದ ದಿ.ಆರ್.ಧ್ರುವನಾರಾಯಣ್ ಅವರು ಸಂಸದರು, ಶಾಸಕರಾಗಿ ಉತ್ತಮ ಸೇವೆ ಸಲ್ಲಿಸಿದ್ದು, ಸಂಸದರ ನಿಧಿಯನ್ನು ಅಭಿವೃದ್ಧಿಗೆ ಸಮರ್ಪಕವಾಗಿ ಬಳಸಿದ್ದಕ್ಕಾಗಿ ದೇಶದಲ್ಲೇ ಉತ್ತಮ ಸಂಸದರಾಗಿ 4ನೇ ಸ್ಥಾನ ಪಡೆದಿದ್ದರು ಎಂದು ಧ್ರುವನಾರಾಯಣ್ ಅಭಿಮಾನಿ ಬಳಗದ ತಾಲೂಕು ಅಧ್ಯಕ್ಷ ಹೆಚ್.ಸಿ. ನರಸಿಂಹಮೂರ್ತಿ ತಿಳಿಸಿದರು.

ಪಟ್ಟಣದ ಅಂಬೇಡ್ಕರ್ ಭವನದಲ್ಲಿ ಹೆಚ್.ಡಿ.ಕೋಟೆ ಮತ್ತು ಸರಗೂರು ತಾಲೂಕು ಧ್ರುವನಾರಾಯಣ್ ಅಭಿಮಾನಿ ಬಳಗದಿಂದ ಆಯೋಜಿಸಿದ್ದ ಮಾಜಿ ಸಂಸದ ದಿ.ಆರ್.ಧ್ರುವನಾರಾಯಣ್ ಅವರ 2ನೇ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದ ಅವರು, ಧ್ರುವನಾರಾಯಣ್ ಅವರ ಪುಣ್ಯಸ್ಮರಣೆ ಅಂಗವಾಗಿ ಬೆಂಗಳೂರಿನ ಶಂಕರ್ ಕಣ್ಣಿನ ಆಸ್ಪತ್ರೆ ವತಿಯಿಂದ ಕಣ್ಣಿನ ತಪಾಸಣೆ ಹಾಗೂ ಮೈಸೂರಿನ ಡಿಆರ್‌ಎಂ ಆಸ್ಪತ್ರೆ ವತಿಯಿಂದ ವೈದ್ಯಕೀಯ ತಪಾಸಣೆ ಹಮ್ಮಿಕೊಳ್ಳಲಾಗಿದೆ ಎಂದರು.

ತಾಲೂಕಿನ ಜನತೆ ಮೇಲೆ ಅಪಾರ ಪ್ರೀತಿ ಇಟ್ಟುಕೊಂಡಿದ್ದ ಧ್ರುವನಾರಾಯಣ್ ಅವರು ತಾಲೂಕಿನ ಅಭಿವೃದ್ಧಿಗೆ ಶ್ರಮಿಸಿದ್ದಾರೆ. ಪಟ್ಟಣದ ತಾಯಿ ಮತ್ತು ಮಕ್ಕಳ ಆಸ್ಪತ್ರೆ, ಏಕಲವ್ಯ ವಸತಿ ಶಾಲೆ, ತಂಬಾಕು ಎರಡನೇ ಹರಾಜು ಮಾರುಕಟ್ಟೆ ಸೇರಿದಂತೆ ಅನೇಕ ಅಭಿವೃದ್ಧಿ ಕಾಮಗಾರಿಗಳನ್ನು ನಡೆಸಿ ಜನಪ್ರಿಯತೆ ಗಳಿಸಿದ್ದರು. ಇಂದು ಆರ್.ಧ್ರುವನಾರಾಯಣ್ ಇಲ್ಲದಿದ್ದರೂ ಜನರ ಮನಸ್ಸಿನಲ್ಲಿ ಉಳಿದಿದ್ದಾರೆ ಎಂದರು.

ಈ ವೇಳೆ 200ಕ್ಕೂ ಹೆಚ್ಚು ಮಂದಿ ಶಿಬಿರದಲ್ಲಿ ಪಾಲ್ಗೊಂಡು ತಪಾಸಣೆಗೆ ಒಳಪಟ್ಟರು. ಕೆ.ಬೆಳತ್ತೂರು ಪಿಎಸಿಎಸ್ ಅಧ್ಯಕ್ಷ ಸತೀಶ್‌ಗೌಡ, ಮೈಸೂರು ವಿವಿ ಸಿಂಡಿಕೇಟ್ ಸದಸ್ಯ ಕ್ಯಾತನಹಳ್ಳಿ ನಾಗರಾಜು, ಕೆಪಿಸಿಸಿ ಹಿಂದುಳಿದ ವರ್ಗಗಳ ರಾಜ್ಯ ಪ್ರಧಾನ ಕಾರ್ಯದರ್ಶಿ ಬೈಪಾಸ್ ಮಂಜುನಾಥ್, ಜಿಪಂ ಮಾಜಿ ಉಪಾಧ್ಯಕ್ಷೆ ನಂದಿನಿ, ಸದಸ್ಯ ರವಿ, ಪುರಸಭಾ ಸದಸ್ಯ ಪ್ರೇಮ್ ಸಾಗರ್, ಗ್ರಾಪಂ ಅಧ್ಯಕ್ಷ ಶೈಲೇಂದ್ರ, ಸರಗೂರು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಾದಪ್ಪ, ಯುವ ಕಾಂಗ್ರೆಸ್ ಅಧ್ಯಕ್ಷ ಶಿವರಾಜು, ಟೌನ್ ಮಹಿಳಾ ಅಧ್ಯಕ್ಷೆ ಸೌಮ್ಯ, ಕಾಂಗ್ರೆಸ್ ವಕ್ತಾರ ಅಶೋಕ್, ಗ್ಯಾರಂಟಿ ಯೋಜನೆಗಳ ತಾಲೂಕು ಅಧ್ಯಕ್ಷ ಚಾಮರಾಜು, ಮುಖಂಡರಾದ ಪ್ರದೀಪ, ಜೀವಿಕ ಬಸವರಾಜು, ಶಫಿ, ಕಾಳಸ್ವಾಮಿ, ರವಿ, ಶಿವಣ್ಣ, ನಾಗರಾಜು, ವೈದ್ಯರಾದ ಸುಹಾಸ್, ಕೇಶವ್, ಅರ್ಪಿತ, ರಮ್ಯಾ ಹಾಗೂ ಸಿಬ್ಬಂದಿ ಇದ್ದರು.

ರೈತರಿಗೆ ಸಮರ್ಪಕವಾಗಿ ಸವಲತ್ತು ಒದಗಿಸಿ

ರಂಗಸಮುದ್ರ ಪಿಎಸಿಎಸ್ ನಿರ್ದೇಶಕ ಟಿ.ವಾಸುದೇವ್



ಟಿಎಪಿಸಿಎಂಎಸ್ ಸಭಾಂಗಣದಲ್ಲಿ ಸಹಕಾರಿ ಬಂಧುಗಳನ್ನು ಸನ್ಮಾನಿಸಲಾಯಿತು.

ತಿ.ನರಸೀಪುರ, ಮಾ.11– ಸಹಕಾರ ಸಂಘಗಳ ಬೈಲಾ ಪ್ರಕಾರ ರೈತರಿಗೆ ಸಮರ್ಪಕವಾಗಿ ಸವಲತ್ತುಗಳನ್ನು ಒದಗಿಸಬೇಕು ಎಂದು ರಂಗಸಮುದ್ರ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನಿರ್ದೇಶಕ ಟಿ.ವಾಸುದೇವ್ ತಿಳಿಸಿದರು.


ಪಟ್ಟಣದ ಟಿಎಪಿಸಿಎಂಎಸ್ ಸಭಾಂಗಣದಲ್ಲಿ ನಡೆದ ಸರಳ ಸಮಾರಂಭದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ಟಿಎಪಿ ಸಿಎಂಎಸ್‌ನಲ್ಲಿ ರೈತರಿಗೆ ಗೊಬ್ಬರ, ಬಿತ್ತನೆ ಭತ್ತ, ಕುಡಿಯುವ ನೀರಿನ ಶುದ್ಧೀಕರಣ ಘಟಕ ಇನ್ನು ಮುಂದಾದ ರೈತರಿಗೆ ಬೇಕಾಗುವಂತಹ ಸವಲತ್ತುಗಳನ್ನು ವಿತರಿಸಬೇಕು. ಇದಕ್ಕೆ ಸಹಕಾರಿ ಧುರೀಣ ವೈ.ಎನ್. ಶಂಕರ್‌ಗೌಡರು ಸಹಮತ ವ್ಯಕ್ತಪಡಿಸಿದ್ದು, ಶೀಘ್ರದಲ್ಲೇ ಕಾರ್ಯ ರೂಪಕ್ಕೆ ಬರುವಂತೆ ಸಲಹೆ ನೀಡಿದರು.

ನೂತನ ಕಸಬಾ ಪಿಎಸಿಎಸ್ ಅಧ್ಯಕ್ಷ ಮಲ್ಲಣ್ಣ ಯಾಚೇನಹಳ್ಳಿ ಸಹಕಾರ ಸಂಘದ ಅಧ್ಯಕ್ಷ ವೈ.ಎನ್.ಶಂಕರೇಗೌಡ ಹಾಗೂ ನೆರಗ್ಯಾತನಹಳ್ಳಿ ಸಂಘದ ನಿರ್ದೇಶಕ ಕುಮಾರಸ್ವಾಮಿ ಅವರನ್ನು ಟಿಎಪಿಸಿಎಂಎಸ್ ವತಿಯಿಂದ ಸನ್ಮಾನಿಸಲಾಯಿತು.

ಈ ವೇಳೆ ಅಧ್ಯಕ್ಷ ಟಿ.ಪಿ.ಸುಬ್ರಹ್ಮಣ್ಯ, ಸಂಘದ ಕಾರ್ಯದರ್ಶಿ ಜಿ.ರಘುನಂದನ್, ನಿರ್ದೇಶಕರಾದ ಬಿ.ಎಸ್. ಮಹೇಶ್ ಎಂ.ಎಂ.ಜಯಣ್ಣ, ಎಂ.ಎಸ್. ಬಸವರಾಜು, ವೈ.ಎಸ್.ರಾಮಸ್ವಾಮಿ, ಎಂ.ಕೆ.ಮಹೇಶ್, ಕೆ.ಎಂ.ಸುನೀಲ್, ಡಿ.ಕೋಮಲ, ಎಸ್.ನಿರ್ಮಲ, ಶಿವಲಿಂಗೇಗೌಡ, ಸಿಬ್ಬಂದಿಗಳಾದ ಟಿ.ಜಿ. ಸುಮಿತ್ರ, ಎನ್.ಮಹೇಶ್, ಸಂದೇಶ್, ಶ್ರೀಧರ್ ಹಾಜರಿದ್ದರು.

ವಿಜೃಂಭಣೆಯ ದುರ್ಗಾ ಪರಮೇಶ್ವರಿ ಅಮ್ಮನವರ ಬ್ರಹ್ಮರಥೋತ್ಸವ

ಕೆ.ಆರ್.ನಗರ, ಮಾ.11– ತಾಲೂಕಿನ ಹಂಪಾಪುರ ಗ್ರಾಮದ ದುರ್ಗಾ ಪರಮೇಶ್ವರಿ ಅಮ್ಮನವರ ಬ್ರಹ್ಮರಥೋತ್ಸವ ಸಾವಿರಾರು ಭಕ್ತರ ಸಮ್ಮುಖದಲ್ಲಿ ಮಂಗಳವಾರ ವಿಜೃಂಭಣೆಯಿಂದ ನಡೆಯಿತು.



ದುರ್ಗಾ ಪರಮೇಶ್ವರಿ ಅಮ್ಮನವರ ಬ್ರಹ್ಮ ರಥೋತ್ಸವ ನಡೆಯಿತು.

ರಥೋತ್ಸವ ಅಂಗವಾಗಿ ವಿವಿಧೆಡೆಗಳಿಂದ ಆಗಮಿಸಿದ್ದ ಸಾವಿರಾರು ಭಕ್ತರು ದೇವರಿಗೆ ವಿಶೇಷ ಪೂಜೆ ಸಲ್ಲಿಸಿ ಇಷ್ಟಾರ್ಥ ನೆರವೇರಿಸುವಂತೆ ಪ್ರಾರ್ಥಿಸಿದರು. ಮಧ್ಯಾಹ್ನ 12 ರಿಂದ 12.30ಕ್ಕೆ ನಡೆದ ಬ್ರಹ್ಮರಥೋತ್ಸವಕ್ಕೂ ಮುನ್ನ ದೇವರನ್ನು ಅಲಂಕರಿಸಿ ಉಯ್ಯಾಲೆ ಆಡಿಸುತ್ತಾ ಅಲಂಕೃತ ರಥದಲ್ಲಿ ಪ್ರತಿಷ್ಠಾಪಿಸಲಾಯಿತು. ನಂತರ ಶಾಸಕ ಡಿ.ರವಿಶಂಕರ್, ಸ್ಥಳೀಯ ಜನಪ್ರತಿನಿಧಿಗಳು ಸೇರಿದಂತೆ ಭಕ್ತರು ದುರ್ಗಾ ಪರಮೇಶ್ವರಿ ಅಮ್ಮನವರಿಗೆ ಜೈಕಾರ ಕೂಗುತ್ತಾ ರಥ ಎಳೆದು ಪುನೀತರಾದರು.

ಈ ವೇಳೆ ಮಹಿಳೆಯರು ದೇವರಿಗೆ ತಂಬಿಟ್ಟು ಆರತಿ ಮತ್ತು ಹಣ್ಣು ಕಾಯಿ ನೈವೇದ್ಯ ನೀಡಿ ಪೂಜೆ ಸಲ್ಲಿಸಿದರು. ಯುವಕರು ಹಾಗೂ ಯುವತಿಯರು ರಥಕ್ಕೆ ಹಣ್ಣು ಜವನ ಎಸೆದು ಪ್ರಾರ್ಥಿಸಿದರು. ರಥೋತ್ಸವ ಹಿನ್ನೆಲೆಯಲ್ಲಿ ದೇವಸ್ಥಾನದ ಸುತ್ತಮುತ್ತ ತೋರಣಗಳು, ಅಲಂಕೃತ ವಿದ್ಯುದೀಪಗಳು ಕಂಗೊಳಿಸುತ್ತಿದ್ದವು.

ಶಾಸಕ ಡಿ.ರವಿಶಂಕರ್ ಮಾತನಾಡಿ, ಕಳೆದ ಬಾರಿಯಂತೆ ಈ ಬಾರಿಯೂ ಉತ್ತಮ ಮಳೆ ಬೆಳೆಯಾಗಿ ನಾಡಿನ ರೈತರು ಹಾಗೂ ಜನತೆ ಸಂಮೃದ್ಧಿಯಾಗಿರಲಿ ಎಂದು ದೇವರಲ್ಲಿ ಪ್ರಾರ್ಥಿಸಿದ್ದೇನೆ ಎಂದರು.

ಹಂಪಾಪುರ ಗ್ರಾಮಸ್ಥರ ಬಹುದಿನಗಳ ಬೇಡಿಕೆಯಂತೆ ಶ್ರೀದುರ್ಗಾಪರಮೇಶ್ವರಿ ಅಮ್ಮನವರ ದೇವಸ್ಥಾನದ ಸುತ್ತ ರಥ ಎಳೆಯಲು ಅನುಕೂಲವಾಗಲೆಂದು 50 ಲಕ್ಷ ರೂ. ವೆಚ್ಚದಲ್ಲಿ ಕಾಂಕ್ರೀಟ್ ರಸ್ತೆ ಮತ್ತು ಚರಂಡಿ ನಿರ್ಮಾಣ ಮಾಡಲಾಗಿದೆ. ರಥ ಹೋಗಲು ತೊಂದರೆಯಾಗಿರುವ 7 ಮನೆಗಳನ್ನು ತೆರವುಗೊಳಿಸಿ ಅವರಿಗೆ ಸರ್ಕಾರಿ ನಿವೇಶನ ನೀಡುವ ಜೊತೆಗೆ ಮನೆ ನಿರ್ಮಾಣ ಮಾಡಿಕೊಳ್ಳಲು ಅಗತ್ಯ ಅನುದಾನ ನೀಡುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.

ಪುರಸಭೆ ಅಧ್ಯಕ್ಷ ಶಿವು ನಾಯಕ್, ಸದಸ್ಯರಾದ ಪ್ರಕಾಶ್, ನಟರಾಜು, ಮಾಜಿ ಸದಸ್ಯ ಕೆ.ವಿನಯ್, ಕಾಂಗ್ರೆಸ್ ಮುಖಂಡರಾದ ಜಿ.ಎಸ್.ವೆಂಕಟೇಶ್, ರವಿ, ಎಂ.ಎಸ್.ಅನಂತು, ಸುಬ್ಬುಕೃಷ್ಣ, ಮಂಜುನಾಥ್, ದೇವರಾಜ್, ಪಿಎಲ್‌ಡಿ ಬ್ಯಾಂಕ್ ಮಾಜಿ ಅಧ್ಯಕ್ಷ ಮಲ್ಲಿಕಾರ್ಜುನ್, ನಿರ್ದೇಶಕ ಇಂದ್ರೇಶ್ ಮತ್ತಿತರರಿದ್ದರು.

ವ್ಯಕ್ತಿ ನಾಪತ್ತೆ

ಮೈಸೂರು, ಮಾ.11– ವ್ಯಕ್ತಿಯೊಬ್ಬರು ನಾಪತ್ತೆಯಾಗಿರುವ ಸಂಬಂಧ ಬನ್ನೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಬೆಟ್ಟೇಗೌಡ(68) ನಾಪತ್ತೆಯಾದವರು. ಇವರು ಕಳೆದ ಫೆ.21ರಿಂದ ನಾಪತ್ತೆಯಾಗಿದ್ದು, ಇವರ ಬಗ್ಗೆ ಮಾಹಿತಿ ಸಿಕ್ಕಲ್ಲಿ ಮೈಸೂರು ಎಸ್‌ಪಿ ಕಚೇರಿಯ ದೂ.ಸಂ: 2520040, ಮೈಸೂರು ಜಿಲ್ಲಾ ಕಂಟ್ರೋಲ್ ರೂಂ: 2444800, ಬನ್ನೂರು ಪೊಲೀಸ್ ಠಾಣೆ ದೂ.ಸಂ: 08227275632, 9480805053 ನ್ನು ಸಂಪರ್ಕಿಸಬಹುದು ಎಂದು ಬನ್ನೂರು ಪೊಲೀಸ್ ಠಾಣೆಯ ಠಾಣಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ




ನಂಜನಗೂಡು ತಾಲೂಕಿನ ಕೆಂಪಿಸಿದ್ದನಹುಂಡಿ ಗ್ರಾಮದ ಸರ್ಕಾರಿ ಆಯುರ್ವೇದಿಕ್ ಚಿಕಿತ್ಸಾಲಯದಲ್ಲಿ ನೆಸ್ಲೆ ಹಾಗೂ ಮ್ಯಾಜಿಕ್ ಬಸ್ ಇಂಡಿಯಾ ಫೌಂಡೇಷನ್ ಸಹಯೋಗದೊಂದಿಗೆ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಆಚರಿಸಲಾಯಿತು. ಈ ವೇಳೆ ಯೋಗ ಗುರು ಪ್ರಕಾಶ, ಗಣೇಶ, ಡಾ.ಸುಜಾತ, ಡಾ.ತೇಜಸ್ವಿನಿ, ಯೋಗ ತರಬೇತುದಾರರಾದ ಆಶಾ, ನಂಜುಂಡೇಗೌಡ, ಟೈಲರಿಂಗ್ ತರಬೇತುದಾರರಾದ ಸುಮ, ಮ್ಯಾಜಿಕ್ ಬಸ್ ಸಿಬ್ಬಂದಿಗಳಾದ ದೀಪು, ಅನಿಲ್, ಸಂಧ್ಯಾ, ಅಶ್ವಿನಿ ಇತರರಿದ್ದರು.

ಅಂಕ ವಿದ್ಯಾರ್ಥಿ ಪ್ರತಿಭೆಯ ಮಾನದಂಡವಾಗಬಾರದು

ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಎಸ್.ಶಿವಮೂರ್ತಿ

ತಿ.ನರಸೀಪುರ, ಮಾ.11– ಶೈಕ್ಷಣಿಕ ಅಂಕವೊಂದೇ ವಿದ್ಯಾರ್ಥಿ ಪ್ರತಿಭೆಯ ಮಾನದಂಡ ಆಗಬಾರದು. ಮಕ್ಕಳ ಸಾಂಸ್ಕೃತಿಕ, ಕಲೆ ಮತ್ತು ಕ್ರೀಡೆಯನ್ನೂ ಶಿಕ್ಷಕರು ಮತ್ತು ಪೋಷಕರು ಪೋಷಿಸಬೇಕು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಎಸ್.ಶಿವಮೂರ್ತಿ ಕಿವಿಮಾತು ತಿಳಿಸಿದರು.

ತಾಲೂಕಿನ ಮೂಗೂರಿನ ಕೆಪಿಎಸ್ ಬಾಲಕಿಯರ ಹಿರಿಯ ಪ್ರಾಥಮಿಕ ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು ಇತ್ತೀಚಿನ ದಿನಗಳಲ್ಲಿ ಹೆಚ್ಚು ಓದಿದವರು ಜೀವನ ನಿರ್ವಹಣೆ ಮಾಡಲಾಗದೆ ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ. ಹೀಗಾಗಿ ಅಂಕ ಗಳಿಕೆ ಮನದಂಡವಾಗಿ ಮಾಡುವ ಶಿಕ್ಷಣ ಸಲ್ಲದು. ಮಕ್ಕಳನ್ನು ಬಹುಮುಖ ಪ್ರತಿಭೆಗಳನ್ನಾಗಿ ರೂಪಿಸುವ ಹೊಣೆ ಪೋಷಕರು ಮತ್ತು ಶಿಕ್ಷಕರ ಮೇಲಿದೆ ಎಂದರು.



ಶಾಲಾ ವಾರ್ಷಿಕೋತ್ಸವವನ್ನು ಕ್ಷೇತ್ರ ಶಿಕ್ಷಣಾಧಿಕಾರಿ ಶಿವಮೂರ್ತಿ ಉದ್ಘಾಟಿಸಿದರು.

ಮಕ್ಕಳಿಗೆ ತುಲನಾತ್ಮಕ ಮತ್ತು ಅನುಭವನಾತ್ಮಕ ಶಿಕ್ಷಣ ಪದ್ಧತಿಯನ್ನು ಈಗಾಗಲೇ ಜಾರಿ ಮಾಡಿದ್ದು, ಶಿಕ್ಷಕರು ಮಕ್ಕಳನ್ನು ಕ್ರಿಯಾತ್ಮಕ ಯೋಜನೆಗಳಲ್ಲಿ ತೊಡಗಿಸಿ ಬೋಧಿಸುವ ಶೈಲಿ ರೂಢಿಸಿಕೊಳ್ಳಬೇಕು ಎಂದರು. ಎಸ್‌ಡಿಎಂಸಿ ಅಧ್ಯಕ್ಷ ಸಿದ್ದರಾಜು ಮಾತನಾಡಿ, ಶಿಕ್ಷಕರು ಲಭ್ಯವಿರುವ ಸೌಲಭ್ಯ ಬಳಸಿಕೊಂಡು ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುತ್ತಿದ್ದು, ಮಕ್ಕಳು ನಿರಂತರ ಪರಿಶ್ರಮ ಹಾಕಿ ಉತ್ತಮ ಸಾಧನೆ ಮಾಡಬೇಕು. ಉದ್ಯಮಿಗಳು, ಸ್ಥಳೀಯ ಮುಖಂಡರು ಶಾಲೆಯ ಅಭಿವೃದ್ಧಿಗೆ ನಿರಂತರವಾಗಿ ಸಹಾಯಹಸ್ತ ನೀಡುತ್ತಿದ್ದು, ಇನ್ನು ಹೆಚ್ಚಿನ ರೀತಿ ಪ್ರೋತ್ಸಾಹ ನೀಡಲು ಮುಂದಾಗಬೇಕು. ಆಗ ಮಾತ್ರ ಶಾಲೆಗೆ ಮತ್ತಷ್ಟು ಕೀರ್ತಿ ಬರಲು ಸಾಧ್ಯವಾಗುತ್ತದೆ. ಅಲ್ಲದೇ ಮಕ್ಕಳನ್ನು ಖಾಸಗಿ ಶಾಲೆಯಿಂದ ದೂರವಿರಿಸಿ ಸರ್ಕಾರಿ ಶಾಲೆಗೆ ಸೇರಿಸಿದರೆ ಹೆಚ್ಚಿನ ಸೌಲಭ್ಯ ಹಾಗೂ ಗುಣಮಟ್ಟದ ಶಿಕ್ಷಣ ಶಿಕ್ಷಕರಿಂದ ದೊರೆಯುವುದರಲ್ಲಿ ಯಾವುದೇ ಅನುಮಾನವಿಲ್ಲ. ಆದ್ದರಿಂದ ಪೋಷಕರು ಮಕ್ಕಳನ್ನು ಸರ್ಕಾರಿ ಶಾಲೆಗೆ ಸೇರಿಸಿ ಎಂದು ಮನವಿ ಮಾಡಿದರು.

ಇದೇ ವೇಳೆ ಮಕ್ಕಳು ನೀಡಿದ ಸಾಂಸ್ಕೃತಿಕ ಕಾರ್ಯಕ್ರಮ ಗಣ್ಯರನ್ನು ರಂಜಿಸಿತು. ಗ್ರಾಪಂ ಅಧ್ಯಕ್ಷ ಎಂ.ಡಿ.ಲೋಕೇಶ್, ಮಾಜಿ ತಾಪಂ ಸದಸ್ಯ ಎಂ.ಚಂದ್ರಶೇಖರ್, ಗ್ರಾಪಂ ಸದಸ್ಯೆ ರೋಜಾ, ಡೈರಿ ಅಧ್ಯಕ್ಷ ಎಂ.ಬಸವಣ್ಣ, ಕೆಪಿಎಸ್ ಕಮಿಟಿ ಉಪಾಧ್ಯಕ್ಷ ಸೋಮಣ್ಣ, ಪ್ರೌಢಶಾಲೆ ವಿಭಾಗದ ಅಧ್ಯಕ್ಷ ರಂಗಸ್ವಾಮಿ, ಮಾಜಿ ಗ್ರಾಪಂ ಸದಸ್ಯರಾದ ಮರಿಸ್ವಾಮಿ, ಹೊಸಹಳ್ಳಿ ಚಿನ್ನಸ್ವಾಮಿ, ಎಸ್‌ಡಿಎಂಸಿ ಸದಸ್ಯರಾದ ಗುರುಸ್ವಾಮಿ, ಎಂ.ಎನ್.ರಾಜು, ಬಸವಣ್ಣ, ಪಲ್ಲವಿ, ಚನ್ನರಾಜು, ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಪುಟ್ಟಸ್ವಾಮಿ, ದೈಹಿಕ ಶಿಕ್ಷಣ ಸಂಯೋಜಕ ಮರಿಸ್ವಾಮಿ, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಎಂ.ವಿ.ಶಿವಶಂಕರಮೂರ್ತಿ, ಉಪ ಪ್ರಾಂಶುಪಾಲ ಪುಟ್ಟಸ್ವಾಮಿ, ಬಿಆರ್‌ಪಿ ಕೆ.ಪಿ.ಮಹದೇವಸ್ವಾಮಿ, ಸಿ.ಆರ್.ಪಿ.ಶಿವರಾಜು, ಪಿಡಿಓ ಪ್ರಕಾಶ್, ಕಾರ್ಯದರ್ಶಿ ದೀಪಾ, ಜವರೇಗೌಡ, ಮುಖ್ಯಶಿಕ್ಷಕ ಕೃಷ್ಣೇಗೌಡ, ಶಿಕ್ಷಕರರಾದ ಚಂದ್ರಿಕಾ, ನಿರ್ಮಲ, ವಿದ್ಯಾಶ್ರೀ, ರಶ್ಮಿ, ಜಯಲಕ್ಷ್ಮಿ, ಜ್ಯೋತಿಲಕ್ಷ್ಮಿ, ಮರೀಗೌಡ, ಪುಟ್ಟಸ್ವಾಮಿ, ಶ್ವೇತಾ, ಮಹೇಶ್ವರಿ, ಶ್ವೇತಾ ಇತರರಿದ್ದರು.

ಬಹುಮಾನ ವಿತರಣೆ



ತಿ.ನರಸೀಪುರದ ಕೆಎಸ್‌ಐಸಿಯಲ್ಲಿ ನಡೆದ ಮಹಿಳಾ ದಿನಾಚರಣೆಯಲ್ಲಿ ಆಯೋಜಿಸಿದ್ದ ಮ್ಯೂಸಿಕಲ್ ಚೇರ್‌ನಲ್ಲಿ ತೃತೀಯ ಹಾಗೂ ಬ್ಯಾಸ್ಕೆಟ್ ಬಾಲ್‌ನಲ್ಲಿ ದ್ವಿತೀಯ ಬಹುಮಾನ ಪಡೆದ ನಂಜಮ್ಮಣಿ ಅವರಿಗೆ ಕೆಎಸ್‌ಐಸಿ ವ್ಯವಸ್ಥಾಪಕಿ ಮಂಜುಳಾ ಬಹುಮಾನ ವಿತರಿಸಿದರು. ಈ ವೇಳೆ ಶಂಕರ್, ಕಾರ್ತಿಕ್, ಪ್ರದೀಪ್, ಮಹದೇವಪ್ಪ, ರಾಕೇಶ್, ದೀಪು, ಪ್ರಸಾದ್ ಇತರರಿದ್ದರು.

ಮೈಸೂರಿನ ಕ್ಯಾತಮಾರನಹಳ್ಳಿಯ ವಿವಾದಿತ ಮಸೀದಿ ತೆರೆಯಲು ಸಿದ್ಧತೆ

- ಮಾಜಿ ಸಂಸದ ಪ್ರತಾಪ್ ಸಿಂಹ ತೀವ್ರ ವಿರೋಧ
- ಸಮಸ್ಯೆ ಪರಿಹಾರಕ್ಕೆ ನ್ಯಾಯಾಲಯದಿಂದ 12 ವಾರದ ಗಡುವು
- ಮಾ.14ರಂದು ಸಾರ್ವಜನಿಕರಿಂದ ಅಭಿಪ್ರಾಯ ಆಲಿಕೆ
- ಮಸೀದಿ ತೆರೆಯಲು ಸಿದ್ದರಾಮಯ್ಯ ಸರ್ಕಾರ ಬೆಂಬಲ

ಮೈಸೂರು, ಮಾ.11(ಬಿಎಲ್‌ಯು)– ಆರ್‌ಆರ್‌ಎಸ್ ಕಾರ್ಯಕರ್ತ ಕ್ಯಾತಮಾರನಹಳ್ಳಿ ರಾಜು ಹತ್ಯೆ ಹಿನ್ನೆಲೆಯಲ್ಲಿ ವಿವಾದಕ್ಕೊಳಗಾಗಿರುವ ಮೈಸೂರಿನ ಕ್ಯಾತಮಾರನಹಳ್ಳಿಯ ಮಸೀದಿ ಆರಂಭಕ್ಕೆ ಪ್ರಕ್ರಿಯೆ ಆರಂಭವಾಗಿದ್ದು, ಇದನ್ನು ತೆರೆಯಲು ರಾಜ್ಯ ಕಾಂಗ್ರೆಸ್ ಸರ್ಕಾರವೇ ತೀವ್ರಾಸಕ್ತಿ ತೋರುತ್ತಿದೆ ಎಂದು ಮಾಜಿ ಸಂಸದ ಪ್ರತಾಪ್ ಸಿಂಹ ಆರೋಪಿಸಿದ್ದಾರೆ.



ಮೈಸೂರಿನ ಜಲದರ್ಶಿನಿ ಅತಿಥಿ ಗೃಹದಲ್ಲಿ ಮಂಗಳವಾರ ಮಾಜಿ ಸಂಸದ ಪ್ರತಾಪ್ ಸಿಂಹ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ನಗರದ ಜಲದರ್ಶಿನಿ ಅತಿಥಿ ಗೃಹದಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, 2016ರಲ್ಲಿ ಅನಧಿಕೃತವಾಗಿ ನಿರ್ಮಾಣವಾಗುತ್ತಿದ್ದ ಮಸೀದಿ ವಿರುದ್ಧ ಹೋರಾಟ ಮಾಡಿದ ರಾಜು ಹತ್ಯೆಯಾಗಿತ್ತು. ಈಗ ಅದೇ ಮಸೀದಿ ಆರಂಭಿಸಲು ಪ್ರಯತ್ನಗಳು ನಡೆಯುತ್ತಿವೆ ಎಂದು ಆಪಾದಿಸಿದರು.

ಮಸೀದಿ ತೆರೆಯುವ ವಿಚಾರವನ್ನು ಸ್ಥಳೀಯವಾಗಿ ಬಗೆಹರಿಸಿಕೊಳ್ಳಿ ಎಂದು ನ್ಯಾಯಾಲಯ 12 ವಾರಗಳ ಗಡುವು ನೀಡಿದೆ. ಈ ಹಿನ್ನೆಲೆಯಲ್ಲಿ ಮಸೀದಿ ಆರಂಭ ಸಂಬಂಧ ಸಾಧಕ–ಬಾಧಕಗಳ ಬಗ್ಗೆ ಪರಾಮರ್ಶಿಸಲು ಆಸಕ್ತಿ ಇರುವ ವ್ಯಕ್ತಿ, ಸಂಘ ಸಂಸ್ಥೆಗಳಿಂದ ಸಲಹೆ ಹಾಗೂ ಅಭಿಪ್ರಾಯ ಕೇಳಲು ಮಾರ್ಚ್ 10ರಂದು ಸಭೆ ಕರೆಯಲಾಗಿತ್ತು. ಆದರೆ, ಈಗ ಸಭೆಯನ್ನು ಮಾರ್ಚ್ 14ಕ್ಕೆ ಮುಂದೂಡಲಾಗಿದೆ.

ವಸತಿ ಪ್ರದೇಶದಲ್ಲಿ ನಿರ್ಮಾಣವಾಗಿರುವ ಮಸೀದಿ ಆರಂಭಕ್ಕೆ ಪ್ರಕ್ರಿಯೆ ಆರಂಭವಾಗಿದ್ದು, ಸರ್ಕಾರ ಎಷ್ಟೇ ಪ್ರಯತ್ನ ಮಾಡಿದರೂ ಇದಕ್ಕೆ ನಾವು ಅವಕಾಶ ನೀಡುವುದಿಲ್ಲ ಎಂದು ಸವಾಲು ಹಾಕಿದರು.

ಸಿದ್ದರಾಮಯ್ಯ ಅವರು ಮೊದಲ ಬಾರಿ ಮುಖ್ಯಮಂತ್ರಿ ಆಗಿದ್ದ ಸಂದರ್ಭದಲ್ಲಿ, 2013ರಿಂದ 2018ರವರೆಗೆ 1,600 ಜನರು ಭಾಗಿಯಾಗಿದ್ದ 175 ಪ್ರಕರಣಗಳನ್ನು ಖುಲಾಸೆ ಮಾಡಿದ್ದಾರೆ. ಕಾಂಗ್ರೆಸ್ ಸರ್ಕಾರ ಪ್ರಕರಣಗಳನ್ನು ವಾಪಸು ಪಡೆಯುತ್ತದೆ ಎಂಬ ಧೈರ್ಯದಿಂದ ಹಲವು ಹಿಂದೂ ಧರ್ಮೀಯರನ್ನು ಭೀಕರವಾಗಿ ಕೊಲೆ ಮಾಡಲಾಗಿದೆ ಎಂದು ದೂರಿದರು. ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಏನೇ ಪ್ರಯತ್ನ ಮಾಡಿದರೂ ಅಲ್ಲಿ ಮಸೀದಿ ಆರಂಭವಾಗಲು ನಾವು ಬಿಡುವುದಿಲ್ಲ ಎಂದು ಪ್ರತಾಪ್ ಸಿಂಹ ಪುನರುಚ್ಚರಿಸಿದರು.

ಡಿಕೆಶಿ ಅವರೇ ಹುಲಿ ಮೇಲೆ ಕೂತಿದ್ದೀರಾ ಹುಷಾರ್...!

ಡಿ.ಕೆ.ಶಿವಕುಮಾರ್ ಅವರೇ ನೀವು ಹುಲಿ ಮೇಲೆ ಕುಳಿತಿದ್ದೀರಾ, ಕೆಳಗಿಳಿದರೆ ಅದು ನಿಮ್ಮನ್ನು ತಿಂದು ಬಿಡುತ್ತದೆ ಎಂದು ಪ್ರತಾಪ್ ಸಿಂಹ ವಿಡಂಬನಾತ್ಮಕವಾಗಿ ಎಚ್ಚರಿಸಿದರು.

ಜನರು ನಿಮಗೆ ಮರ್ಯಾದೆ ನೀಡುತ್ತಿರುವುದು ನೀವು ಕುಳಿತಿರುವ ಹುಲಿಗೆ ಹೊರತು ನಿಮಗಲ್ಲ. ಎಚ್ಚರವಿರಲಿ, ಅಧಿಕಾರವೆಂಬ ಹುಲಿಯಿಂದ ಕೆಳಗಿಳಿಯುತ್ತಲೆ ಅದೇ ಹುಲಿ ನಿಮ್ಮನ್ನು ಕೊಂದು ಭಕ್ಷಿಸುತ್ತದೆ ಎಂದು ಹೇಳಿದರು.

ಸಿದ್ದರಾಮಯ್ಯ ಸಮ್ಮುಖದಲ್ಲಿ ಡಾ.ಶರಣ ಪ್ರಕಾಶ್ ಪಾಟೀಲ್ ಹಾಗೂ ಬೋಸರಾಜ್ ವಾಗ್ವಾದ ನಡೆಸಿದ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಪ್ರತಾಪ್ ಸಿಂಹ, ಬೀದಿ ನಾಟಕ ಎಷ್ಟು ದಿನ ನಡೆಯುವುದೋ ನಡೆಯಲಿ. ಜನರು ಇದನ್ನೆಲ್ಲಾ ಗಂಭೀರವಾಗಿ ಗಮನಿಸುತ್ತಿದ್ದಾರೆ. ಸಮಯ ಬಂದಾಗ ಪಾಠ ಕಲಿಸುತ್ತಾರೆ ಎಂದು ತಿಳಿಸಿದರು.

ಧರ್ಮದ ಆಧಾರದಲ್ಲಿ ಸಂಗ್ರಹಿಸಿದ ತೆರಿಗೆಯನ್ನ ಆಯಾ ಧರ್ಮಕ್ಕೇ ವಿನಿಯೋಗಿಸಿ

ಧರ್ಮದ ಆಧಾರದ ಮೇಲೆ ಸಂಗ್ರಹಿಸಿದ ತೆರಿಗೆ ಹಣವನ್ನು ಆಯಾಯ ಸಮುದಾಯಕ್ಕೆ ಹಂಚಿಕೆ ಮಾಡಿ ಎಂದು ಇದೇ ವೇಳೆ ಪ್ರತಾಪ್ ಸಿಂಹ ಸರ್ಕಾರವನ್ನು ಆಗ್ರಹಿಸಿದರು.

ಹಿಂದೂಗಳು, ಮುಸ್ಲಿಂ ಹಾಗೂ ಕ್ರಿಶ್ಚಿಯನ್ ಸಮುದಾಯದಿಂದ ಎಷ್ಟು ತೆರಿಗೆ ಬರುತ್ತಿದೆ ಎಂದು ವರದಿ ತಯಾರಿಸಿ. ತರುವಾಯ ಬಂದ ತೆರಿಗೆ ಆದಾಯವನ್ನು ಆಯಾ ಸಮುದಾಯಕ್ಕೆ ವಿನಿಯೋಗಿಸಿ ಎಂದು ಒತ್ತಾಯಿಸಿದರು.

ದೇವಸ್ಥಾನಗಳಿಂದ ಭಾರಿ ಆದಾಯ ಬರುತ್ತಿದ್ದರೂ ಸರ್ಕಾರ ಅರ್ಚಕರಿಗೆ ನೀಡುವ ವೇತನ ಬಹಳ ಕಡಿಮೆ. ಒಕ್ಕಲಿಗರು, ಲಿಂಗಾಯಿತರು, ಬ್ರಾಹ್ಮಣ, ಮಡಿವಾಳರು ಸೇರಿದಂತೆ ಹಲವು ಅಭಿವೃದ್ಧಿ ನಿಗಮಕ್ಕೆ ಅನುದಾನ ಬರುವುದು ಅಷ್ಟಕಷ್ಟೆ ಎಂದರು.

ಆದರೆ ಮಸೀದಿ ಹಾಗೂ ಚರ್ಚ್‌ಗಳಿಂದ ಯಾವುದೇ ಆದಾಯವಿಲ್ಲದಿದ್ದರೂ ಅವರಿಗೆ ಸರ್ಕಾರದ ಬಹುತೇಕ ಅನುದಾನ ನೀಡಲಾಗುತ್ತಿದೆ. ಈ ಬಾರಿ ಸಿದ್ದರಾಮಯ್ಯ ಮಂಡಿಸಿದ ಬಜೆಟ್‌ನಲ್ಲಿ ಮುಸ್ಲಿಂರಿಗೆ 4,500 ಕೋಟಿ ಮೀಸಲಿಡಲಾಗಿದೆ. ಸರ್ಕಾರ ಯಾರ ಪರ ಇದೆ ಎಂಬುದಕ್ಕೆ ಇದಕ್ಕಿಂತ ಬೇರೆ ನಿದರ್ಶನ ಬೇಕೇ ಎಂದು ಪ್ರತಾಪ್ ಸಿಂಹ ಪ್ರಶ್ನಿಸಿದರು.

ನಟ್–ಬೋಲ್ಟ್ ಟೈಟ್: ಸಿನಿಮಾ ರಂಗದವರ ನಟ್–ಬೋಲ್ಟ್ ಟೈಟ್ ಮಾಡುವ ಬಗ್ಗೆ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೀಡಿರುವ ಹೇಳಿಕೆಗೆ ತೀಕ್ಷ್ಣ ಪ್ರತಿಕ್ರಿಯೆ ನೀಡಿದ ಪ್ರತಾಪ್ ಸಿಂಹ, ಸೋನಿಯಾಗಾಂಧಿ, ರಾಹುಲ್ ಗಾಂಧಿ ಅವರ ದೊಡ್ಡ ಕಟೌಟ್‌ಗಳನ್ನು ಹಾಕಿ ನನ್ನ ನೀರು, ನನ್ನ ಹಕ್ಕು ಎಂದು ರಾಜಕೀಯ ಕಾರಣಕ್ಕಾಗಿ ಮಾಡುವ ಪಾದಯಾತ್ರೆಗೆ ಸಿನಿಮಾ ರಂಗದವರು ಏಕೆ ಬೆಂಬಲ ನೀಡಬೇಕು ಎಂದು ಪ್ರಶ್ನಿಸಿದರು.

ಕಾಂಗ್ರೆಸ್ ಜಾತ್ರೆಗೆ ಬರಲು ಸುದೀಪ್, ಯಶ್, ಶಿವಣ್ಣ ಅವರೇನು ನಿಮ್ಮ ಪಾರ್ಟಿ ಕಾರ್ಡ್ ಓಲ್ಡರ್‌ಗಳ ಎಂದು ಕಿಡಿಕಾರಿದ ಪ್ರತಾಪ್ ಸಿಂಹ, ಕಾಂಗ್ರೆಸ್ ಬಾವುಟವಿಲ್ಲದೆ ಪಾದಯಾತ್ರೆ ಮಾಡಿದರೆ ನಾನು ಸೇರಿದಂತೆ ಸಿನಿಮಾ ರಂಗದವರು ಬೆಂಬಲ ನೀಡುತ್ತೇವೆ ಎಂದು ಹೇಳಿದರು.

ಸಿದ್ದರಾಮಯ್ಯ ತುಷ್ಟೀಕರಣದ ಆಡಳಿತ ನಡೆಸುತ್ತಿದ್ದರೆ, ಡಿ.ಕೆ.ಶಿವಕುಮಾರ್ ಗೂಂಡಾ ರಾಜ್ಯದ ಆಡಳಿತ ನಡೆಸುತ್ತಿದ್ದಾರೆ. ಆದರೆ ಈಗ ಜನರು ಅವರಿಗೆ 136 ಸ್ಥಾನ ನೀಡಿದ್ದಾರೆ. ಅವರು ಯಾವುದೇ ರೀತಿಯ ಆಡಳಿತ ನಡೆಸಿದರೂ ಜನರು ಈಗ ಅಸಹಾಯಕರಾಗಿದ್ದಾರೆ. ಆದರೆ ಮುಂದಿನ ಚುನಾವಣೆಯಲ್ಲಿ ಅವರಿಗೆ ತಕ್ಕ ಪಾಠ ಕಲಿಸುತ್ತಾರೆ ಎಂದು ಎಚ್ಚರಿಸಿದರು.

ಡೆತ್‌ನೋಟ್ ಬರೆದಿಟ್ಟು ಬಿಜೆಪಿ ನಾಯಕಿ ಆತ್ಮಹತ್ಯೆ!



ಬೆಂಗಳೂರು, ಮಾ.11– ಬೆಂಗಳೂರಿನಲ್ಲಿ ಬಿಜೆಪಿ ನಾಯಕಿ ಮಂಜುಳ ಎಂಬುವರು ಡೆತ್ ನೋಟ್ ಬರೆದಿಟ್ಟು ಆತ್ಮಹತ್ಯೆಗೆ ಶರಣಾಗಿದ್ದಾರೆ. ಬಿಜೆಪಿ ಮಲ್ಲೇಶ್ವರಂ ಮಂಡಲ ಕಾರ್ಯದರ್ಶಿಯಾಗಿದ್ದ ಮಂಜುಳಾ, ಮತ್ತಿಕೆರೆಯ ತಮ್ಮ ನಿವಾಸದಲ್ಲಿ ಇಂದು ಮಧ್ಯಾಹ್ನ 2.30ರ ಸುಮಾರಿಗೆ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎನ್ನಲಾಗಿದೆ. 'ನನ್ನ ಸಾವಿಗೆ ನಾನೇ ಕಾರಣ' ಎಂದು ಡೆತ್‌ನೋಟ್‌ನಲ್ಲಿ ಬರೆದಿಟ್ಟಿದ್ದಾರೆನ್ನಲಾಗಿದೆ. ಘಟನಾ ಸ್ಥಳಕ್ಕೆ ಯಶವಂತಪುರ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಮಂಜುಳಾ ಸಾವಿಗೆ ನಿಖರ ಕಾರಣ ತಿಳಿದುಬಂದಿಲ್ಲ.

ಎಪಿಎಂಸಿಗಳಲ್ಲಿ ಅಗತ್ಯ ಸೌಲಭ್ಯ ಕಲ್ಪಿಸಲು ಕ್ರಮ

ಪರಿಷತ್ ಸದಸ್ಯ ಮಂಜೇಗೌಡರಿಗೆ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್ ಭರವಸೆ

ಮೈಸೂರು,ಮಾ.11(ಪಿಎಂ)– ರಾಜ್ಯದ ಎಪಿಎಂಸಿ (ಕೃಷಿ ಉತ್ಪನ್ನ ಮಾರುಕಟ್ಟೆ)ಗಳಲ್ಲಿ ಯಾವ್ಯಾವ ಸೌಲಭ್ಯಗಳು ಅಗತ್ಯವೆಂದು ಸಲಹೆ ಕೊಟ್ಟರೆ, ಪರಿಶೀಲಿಸಿ ಅನುಷ್ಠಾನ ಸಂಬಂಧ ಕ್ರಮ ವಹಿಸಲಾಗುವುದು ಎಂದು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್ ತಿಳಿಸಿದರು.

ವಿಧಾನ ಪರಿಷತ್‌ನಲ್ಲಿ ಚುಕ್ಕೆ ಗುರುತಿನ ಪ್ರಶ್ನೆ ಮೇಲೆ ಮಾಹಿತಿ ಕೇಳಿದ ವಿಧಾನ ಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ ಅವರಿಗೆ ಸಚಿವರು ಮಾಹಿತಿ ನೀಡಿದರು.

ಸರ್ಕಾರ ರೈತರ ಹಿತಕಾಯಲು ಬದ್ಧವಾಗಿದೆ. ಮಾರುಕಟ್ಟೆಗಳಲ್ಲಿ ರೈತಭವನ ಕಟ್ಟಿದ್ದೇವೆ. ರೈತರ ಬೆಳೆ ಶೇಖರಣೆಗೆ 9 ಕಡೆ ವೇರ್‌ಹೌಸ್ ಸೌಲಭ್ಯವಿದೆ. ರಾಜ್ಯದ 171 ಎಪಿಎಂಸಿಗಳ ವ್ಯವಹಾರ ಬಗ್ಗೆ ಮಾಹಿತಿ ಲಭ್ಯವಾಗುವ ವ್ಯವಸ್ಥೆ ಸಹ ಇದೆ. ಸೌಲಭ್ಯಗಳನ್ನು ಕಲ್ಪಿಸುವ ಸಂಬಂಧ ತಾವು ಸಲಹೆ ಕೊಟ್ಟರೆ ಪರಿಶೀಲಿಸಿ, ಅನುಷ್ಠಾನಕ್ಕೆ ಕ್ರಮ ವಹಿಸಬಹುದು ಎಂದು ತಿಳಿಸಿದರು.

ಇದಕ್ಕೂ ಮುನ್ನ ಮಾತನಾಡಿದ ಸಿ.ಎನ್.ಮಂಜೇಗೌಡ, ಮೈಸೂರಿನ ಎಪಿಎಂಸಿಯಲ್ಲಿ ಕೋಲ್ಡ್ ಸ್ಟೋರೇಜ್ ವ್ಯವಸ್ಥೆ ಇಲ್ಲವಾಗಿದ್ದು, ಮುಖ್ಯಮಂತ್ರಿಗಳ ತವರು ಜಿಲ್ಲೆಯಲ್ಲೇ ಹೀಗಾದರೆ ಹೇಗೆ. ರೈತರು ಮಾರುಕಟ್ಟೆಯಲ್ಲಿ ತಂಗಲು ವಿಶ್ರಾಂತಿ ಗೃಹ ಕಟ್ಟಬಹುದಿತ್ತು ಆದರೆ ಈವರೆಗೆ ಈ ಕುರಿತು ಯಾವುದೇ ಪ್ರಸ್ತಾವನೆ ಸಹ ಆಗಿಲ್ಲ. ನಾನು ಮೈಸೂರು ಎಪಿಎಂಸಿಯಲ್ಲಿ 5 ವರ್ಷ ಅಧ್ಯಕ್ಷನಾಗಿದ್ದೆ. ರಾತ್ರಿ ಮಲಗಲು ರೈತರಿಗೆ ಅಲ್ಲಿ ಜಾಗವಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ನಬಾರ್ಡ್‌ನಿಂದ ಸಂಪೂರ್ಣ ಹಣ ಬಿಡುಗಡೆಯಾಗಿದೆ. ಒಟ್ಟಾರೆ 98 ಕಾಮಗಾರಿಗಳ ಪೈಕಿ ಕೇವಲ 10 ಪ್ರಗತಿಯಲ್ಲಿವೆ. ಜೊತೆಗೆ 14 ಕೆಲಸಗಳಿಗೆ ಟೆಂಡರ್ ಕರೆಯಲಾಗಿದೆ. ಸುಮಾರು 530 ಕೋಟಿ ರೂ. ಮೊತ್ತದ ಕೆಲಸ ಕಾರ್ಯಗಳ ಸಂಬಂಧ ಇನ್ನೂ 64 ಕೆಲಸಗಳು ಪ್ರಗತಿಯಲ್ಲಿವೆ ಎಂಬ ಮಾಹಿತಿಯನ್ನು ಸರ್ಕಾರದಿಂದ ನೀಡಲಾಗಿದೆ. ಈ ಅಂಕಿ–ಅಂಶ ನೋಡಿದರೆ ರೈತರ ಹಿತಕಾಯುವಲ್ಲಿ ಸರ್ಕಾರ ತಪ್ಪು ಹೆಜ್ಜೆ ಇಡುತ್ತಿದೆ ಎನ್ನದೇ ವಿಧಿಯಿಲ್ಲ ಎಂದು ವಿಷಾದಿಸಿದರು.

ಜೀರ್ಣಾಂಗ ಕಾಯಿಲೆಗಳ ತಪಾಸಣಾ ಶಿಬಿರ

ಮೈಸೂರು,ಮಾ.11–ಮೈಸೂರಿನ ಸುಯೋಗ್ ಆಸ್ಪತ್ರೆ ವತಿಯಿಂದ ಮಾ.15ರವರೆಗೆ ಬೆಳಗ್ಗೆ 10ರಿಂದ ಸಂಜೆ 6ಗಂಟೆವರೆಗೆ ಜೀರ್ಣಾಂಗ ಕಾಯಿಲೆಗಳ ಉಚಿತ ತಪಾಸಣಾ ಶಿಬಿರವನ್ನು ಏರ್ಪಡಿಸಲಾಗಿದೆ. ಜೀರ್ಣಾಂಗ ಶಸ್ತ್ರಕ್ರಿಯಾತಜ್ಞ ಡಾ.ಶರತ್‌ಕುಮಾರ್ ನೇತೃತ್ವದಲ್ಲಿ ನಡೆಯಲಿರುವ ಶಿಬಿರದಲ್ಲಿ ಅಜೀರ್ಣ, ಮಲಬದ್ಧತೆ, ಹೊಟ್ಟೆನೋವು, ಹೊಟ್ಟೆಯಲ್ಲಿ ಉರಿ, ಹೊಟ್ಟೆಯಲ್ಲಿ ಸಂಕಟ, ಮಲದಲ್ಲಿ ರಕ್ತ ಮುಂತಾದ ಸಮಸ್ಯೆಗಳಿರುವ ರೋಗಿಗಳು ಶಿಬಿರದಲ್ಲಿ ಪಾಲ್ಗೊಂಡು ಉಪಯೋಗವನ್ನು ಪಡೆಯಬೇಕೆಂದು ಕೋರಲಾಗಿದೆ. ಮಾಹಿತಿಗೆ ದೂ.0821–2566966, 998639986 ಸಂಪರ್ಕಿಸಬಹುದು.

ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಪೌರಕಾರ್ಮಿಕರ ಪ್ರತಿಭಟನೆ

ಮೈಸೂರು, ಮಾ.11(ಬಿಎಲ್‌ಯು)– ಇತ್ತೀಚೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಡಿಸಿರುವ ಬಜೆಟ್‌ನಲ್ಲಿ ಸ್ಥಳಿಯ ಸಂಸ್ಥೆಗಳಲ್ಲಿ ಕೆಲಸ ಮಾಡುವ ಸ್ವಚ್ಛತಾ ನೌಕರರನ್ನು ಕಡೆಗಣಿಸಲಾಗಿದೆ ಎಂದು ಆರೋಪಿಸಿ ಕರ್ನಾಟಕ ರಾಜ್ಯ ಪೌರಕಾರ್ಮಿಕರ ಸಂಘದವರು ಮೈಸೂರು ಜಿಲ್ಲಾಧಿಕಾರಿ ಕಚೇರಿ ಮುಂದೆ ಇಂದು ಪ್ರತಿಭಟನೆ ನಡೆಸಿದರು.



ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಮೈಸೂರಿನ ನೂತನ ಜಿಲ್ಲಾಧಿಕಾರಿ ಕಚೇರಿ ಮುಂದೆ ಮಂಗಳವಾರ ಪ್ರತಿಭಟನೆ ನಡೆಸಿದ ಕರ್ನಾಟಕ ರಾಜ್ಯ ಪೌರಕಾರ್ಮಿಕರ ಸಂಘದವರು, ಅಪರ ಜಿಲ್ಲಾಧಿಕಾರಿ ಡಾ.ಶಿವರಾಜ್ ಅವರಿಗೆ ಮನವಿ ಸಲ್ಲಿಸಿದರು.

ಮೈಸೂರು ನಗರಪಾಲಿಕೆ ಸೇರಿದಂತೆ ಸ್ಥಳಿಯ ಸಂಸ್ಥೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಸ್ವಚ್ಛತಾ ನೌಕರರಿಗೆ ಉದ್ಯೋಗ ಭದ್ರತೆ ಇಲ್ಲ, ಆರೋಗ್ಯ ಲೆಕ್ಕಿಸದೆ ಕೆಲಸ ಮಾಡುತ್ತಿದ್ದರೂ ಸರ್ಕಾರದ ಕಾರ್ಮಿಕ ಇಲಾಖೆ ನಿಗದಿ ಮಾಡಿರುವ ವೇತನ ಬರುತ್ತಿಲ್ಲ, ಅನಾರೋಗ್ಯಕ್ಕೀಡಾದರೆ ಉಚಿತ ಚಿಕಿತ್ಸೆ ದೊರೆಯುತ್ತಿಲ್ಲ. ಈ ಹಿನ್ನೆಲೆಯಲ್ಲಿ ಸ್ವಚ್ಛತಾ ನೌಕರರ ಹಲವು ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿದರೂ ಆಯವ್ಯಯದಲ್ಲಿ ತಮ್ಮ ಬಗ್ಗೆ ಉದಾಸಿನ ಧೋರಣೆ ತಳೆಯಲಾಗಿದೆ ಎಂದು ಆರೋಪಿಸಿದರು.

ಮೈಸೂರು ನಗರಪಾಲಿಕೆಯಲ್ಲಿ ಕೆಲಸ ಮಾಡುತ್ತಿರುವ 158 ಖಾಯಂ ಪೌರ ಕಾರ್ಮಿಕರಿಗೆ ಮನೆಗಳನ್ನು ನಿರ್ಮಿಸಿಕೊಡುವುದಾಗಿ ನೀಡಿದ್ದ ಗಡುವು ಮುಗಿದಿದೆ. ಈಗ ಮನೆಗಳ ನಿರ್ಮಾಣಕ್ಕೆ ಮೂರು ಲಕ್ಷ ವಂತಿಕೆ ಹಣ ನೀಡುವಂತೆ ಸೂಚನೆ ನೀಡಲಾಗಿದೆ. ಬಡತನದಲ್ಲಿರುವ ಪೌರಕಾರ್ಮಿಕರಿಗೆ ಈ ಹಣ ನೀಡಲು ಸಾಧ್ಯವೇ ಎಂದು ಪ್ರತಿಭಟನಾಕಾರರು ಪ್ರಶ್ನಿಸಿದರು.

ಈ ಹಿನ್ನೆಲೆಯಲ್ಲಿ ನಮ್ಮ ಬೇಡಿಕೆ ಈಡೇರಿಸಬೇಕೆಂದು ಅಪರ ಜಿಲ್ಲಾಧಿಕಾರಿ ಡಾ.ಶಿವರಾಜ್ ಅವರಿಗೆ ಮನವಿ ಸಲ್ಲಿಸಿದರು.

ಸಂಘದ ರಾಜ್ಯಾಧ್ಯಕ್ಷ ಡಿ.ಆರ್.ರಾಜು, ಕಾರ್ಯಾಧ್ಯಕ್ಷ ಮಂಚಯ್ಯ, ಪ್ರಧಾನ ಕಾರ್ಯದರ್ಶಿ ದಿನೇಶ್ ಕುಮಾರ್, ಪದಾಧಿಕಾರಿಗಳಾದ ಶಂಕರ್, ಲಕ್ಷ್ಮಣ್, ನಂಜಪ್ಪ, ಕುಮಾರಸ್ವಾಮಿ, ಕೃಷ್ಣ, ಶ್ರೀನಿವಾಸ್, ಸೋಮಯ್ಯ, ಪವಿತ್ರ ವಸಂತ ಕುಮಾರಿ, ಮಹದೇವ, ಮಂಜುನಾಥ್ ಸೇರಿದಂತೆ ಹಲವರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

ಆಂಧ್ರಪ್ರದೇಶದಂತೆ ಕರ್ನಾಟಕಕ್ಕೂ ಬೆಲೆ ಕೊರತೆ ಪಾವತಿ ಯೋಜನೆ ವಿಸ್ತರಿಸಿ

ಕೇಂದ್ರ ಸರ್ಕಾರಕ್ಕೆ ಸಿಎಂ ಸಿದ್ದರಾಮಯ್ಯ ಆಗ್ರಹ

ಬೆಂಗಳೂರು, ಮಾ.11– ಮಾರುಕಟ್ಟೆ ಮಧ್ಯಪ್ರವೇಶ ಯೋಜನೆ (ಎಂಐಎಸ್) ಅಡಿಯಲ್ಲಿ ಬೆಲೆ ಕೊರತೆ ಪಾವತಿ (ಪಿಡಿಪಿ) ಯೋಜನೆಯನ್ನು ಕರ್ನಾಟಕದ ಕೆಂಪು ಮೆಣಸಿನಕಾಯಿ ಬೆಳೆಗಾರರಿಗೂ ವಿಸ್ತರಿಸಬೇಕು ಎಂದು ಕೇಂದ್ರ ಸರ್ಕಾರಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಆಗ್ರಹಿಸಿದ್ದಾರೆ.

ಈ ಕುರಿತು ಪ್ರಧಾನಮಂತ್ರಿ ನರೇಂದ್ರ ಮೋದಿ ಮತ್ತು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್‌ಗೆ ಪತ್ರ ಬರೆದಿದ್ದಾರೆ.

ರಾಜ್ಯದ ಮಾರುಕಟ್ಟೆಯಲ್ಲಿ ಒಣಮೆಣಸಿನಕಾಯಿ ಬೆಲೆ ತೀವ್ರ ಕುಸಿತ ಕಂಡಿದ್ದು, ಲಕ್ಷಾಂತರ ಬೆಳೆಗಾರರು ಸಂಕಷ್ಟಕ್ಕೊಳಗಾಗಿದ್ದಾರೆ. ಕೇಂದ್ರ ಸರ್ಕಾರ ಈಗಾಗಲೇ ಆಂಧ್ರಪ್ರದೇಶದಲ್ಲಿ ಬೆಳೆಯುವ ಒಣಮೆಣಸಿನಕಾಯಿಗೆ ಬೆಲೆ ಕೊರತೆ ಪಾವತಿ ಯೋಜನೆಯನ್ನು ಮಂಜೂರು ಮಾಡಿದೆ. ಅಲ್ಲಿ ಪ್ರತಿ ಕ್ವಿಂಟಾಲ್ ಒಣಮೆಣಸಿನಕಾಯಿಗೆ 11,781 ರೂ ಕನಿಷ್ಠ ಬೆಂಬಲ ಬೆಲೆ ನಿಗದಿ ಮಾಡಲಾಗಿದೆ. ಇದು ಸ್ವಾಗತಾರ್ಹ ನಡೆಯಾಗಿದ್ದು, ರಾಜ್ಯದ ಒಣಮೆಣಸಿನ ಕಾಯಿ ರೈತರ ಸಂಕಷ್ಟಕ್ಕೂ ಕೇಂದ್ರ ಸ್ಪಂದಿಸಬೇಕೆಂದು ಒತ್ತಾಯಿಸಿದ್ದಾರೆ.



ಕರ್ನಾಟಕದಲ್ಲಿ ಒಣಮೆಣಸಿನ ಕಾಯಿ ಉತ್ಪಾದನೆ ವೆಚ್ಚ ಪ್ರತಿ ಕ್ವಿಂಟಾಲ್‌ಗೆ 12,675 ರೂ. ಇರುವುದಾಗಿ ಕರ್ನಾಟಕ ಕೃಷಿ ಬೆಲೆ ಆಯೋಗ ನಿಗದಿಪಡಿಸಿದೆ ಆದರೆ, ರೈತರು ಪ್ರತಿ ಕ್ವಿಂಟಾಲ್‌ಗೆ 8,300 ರೂ.ಗೆ ಒಣಮೆಣಸಿನಕಾಯಿ ಮಾರಾಟ ಮಾಡುತ್ತಿದ್ದಾರೆ. ಇದು ರೈತರಿಗೆ ದೊಡ್ಡ ಆರ್ಥಿಕ ಹೊಡೆತ ನೀಡಿದೆ ಎಂದು ತಿಳಿಸಿದ್ದಾರೆ.

ಬರಪೀಡಿತ ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಅತೀ ಹೆಚ್ಚು ಒಣಮೆಣಸಿನಕಾಯಿ ಬೆಳೆಯಲಾಗುತ್ತದೆ. ಬೆಲೆ ಕುಸಿತದಿಂದ ಅವರು ಸಾಲದ ಸುಳಿಗೆ ಸಿಲುಕುವ ಸಾಧ್ಯತೆ ಇದೆ. ಹೀಗಾಗಿ ಕೇಂದ್ರ ಸರ್ಕಾರ ಮಾರುಕಟ್ಟೆ ಮಧ್ಯಪ್ರವೇಶಿಸಿ ಬೆಲೆ ಕೊರತೆ ಪಾವತಿ ಯೋಜನೆಯನ್ನು ಜಾರಿಗೊಳಿಸುವುದು ಅನಿವಾರ್ಯ. ಇದರ ಜೊತೆಗೆ, ರೈತರಿಗೆ ಉತ್ತಮ ಸೇವೆ ಸಲ್ಲಿಸಲು ಅಸ್ತಿತ್ವದಲ್ಲಿರುವ ಯೋಜನೆಯಲ್ಲಿ ಕೆಲವು ಮಾರ್ಪಾಡುಗಳನ್ನು ಮಾಡಬೇಕೆಂದು ಒತ್ತಾಯಿಸಿದ್ದಾರೆ. ರಾಜ್ಯದ ಒಣಮೆಣಸಿನಕಾಯಿಗೆ ಪ್ರತಿ ಕ್ವಿಂಟಾಲ್‌ಗೆ 13,500 ರೂ. ಎಂಐಪಿ ನಿಗದಿ ಮಾಡುವಂತೆ ಮನವಿ ಮಾಡಿದ್ದಾರೆ.

ಜೊತೆಗೆ, ಕನಿಷ್ಠ ಶೇ.75 ಒಣಮೆಣಸಿನ ಕಾಯಿ ಉತ್ಪಾದನೆಯನ್ನು ಎಂಐಪಿ ಯೋಜನೆಯ ವ್ಯಾಪ್ತಿಗೊಳಪಡಿಸುವಂತೆ ಕೋರಿದ್ದಾರೆ. ಕೇಂದ್ರ ಸರ್ಕಾರ ಬೆಲೆ ಕೊರತೆ ಪಾವತಿ ಯೋಜನೆಯ ಪೂರ್ಣ ಹೊರೆಯನ್ನು ಹೊರುವಂತೆಯೂ ಮನವಿ ಮಾಡಿದ್ದಾರೆ. ರಾಜ್ಯದ ರೈತರನ್ನು ಸಂಕಷ್ಟದಿಂದ ಮೇಲೆತ್ತಲು ಕೂಡಲೇ ಈ ಸಂಬಂಧ ಕೇಂದ್ರ ಕ್ರಮ ಕೈಗೊಳ್ಳುವ ನಿರೀಕ್ಷೆಯಲ್ಲಿದ್ದೇನೆ ಎಂದಿದ್ದಾರೆ.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ರಾಕ್ಷಸ (ಕ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ರಾಕ್ಷಸ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಬಡಾಸ್ ರವಿಕುಮಾರ್ (ಹಿಂ)	3 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ರಾಕ್ಷಸ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಛಾವಾ (ಹಿಂ)	4 ಪ್ರದರ್ಶನಗಳು
ರಾಜಕಮಲ್	
ಶಬ್ದಂ(ತ)	4 ಪ್ರದರ್ಶನಗಳು
ಸಂಗಂ	
ಕಪಾತಿ (ಕ)+ ಸೂರಿ ಲವ್ಸ್ ಸಂಧ್ಯಾ(ಕ)	2+2 ಪ್ರದರ್ಶನಗಳು
ಲಿಡೋ	
ಡಾಕೂ ಮಹಾರಾಜ್(ತೆ)	4 ಪ್ರದರ್ಶನಗಳು
ತಿಬ್ಬಾದೇವಿ	
ರಾಕ್ಷಸ (ಕ)	4 ಪ್ರದರ್ಶನಗಳು
ಪ್ರಭಾ	
ಭಗೀರಥ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ವಿದ್ದಾಮುಯರ್ಚಿ (ತ): ಬೆ.6.55ಕ್ಕೆ, ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.15ಕ್ಕೆ, ರಾ.10.24ಕ್ಕೆ.
ಸ್ಕ್ರೀನ್ 2	ಅಧಿಪತ್ರ (ಕ): ಬೆ.10.10ಕ್ಕೆ, ನೋಡಿದವರು ಏನಂತಾರೆ (ಕ): ಮ.1.15ಕ್ಕೆ, ರುದ್ರ ಗರುಡ ಪುರಾಣ (ಕ): ಸಂ.4.10ಕ್ಕೆ, ಬಡಾಸ್ ರವಿಕುಮಾರ್ (ಹಿಂ): ರಾ.7.10ಕ್ಕೆ, ನರೇ ಅನೀಂಟೆ ಮೂನನ್‌ಮಕ್ಕಲ್ (ಮ): ರಾ.10.10ಕ್ಕೆ.
ಸ್ಕ್ರೀನ್ 3	ಮಿ.ರಾಣಿ (ಕ): ಬೆ.10.30ಕ್ಕೆ, ಲವಯಪಾ (ಹಿಂ): ಮ.1.15ಕ್ಕೆ, ರಾ.7.05ಕ್ಕೆ, ರಾ.10ಕ್ಕೆ, ಭಗೀರಥ (ಕ): ಸಂ.4.10ಕ್ಕೆ.
ಸ್ಕ್ರೀನ್ 4	ಅನ್‌ಲಾಕ್ ರಾಘವ (ಕ): ಬೆ.10.25ಕ್ಕೆ, ಸ್ಕೈಫೋರ್ಸ್ (ಹಿಂ): ಮ.1.20ಕ್ಕೆ, ಥಂಡೆಲ್ (ತೆ): ಸಂ.4.15ಕ್ಕೆ, ರಾ.7.20ಕ್ಕೆ, ರಾ.10.25ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ರಾಯಲ್ (ಕ): ಬೆ.10.40ಕ್ಕೆ, ರುದ್ರ ಗರುಡ ಪುರಾಣ (ಕ): ಮ.1.30ಕ್ಕೆ, ಸಂ.6.45ಕ್ಕೆ, ಮ್ಯಾಕ್ಸ್ (ಕ): ಸಂ.4.15ಕ್ಕೆ, ಕುಜಂತೈಗಲ್ ಮುನ್ನೇತ್ರ ಕಳಗಂ (ತ): ರಾ.9.30ಕ್ಕೆ.
ಸ್ಕ್ರೀನ್ 2	ಫಾರೆಸ್ಟ್ (ಕ): ಮ.1.05ಕ್ಕೆ, ಮ.3.50ಕ್ಕೆ, ರಾಯಲ್ (ಕ): ಸಂ.6.35ಕ್ಕೆ, ಸ್ಕೈ ಫೋರ್ಸ್ (ಹಿಂ): ರಾ.9.30ಕ್ಕೆ.
ಸ್ಕ್ರೀನ್ 3	ಸ್ಕೈ ಫೋರ್ಸ್ (ಹಿಂ): ಬೆ.11ಕ್ಕೆ, ರಾ.7.05ಕ್ಕೆ, ರಾಯಲ್ (ಕ): ಮ.1.25ಕ್ಕೆ, ಡೊಮಿನಿಕ್ ಅಂಡ್ ದಿ ಲೇಡಿಸ್ ಪರ್ಸ್ (ಮ): ಸಂ.4.15ಕ್ಕೆ, ರಾ.9.30ಕ್ಕೆ
ಸ್ಕ್ರೀನ್ 4	ಫಾರೆಸ್ಟ್ (ಕ): ಬೆ.10.40ಕ್ಕೆ, ರಾ.9.20ಕ್ಕೆ, ಛೂ ಮಂತರ್ (ಕ): ಮ.1.30ಕ್ಕೆ, ಸಂ.6.40ಕ್ಕೆ, ಸ್ಕೈ ಫೋರ್ಸ್ (ಹಿಂ): ಸಂ.4.15ಕ್ಕೆ.

ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಏಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ರವಿಕುಮಾರ್, ಸತ್ಯನಾರಾಯಣಗೆ ದತ್ತಿ ಪ್ರಶಸ್ತಿ



ಎಸ್.ಟಿ.ರವಿಕುಮಾರ್



ಎಂ.ಆರ್.ಸತ್ಯನಾರಾಯಣ

ಮೈಸೂರು, ಮಾ.11(ಆರ್‌ಕೆ)– ಕೊಪ್ಪಳದ ಭಾಗ್ಯನಗರ ರಸ್ತೆಯಲ್ಲಿರುವ ಪಾನ್ ಘಾಟಿ ಕಲ್ಯಾಣ ಭವನದಲ್ಲಿ ಭಾನುವಾರ ನಡೆದ ಸಮಾರಂಭದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದಿಂದ 'ಮೈಸೂರು ಮಿತ್ರ' ಮತ್ತು 'ಸ್ಟಾರ್ ಆಫ್ ಮೈಸೂರ್' ಮುಖ್ಯ ವರದಿಗಾರ ಎಸ್.ಟಿ.ರವಿಕುಮಾರ್ ಅವರಿಗೆ ಪಿ.ರಾಮಯ್ಯ ಸ್ಮಾರಕ ದತ್ತಿ ಪ್ರಶಸ್ತಿ ಹಾಗೂ 'ವಿಜಯ ಕರ್ನಾಟಕ' ಮೈಸೂರು ಆವೃತ್ತಿ ಸ್ಥಾನಿಕ ಸಂಪಾದಕ ಎಂ.ಆರ್.ಸತ್ಯನಾರಾಯಣರಿಗೆ ಗೊಮ್ಮಟ ಮಾಧ್ಯಮ ಪ್ರಶಸ್ತಿ ಪ್ರಧಾನ ಮಾಡಲಾಯಿತು.

ಕೊಪ್ಪಳದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ್ ಎಸ್.ತಂಗಡಗಿ ಅವರು ಹಿರಿಯ ಪತ್ರಕರ್ತರಿಗೆ ವಿವಿಧ ದತ್ತಿ ಪ್ರಶಸ್ತಿಗಳನ್ನು ಪ್ರದಾನ ಮಾಡಿದರು. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅಧ್ಯಕ್ಷತೆ ವಹಿಸಿದ್ದ ಸಮಾರಂಭದಲ್ಲಿ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್, ಕೊಪ್ಪಳ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಬಿ.ಕೆ.ರವಿ, ಶಾಸಕ ರಾಘವೇಂದ್ರ ಹಿಟ್ನಾಳ್, ಕೊಪ್ಪಳ ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಹನುಮಂತ ಹಳ್ಳಿಕೇರಿ, ಹಿರಿಯ ಪತ್ರಕರ್ತ ಜಿ.ಎನ್.ಮೋಹನ್ ಸೇರಿದಂತೆ ಹಲವು ಗಣ್ಯರು ಭಾಗವಹಿಸಿದ್ದರು.

ಪ್ರಶಸ್ತಿಗೆ ಭಾಜನರಾದ ಮೈಸೂರಿನ ಇಬ್ಬರೂ ಪತ್ರಕರ್ತರಿಗೆ ಮೈಸೂರು ಜಿಲ್ಲಾ ಪತ್ರಕರ್ತರ ಸಂಘವು ಅಭಿನಂದನೆ ಸಲ್ಲಿಸಿದೆ ಎಂದು ಅಧ್ಯಕ್ಷ ಕೆ.ದೀಪಕ್ ಹಾಗೂ ಪ್ರಧಾನ ಕಾರ್ಯದರ್ಶಿ ಧರ್ಮಾಪುರ ನಾರಾಯಣ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಾವೇರಿ-ಕಬಿನಿ ಅಚ್ಚುಕಟ್ಟು ನಾಲೆಗಳಿಗೆ ನೀರು ಬಿಡುವಂತೆ ಆಗ್ರಹಿಸಿ

ಮೈಸೂರಿನ ಕಾಡಾ ಕಚೇರಿ ಮುಂದೆ ರೈತರ ಪ್ರತಿಭಟನೆ

ಮೈಸೂರು, ಮಾ.11(ಬಿಎಲ್‌ಯು)– ಕಾವೇರಿ, ಕಬಿನಿ ಅಚ್ಚುಕಟ್ಟು ನಾಲೆಗಳಿಗೆ ನೀರು ಬಿಡುಗಡೆ ಮಾಡಿ, ಕೆರೆ–ಕಟ್ಟೆ ತುಂಬಿಸುವಂತೆ ಆಗ್ರಹಿಸಿ ರಾಜ್ಯ ಕಬ್ಬು ಬೆಳೆಗಾರರ ಸಂಘದವರು ಇಂದು ಮೈಸೂರಿನ ಕಾಡಾ ಕಚೇರಿ ಮುಂದೆ ಪ್ರತಿಭಟನೆ ನಡೆಸಿದರು.



ಕಾವೇರಿ, ಕಬಿನಿ ಅಚ್ಚುಕಟ್ಟು ನಾಲೆಗಳಿಗೆ ನೀರು ಬಿಡುಗಡೆ ಮಾಡಿ ಕೆರೆ ಕಟ್ಟೆ ತುಂಬಿಸುವಂತೆ ಆಗ್ರಹಿಸಿ ರಾಜ್ಯ ಕಬ್ಬು ಬೆಳೆಗಾರರ ಸಂಘದವರು ಮಂಗಳವಾರ ನಗರದ ಕಾಡಾ ಕಚೇರಿ ಮುಂದೆ ಪ್ರತಿಭಟನೆ ನಡೆಸಿದರು.

ಕಾವೇರಿ ಮತ್ತು ಕಬಿನಿ ಅಚ್ಚುಕಟ್ಟು ಭಾಗದಲ್ಲಿ ಕಬ್ಬು, ಅಡಿಕೆ, ತೆಂಗು, ಬಾಳೆ ಸೇರಿದಂತೆ ಇತರೆ ಬೆಳೆಗಳು ನೀರಿಲ್ಲದೆ ಬಿಸಿಲಿನ ತಾಪಕ್ಕೆ ಒಣಗುತ್ತಿವೆ. ಕೆರೆ–ಕಟ್ಟೆಗಳು ಬರಿದಾಗಿ ಜನ–ಜಾನುವಾರುಗಳಿಗೆ ಕುಡಿಯುವ ನೀರಿಗೆ ತೊಂದರೆ ಆಗುತ್ತಿದೆ. ಕೃಷಿ ಪಂಪ್‌ಸೆಟ್‌ಗಳ ಅಂತರ್ಜಲ ಕುಸಿಯುತ್ತಿದೆ. ಈ ಹಿನ್ನೆಲೆಯಲ್ಲಿ ಕೂಡಲೇ ನಾಲೆಗಳಿಗೆ ನೀರು ಬಿಟ್ಟು ಕೆರೆ ಕಟ್ಟೆ ತುಂಬಿಸಬೇಕು ಎಂದು ಆಗ್ರಹಿಸಿದರು.

ಕೆಆರ್‌ಎಸ್ ವಿಭಾಗದ ಸಂಖ್ಯೆ 4ರ ಉಪ ವಿಭಾಗಕ್ಕೆ ಸೇರಿದ ಬನ್ನೂರು ದೊಡ್ಡ ಕೆರೆ ಬಲದಂಡೆ ನಾಲೆ, ಎಡದಂಡೆ ನಾಲೆಗಳನ್ನು ಆಧುನೀಕರಣ ಮಾಡುವುದಾಗಿ ಭರವಸೆ ನೀಡಿದ್ದು, ಈ ತನಕ ಆಧುನೀಕರಣ ಕಾಮಗಾರಿ ಆರಂಭಿಸಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕಾಡಾ ಕಚೇರಿ ಪ್ರವೇಶ ದ್ವಾರದಲ್ಲಿ ಪ್ರತಿಭಟನೆ ನಡೆಸಿದ ರೈತರು ಒಳನುಗ್ಗಲು ಯತ್ನಿಸಿದರು. ಈ ವೇಳೆ ಪೊಲೀಸರು ಬ್ಯಾರಿಕೇಡ್ ಹಾಕಿ ರೈತರನ್ನು ಒಳಗೆ ಹೋಗಲು ಅವಕಾಶ ನೀಡಲಿಲ್ಲ. ಈ ಸಂದರ್ಭದಲ್ಲಿ ಪೊಲೀಸರು ಮತ್ತು ರೈತರ ನಡುವೆ ವಾಗ್ವಾದ ನಡೆಯಿತು.

ತರುವಾಯ ರೈತರು ಪ್ರತಿಭಟನೆ ನಡೆಸುತ್ತಿದ್ದ ಸ್ಥಳಕ್ಕೆ ಬಂದ ಕಾಡಾ ಕಚೇರಿಯ ಡೆಪ್ಯುಟಿ ಇಂಜಿನಿಯರ್ ಗೌತಮ್ ಅವರು ಮನವಿ ಪಡೆದರು. ವಿಷಯವನ್ನು ಹಿರಿಯ ಅಧಿಕಾರಿಗಳ ಗಮನಕ್ಕೆ ತರುವುದಾಗಿ ಭರವಸೆ ನೀಡಿದರು.

ಪ್ರತಿಭಟನೆಯಲ್ಲಿ ಅತ್ತಹಳ್ಳಿ ದೇವರಾಜು, ಬರಡನಪುರ ನಾಗರಾಜ್, ಕಿರಗಸೂರು ಶಂಕರ್, ಲಕ್ಷ್ಮಿಪುರ ವೆಂಕಟೇಶ್, ಮಾರ್ಬಳ್ಳಿ ನೀಲಕಂಠಪ್ಪ ಸತೀಶ್ ಕೇರ್ಗಳ್ಳಿ, ಶಿವಕುಮಾರ್ ಕೇರ್ಗಳ್ಳಿ, ಧನಗನಹಳ್ಳಿ ಕೆಂಡ ಗಣ್ಣಸ್ವಾಮಿ, ಜಯರಾಮ ವರಕೋಡೆ, ನಾಗೇಶ್ ಸೇರಿದಂತೆ ಹಲವರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

ಸೈಕಲ್ ಟ್ರ್ಯಾಕ್‌ನ ದುಸ್ಥಿತಿಗೆ ಬಾಲೆಯ ಬೇಸರ!



ಸೈಕಲ್ ಟ್ರ್ಯಾಕ್‌ನಲ್ಲಿ ನಿಲ್ಲಿಸಿರುವ ವ್ಯಾನ್ ಬಳಿ ನಿಂತು ಯೋಚಿಸುತ್ತಿರುವ ಬಾಲಕಿ.

ಮೈಸೂರು, ಮಾ.11(ಎಸ್‌ಬಿಡಿ)– ಮೈಸೂರಿನ ಹಲವೆಡೆ ನಿರ್ಮಿಸಿರುವ 'ಸೈಕಲ್ ಟ್ರ್ಯಾಕ್', ಯಾವ ರೀತಿಯಲ್ಲಿ ಉಪಯೋಗವಾಗುತ್ತಿದೆ ಎಂಬುದಕ್ಕೆ ಈ ಚಿತ್ರವೇ ಸಾಕ್ಷಿ. ವಿಶ್ವಮಾನವ ಜೋಡಿ ರಸ್ತೆಯಲ್ಲಿ ನಿರ್ಮಿಸಿರುವ ಸೈಕಲ್ ಟ್ರ್ಯಾಕ್‌ನಲ್ಲಿ ಪಾರ್ಕಿಂಗ್ ಮಾಡಿರುವ ಮಾರುತಿ ವ್ಯಾನ್ ಬಳಿ ಬಾಲಕಿಯೊಬ್ಬಳು ಸೈಕಲ್ ನಿಲ್ಲಿಸಿಕೊಂಡು ದಿಟ್ಟಿಸಿ ನೋಡುತ್ತಿರುವ ದೃಶ್ಯ, ನಮ್ಮ ವ್ಯವಸ್ಥೆಯ ವೈಫಲ್ಯವನ್ನು ತೆರೆದಿಡುವಂತಿದೆ.

ವಿಸ್ತಾರವಾದ ಹಾಗೂ ಹೆಚ್ಚು ವಾಹನ ಸಂಚಾರವಿರುವ ರಸ್ತೆಗಳಲ್ಲಿ ಸೈಕಲ್ ಸವಾರರ ಸುರಕ್ಷತೆ ದೃಷ್ಟಿಯಿಂದ ಲಕ್ಷಾಂತರ ರೂ. ವೆಚ್ಚ ಮಾಡಿ, ಈ ಸೈಕಲ್ ಟ್ರ್ಯಾಕ್ ನಿರ್ಮಿಸಲಾಗಿದೆ. ಈ ಮೂಲಕ ಸೈಕಲ್ ಬಳಕೆಗೂ ಉತ್ತೇಜನ ನೀಡಬೇಕೆಂಬ ಉದ್ದೇಶವೂ ಇದೆ. ಆದರೆ ಈ ಮಾರ್ಗಗಳು ಕಾರು, ಆಟೋ, ವ್ಯಾನ್‌ಗಳ ಪಾರ್ಕಿಂಗ್ ಸ್ಥಳವಾಗಿ ಬಳಕೆಯಾಗುತ್ತಿರುವುದು ವಿಷಾದನೀಯ. ಹೀಗೆ ದಿನವಿಡೀ ವಾಹನ ನಿಲ್ಲಿಸಿದ್ದರೂ ಸಂಚಾರ ಪೊಲೀಸರೂ ನಿರ್ಲಕ್ಷ್ಯ ವಹಿಸಿರುವುದು ದುರ್ದೈವ.

ಸೈಕಲ್ ಟ್ರ್ಯಾಕ್‌ನಲ್ಲಿ ವಾಹನಗಳನ್ನು ನಿಲ್ಲಿಸುವುದು ನಿಯಮ ಬಾಹಿರ. ಅಲ್ಲದೆ ನಿಲ್ಲಿಸುವಾಗ ಹಾಗೂ ಅಲ್ಲಿಂದ ತೆಗೆಯುವಾಗ ಬ್ಯಾರಿಕೇಡ್‌ಗಳಿಗೆ ಹಾನಿಯಾಗಬಹುದು. ಬಹುತೇಕ ವಾಣಿಜ್ಯ ಕೇಂದ್ರಗಳ ಮುಂದೆ ಟ್ರ್ಯಾಕ್‌ನ ಬ್ಯಾರಿಕೇಡ್‌ಗಳನ್ನು ತಮ್ಮ ಅನುಕೂಲಕ್ಕೆ ತಕ್ಕಂತೆ ನೆಲಸಮಗೊಳಿಸಲಾಗಿದೆ. ಸಾರ್ವಜನಿಕರ ಲಕ್ಷಾಂತರ ಹಣದಿಂದ ನಿರ್ಮಿಸಿರುವ ಸೈಕಲ್ ಟ್ರ್ಯಾಕ್ ಕೆಲವರಿಂದ ಮಣ್ಣು ಪಾಲಾಗುತ್ತಿದ್ದರೂ ಸಂಬಂಧಪಟ್ಟವರು ಏಕೆ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಜನ ಪ್ರಶ್ನಿಸುತ್ತಿದ್ದಾರೆ.

ಕೆಪಿಟಿಸಿಎಲ್ ನೇಮಕಾತಿ ಆದೇಶ ಶೀಘ್ರದಲ್ಲೇ ಪ್ರಕಟ



ಬೆಂಗಳೂರು, ಮಾ.11– ಕರ್ನಾಟಕ ಪವರ್ ಕಾರ್ಪೊರೇಷನ್ ಲಿಮಿಟೆಡ್ (ಕೆಪಿಸಿಎಲ್)ಗೆ ನೇಮಕಗೊಂಡ 622 ಸಿಬ್ಬಂದಿಗೆ ಶೀಘ್ರದಲ್ಲೇ ನೇಮಕಾತಿ ಆದೇಶಗಳನ್ನು ಹೊರಡಿಸಲಾಗುವುದು ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ಹೇಳಿದರು.

ಬಿಜೆಪಿಯ ಶರಣು ಸಲಗಾರ್ ಅವರು ಗಮನ ಸೆಳೆಯುವ ನಿರ್ಣಯದ ಸಮಯದಲ್ಲಿ, ಹೈದರಾಬಾದ್ ಕರ್ನಾಟಕ ಪ್ರದೇಶಕ್ಕೆ 394 ಮತ್ತು ಇತರೆ ಪ್ರದೇಶಕ್ಕೆ 228 ಮೀಸಲಾದ ಸಹಾಯಕ ಎಂಜಿನಿಯರ್‌ಗಳು, ಕಿರಿಯ ಎಂಜಿನಿಯರ್‌ಗಳು, ರಸಾಯನಶಾಸ್ತ್ರಜ್ಞರು ಮತ್ತು ರಾಸಾಯನಿಕ ಮೇಲ್ವಿಚಾರಕರ 622 ಹುದ್ದೆಗಳನ್ನು ಭರ್ತಿ ಮಾಡಲು 2017 ರಲ್ಲಿ ಅಧಿಸೂಚನೆ ಹೊರಡಿಸಲಾಗಿದೆ. 8 ವರ್ಷಗಳು ಕಳೆದರೂ ನೇಮಕಾತಿ ಆದೇಶ ಸಿಕ್ಕಿಲ್ಲ. ಮನುಷ್ಯನ ಆಯುಷ್ಯ 80 ವರ್ಷ ಎಂದುಕೊಂಡಿದ್ದೀರೋ, 800 ವರ್ಷ ಎಂದುಕೊಂಡಿದ್ದೀರೋ ಎಂದು ಸರಕಾರವನ್ನು ಪ್ರಶ್ನಿಸಿದರು. ಇದಕ್ಕೆ ಉತ್ತರಿಸಿದ ಸಚಿವರು, 2017ರಲ್ಲಿ ಅಧಿಸೂಚನೆ ಆಗಿದ್ದು ನಿಜ. ಆದರೆ, ಪ್ರಕರಣ ಹೈಕೋರ್ಟ್ ಅಂಗಳದಲ್ಲಿದೆ. ನ್ಯಾಯಾಲಯದ ಆದೇಶದ ಮೇರೆಗೆ 2024ರ ಸೆ.17 ರಂದು ಸಂಭಾವ್ಯ ಆಯ್ಕೆ ಪಟ್ಟಿ ಬಿಡುಗಡೆ ಮಾಡಲಾಗಿತ್ತು. ಈಗಲೂ ಹೈಕೋರ್ಟ್ ಆದೇಶಕ್ಕೆ ಒಳಪಟ್ಟು 1 ವಾರದಲ್ಲಿ ನೇಮಕಾತಿ ಆದೇಶ ನೀಡುತ್ತೇವೆ ಎಂದು ಹೇಳಿದರು.

PUBLIC NOTICE

NOTICE is hereby given that my client Smt.Nikitha.P.M., C/o. Sri. Venktesh Kura, R/at: # 2716/C, Vijayanagar 2nd Stage, 2nd Cross, Snake Shyam Road, Mysore -17 has intended to purchase the schedule property belonging to Smt.Tejaswini.K.N. D/o. Sri. Nangegowda, R/at: Kalkere, Hassan.

Any persons claiming right, title or interest in the said properties or any part thereof by way of sale, gift, lease, inheritance, exchange, mortgage, charge, lien, trust, possession, easement, attachment or otherwise how-so-ever are hereby required to make the same known to the undersigned at his office within 7 days from the date hereof, failing which, the said transactions will be completed, without any reference to such claim and the same, if any shall be considered as waived.

SCHEDULE : All the piece and parcel of the residential site bearing No.3170, Assessment No.3170, PID no.9796252396, measuring East to West 12 Meters and North to South (10.80+9.35)/2 Meters situated at Hebbal 2nd stage, Devaraja Mohalla, Mysore and bounded by:

East By: 9 Meters Road, West By: Property No.3171, North By: 9 Meters Road, South By: Property No.3169.

Sd/-ABHINANDAN.H Advocate and Legal Consultant, Office Address:- 7/4-E, 5th Main, 1st Cross, Jayanagara, Mysuru-14 Phone No. 9964426903, 8105796222: E-Mails: advabhinandan@gmail.com

Dated: 11th March, 2025

ಪುರಸಭಾ ಕಾರ್ಯಾಲಯ, ಗುಂಡ್ಲುಪೇಟೆ

ಚಾಮರಾಜನಗರ ಜಿಲ್ಲೆ–571111

ಫೋನ್: 08229–222226 । ಹೆಲ್ಪ್‌ಲೈನ್ : 08229–223377 ।

Website: www.gundlupettown.mrc.gov.in | E-mail: itstaff_ulb_gundlupet@yahoo.com

ಪು.ಗು/ಕಿ.ಅ/15ನೇಹ.ಕಾಯೋ(ಜಿ.ಬಿ.ಜಿ)/ಎಸ್.ಎಫ್.ಸಿ/ಪಿಆರ್/01/2024–25 ದಿನಾಂಕ: 10.03.2025

ಟೆಂಡರ್ ದಿನಾಂಕ ಮುಂದೂಡಿಕೆ ಪ್ರಕಟಣೆ

ಈ ಮೂಲಕ ಗುತ್ತಿಗೆದಾರರಿಗೆ ತಿಳಿಯಪಡಿಸುವುದೇನೆಂದರೆ ಗುಂಡ್ಲುಪೇಟೆ ಪುರಸಭೆಯಿಂದ ಕರೆಯಲಾಗಿದ್ದ ಟೆಂಡರ್ ಪ್ರಕಟಣೆಗಳಲ್ಲಿ ಈ ಕೆಳಕಂಡ ಇಂಡೆಂಟ್ ಕಾಮಗಾರಿಗಳ ಟೆಂಡರ್ ಸಲ್ಲಿಸುವ ದಿನಾಂಕವನ್ನು ದಿನಾಂಕ: 17.03.2025 ಕ್ಕೆ ಮುಂದೂಡಲಾಗಿದೆ ಹೆಚ್ಚಿನ ಮಾಹಿತಿಗೆ https://kpp.karnataka.gov.in ನಲ್ಲಿ ಮಾಹಿತಿ ಪಡೆಯುವುದು.

ಕ್ರ ಸಂ	ಕಾಮಗಾರಿ ವಿವರ	ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ)	ಇ.ಎಂ.ಡಿ ಮೊತ್ತ (ರೂ. ಗಳಲ್ಲಿ)	ಗುತ್ತಿಗೆದಾರರ ದರ್ಜೆ/ ಮೀಸಲಾತಿ
15ನೇ ಹ.ಆ (ಜಿ.ಬಿ.ಜಿ) 2023–24 ಮತ್ತು 2024–25ನೇ ಸಾಲಿನ ಯೋಜನೆಯ ಅನುದಾನ				
1	Asphalting and Drain work at New SWM Land Fill site.(Call-2) DMA/2024-25/OW/ WORK_INDENT-30478 (Reserved for ST)	46.80	46800/–	3ನೇ ದರ್ಜೆ ಹಾಗೂ ಮೇಲ್ಪಟ್ಟು (ST)
2	Construction Leachate Collection Tank and SLF at New SWM Land Fill site.(Call-2) DMA/2024-25/OW/ WORK_INDENT-27953 (Reserved for SC)	39.90	39900/–	3ನೇ ದರ್ಜೆ ಹಾಗೂ ಮೇಲ್ಪಟ್ಟು (SC)

ಸಹಿ/– ಜಿ.ಎಸ್.ಮಧುಸೂಧನ್
ಅಧ್ಯಕ್ಷರು
ಪುರಸಭೆ ಗುಂಡ್ಲುಪೇಟೆ

ಸಹಿ/– ಕೆ.ಪಿ.ವಸಂತಕುಮಾರಿ
ಮುಖ್ಯಾಧಿಕಾರಿ
ಪುರಸಭೆ ಗುಂಡ್ಲುಪೇಟೆ

ಪುರಸಭಾ ಕಾರ್ಯಾಲಯ, ಕೃಷ್ಣರಾಜನಗರ, ಮೈಸೂರು ಜಿಲ್ಲೆ

E-Mail ID: itstaff_ulb_krnagar@yahoo.co.in,
Phone(O): 08223-262242, Fax: 08223-262241

ಸಂ:ಪುಸಕ್ಕೃ/ಜೆ.ಇ.01/ಪಿ.ಆರ್–08/ಎಸ್.ಎಫ್.ಸಿ.ಕು.ನಿ& ಪು.ನಿ/2024–25 ದಿನಾಂಕ: 07.03.2025

ಟೆಂಡರ್ ಪ್ರಕಟಣೆ (ಕೆ.ಪಿ.ಪಿ.ಪಿ–ಪ್ರಕ್ಯೂರ್‌ಮೆಂಟ್ ಪೋರ್ಟಲ್ ಮೂಲಕ)

ಕೆ.ಆರ್ ನಗರ ಪುರಸಭೆ ವ್ಯಾಪ್ತಿಯಲ್ಲಿ 2024–25ನೇ ಸಾಲಿನ ಎಸ್.ಎಫ್.ಸಿ ಕುಡಿಯುವ ನೀರು ಹಾಗೂ ಪುರಸಭಾ ನಿಧಿಯಡಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು 1999 ಹಾಗೂ 2000ರ ಪಾರದರ್ಶಕ ಕಾಯ್ದೆಗೆ ಒಳಪಟ್ಟು ಪ್ರತ್ಯೇಕವಾಗಿ ಟೆಂಡರನ್ನು ಆಹ್ವಾನಿಸಲಾಗಿದೆ. ಆಸಕ್ತಿಯುಳ್ಳ ಟೆಂಡರ್‌ದಾರರು ಕಾಮಗಾರಿಗಳನ್ನು ಕೆ.ಪಿ.ಪಿ.ಪಿ–ಪ್ರೊಕ್ಯುರ್‌ಮೆಂಟ್ ಪೋರ್ಟಲ್‌ನ https://kppp.karnataka.gov.in ನಿಂದ ಟೆಂಡರ್ ಷರತ್ತು ಹಾಗೂ ದಾಸ್ತಾವೇಜನ್ನು ಡೌನ್‌ಲೋಡ್ ಮಾಡಿಕೊಂಡು ಆನ್‌ಲೈನ್ ಮುಖಾಂತರ ಟೆಂಡರ್‌ಗಳನ್ನು ಸಲ್ಲಿಸಬಹುದಾಗಿದೆಂದು ತಿಳಿಸಿದೆ. 1) ಟೆಂಡರನ್ನು ಸಲ್ಲಿಸಲು ಕಡೆಯ ದಿ: 21.03.2025 ಸಂಜೆ 5.30 ಗಂಟೆಯವರೆಗೆ. 2) ಟೆಂಡರ್ ತೆರೆಯುವ ದಿ: 25.03.2025ರಂದು ಕಛೇರಿಯ ಅವಧಿಯಲ್ಲಿ ಅಥವಾ ಮುಂದೆ ಸೂಚಿಸುವ /ನಿಗದಿಪಡಿಸುವ ದಿನಾಂಕದಂದು ತೆರೆಯಲಾಗುವುದು.

ಕ್ರ ಸಂ	ವಿವರ	ಯೋಜನೆಯ ವಿವರ	ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ)	ಇ.ಎಂ.ಡಿ ಮೊತ್ತ ರೂಗಳಲ್ಲಿ
1.	DMA/2024-25/WS/ WORK_INDENT 36920	2024–25ನೇ ಸಾಲಿನ ಎಸ್.ಎಫ್.ಸಿ ಕುಡಿಯುವ ನೀರು ಯೋಜನೆಯ ಅನುದಾನ	3.26	8150
2.	DMA/2024-25/WS/ WORK_INDENT 35926/CALL-2	ಪುರಸಭಾ ನಿಧಿ	23.59	47180

ಸೂಚನೆ:1. ಕಾರಣಾಂತರಗಳಿಂದ ಮೇಲೆ ತಿಳಿಸಿದ ಟೆಂಡರ್ ದಿನಾಂಕಗಳು ಹಾಗೂ ಇತರೆ ಬದಲಾವಣೆಗಳು ಇದ್ದರೆ ದಿನಪತ್ರಿಕೆಗಳಲ್ಲಿ ಪ್ರಕಟಿಸಲಾಗುವುದಿಲ್ಲ, ಆದರೆ ಕೆ.ಪಿ.ಪಿ.ಪಿ–ಪ್ರಕ್ಯೂರ್‌ಮೆಂಟ್ ಪೋರ್ಟಲ್‌ನಲ್ಲಿ ಮಾತ್ರ ಸೂಚಿಸಲಾಗುವುದು. ಹೆಚ್ಚಿನ ವಿವರಗಳನ್ನು https://kppp.karnataka.gov.in ಪೋರ್ಟಲ್‌ನಲ್ಲಿ ನೋಡಿಕೊಳ್ಳುವುದು.

ಸಹಿ/– ಶ್ರೀ ಶಿವಕುಮಾರ್ ಡಿ (ಶಿವುನಾಯಕ್)
ಮಾನ್ಯ ಅಧ್ಯಕ್ಷರು, ಪುರಸಭೆ, ಕೆ.ಆರ್.ನಗರ

ಸಹಿ/– ಶ್ರೀ ಬಿ.ವಿ ವೆಂಕಟೇಶ್ K.M.A.S
ಮುಖ್ಯಾಧಿಕಾರಿ, ಪುರಸಭೆ, ಕೆ.ಆರ್.ನಗರ

DIPR-DD-MYS/1419/KSMCA-1048/2024-25